ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 11 ಮಂಗಳವಾರ 2025

₹4

ಸಂಪುಟ: 45 | ಸಂಚಿಕೆ: 321 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*



ವಿಜಯನಗರ 4ನೇ ಹಂತದಲ್ಲಿ ಕುಡಿಯುವ ನೀರಿನ ಸಮಸ್ಯೆ ಶೀಘ್ರ ನಿವಾರಿಸಿ

ಅಧಿಕಾರಿಗಳಿಗೆ ಶಾಸಕ ಜಿ.ಟಿ.ದೇವೇಗೌಡರು ಸೂಚನೆ



ಮೈಸೂರಿನ ವಿಜಯನಗರ 4ನೇ ಹಂತದಲ್ಲಿ ಕೊಳವೆ ಬಾವಿ ಪೈಪ್‌ಲೈನ್ ಕಾಮಗಾರಿಯನ್ನು ಶಾಸಕ ಜಿ.ಟಿ.ದೇವೇಗೌಡರು ಪರಿಶೀಲಿಸಿದರು.

ಮೈಸೂರು, ಮಾ.10– ಮೈಸೂರಿನ ವಿಜಯನಗರ 4ನೇ ಹಂತದಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಶೀಘ್ರ ಪರಿಹರಿಸುವಂತೆ ಶಾಸಕ ಜಿ.ಟಿ.ದೇವೇಗೌಡರು, ಅಧಿಕಾರಿಗಳಿಗೆ ಸೂಚಿಸಿದರು.

ಹೂಟಗಳ್ಳಿ ನಗರಸಭೆ ವ್ಯಾಪ್ತಿಯ ವಿಜಯನಗರ 4ನೇ ಹಂತದಲ್ಲಿ ಕೊಳವೆ ಬಾವಿ ತೆಗೆಸಿ, ಪೈಪ್‌ಲೈನ್ ಅಳವಡಿಸುವ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಈ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಹಳಷ್ಟಿದೆ. ಸಮರ್ಪಕವಾಗಿ ನೀರು ಸರಬರಾಜು ಆಗುತ್ತಿಲ್ಲ ಎಂದು ಇಲ್ಲಿನ ನಿವಾಸಿಗಳು ದೂರುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಕೊಳವೆ ಬಾವಿಗಳನ್ನು ತೆಗೆಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಬೇಸಿಗೆ ಆರಂಭವಾಗಿರುವುದರಿಂದ ಸಮರ್ಪಕವಾಗಿ ನೀರು ಪೂರೈಸಲು ಎಲ್ಲಾ ರೀತಿಯ ಕ್ರಮ ಕೈಗೊಳ್ಳಬೇಕು. ಟ್ಯಾಂಕರ್ ಮೂಲಕ ನೀರು ಒದಗಿಸಲು ವ್ಯವಸ್ಥೆ ಮಾಡಬೇಕು. ಹೂಟಗಳ್ಳಿ ನಗರಸಭೆ ವ್ಯಾಪ್ತಿಯಲ್ಲಿ ಟ್ಯಾಂಕರ್ ಕಾರ್ಯಾಚರಣೆಗೆ ಹೆಲ್ಪ್‌ಲೈನ್ ಆರಂಭಿಸಬೇಕು. ಅದರ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿ, ನೀರಿನ ಸಮಸ್ಯೆಯಾದರೆ ಕೂಡಲೇ ಸಂಪರ್ಕಿಸುವಂತೆ ತಿಳಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ಹೂಟಗಳ್ಳಿ ನಗರಸಭೆ ಪೌರಾಯುಕ್ತ ಚಂದ್ರಶೇಖರ್, ಎಇಇ ಮಧು, ಎಇ ದಿಲೀಪ್ ಹಾಗೂ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

ನಾಳೆ ಶ್ರೀ ಕಳಲೆ ಕೈವಲ್ಯಾದೇವಿ ಅಮ್ಮನವರ ಮಡೆ ಉತ್ಸವ

ಮೈಸೂರು,ಮಾ.10–ನಂಜನಗೂಡು ತಾಲೂಕಿನಲ್ಲಿರುವ ಶ್ರೀ ಕಳಲೆ ಕೈವಲ್ಯಾದೇವಿ ಅಮ್ಮನವರ ಮಡೆ ಉತ್ಸವವು ಮಾ.12ರಂದು ನೆರವೇರಲಿದೆ. ಅಂದು ಸಂಜೆ ಪೂಜಾ ಕೈಂಕರ್ಯಗಳು ನಡೆಯಲಿವೆ. ಸಂಜೆ 5.30ರ ನಂತರ ಶ್ರೀ ಅಮ್ಮನವರಿಗೆ ಅಭಿಷೇಕ, ಮೈಸೂರು ವಿದ್ವಾನ್ ವಿ.ಪ್ರಕಾಶ್ ಮತ್ತು ವೃಂದದವರಿಂದ ನಾದಸ್ವರ, ಶ್ರೀ ಅಮ್ಮನವರ ಉತ್ಸವ ಮತ್ತು ಮಡೆ ಸೇವೆ ನಡೆಯಲಿದೆ ಎಂದು ಎಂ.ಎಸ್.ಲಕ್ಷ್ಮೀಕಾಂತರಾಜೇ ಅರಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾಜಿ ಶಾಸಕ ವಾಸು ಪುಣ್ಯಸ್ಮರಣೆ...



ಚಾಮರಾಜ ಕ್ಷೇತ್ರದ ಮಾಜಿ ಶಾಸಕ ದಿವಂಗತ ವಾಸು ಅವರ ಮೊದಲನೆ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಪಡುವಾರಹಳ್ಳಿಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಯೋಗಾನಂದ, ನಗರ ಕಾಂಗ್ರೆಸ್ ಉಪಾಧ್ಯಕ್ಷ ಟಿ.ಸುಂದರಕುಮಾರ್, ದಿ ಸಿಟಿ ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕ ಗೋಕುಲಂ ವಿ.ಮಧು, ಜಿಲ್ಲಾ ಒಕ್ಕಲಿಗರ ಸಂಘದ ಖಜಾಂಚಿ ಆರ್.ಲೋಕೇಶ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಒಂಟಿಕೊಪ್ಪಲಿನಲ್ಲಿ ಸಿದ್ದಪ್ಪಾಜಿ ಜಾತ್ರೆ ; ರಥೋತ್ಸವ, ಕಂಡಾಯ ಮೆರವಣಿಗೆ



ಮೈಸೂರಿನ ಒಂಟಿಕೊಪ್ಪಲಿನಲ್ಲಿ ಸೋಮವಾರ ರಾತ್ರಿ ಶ್ರೀ ಸಿದ್ದಪ್ಪಾಜಿ ದೇವರ ಜಾತ್ರಾ ಮಹೋತ್ಸವ ಪ್ರಯುಕ್ತ ರಥೋತ್ಸವ ಹಾಗೂ ಕಂಡಾಯಗಳ ಮೆರವಣಿಗೆ ವಿಜೃಂಭಣೆಯಿಂದ ನಡೆಯಿತು.

ಮೈಸೂರು,ಮಾ.10(ಪಿಎಂ)– ಒಂಟಿಕೊಪ್ಪಲಿನ ಕಾಳಿದಾಸ ರಸ್ತೆಯ 2ನೇ ಕ್ರಾಸ್‌ನ ಶ್ರೀ ಸಿದ್ದಪ್ಪಾಜಿ ದೇವಸ್ಥಾನದ ವತಿಯಿಂದ ಹಮ್ಮಿಕೊಂಡಿರುವ ಶ್ರೀ ಸಿದ್ದಪ್ಪಾಜಿ ದೇವರ 75ನೇ ವರ್ಷದ ಜಾತ್ರಾ ಮಹೋತ್ಸವ ಪ್ರಯುಕ್ತ ಸೋಮವಾರ ರಾತ್ರಿ ಹೂ ಹೊಂಬಾಳೆಯಿಂದ ಅಲಂಕೃತವಾದ ಕಂಡಾಯಗಳ ಮೆರವಣಿಗೆಯೊಂದಿಗೆ ರಥೋತ್ಸವ ವಿಜೃಂಭಣೆಯಿಂದ ನಡೆಯಿತು.

ಒಂಟಿಕೊಪ್ಪಲು ಆಂಜನೇಯಸ್ವಾಮಿ ದೇವಸ್ಥಾನ ಬಳಿ ರಥೋತ್ಸವಕ್ಕೆ ಚಾಲನೆ ದೊರೆಯಿತು. ಹೂ ಹೊಂಬಾಳೆಯಿಂದ ಅಲಂಕೃತವಾದ ಕಂಡಾಯಗಳ ಮೆರವಣಿಗೆಯೂ ರಥೋತ್ಸವದೊಂದಿಗೆ ಸಾಗಿತು. ಪೂಜಾ ಕುಣಿತ, ಡೊಳ್ಳು ಕುಣಿತ, ವೀರಗಾಸೆ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳು ಇದಕ್ಕೆ ಮತ್ತಷ್ಟು ಮೆರಗು ನೀಡಿದವು.

ರಥದಲ್ಲಿ ಪ್ರತಿಷ್ಠಾಪಿಸಿದ್ದ ಫೋಟೋದಲ್ಲಿ ಶ್ರೀ ಮಂಟೇಸ್ವಾಮಿ, ಶ್ರೀ ರಾಚಪ್ಪಾಜಿ, ಶ್ರೀ ಸಿದ್ದಪ್ಪಾಜಿ, ಶ್ರೀ ದೊಡ್ಡಮ್ಮತಾಯಿ, ಶ್ರೀ ಚನ್ನಾಜಮ್ಮ ಅವರ ದರ್ಶನ ಪಡೆದ ಭಕ್ತರು ಭಕ್ತಿಭಾವ ಮೆರೆದರು. ಒಂಟಿಕೊಪ್ಪಲಿನ ಪ್ರಮುಖ ಬೀದಿಗಳಲ್ಲಿ ರಥೋತ್ಸವ ಸಾಗಿತು. ಕಾಳಿದಾಸ ರಸ್ತೆಯ 2ನೇ ಕ್ರಾಸ್‌ನ ಶ್ರೀ ಸಿದ್ದಪ್ಪಾಜಿ ದೇವಸ್ಥಾನಕ್ಕೆ ತಲುಪಿ, ರಥೋತ್ಸವ ಅಂತ್ಯಗೊಂಡಿತು.

ಬಳಿಕ ದೇವಾಲಯದಲ್ಲಿ ಮಹಾ ಮಂಗಳಾರತಿ ಸೇರಿದಂತೆ ವಿವಿಧ ಪೂಜಾ ವಿಧಿವಿಧಾನ ನೆರವೇರಿಸಲಾಯಿತು. ನಂತರ ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು. ಮಾ.11ರ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ದೇವಸ್ಥಾನದಲ್ಲಿ ಮಹಾಮಂಗಳಾರತಿ ನಡೆಯಲಿದ್ದು, ಬಳಿಕ ಅನ್ನಸಂತರ್ಪಣೆ ಜರುಗಲಿದೆ.

ಅಂಚೆ ಇಲಾಖೆಯಿಂದ ಪುನೀತ್ ರಾಜ್‌ಕುಮಾರ್ ಬರ್ತಡೆಗೆ 'ಪಿಕ್ಚರ್ ಪೋಸ್ಟ್ ಕಾರ್ಡ್' ಬಿಡುಗಡೆ

ಬೆಂಗಳೂರು, ಮಾ.10– ದಿವಂಗತ ನಟ ಪುನೀತ್ ರಾಜ್‌ಕುಮಾರ್ ಅವರ 50ನೇ ಜನ್ಮದಿನದ ಅಂಗವಾಗಿ ಭಾರತೀಯ ಅಂಚೆ ಇಲಾಖೆ, ಐದು ವಿಶೇಷ ಪಿಕ್ಚರ್ ಪೋಸ್ಟ್ ಕಾರ್ಡ್‌ಗಳನ್ನು ಬಿಡುಗಡೆ ಮಾಡಿದೆ. ಪುನೀತ್ ರಾಜ್‌ಕುಮಾರ್ ಅವರ ಪತ್ನಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಅವರು ಸೋಮವಾರ ಈ ಪಿಕ್ಚರ್ ಪೋಸ್ಟ್ ಕಾರ್ಡ್‌ಗಳನ್ನು ಬಿಡುಗಡೆ ಮಾಡಿದ್ದಾರೆ.

ಪುನೀತ್ ರಾಜ್‌ಕುಮಾರ್ ಅವರ ಹುಟ್ಟು ಹಬ್ಬದ ಪ್ರಯುಕ್ತ 'ಅಪ್ಪು ಗಂಧದಗುಡಿ ಅಗರಬತ್ತಿ' ಸಹಯೋಗದೊಂದಿಗೆ ಈ ಪೋಸ್ಟ್ ಕಾರ್ಡ್‌ಗಳನ್ನು ಹೊರತರಲಾಗುತ್ತಿದೆ ಎಂದು ಭಾರತೀಯ ಅಂಚೆ ಇಲಾಖೆಯ ಕರ್ನಾಟಕ ಅಂಚೆ ವೃತ್ತದ ಮುಖ್ಯ ಪೋಸ್ಟ್‌ಮಾಸ್ಟರ್ ಜನರಲ್ ಎಸ್.ರಾಜೇಂದ್ರ ಕುಮಾರ್ ತಿಳಿಸಿದ್ದಾರೆ. ಆಸಕ್ತರು ಕರ್ನಾಟಕದ ಅಂಚೆ ಚೀಟಿ ಸಂಗ್ರಹಣಾ ಬ್ಯೂರೋಗಳಿಂದ ಈ ಚಿತ್ರಗಳನ್ನು ಪಡೆದುಕೊಳ್ಳಬಹುದು. ಅವರ ಜನ್ಮದಿನವಾದ ಮಾರ್ಚ್ 17ರಂದು ವಿಶೇಷ ರಿಯಾಯಿತಿಯನ್ನು ಸಹ ಪಡೆಯಬಹುದು ಎಂದು ಅವರು ಹೇಳಿದ್ದಾರೆ.

ನಿಧನ



ಸಿಸ್ಟರ್ ಅಲ್ಫೋನ್ಸಾ ಫರ್ನಾಂಡೀಸ್

ಮೈಸೂರು, ಮಾ. 10– ಸಿಸ್ಟರ್ ಅಲ್ಫೋನ್ಸಾ ಫರ್ನಾಂಡೀಸ್ (89) ಹುಣಸೂರಿನ ಸೇಂಟ್ ಜೋಸೆಫ್ ಕಾನ್ವೆಂಟ್‌ನಲ್ಲಿ ಭಾನುವಾರ ಬೆಳಗ್ಗೆ ನಿಧನರಾದರು. ಅಂತ್ಯಕ್ರಿಯೆ ಸಾಮೂಹಿಕ ಸಂಸ್ಕಾರ ನಾಳೆ (ಮಾ. 11) ಮಧ್ಯಾಹ್ನ 3 ಗಂಟೆಗೆ ಬೋಗಾದಿಯ ಮರಿಯಾ ನಿಕೇತನ ಕಾನ್ವೆಂಟ್‌ನಲ್ಲಿ ನೆರವೇರಲಿದೆ ಎಂದು ಮೂಲಗಳು ತಿಳಿಸಿವೆ.

ಮೈಸೂರಿನಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ

ಸ್ವಾವಲಂಬಿಯಾದ ನಂತರವೇ ಮಹಿಳೆ ಮದುವೆಯಾಗಬೇಕು

ಸಮತಾ ಅಧ್ಯಯನ ಕೇಂದ್ರದ ಧರ್ಮದರ್ಶಿ ಡಾ.ಕಲಾಶ್ರೀ ಕಿವಿಮಾತು

ಮೈಸೂರು, ಮಾ.10(ಬಿಎಲ್‌ಯು)– ಪ್ರತಿಯೊಬ್ಬ ಮಹಿಳೆ ಶಿಕ್ಷಣ ಪಡೆದು, ಸ್ವಾವಲಂಬಿಯಾದ ಬಳಿಕವೇ ಮದುವೆಯಾಗಿ, ದಾಂಪತ್ಯ ಜೀವನಕ್ಕೆ ಕಾಲಿಡಬೇಕು ಎಂದು ಮೈಸೂರಿನ ಸಮತಾ ಅಧ್ಯಯನ ಕೇಂದ್ರದ ಧರ್ಮದರ್ಶಿ ಡಾ.ಹೆಚ್.ಎಂ. ಕಲಾಶ್ರೀ ಅಭಿಪ್ರಾಯಪಟ್ಟರು.

ಮೈಸೂರಿನ ವಸಂತ್‌ಮಹಲ್‌ನ ಶ್ರೀ ರಾಧಾಕೃಷ್ಣ ಸಭಾಂಗಣದಲ್ಲಿ ಸೋಮವಾರ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಿಕ್ಷಣ ಪಡೆದು ಸ್ವಾವಲಂಬಿಯಾದರೆ ದಾಂಪತ್ಯ ಜೀವನದ ಸವಾಲುಗಳನ್ನು ಸಮರ್ಥವಾಗಿ ಎದುರಿಸಬಹುದು ಎಂದು ಅಭಿಪ್ರಾಯಪಟ್ಟರು.

ಪ್ರಸ್ತುತ ಪರಿಸ್ಥಿತಿಯಲ್ಲಿ ಗಂಡು ಮತ್ತು ಹೆಣ್ಣು ಪರಸ್ಪರ ಅರ್ಥಮಾಡಿಕೊಂಡು ಬದುಕುವ ಅನಿವಾರ್ಯತೆ ಇದೆ. ಹೆಣ್ಣಿನ ಹಂಗಿಲ್ಲದೆ ಬದುಕಬಲ್ಲೆ ಎಂಬ ಧೈರ್ಯ ಪುರುಷನಿಗೆ ಇಲ್ಲವೇ ಇಲ್ಲ. ಪ್ರತಿಯೊಬ್ಬ ಸಾಧಕನ ಹಿಂದೆ ಒಬ್ಬ ಮಹಿಳೆ ಇದ್ದೇ ಇರುತ್ತಾಳೆ ಎಂದು ಹೇಳಿದರು.



ಮೈಸೂರಿನ ವಸಂತ್‌ಮಹಲ್‌ನ ಶ್ರೀ ರಾಧಾಕೃಷ್ಣ ಸಭಾಂಗಣದಲ್ಲಿ ಸೋಮವಾರ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಸಮತಾ ಅಧ್ಯಯನ ಕೇಂದ್ರದ ಅಧ್ಯಕ್ಷೆ ಡಾ.ಸಬಿಹಾ ಭೂಮಿಗೌಡ ಉದ್ಘಾಟಿಸಿದರು.

ಹೆಣ್ಣು ಸಮಾಜದಲ್ಲಿ ಎದುರಾಗುವ ಎಲ್ಲಾ ಸವಾಲುಗಳನ್ನು ಸಮರ್ಥವಾಗಿ ಎದುರಿಸಬೇಕು. ಕಣ್ಣೀರಿಡುವುದು ಹೆಣ್ಣಿನ ದೌರ್ಬಲ್ಯವಾಗಬಾರದು ಎಂದು ಅವರು ಸಲಹೆ ನೀಡಿದರು.

ಈ ಹಿಂದೆ ಹೆಣ್ಣನ್ನು ನಿರ್ಜೀವ ವಸ್ತುವಾಗಿ ಕಾಣುತ್ತಿದ್ದರು. ಇಂತಹ ಹೀನಾಯ ಸ್ಥಿತಿಯಲ್ಲಿ ಬಹಳಷ್ಟು ಮಹಿಳೆಯರು ಹಲವು ಸವಾಲುಗಳನ್ನು ಸಮರ್ಥವಾಗಿ ಎದುರಿಸಿ ಸಾಧನೆ ಮಾಡಿದ್ದಾರೆ. ಇದರಿಂದ ಮಹಿಳೆಯ ಈಗಿನ ಸ್ಥಿತಿಗತಿ ಬದಲಾಗಿದ್ದು, ಹಲವು ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಾಳೆ. ಈ ಹಿನ್ನೆಲೆಯಲ್ಲಿ ಇವತ್ತಿನ ಮಹಿಳಾ ದಿನಾಚರಣೆ ಮಹಿಳೆಯ ಘನತೆ ಗೌರವವನ್ನು ಬಿಂಬಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಇಂದಿನ ಮಹಿಳೆಯ ಪರಿಸ್ಥಿತಿಯನ್ನು ಎಳೆಯಾಗಿ ಬಿಡಿಸಿಟ್ಟ ಡಾ.ಕಲಾಶ್ರೀ ಅವರು, ನನ್ನ ಅಜ್ಜಿಗೆ ಎಂಟು ಮಕ್ಕಳಿದ್ದರು. ನನ್ನ ತಾಯಿಗೆ ನಾಲ್ವರು ಮಕ್ಕಳಿದ್ದಾರೆ. ನನಗೆ ಒಂದೇ ಒಂದು ಮಗು. ಕಾಲ ಕಳೆದಂತೆ ಒಂದು ತಲೆಮಾರಿನಿಂದ ಮತ್ತೊಂದು ತಲೆಮಾರಿಗೆ ಮಹಿಳೆಯ ಸ್ವಾತಂತ್ರ್ಯ ಹೆಚ್ಚಾಗುತ್ತಿದೆ. ಮಹಿಳೆಯು ತನ್ನ ಸುತ್ತಲು ಹಾಕಿದ್ದ ಲಕ್ಷ್ಮಣ ರೇಖೆಯಿಂದ ಹೊರಗೆ ಬಂದಿದ್ದಾಳೆ ಎಂದು ಡಾ.ಕಲಾಶ್ರೀ ಹೇಳಿದರು.

ಇದೇ ವೇಳೆ ಮಾತನಾಡಿದ ಸಮತಾ ಅಧ್ಯಯನ ಕೇಂದ್ರದ ಅಧ್ಯಕ್ಷೆ ಡಾ. ಸಬಿಹಾ ಭೂಮಿಗೌಡ, ಮಹಿಳೆ ತನ್ನ ಶಕ್ತಿ ವೃದ್ಧಿಸಿಕೊಳ್ಳಲು ಮತ್ತೊಬ್ಬರ ಮೇಲೆ ಅವಲಂಬಿತವಾಗಬಾರದು. ನಮ್ಮ ಚರಿತ್ರೆಯನ್ನು ನಾವೇ ಸೃಷ್ಟಿಸಿಕೊಳ್ಳಬೇಕು. ಇಲ್ಲವೆಂದರೆ ಇತಿಹಾಸದ ತೆರೆಮರೆಗೆ ಸರಿದುಬಿಡುತ್ತೇವೆ ಎಂದು ಎಚ್ಚರಿಸಿದರು.

ವಸಂತ್‌ಮಹಲ್‌ನ ಸಿಟಿಇ ಜಂಟಿ ನಿರ್ದೇಶಕಿ ಹೆಚ್.ಎನ್.ಗೀತಾಂಬ, ಸಹಾಯಕ ಪ್ರಾಧ್ಯಾಪಕಿ ಡಾ.ಜಿ.ಕೆ.ಪ್ರೇಮಾ, ಡಯಟ್ ಬೋಧಕಿ ಮೋಳಿ ವರ್ಗೀಸ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಎಷ್ಟೊ ಅಂತಾ ನಮ್ಮದೇ ಹುಡುಗಿಯರನ್ನ ನೋಡ್ತಿರಾ; ಅನ್ಯಧರ್ಮದ ಯುವತಿಯರನ್ನ ಪ್ರೀತಿಸಿ ಮದುವೆಯಾಗಿ...!

ವಾಗ್ಮಿ ಚಕ್ರವರ್ತಿ ಸೂಲಿಬೆಲೆ ವಿವಾದಾತ್ಮಕ ಹೇಳಿಕೆ

ಮಂಗಳೂರು, ಮಾ.10– 'ಹಿಂದೂ ಗಂಡು ಮಕ್ಕಳೇ, ಎಷ್ಟು ದಿನ ಅಂತ ನಮ್ಮದೇ ಹೆಣ್ಣು ಮಕ್ಕಳನ್ನು ನೋಡ್ತಿರಾ? ಹುಡುಗಿ ಸಿಗಲಿಲ್ಲವೆಂದು ಎಷ್ಟು ದಿನ ಹೇಳುತ್ತಿರುತ್ತೀರಾ? ಸ್ವಲ್ಪ ಪಕ್ಕದ ಸಮಾಜದವರನ್ನೂ (ಅನ್ಯಧರ್ಮದವರನ್ನೂ) ನೀವು ನೋಡಬೇಕಿದೆ ಎಂದು ವಾಗ್ಮಿ ಚಕ್ರವರ್ತಿ ಸೂಲಿಬೆಲೆ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ವಿಎಚ್‌ಪಿ ಹಮ್ಮಿಕೊಂಡಿದ್ದ 'ಕುತ್ತಾರು ಕೊರಗಜ್ಜನ ಆದಿಕ್ಷೇತ್ರಕ್ಕೆ ನಮ್ಮ ನಡೆ' ಪಾದಯಾತ್ರೆಯ ಸಮಾರೋಪದಲ್ಲಿ ದಿಕ್ಸೂಚಿ ಭಾಷಣ ಮಾಡಿದ ಅವರು, ಘರ್‌ವಾಪ್ಸಿ ಬಗ್ಗೆ ಮಾತನಾಡಿದರು. ಲವ್ ಜಿಹಾದ್ ಅನ್ಯ ಧರ್ಮದ ಮದುವೆ ಬಗ್ಗೆ ಪರ ವಿರೋಧದ ಚರ್ಚೆ ಹುಟ್ಟು ಹಾಕಿದರು. ಆ ಬಳಿಕ ಮಂಗಳೂರಿನ ಕದ್ರಿ ಮಂಜುನಾಥ ಕ್ಷೇತ್ರದಿಂದ ಕುತ್ತಾರಿನ ಕೊರಗಜ್ಜನ ಆದಿಕ್ಷೇತ್ರಕ್ಕೆ ಪಾದಯಾತ್ರೆ ನಡೆಸಲಾಯಿತು.



ಘರ್‌ವಾಪ್ಸಿ ಮಾಡೋಣ: ನಾವು ಎಷ್ಟು ಸಮಯ ಮತಾಂತರ, ಲವ್ ಜಿಹಾದ್ ಬಗ್ಗೆ ಮಾತನಾಡೋದು. ಇನ್ನು ಮುಂದೆ ಘರ್‌ವಾಪ್ಸಿ ಮಾಡುವುದರ ಬಗ್ಗೆ ಮನೆ ಮನೆಗೆ ಹೋಗಿ ತಿಳಿಸಿಕೊಡೋಣ. ಯಾವುದು ಯಾವುದೋ ರೀಲ್ಸ್ ಮಾಡುತ್ತೇವೆ. ಘರ್‌ವಾಪ್ಸಿ ಮಾಡೋದು ಹೇಗೆ ಎಂಬುದರ ಬಗ್ಗೆಯೂ ರೀಲ್ಸ್ ಮಾಡಿ. ನಮ್ಮ ಸಮಾಜದ ಗಂಡು ಮಕ್ಕಳಿಗೆ ಹೆಣ್ಣು ಸಿಕ್ಕಿಲ್ಲವೆಂದು ಆಲೋಚನೆ ಮಾಡುತ್ತಿರುವಾಗ, ಪಕ್ಕದ ಸಮಾಜದಲ್ಲೂ ಸಮಸ್ಯೆಗಳಿದೆ ಅಲ್ವಾ? ಎಂದರು.

ಮೂರು, ನಾಲ್ಕನೇ ಮಕ್ಕಳು ಮಾಡಬೇಕಿದೆ: ಮೂರು ಮಕ್ಕಳು ಮಾಡಿ, ನಾಲ್ಕು ಮಕ್ಕಳು ಮಾಡಿ ಅಂದ್ರೆ ಕೇಳ್ತೀರಾ ನೀವು. ಆದರೆ, ಮೂರನೇ ಮಗುವಾದರೆ ಇನ್‌ಕ್ರಿಮೆಂಟ್ ಕೊಡುತ್ತೇನೆ. ಒಂದೂವರೆ ಪಟ್ಟು ಸಂಬಳ ಹೆಚ್ಚು ಮಾಡ್ತೇನೆ. ಮೂರನೇ ಮಗುವಿಗೆ ಶಿಕ್ಷಣದ ಖರ್ಚು ಸಂಪೂರ್ಣ ತನ್ನದೇ ಎಂದು ಒಂದಷ್ಟು ಮಂದಿ ಮುಂದೆ ಬನ್ನಿ. ಹಿಂದೂ ಸಮಾಜದ ರಕ್ಷಣೆಗೆ ಇಷ್ಟು ಮಾಡದಿದ್ದರೆ ಹೇಗೆ? ಬ್ಯುಸಿನೆಸ್ ಮಾಡುವವರು ಈ ರೀತಿಯ ಸಂಕಲ್ಪ ಮಾಡಿ, ನಿಮ್ಮ ಅಂಗಡಿಗೆ ಕೆಲಸಕ್ಕೆ ಬರುವ ಹುಡುಗರಿಗೆ ಹೇಳಿ. ಆಗ ಆತ ಮೂರೇನು ನಾಲ್ಕನೇ ಮಗುವನ್ನು ಹುಟ್ಟಿಸುತ್ತಾನೆ ಎಂದು ಚಕ್ರವರ್ತಿ ಸೂಲಿಬೆಲೆ ಹೇಳಿದರು.

ತೀವ್ರ ಖಂಡನೆ: ಸೂಲಿಬೆಲೆ ಅವರ ಹೇಳಿಕೆ ಬಗ್ಗೆ ಡಿವೈಎಫ್‌ಐ ಮುಖಂಡ ಮುನೀರ್ ಕಾಟಿಪಳ್ಳ ಮಾಧ್ಯಮಗಳೊಂದಿಗೆ ಮಾತನಾಡಿ, ಚಕ್ರವರ್ತಿ ಸೂಲಿಬೆಲೆ ಭಾಷಣವನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ. ದ್ವೇಷ ಹುಟ್ಟಿಸಲು ಸೂಲಿಬೆಲೆ ಈ ಹೇಳಿಕೆ ನೀಡಿದ್ದಾರೆ ಎಂದರು. ನಮ್ಮಲ್ಲಿ ಯಾರು ಯಾರನ್ನು ಬೇಕಾದರೂ ಮದುವೆಯಾಗಬಹುದು. ಮುಸ್ಲಿಂ ಹೆಣ್ಣು ಮಕ್ಕಳನ್ನು ಹಿಂದೂಗಳು, ಹಿಂದೂ ಹೆಣ್ಣು ಮಕ್ಕಳನ್ನು ಮುಸ್ಲಿಂಮರು ಪರಸ್ಪರ ಒಪ್ಪಿಗೆ ಇದ್ದರೆ ಮದುವೆಯಾಗಲು ಯಾವುದೇ ಸಮಸ್ಯೆಗಳಿಲ್ಲ ಎಂದು ಹೇಳಿದ್ದಾರೆ.

ಎಸ್‌ಡಿಪಿಎಸ್ ಸಾಮಾಜಿಕ ಜಾಲತಾಣದಲ್ಲಿ ಚಕ್ರವರ್ತಿ ಸೂಲಿಬೆಲೆ ಹೇಳಿಕೆಯನ್ನು ತೀವ್ರವಾಗಿ ವಿರೋಧಿಸಲಾಗಿದೆ. ನಿಮ್ಮ ಕುಟುಂಬದ ಎಷ್ಟು ಜನ ಅನ್ಯಧರ್ಮೀಯರನ್ನು ವಿವಾಹವಾಗಿದ್ದಾರೆ? ಹಿಂದೂ ಧರ್ಮದ ಯುವತಿಯರನ್ನು ಮದುವೆಯಾಗಲು ಯಾವ ಧರ್ಮದವರಿಗೆ ಕಾಂಟ್ರ್ಯಾಕ್ಟ್ ಕೊಟ್ಟಿದ್ದೀಯಾ ? ಎಂದು ಪ್ರಶ್ನೆ ಮಾಡಿದೆ.

ಹಾಸನದಲ್ಲಿ ಜಿಆರ್‌ಟಿ ಜ್ಯುವೆಲ್ಲರ್ಸ್ 62ನೇ ಶಾಖೆ ಆರಂಭ

ಹಾಸನ, ಮಾ. 10– ಹಾಸನದಲ್ಲಿ ಜಿಆರ್‌ಟಿ ಜ್ಯುವೆಲ್ಲರ್ಸ್ ತನ್ನ 62ನೇ ಮಳಿಗೆಯನ್ನು ಪ್ರಾರಂಭಿಸುವುದರೊಂದಿಗೆ 60 ವರ್ಷಗಳ ಸುದೀರ್ಘ ಪ್ರಯಾಣದಲ್ಲಿ ಹೊಸ ಮೈಲಿಗಲ್ಲನ್ನು ಸ್ಥಾಪಿಸಿದೆ. 1964ರಿಂದ ಕಲಾತ್ಮಕತೆ, ನಂಬಿಕೆ ಮತ್ತು ನಾವೀನ್ಯತೆಗೆ ಹೆಸರುವಾಸಿಯಾದ ಈ ಬ್ರ್ಯಾಂಡ್, ತಲೆ ತಲಾಂತರಗಳ ಅತ್ಯುತ್ತಮ ಆಭರಣಗಳನ್ನು ನೀಡುತ್ತಾ ಬಂದಿದೆ.

ಹಾಸನದ ಆಭರಣ ಪ್ರಿಯರನ್ನು ತನ್ನ ಕರಕುಶಲತೆಯ ಮೂಲಕ ಸೆಳೆಯುವ ವಿಶ್ವಾಸದಲ್ಲಿದ್ದು, ಚಿನ್ನ, ವಜ್ರ, ಪ್ಲಾಟಿನಂ, ಬೆಳ್ಳಿ ಸಾಮಗ್ರಿಗಳು, ಬೆಳ್ಳಿ ಆಭರಣಗಳು ಮತ್ತು ರತ್ನದ ಕಲ್ಲುಗಳ ವೈವಿಧ್ಯಮಯ ಸಂಗ್ರಹವನ್ನು ಪರಿಚಯಿಸಲಿದೆ. ಬೆಂಗಳೂರಿನಿಂದ ಮಂಗಳೂರಿಗೆ ಹೋಗುವ ರಸ್ತೆಯ, ಹಾಸನ ಕ್ಲಬ್ ಬಳಿ ಇರುವ ಹೊಸ ಶೋರೂಮ್, ಕಾಲಾತೀತ ಮತ್ತು ಪ್ರಾದೇಶಿಕವಾಗಿ ಪ್ರೇರಿತ ವಿನ್ಯಾಸಗಳ ವ್ಯಾಪಕ ಶ್ರೇಣಿಯೊಂದಿಗೆ ಪ್ರೀಮಿಯಂ ಶಾಪಿಂಗ್ ಅನುಭವವನ್ನು ನೀಡಲು ಸಿದ್ಧಗೊಂಡಿದೆ. ಹಾಸನದಲ್ಲಿ ತನ್ನ ಶುಭಾರಂಭದ ಆಚರಣೆಯ ಭಾಗವಾಗಿ ಜಿಆರ್‌ಟಿ ಜ್ಯುವೆಲ್ಲರ್ಸ್ ಗ್ರಾಹಕರಿಗೆ ಸೀಮಿತ ಅವಧಿಯ ಕೊಡುಗೆಗಳನ್ನು ಘೋಷಿಸಿದೆ. ಖರೀದಿದಾರರು ಚಿನ್ನದ ಆಭರಣ ಖರೀದಿ ಮೇಲೆ ಪ್ರತಿ ಗ್ರಾಂಗೆ ರೂ. 300 ರಿಯಾಯಿತಿ ಮತ್ತು ವೇಸ್ಟೇಜ್ ಶುಲ್ಕದ ಮೇಲೆ ಶೇ.20 ರಿಯಾಯಿತಿ ಪ್ರಯೋಜನವನ್ನು ಪಡೆಯಬಹುದು. ಹಳೆಯ ಚಿನ್ನದ ಆಭರಣಗಳನ್ನು ವಿನಿಮಯ ಮಾಡಿಕೊಳ್ಳುವವರು ಪ್ರತಿ ಗ್ರಾಂಗೆ ರೂ. 75 ಹೆಚ್ಚುವರಿ ಲಾಭವನ್ನು ಪಡೆಯುತ್ತಾರೆ. ಹಾಗೆಯೇ ವಜ್ರ ಖರೀದಿದಾರರು ಪ್ರತಿ ಕ್ಯಾರೆಟ್‌ಗೆ ರೂ.10,000 ರಿಯಾಯಿತಿ, ಬೆಳ್ಳಿ ಸಾಮಗ್ರಿಗಳು ಮತ್ತು ಕಾಲು ಗೆಜ್ಜೆ ತಯಾರಿಕೆಯ ಶುಲ್ಕದ ಮೇಲೆ ಶೇ. 25 ರಿಯಾಯಿತಿ ಮತ್ತು ಅನ್‌ಕಟ್ ಡೈಮಂಡ್ ಮೌಲ್ಯದ ಮೇಲೆ ಶೇ. 10 ರಿಯಾಯಿತಿ ಪಡೆಯಬಹುದು. ಈ ಕೊಡುಗೆಗಳು ಮಾ.29ರವರೆಗೆ ಹೊಸದಾಗಿ ತೆರೆಯಲಾದ ಶೋ ರೂಂನಲ್ಲಿ ಲಭ್ಯವಿದೆ ಎಂದು ಜಿಆರ್‌ಟಿ ಜ್ಯುವೆಲ್ಲರ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಜಿ.ಆರ್. ಆನಂದ್ ಅನಂತ ಪದ್ಮನಾಭನ್ ತಿಳಿಸಿದ್ದಾರೆ.

ಜಿಆರ್‌ಟಿ ಜ್ಯುವೆಲ್ಲರ್ಸ್ ವ್ಯವಸ್ಥಾಪಕ ನಿರ್ದೇಶಕ ಜಿ.ಆರ್.ರಾಧಾಕೃಷ್ಣನ್ ಇದೇ ವೇಳೆ ಮಾತನಾಡಿದರು.




ಹಾಸನದಲ್ಲಿ ಜಿಆರ್‌ಟಿ ಜ್ಯುವೆಲ್ಲರ್ಸ್‌ನ 62ನೇ ಮಳಿಗೆಯನ್ನು ಪ್ರಾರಂಭಿಸಿರುವುದು.

ಸಾಮೂಹಿಕ ಬ್ರಹ್ಮೋಪದೇಶ

ಮೈಸೂರು, ಮಾ. 10– ಮೈಸೂರಿನ ಆದರ್ಶ ಸೇವಾ ಸಂಘವು ಆಚಾರ್ಯತ್ರಯರ ಜಯಂತಿಯೊಂದಿಗೆ ತ್ರಿಮತಸ್ಥ ಬ್ರಾಹ್ಮಣ ವಟುಗಳಿಗೆ ಮೇ 2ರಂದು ಮೈಸೂರಿನ ವಿವೇಕಾನಂದನಗರ ಬ್ರಾಹ್ಮಣ ಮಹಾಸಭಾದ ಶ್ರೀ ಲಕ್ಷ್ಮೀನರಸಿಂಹ ಧರ್ಮ ಶಾಲಾ, ಎಸ್.ಬಿ.ಎಂ. ಕಾಲೋನಿ, ಶ್ರೀರಾಂಪುರ 2ನೇ ಹಂತ ಇಲ್ಲಿ ಸಾಮೂಹಿಕ ಬ್ರಹ್ಮೋಪದೇಶವನ್ನು ಏರ್ಪಡಿಸಲಾಗಿದೆ. ಸೀಮಿತ ಸಂಖ್ಯೆಯ ವಟುಗಳನ್ನು ಮಾತ್ರ ನೋಂದಾಯಿಸಿಕೊಳ್ಳಲಾಗುವುದು. ಮೊದಲು ಬಂದವರಿಗೆ ಆದ್ಯತೆ ಮೇರೆಗೆ ವಟುಗಳ ನೋಂದಣಿ ಮಾಡಿಕೊಳ್ಳಲಾಗುತ್ತದೆ. ಹೆಚ್ಚಿನ ಮಾಹಿತಿಗೆ ಸಂಘದ ಕಚೇರಿ, ದೂ. 0821–3559202, 6360156863 ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

11.03.2025 ಮಂಗಳವಾರ, ಮಳೆ ನಕ್ಷತ್ರ: ಪೂರ್ವಭಾದ್ರಾ 04.03.2025ರಿಂದ 16.03.2025 ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಫಾಲ್ಗುಣ ಮಾಸ, ಶುಕ್ಲ ಪಕ್ಷ, ತಿಥಿ: ದ್ವಾದಶಿ, ನಕ್ಷತ್ರ: ಆಶ್ಲೇಷ, ರಾಹುಕಾಲ: ಮಧ್ಯಾಹ್ನ 3 ರಿಂದ 4.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ಯೋಗ ಮಾಡಿ ಆರೋಗ್ಯವಾಗಿರಿ, ದೇಹ, ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9 ರಿಂದ ಇಸುಬು ತಪಾಸಣಾ ಶಿಬಿರ, ಒಟೋಮೈಕೋಸಿಸ್–ಕಿವಿಯ ಫಂಗಲ್ ಸೋಂಕಿಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.

■ **ಅನ್ನಪೂರ್ಣ ಕಣ್ಣಿನ ಆಸ್ಪತ್ರೆ, ವಾಸವಿ ಟ್ರಸ್ಟ್ ಮೈಸೂರು ಸೌತ್ :** ಉಚಿತ ಕಣ್ಣಿನ ತಪಾಸಣಾ ಶಿಬಿರ, ಸ್ಥಳ: ಶ್ರೀ ವಾಸವಿ ಪ್ರಾರ್ಥನಾ ಮಂದಿರ, ವಿಶ್ವೇಶ್ವರನಗರ, ಬೆಳಗ್ಗೆ 10 ರಿಂದ.

■ **ಮೈಸೂರು ವಿಶ್ವವಿದ್ಯಾಲಯ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಶ್ರೀ ಬಸವೇಶ್ವರ ಸಾಮಾಜಿಕ ಪರಿಷ್ಕರಣೆ, ಸಂಶೋಧನೆ ಅಧ್ಯಯನ ಹಾಗೂ ವಿಸ್ತರಣಾ ಕೇಂದ್ರ :** ಸರಣಿ ಉಪನ್ಯಾಸ ಮಾಲಿಕೆ, ಡಾ. ಕವಿತಾ ರೈ ಅವರಿಂದ ಅಕ್ಕಮಹಾದೇವಿ ವಚನಗಳಲ್ಲಿಯ ಚಿಂತನೆ ಕುರಿತು ಉಪನ್ಯಾಸ, ಅಧ್ಯಕ್ಷತೆ : ಪ್ರಾಂಶುಪಾಲ ಡಾ. ಎಸ್. ಮರೀಗೌಡ, ಸ್ಥಳ: ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು, ಬೆಳಗ್ಗೆ 10.30ಕ್ಕೆ.

■ **ಕರ್ನಾಟಕ ಸರ್ಕಾರ ಧಾರ್ಮಿಕ ದತ್ತಿ ಇಲಾಖೆ :** ಮೈಸೂರು ನಗರ ಹಳೇ ಸಂತೇಪೇಟೆಯಲ್ಲಿರುವ ಶ್ರೀ ಪ್ರಸನ್ನ ನಂಜುಂಡೇಶ್ವರ ಸ್ವಾಮಿಯವರ ಬ್ರಹ್ಮೋತ್ಸವ, ರಾತ್ರಿ ವೃಷಭಾರೋಹಣ, ಸ್ಥಳ: ದೇವಸ್ಥಾನದ ಪ್ರಾಂಗಣ, ಹಳೇ ಸಂತೇಪೇಟೆ.

■ **ಶ್ರೀ ಕ್ಷೇತ್ರ ದಂಡಿ ಮಾರಮ್ಮನ ದೇವಸ್ಥಾನ :** ಶ್ರೀ ಮನೆ ಮಂಚಮ್ಮ ಶ್ರೀ ದಂಡಿನ ಮಾರಮ್ಮ, ಬಿಸಿಲು ಮಾರಮ್ಮ ಜಾತ್ರಾ ಮಹೋತ್ಸವ, ಮಧ್ಯಾಹ್ನ 12ಕ್ಕೆ ಅನ್ನಸಂತರ್ಪಣೆ, ಸ್ಥಳ: ದೇವಸ್ಥಾನದ ಆವರಣ, ಮೈಸೂರು–ಬೆಂಗಳೂರು ರಸ್ತೆ.

■ **ಹೋಟೆಲ್ ಮಾಲೀಕರ ಸಂಘ, ಹೋಟೆಲ್ ಮಾಲೀಕರ ಧರ್ಮದತ್ತಿ :** ಗೂಡ್ಸ್ ಮತ್ತು ಸರ್ವಿಸ್ ಟ್ಯಾಕ್ಸ್ (ಜಿಎಸ್‌ಟಿ) ಬಗ್ಗೆ ಜಾಗೃತಿ ಹಾಗೂ ಸಂವಾದ ಕಾರ್ಯಕ್ರಮ, ಅಧ್ಯಕ್ಷತೆ : ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ. ನಾರಾಯಣಗೌಡ, ಉಪಸ್ಥಿತರು : ಹೋಟೆಲ್ ಮಾಲೀಕರ ಧರ್ಮದತ್ತಿ ಅಧ್ಯಕ್ಷ ರವಿಶಾಸ್ತ್ರಿ, ಉಪಸ್ಥಿತರು : ಪಿ.ಆರ್. ತೇಜಸ್ವಿನಿ, ಕೆ. ಮಂಜು, ಬಿ.ವಿ. ಮಹೇಶ್, ಸ್ಥಳ: ಹೋಟೆಲ್ ಮಾಲೀಕರ ಸಂಘದ ಆವರಣ, ಕೃಷ್ಣಮೂರ್ತಿಪುರಂ, ಬೆಳಗ್ಗೆ 10.30ಕ್ಕೆ.

■ **ಇತಿಹಾಸ ವಿಭಾಗ, ಮಹಾರಾಜ ಕಾಲೇಜು :** ಡಿ.ಎಸ್. ಅಚ್ಯುತರಾವ್ ದತ್ತಿ ಉಪನ್ಯಾಸ, ಪ್ರಾಸ್ತಾವಿಕ ನುಡಿ : ಪ್ರೊ. ಆರ್.ಡಿ. ಪವಮಾನ, ಉದ್ಘಾಟನೆ : ಡಿ.ಎಸ್. ಅಚ್ಯುತರಾವ್ ದತ್ತಿ ಸಂಚಾಲಕ ಡಿ.ಎ. ಪ್ರಸನ್ನ, ಮುಖ್ಯ ಅತಿಥಿಗಳು : ಇತಿಹಾಸ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ವೈ.ಹೆಚ್. ನಾಯಕವಾಡಿ, ದತ್ತಿ ಉಪನ್ಯಾಸ : ಪಾಂಡಿಚೇರಿ ವಿವಿ ನಿವೃತ್ತ ಪ್ರಾಧ್ಯಾಪಕ ಪ್ರೊ. ಕೆ. ರಾಜನ್, ಉಪಸ್ಥಿತರು: ಆಡಳಿತಾಧಿಕಾರಿ ಪ್ರೊ. ತಿಮ್ಮಯ್ಯ, ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೊ. ರಾಚಯ್ಯ, ಸ್ಥಳ: ಜೂನಿಯರ್ ಬಿ.ಎ. ಹಾಲ್, ಮಹಾರಾಜ ಕಾಲೇಜು, ಬೆಳಗ್ಗೆ 10.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್.ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ ಗಾಯನ–ಕೆ.ಬಿ.ಸುನೀತಾ ಆಚಾರ್ಯ, ಬಿ.ಶ್ರೀರಾಂಭಟ್, ವ್ಯಾಖ್ಯಾನ–ಡಾ.ಜಿ.ಆರ್.ತಿಪ್ಪೇಸ್ವಾಮಿ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಎಂ.ಆರ್.ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ: ಉಮೇಶ್. ಎಸ್.ಎಸ್., 8.30 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಆರ್.ಮೋಹನ್–ಕ್ಲಾರಿಯೋನೆಟ್, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಥೆಯಲ್ಲಿದೆ ಉತ್ತರ, ಪ್ರಸ್ತುತಿ: ಪ್ರಭುಸ್ವಾಮಿ ಮಳಿಮಠ್ ಹಾಗೂ ಎಂ.ಎಸ್.ಕಾರ್ತಿಕ್ **ಮಧ್ಯಾಹ್ನ :** 12.05 ವನಿತಾ ವಿಹಾರ, 12.35–ದೇವರನಾಮ: ರಶ್ಮಿ. ವಿ. ರಾವ್, 12.45 ಮೈಸೂರು ಆಕಾಶವಾಣಿಯ 90ನೇ ವರ್ಷಾಚರಣೆ ಸಂದರ್ಭದಲ್ಲಿ ಚಾಮರಾಜನಗರದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಆದಿವಾಸಿ ಬುಡಕಟ್ಟು ಸಮುದಾಯದ ಹೋರಾಟಗಾರ ಹಾಗೂ ಬಿಳಿರಂಗನ ಬೆಟ್ಟದ ವಿಟ್ರಿ ಸಂಸ್ಥೆಯ ಡಾ.ಸಿ.ಮಾದೇಗೌಡ ಅವರು ಮಾಡಿದ್ದ ಭಾಷಣದ ಆಯ್ದ ಭಾಗಗಳು, 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು –ಇಂದ್ರಾಣಿ ಅನಂತರಾಮ್–ಹಾಡುಗಾರಿಕೆ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಲಾಲ್‌ಗುಡಿ ಜಿ.ಜಯರಾಮನ್–ವಯೋಲಿನ್, 4.00 ಕಥಾಕಾಲಕ್ಷೇಪ–ಶ್ರೀ ಸುಬ್ರಹ್ಮಣ್ಯೇಶ್ವರ, ಪ್ರಸ್ತುತಿ–ವಿದ್ವಾನ್. ಭದ್ರಗಿರಿ ಅಚ್ಯುತದಾಸರು, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರ ಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಹಂದಿ ಸಾಕಾಣಿಕೆ ಈ ಕುರಿತು ಮಂಡ್ಯ ತಾಲೂಕು ದುದ್ದ ಹೋಬಳಿ ಹುಳ್ಳೇನಹಳ್ಳಿ ಗ್ರಾಮದ ಹೆಚ್.ಆರ್.ನಿತೀಶ್‌ಕುಮಾರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್.ಕೇಶವಮೂರ್ತಿ, 7.45 ವಿಧಾನಮಂಡಲದಲ್ಲಿ ಇಂದು, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಹರಿಪ್ರಸಾದ್ ಚೌರಾಸಿಯಾ–ಬಾನ್ಸುರಿ ವಾದನ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ: ಗಾಯತ್ರಿ ವೆಂಕಟರಾಘವನ್–ಹಾಡುಗಾರಿಕೆ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ–ಡಾ.ಎ.ಎಸ್.ಶಂಕರನಾರಾಯಣ, 10.30 ಸವಿನೆನಪು

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಅಧ್ಯಕ್ಷತೆ : ಕರಾಮುವಿವಿ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ, ಮುಖ್ಯ ಅತಿಥಿಗಳು : ಸಂಸ್ಕೃತ ವಿವಿ ವಿಶ್ರಾಂತ ಕುಲಪತಿ ಪ್ರೊ. ಪದ್ಮಾಶೇಖರ್, ಶ್ರೀಮತಿ ಪ್ರಾಚೀಗೌಡ, ಕರಾಮುವಿವಿ ಕುಲಸಚಿವ ಪ್ರೊ. ಕೆ.ಬಿ. ಪ್ರವೀಣ, ಸ್ಥಳ: ಘಟಿಕೋತ್ಸವ ಭವನ, ಕರಾಮುವಿವಿ, ಬೆಳಗ್ಗೆ 11ಕ್ಕೆ.

■ **ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜು :** ಆತ್ಮ ವಿಶ್ವಾಸ ಅಭಿವೃದ್ಧಿ ಕುರಿತು ಕಾರ್ಯಾಗಾರ, ಸಾನ್ನಿಧ್ಯ : ಶ್ರೀ ಚಿದಾನಂದ ಸ್ವಾಮೀಜಿ, ಉಪಸ್ಥಿತರು : ಡಾ. ಎಸ್.ಶಿಲ್ಪಾ, ಶ್ರೀಮತಿ ಹೆಚ್.ಎಂ. ಶ್ವೇತಾ ಆರಾಧ್ಯ, ಅಧ್ಯಕ್ಷತೆ : ಶ್ರೀನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಸ್ಥಳ: ಶ್ರೀನಟರಾಜ ಸಭಾ ಭವನ, ಬೆಳಗ್ಗೆ 11ಕ್ಕೆ.

■ **ಸರ್ ಎಂ. ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘ :** ವಿಶ್ವ ನಲ್ಲಿ ಕೆಲಸಗಾರರ ದಿನಾಚರಣೆ, ಉದ್ಘಾಟನೆ : ಶಾಸಕ ಕೆ. ಹರೀಶ್‌ಗೌಡ, ಸರ್ ಎಂವಿಗೆ ಪುಷ್ಪಾರ್ಚನೆ : ಸಾಹಿತಿ ಬನ್ನೂರು ಕೆ. ರಾಜು, ಉಪಸ್ಥಿತರು : ಶಿವಕುಮಾರ್, ಎಸ್.ಬಿ.ಎಂ. ಮಂಜು, ಚೇತನ್, ಶ್ರೀಮತಿ ಮಂಗಳಗೌಡಿ, ಎಂ.ಸಿ. ಮಾದಪ್ಪ, ಜಯಣ್ಣ, ಶ್ರೀಮತಿ ಜಿ.ಬಿ. ವೀಣಾ, ಸ್ಥಳ: ಸಮುದಾಯ ಭವನ, ಬೃಂದಾವನ 2ನೇ ಹಂತ, ಬೆಳಗ್ಗೆ 11ಕ್ಕೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 11 ಮಂಗಳವಾರ 2025

45

ಸಂಪುಟ: 45 | ಸಂಚಿಕೆ: 321 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ನಟಿ ರನ್ಯಾರಾವ್ ಚಿನ್ನ ಕಳ್ಳಸಾಗಾಣಿಕೆ ಪ್ರಕರಣ: ಸಚಿವರು, ಹಿರಿಯ ಅಧಿಕಾರಿಗಳ ಪಾತ್ರದ ಬಗ್ಗೆ ಮಾಹಿತಿ ಕೇಳಿದ ಕಾಂಗ್ರೆಸ್ ವರಿಷ್ಠರು!

● ಕೆಪಿಸಿಸಿ ಅಧ್ಯಕ್ಷರಿಂದ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಮಾಹಿತಿ ಕೋರಿಕೆ ● ಸಚಿವರ ಪಾತ್ರವಿದ್ದರೆ ಸಿಬಿಐ ತನಿಖೆ ಆಗಲಿ: ಡಾ.ಪರಮೇಶ್ವರ್

ಬೆಂಗಳೂರು, ಮಾ.10(ಕೆಎಂಶಿ)– ಚಿನ್ನ ಕಳ್ಳ ಸಾಗಾಣಿಕೆ ಪ್ರಕರಣದಲ್ಲಿ ಸಚಿವರು ಮತ್ತು ಅಧಿಕಾರಿಗಳ ಪಾತ್ರದ ಬಗ್ಗೆ ಕಾಂಗ್ರೆಸ್ ವರಿಷ್ಠರು ಮಾಹಿತಿ ಕೋರಿದ್ದಾರೆ. ರಾಜ್ಯ ಉಸ್ತುವಾರಿ ಹೊಣೆ ಹೊತ್ತ, ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲ, ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಸಂಪರ್ಕಿಸಿ, ಉತ್ತರ ಬಯಸಿದ್ದಾರೆ. ಚಿನ್ನ ಕಳ್ಳಸಾಗಣೆ ರಾಷ್ಟ್ರ ವ್ಯಾಪಿ ಸುದ್ದಿಯಾಗಿದ್ದು, ಇದರ ಸತ್ಯಾಸತ್ಯತೆ ತಿಳಿಯಲು ಎಐಸಿಸಿ ಬಯಸಿದ್ದು, ಈ ಮಧ್ಯೆ, ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿ ವಾಸ್ತವಸ್ಥಿತಿಯ ಮಾಹಿತಿ ಪಡೆದಿದ್ದಾರೆ.

ಸಿಬಿಐ ತನಿಖೆ ಆಗಲಿ: ಪ್ರಕರಣಕ್ಕೆ ಸಂಬಂಧಿಸಿದಂತೆ ಗೃಹ ಸಚಿವ ಡಾ.ಜಿ. ಪರಮೇಶ್ವರ್, ಸಚಿವರುಗಳ ಪಾತ್ರ ಇದ್ದರೆ ಸಿಬಿಐ ತನಿಖೆ ಮಾಡಲಿ, ಸತ್ಯಾಸತ್ಯತೆ ಹೊರತರಲಿ ಎಂದು ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಚಿನ್ನ ಕಳ್ಳಸಾಗಾಣೆ ಪ್ರಕರಣದಲ್ಲಿ ಸಿಕ್ಕಿಬಿದ್ದಿರುವ ಚಿತ್ರನಟಿ ರನ್ಯಾರಾವ್ ಬಗ್ಗೆ ರಾಜ್ಯ ಸರ್ಕಾರಕ್ಕೆ ಯಾವುದೇ ಮಾಹಿತಿ ಇಲ್ಲ ಎಂದು ಸ್ಪಷ್ಟಪಡಿಸಿದರು. ಈ ಮೊದಲು ಯಾವುದೇ ಪ್ರಕರಣದಲ್ಲಿ ಸಿಬಿಐ ತನಿಖೆ ನಡೆಸಿದರೆ ರಾಜ್ಯ ಸರ್ಕಾರಕ್ಕೆ ಮಾಹಿತಿ ನೀಡಲಾಗುತ್ತಿತ್ತು. ರನ್ಯಾರಾವ್ ವಿಷಯದಲ್ಲಿ ನಮ್ಮ ಅನುಮತಿ ಕೇಳಿಲ್ಲ. ನಾವು ಕೂಡಾ ಮಾಧ್ಯಮಗಳಲ್ಲಿ ಓದಿ ತಿಳಿದುಕೊಂಡಿದ್ದೇವೆ. ಕೇಂದ್ರ ಸರ್ಕಾರದ ತನಿಖೆ ಬಗ್ಗೆ ನಮಗೆ ಯಾವುದೇ ಮಾಹಿತಿ ಇಲ್ಲ. ಆರೋಪಿಯು ಪೊಲೀಸ್ ವಾಹನದಲ್ಲಿ ಓಡಾಡಿರುವ ಬಗ್ಗೆ ನಮ್ಮ ಹಂತದಲ್ಲಿ ನಡೆಯಬೇಕಾದ ತನಿಖೆಯನ್ನು ನಾವು ಮಾಡುತ್ತೇವೆ ಎಂದರು. ಚಿನ್ನ ಕಳ್ಳಸಾಗಾಣೆ ವರದಿ ಆಗಿರುವುದು ವಿಮಾನ ನಿಲ್ದಾಣದಲ್ಲಿ, ಕೇಂದ್ರ ಕಂದಾಯ ಗುಪ್ತಚರ ವಿಭಾಗದವರು ಕಾರ್ಯಾಚರಣೆ ನಡೆಸಿದ್ದಾರೆ. ಪ್ರಕರಣಕ್ಕೂ, ರಾಜ್ಯ ಸರ್ಕಾರಕ್ಕೂ ಯಾವುದೇ ಸಂಬಂಧ ಇಲ್ಲ. ಗುಪ್ತಚರ ಇಲಾಖೆ ಅಧಿಕಾರಿಗಳು ಕೇಂದ್ರಕ್ಕೆ ವರದಿ ನೀಡುತ್ತಾರೆ, ನಮಗಲ್ಲ. ಹಾಗೆಂದು ಕಳ್ಳಸಾಗಾಣೆ ನಡೆದಿಲ್ಲ ಎಂದು ನಾನು ಹೇಳುತ್ತಿಲ್ಲ. ರನ್ಯಾರಾವ್ ಅವರ ■ 6ನೇ ಪುಟಕ್ಕೆ



ಉದ್ಯಮಿ ತಮ್ಮನ ಪುತ್ರ ತರುಣ್ ರಾಜು ಬಂಧನ

ಬೆಂಗಳೂರು: ನಟಿ ರನ್ಯಾರಾವ್ ಚಿನ್ನ ಅಕ್ರಮ ಸಾಗಾಣೆ ಪ್ರಕರಣದಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯದ (ಡಿಆರ್‌ಐ) ಅಧಿಕಾರಿಗಳು ಉದ್ಯಮಿ ತಮ್ಮನ ಪುತ್ರ ತರುಣ್‌ರಾಜು ಎಂಬುವವರನ್ನು ಬಂಧಿಸಿದ್ದಾರೆ. ರನ್ಯಾರಾವ್ ಹಾಗೂ ತರುಣ್ ರಾಜು ಇಬ್ಬರೂ ಹಲವು ವರ್ಷಗಳಿಂದ ಸ್ನೇಹಿತರಾಗಿದ್ದರು. ಈ ತರುಣ್ ಎಂಬುವವರೇ ರನ್ಯಾರಾವ್ ಅವರಿಂದ ಚಿನ್ನ ತರಿಸಿಕೊಳ್ಳುತ್ತಿದ್ದರು ಎಂದು ಪ್ರಾಥಮಿಕ ತನಿಖೆಯಿಂದ ಗೊತ್ತಾಗಿದೆ ಎಂದು ಮೂಲಗಳು ತಿಳಿಸಿವೆ. ರನ್ಯಾ ಫೋನ್ ವಶಕ್ಕೆ ಪಡೆದಿದ್ದು, ಇದನ್ನು ಸಂಪೂರ್ಣ ತಪಾಸಣೆ ಮಾಡಬೇಕಿದೆ. 12 ಕೋಟಿ ರೂಪಾಯಿಗಿಂತ ಹೆಚ್ಚಿನ ಮೌಲ್ಯದ ಚಿನ್ನ ■ 6ನೇ ಪುಟಕ್ಕೆ

ರನ್ಯಾರಾವ್‌ಗೆ 14 ದಿನ ನ್ಯಾಯಾಂಗ ಬಂಧನ

ಬೆಂಗಳೂರು: ದುಬೈನಿಂದ ಅಕ್ರಮವಾಗಿ ಚಿನ್ನ ಕಳ್ಳಸಾಗಣೆ ಮಾಡಿದ ಪ್ರಕರಣ ಸಂಬಂಧ ಬಂಧನಕ್ಕೀಡಾಗಿರುವ ನಟಿ ರನ್ಯಾರಾವ್‌ಗೆ ಕೋರ್ಟ್ ನ್ಯಾಯಾಂಗ ಬಂಧನಕ್ಕೆ ಆದೇಶಿಸಿದೆ. ಪ್ರಕರಣ ಸಂಬಂಧ ಡಿಆರ್‌ಐ ಕಸ್ಟಡಿ ಅವಧಿ ಇಂದು ಮುಕ್ತಾಯವಾದ ಹಿನ್ನೆಲೆಯಲ್ಲಿ ರನ್ಯಾರಾವ್ ಅವರನ್ನು ಬೆಂಗಳೂರಿನ ಆರ್ಥಿಕ ಅಪರಾಧಗಳ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಈ ವೇಳೆ ನ್ಯಾಯಾಲಯ ನಟಿ ರನ್ಯಾರಾವ್‌ಗೆ 14 ದಿನ ನ್ಯಾಯಾಂಗ ಬಂಧನ ವಿಧಿಸಿ ಆದೇಶ ಹೊರಡಿಸಿದೆ. ಹೀಗಾಗಿ ನಟಿ ಪರಪ್ಪನ ಅಗ್ರಹಾರ ಜೈಲುಪಾಲಾಗಿದ್ದಾರೆ.

ಬೃಹತ್ ಮೈಸೂರು ಮಹಾನಗರ ಪಾಲಿಕೆ ಮುನ್ನೆಲೆಗೆ

ಸ್ಥಳೀಯ ಸಂಸ್ಥೆಗಳ ವಿಲೀನದೊಂದಿಗೆ ಯೋಜನಾಬದ್ಧ ಅಭಿವೃದ್ಧಿ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ: ಮೈಸೂರು ಡಿಸಿ, ಪಾಲಿಕೆ ಆಯುಕ್ತರಿಗೆ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಸೂಚನೆ

● 2018ರ ವಾರ್ಡ್ ಪುನರ್‌ವಿಂಗಡಣೆ ಪರಿಗಣಿಸಿ ಬೃಹತ್ ಮೈಸೂರು ಮಹಾನಗರ ಪಾಲಿಕೆ ಗಡಿ ನಿಗದಿ ● ಮೈಸೂರು ಸುತ್ತಮುತ್ತಲ 30 ಗ್ರಾಮಗಳನ್ನು ವ್ಯಾಪ್ತಿಗೆ ತಂದು ವಿಸ್ತೃತ ಯೋಜನಾ ವರದಿ ತಯಾರಿಸಿ ಮುಖ್ಯಮಂತ್ರಿಗೆ ಮಂಡಿಸಲು ಸಿದ್ಧತೆ



ಮೈಸೂರು, ಮಾ. 10(ಆರ್‌ಕೆ)– ಬೃಹತ್ ಮೈಸೂರು ಮಹಾನಗರ ಪಾಲಿಕೆ ಪ್ರಸ್ತಾಪ ಮತ್ತೆ ಮುನ್ನೆಲೆಗೆ ಬಂದಿದೆ. ಈ ಸಂಬಂಧ ಅಗತ್ಯ ಮಾಹಿತಿಯೊಂದಿಗೆ ವಿಸ್ತೃತವಾದ ಯೋಜನಾಬದ್ಧ ವರದಿಯೊಂದಿಗೆ ಪ್ರಸ್ತಾವನೆ ಸಿದ್ಧಪಡಿಸುವಂತೆ ಮೈಸೂರು ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ ಹಾಗೂ ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್‌ರಿಗೆ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಸೂಚನೆ ನೀಡಿದ್ದಾರೆ.



ಬೃಹತ್ ಮೈಸೂರು ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸುವ ಸಂಬಂಧ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಸಭೆ ನಡೆಸಿದರು.

ವಿಧಾನಸೌಧದಲ್ಲಿ ಇಂದು ಮೈಸೂರು ಮಹಾನಗರ ಪಾಲಿಕೆ ಮೇಲ್ದರ್ಜೆಗೇರಿಸಿ, ಜನಸಂಖ್ಯೆ ಮತ್ತು ವ್ಯಾಪ್ತಿ ಪ್ರದೇಶಕ್ಕೆ ಅನುಗುಣವಾಗಿ ಬೃಹತ್ ಮೈಸೂರು ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸುವ ಸಂಬಂಧ ಸಚಿವರು ಸಭೆ ನಡೆಸಿದರು.

ಈಗಾಗಲೇ ಪ್ರಸ್ತಾಪಿಸಿರುವಂತೆ ಬಿಬಿಎಂಪಿ ಮಾದರಿಯಲ್ಲಿ ಮೈಸೂರು ಸುತ್ತಮುತ್ತ ಸುಮಾರು 30 ಗ್ರಾಮಗಳನ್ನು ಸೇರಿಸಿಕೊಂಡು 'ಮೈಸೂರು ಬೃಹತ್ ಮಹಾನಗರ'ವನ್ನಾಗಿಸಲು ಪ್ರಸ್ತುತ ಇರುವ 65 ವಾರ್ಡ್‌ಗಳನ್ನು ■ 6ನೇ ಪುಟಕ್ಕೆ

ಮೈಕ್ರೋ ಫೈನಾನ್ಸ್ ವಿಧೇಯಕ ಅಂಗೀಕಾರ

ಸಾಲಗಾರರಿಗೆ ಕಿರುಕುಳ ನೀಡಿದರೆ 10 ವರ್ಷ ಜೈಲು, 5 ಲಕ್ಷದವರೆಗೂ ದಂಡ

ಬೆಂಗಳೂರು: ಅನಧಿಕೃತ ಫೈನಾನ್ಸ್ ಸಂಸ್ಥೆಗಳಿಗೆ 10 ವರ್ಷ ಕಠಿಣ ಜೈಲು, 5 ಲಕ್ಷ ರೂ. ದಂಡ, ಕಪ್ಪು ಹಣಕ್ಕೆ ಕಡಿವಾಣ ಹಾಗೂ ಲೇವಾದೇವಿ ಮಾಫಿಯಾಗಳಿಂದ ಸಾಲ ಪಡೆದವರಿಗೆ ಉಂಟಾಗುವ ಕಿರುಕುಳ ತಪ್ಪಿಸುವ ಕರ್ನಾಟಕ ಕಿರು (ಮೈಕ್ರೋ) ಸಾಲ ಮತ್ತು ಸಣ್ಣಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ವಿಧೇಯಕ 2025 ಇಂದು ವಿಧಾನಸಭೆಯಲ್ಲಿ ಅಂಗೀಕಾರಗೊಂಡಿತು.

ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಅವರು ಮಂಡಿಸಿದ ಈ ವಿಧೇಯಕಕ್ಕೆ ಸುದೀರ್ಘ ಚರ್ಚೆಯ ಬಳಿಕ ವಿಪಕ್ಷಗಳ ಸಲಹೆ ಹಾಗೂ ಸಹಮತದಿಂದ ಅನುಮೋದನೆ ಸಿಕ್ಕಿತು.

ಸಿಎಂ ಪರವಾಗಿ ಹೆಚ್.ಕೆ.ಪಾಟೀಲ್ ಆರಂಭದಲ್ಲಿ ವಿಷಯ ಪ್ರಸ್ತಾಪಿಸಿ, ಕಿರುಸಾಲ, ಸಣ್ಣ ಸಾಲ, ಖಾಸಗಿ ಹಣಕಾಸು ಮತ್ತು ಇತರೆ ಅನಿಯಂತ್ರಿತ ಲೇವಾದೇವಿದಾರರಿಂದ ಸಾಲ ಪಡೆದವರಿಗೆ ಉಂಟಾಗುವ ಕಿರುಕುಳ ತಪ್ಪಿಸಿ ರಕ್ಷಣೆ ನೀಡುವ ಉದ್ದೇಶದಿಂದ ಈ ವಿಧೇಯಕ ತರಲಾಗಿದೆ ಎಂದು ಸದನಕ್ಕೆ ತಿಳಿಸಿದರು.



ಸಚಿವ ಹೆಚ್.ಕೆ.ಪಾಟೀಲ್

ಪೊಲೀಸರಿಗೆ ಇನ್ನಷ್ಟು ಬಲ: ಇದರಲ್ಲಿ ಸಾಲಗಳನ್ನು ಪಡೆಯುವ ಮತ್ತು ಸಾಲಗಳಲ್ಲೇ ಮುಳುಗಿಹೋಗಿರುವ ಅಸಹಾಯಕರನ್ನು ಕಾಪಾಡುವ ಮತ್ತು ರಕ್ಷಿಸುವ ಉದ್ದೇಶವಿದೆ. ಬಡ ಗ್ರಾಮೀಣ ನಿರ್ಗತಿಕರು, ನಗರ ಕಾರ್ಮಿಕರು, ಸಮಾಜದ ಅಶಕ್ತ ಮತ್ತು ದುರ್ಬಲ ವರ್ಗದವರನ್ನು ಪೀಡಿಸುತ್ತಿವೆ. ಸಾಲಗಾರನಿಗೆ ಕೆಲವೊಮ್ಮೆ ಹೆಚ್ಚಿನ ಬಡ್ಡಿ ಪಾವತಿಸಲು ಒತ್ತಾಯಿಸಲಾಗುತ್ತಿದೆ. ಲೇವಾದೇವಿದಾರರ ಕಾರಣದಿಂದಾಗಿ ಸಾಲಗಾರರು ಬೀದಿಗೆ ಬರುವಂತೆ, ಆತ್ಮಹತ್ಯೆ ಮಾಡಿಕೊಳ್ಳುವಂತಹ ಪರಿಸ್ಥಿತಿಗೆ ದೂಡಲಾಗುತ್ತಿದೆ. ಇದನ್ನು ಸಂಪೂರ್ಣವಾಗಿ ನಿಯಂತ್ರಣ ಮಾಡುವ ಗುರಿ ಹೊಂದಲಾಗಿದೆ. ಇದರ ಜೊತೆಗೆ ಪೊಲೀಸರಿಗೆ ಇನ್ನಷ್ಟು ಬಲ ನೀಡಿ ಕಾನೂನು ರಕ್ಷಣೆ ಮಾಡಬಹುದಾಗಿದೆ ಎಂದು ಹೇಳಿದರು.

30 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ: ಈ ಸಂದರ್ಭದಲ್ಲಿ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಈಗಾಗಲೇ ಇರುವ ಕಾನೂನುಗಳ ಮೂಲಕ ಫೈನಾನ್ಸ್ ದಂಧೆ ಮಾಡುವವರನ್ನು ಬಗ್ಗುಬಡಿಯಬಹುದಾಗಿತ್ತು. ಆದರೆ, ಸರ್ಕಾರ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವಲ್ಲಿ ಸಂಪೂರ್ಣ ವಿಫಲವಾಗಿದೆ. ಇದರಿಂದ ಬಡಜನರ ಪ್ರಾಣವೂ ನಷ್ಟವಾಯಿತು. ಅಂದಾಜಿನ ಪ್ರಕಾರ, ರಾಜ್ಯದಲ್ಲಿ ಲೇವಾದೇವಿದಾರರ ಕಿರುಕುಳಕ್ಕೆ 30 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ ಎಂದು ಸದನದ ಗಮನ ಸೆಳೆದರು. ರಾಜ್ಯ ಸರ್ಕಾರ ಕಾನೂನು ಜಾರಿಗೆ ಹೊರಟಿದೆ. ಇದಕ್ಕೆ ನಮ್ಮ ಸ್ವಾಗತವಿದೆ. ಆದರೆ, ಯಾವುದೇ ಕಾರಣಕ್ಕೂ ಕೋರ್ಟಿನಲ್ಲಿ ಬೀಳದಂತೆ ನೋಡಿಕೊಳ್ಳಬೇಕು. ಜೊತೆಗೆ, ನ್ಯಾಯಯುತವಾಗಿ ಸಾಲ ನೀಡುವ ಮಂದಿಗೂ ಹಾನಿಯಾಗದಂತೆ ಸರ್ಕಾರ ಗಮನ ನೀಡಬೇಕು ಎಂದೂ ಅಶೋಕ್ ಸಲಹೆ ನೀಡಿದರು.

ಬಡ್ಡಿ ವಿಧಿಸುವ ದೊಡ್ಡ ಜಾಲ: ಪ್ರತಿಪಕ್ಷದ ಉಪ ■ 6ನೇ ಪುಟಕ್ಕೆ

ಜಿಟಿಡಿ ಪ್ರಯತ್ನ ಫಲ ನೀಡುವ ಕಾಲ ಸನ್ನಿಹಿತ

ಮೈಸೂರು: ಬೃಹತ್ ಮೈಸೂರು ಮಹಾನಗರ ಪಾಲಿಕೆ ಪ್ರಸ್ತಾವ ಮತ್ತೆ ಮುನ್ನಲೆಗೆ ಬಂದಿದೆ.



ಮೈಸೂರಿನ ಹಿರಿಯ ಶಾಸಕ ಜಿ.ಟಿ.ದೇವೇಗೌಡರ ಒತ್ತಾಸೆ ಪ್ರಮುಖವಾಗಿದೆ. ಕೆಲ ವರ್ಷಗಳಿಂದ ಮೈಸೂರು ನಗರ ಹಾಗೂ ಹೊರವಲಯ ಸಾಕಷ್ಟು ಮೂಲಸೌಕರ್ಯಗಳಿಂದ ವಂಚಿತವಾಗಿದ್ದು, ಅಲ್ಲಿನ ನಿವಾಸಿಗಳ ಸಂಕಷ್ಟವನ್ನು ಅರಿತಂತಹ ಜಿ.ಟಿ.ದೇವೇಗೌಡರು ಬೃಹತ್ ಮೈಸೂರು ಮಹಾನಗರ ಪಾಲಿಕೆ ಅಸ್ತಿತ್ವಕ್ಕೆ ತರುವ ಮೂಲಕ ಹಲವು ಗ್ರಾಮಗಳೂ ಸೇರಿದಂತೆ ಅಭಿವೃದ್ಧಿಗೊಂಡಿರುವ ಪ್ರದೇಶಗಳನ್ನು ಒಳಗೊಂಡ ಆಡಳಿತ ವ್ಯವಸ್ಥೆ ರೂಪಿಸುವ ಅನಿವಾರ್ಯತೆಯನ್ನೂ ಪ್ರತಿಪಾದಿಸಿದ್ದರು. ಅಲ್ಲದೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಮಯ–ಸಂದರ್ಭ ಸಿಕ್ಕಾಗಲೆಲ್ಲಾ ಮನವಿ ಮಾಡುತ್ತಲೇ ಬಂದಿದ್ದರು. ಅವರ ಆಗ್ರಹ ಮತ್ತು ಕಳಕಳಿಯ ಫಲವಾಗಿ ಏನೋ ಈಗ ಬೃಹತ್ ಮೈಸೂರು ಮಹಾನಗರ ಪಾಲಿಕೆ ಪ್ರಸ್ತಾವ ಮುನ್ನೆಲೆಗೆ ಬಂದಿದ್ದು, ಗೌಡರ ಪ್ರಯತ್ನಕ್ಕೆ ಫಲ ದೊರೆಯುವ ಕಾಲ ಸಮೀಪಿಸಿದಂತಿದೆ.

ನಟೇಶ್ ಪರ ತೀರ್ಪಿನ ವಿರುದ್ಧ ಮೇಲ್ಮನವಿ



ಬೆಂಗಳೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ನಿವೇಶನಗಳ ಅಕ್ರಮ ಹಂಚಿಕೆ ಹಗರಣದ ಆರೋಪಕ್ಕೆ ಸಂಬಂಧಿಸಿದಂತೆ ಮುಡಾ ಮಾಜಿ ಆಯುಕ್ತ ಡಿ.ಬಿ.ನಟೇಶ್ ಅರ್ಜಿಯನ್ನು ಪುರಸ್ಕರಿಸಿದ್ದ ಏಕಸದಸ್ಯ ನ್ಯಾಯಪೀಠದ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್ ವಿಭಾಗೀಯ ನ್ಯಾಯಪೀಠಕ್ಕೆ ಮೇಲ್ಮನವಿ ಸಲ್ಲಿಸಲಾಗಿದೆ. ಈ ಕುರಿತಂತೆ ಇಡಿ ಸಲ್ಲಿಸಿರುವ ಮೇಲ್ಮನವಿಯನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು. ಮೇಲ್ಮನವಿಯನ್ನು ವಿಚಾರಣೆಗೆ ಪರಿಗಣಿಸಲಾಗಿದ್ದು, ಪ್ರತಿವಾದಿಗಳು ಆಕ್ಷೇಪಣೆ ಸಲ್ಲಿಸಬೇಕು ಎಂದು ಆದೇಶಿಸಿದ ನ್ಯಾಯಪೀಠ, ವಿಚಾರಣೆಯನ್ನು ಏಪ್ರಿಲ್ 8ಕ್ಕೆ ಮುಂದೂಡಿತು. ಜಾರಿ ನಿರ್ದೇಶನಾಲಯ (ಇಡಿ) ನನ್ನ ಮನೆಯಲ್ಲಿ ನಡೆಸಿರುವ ಶೋಧ ಕಾರ್ಯ ಹಾಗೂ ಇದಕ್ಕೆ ಸಂಬಂಧಿಸಿದಂತೆ ದಾಖಲು ಮಾಡಿಕೊಂಡಿರುವ ನನ್ನ ಹೇಳಿಕೆ ಕಾನೂನುಬಾಹಿರ ಎಂದು ಆಕ್ಷೇಪಿಸಿ ನಟೇಶ್ ಹೈಕೋರ್ಟ್ ಮೆಟ್ಟಿಲೇರಿದ್ದರು. ಇದನ್ನು ಏಕಸದಸ್ಯ ನ್ಯಾಯಪೀಠ ಪುರಸ್ಕರಿಸಿತ್ತು.

ಮೈಸೂರು ರಿಂಗ್ ರಸ್ತೆಯ ಎಲ್ಲಾ ಕೆಳಸೇತುವೆ ಕಾಮಗಾರಿ ವರ್ಷಾಂತ್ಯಕ್ಕೆ ಪೂರ್ಣ

ಮೈಸೂರು, ಮಾ.10(ಆರ್‌ಕೆ)– ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಕೈಗೊಂಡಿರುವ ಮೈಸೂರಿನ ರಿಂಗ್ ರಸ್ತೆಯಲ್ಲಿನ ನಾಲ್ಕು ಕೆಳಸೇತುವೆ (ರೋಡ್ ಅಂಡರ್‌ಬ್ರಿಡ್ಜ್) ನಿರ್ಮಾಣ ಕಾಮಗಾರಿಗಳು 2025ರ ಡಿಸೆಂಬರ್ 31ರೊಳಗೆ ಪೂರ್ಣಗೊಳ್ಳಲಿವೆ.

ಎರಡು ದಶಕದ ಹಿಂದೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ದಿಂದ ನಿರ್ಮಾಣವಾಗಿರುವ 42.5 ಕಿ.ಮೀ ಹೊರವರ್ತುಲ ರಸ್ತೆ, ಅನುಕೂಲಕ್ಕೆ ಅನುಗುಣವಾಗಿ ಆಯಾಯ ಸಂದರ್ಭದಲ್ಲಿ ಅಭಿವೃದ್ಧಿಗೊಳ್ಳುತ್ತಾ ಬಂದಿದ್ದು, ಇದನ್ನು ವರ್ಷಗಳ ಹಿಂದೆ ಇದರ ನಿರ್ವಹಣೆಯನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ವಹಿಸಲಾಗಿದೆ. ಈ ಮಧ್ಯೆ ವಾಹನ ಸಂಚಾರಕ್ಕೆ ಅಡ್ಡಿಯುಂಟಾಗುತ್ತಿದ್ದ ಹೆಚ್.ಡಿ.ಕೋಟೆ ರಸ್ತೆ ಜಂಕ್ಷನ್ ಮತ್ತು ನಂಜನಗೂಡು ರಸ್ತೆ ಜಂಕ್ಷನ್ ನಡುವೆ ಜೆಪಿನಗರದ ಬಳಿ ಮೈಸೂರು–ನಂಜನಗೂಡು ರೈಲ್ವೆ ಮಾರ್ಗ, ಕೆಆರ್‌ಎಸ್ ರಸ್ತೆಯ ಹೋಟೆಲ್ ರಾಯಲ್ ಇನ್ ಜಂಕ್ಷನ್‌ನಲ್ಲಿ ಅರಸೀಕೆರೆ ರೈಲು ಮಾರ್ಗ, ಬೆಂಗಳೂರು ಹೆದ್ದಾರಿಯ ಮಣಿಪಾಲ್ ಆಸ್ಪತ್ರೆಯ ಬಳಿ, ಆರ್‌ಬಿಐ ನೋಟು ಮುದ್ರಣಾಲಯ ಘಟಕದ ರೈಲು ಹಳಿ ಮಾರ್ಗ ಹಾಗೂ ಮೈಸೂರು–ಬೆಂಗಳೂರು ರೈಲ್ವೆ ಮಾರ್ಗದಲ್ಲಿ ಕೆಳಸೇತುವೆಗಳನ್ನು ಸುಮಾರು 92 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದೆ.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಡಿ, ಕರ್ನಾಟಕ ಲೋಕೋಪಯೋಗಿ ಇಲಾಖೆ, ಈ ಅಂಡರ್‌ಬ್ರಿಡ್ಜ್ ಯೋಜನೆಯನ್ನು 2023ರಲ್ಲಿ ಕೈಗೆತ್ತಿಕೊಂಡಿದ್ದು, ಬೆಂಗಳೂರು ಮೂಲದ ಸಿದ್ಧಾರ್ಥ ಸಿವಿಲ್ ಕನ್‌ಸ್ಟ್ರಕ್ಷನ್ ಲಿ. ಕಾಮಗಾರಿ ನಿರ್ವಹಿಸುತ್ತಿದೆ. ಈ ಹಿಂದೆ ಮೈಸೂರು–ಕೊಡಗು ಸಂಸದರಾಗಿದ್ದ ಪ್ರತಾಪ್ ಸಿಂಹ, ಹಲವು ಬಾರಿ ಕೇಂದ್ರ ಭೂ ಸಾರಿಗೆ ಹಾಗೂ ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿ ಹಾಗೂ ಇಲಾಖಾ ಹಿರಿಯ ಅಧಿಕಾರಿಗಳನ್ನು ಭೇಟಿ ಮಾಡಿ ಈ ಯೋಜನೆಯನ್ನು ಮಂಜೂರು ಮಾಡಿಸಿದ್ದರು. ರಿಂಗ್ ರಸ್ತೆ ನಿರ್ಮಾಣ ಮಾಡುವಾಗ ರೈಲ್ವೆ ಹಳಿ ಮಾರ್ಗಗಳು ಹಾದು ಹೋಗಿರುವ ಸ್ಥಳಗಳಲ್ಲಿ ಏಕಪಥಕ್ಕೆ ಅನುಗುಣವಾಗಿ ಸೇತುವೆ ಮಾಡಿದ್ದು, ನಂತರ ರಿಂಗ್ ರಸ್ತೆ ದ್ವಿಪಥ, ಬಳಿಕ ನಾಲ್ಕುಪಥ, ಸರ್ವಿಸ್ ರಸ್ತೆಯೂ ಸೇರಿ ವಿಸ್ತರಣೆಗೊಂಡಾಗ, ಜೊತೆಗೆ ವಾಹನಗಳ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿದ್ದನ್ನು ಮನಗಂಡು, ಪ್ರತಾಪ್ ಸಿಂಹ ಅವರು ಕೆಳ ಸೇತುವೆ ಯೋಜನೆಯನ್ನು ಮನಗಂಡಿದ್ದರು.



ಮೈಸೂರಿನ ಕೆಆರ್‌ಎಸ್ ರಸ್ತೆಯ ಹೋಟೆಲ್ ರಾಯಲ್ ಇನ್ ಜಂಕ್ಷನ್ ಬಳಿ ನಡೆಯುತ್ತಿರುವ ಕೆಳ ಸೇತುವೆ ಕಾಮಗಾರಿ. ಇಲ್ಲಿ ಮೈಸೂರು–ಅರಸೀಕೆರೆ ರೈಲು ಮಾರ್ಗ ಹಾದು ಹೋಗಲಿದೆ.

ರಿಂಗ್ ರಸ್ತೆ ನಿರ್ಮಾಣ ವೇಳೆ ಅಂಡರ್ ಬ್ರಿಡ್ಜ್‌ಗಳಿಗೆ ಅನುದಾನ ಹಂಚಿಕೆ ಆಗದ ಕಾರಣ ಕೇವಲ ರಿಂಗ್ ರಸ್ತೆ ಯೋಜನೆಯನ್ನು ಮಾತ್ರ ಪೂರ್ಣಗೊಳಿಸಿ, ಅದಕ್ಕನುಗುಣವಾಗಿ ಕೆಳ ಸೇತುವೆ ಕಲ್ಪಿಸಲಾಗಿತ್ತು. ನಂತರ ರಿಂಗ್ ರಸ್ತೆ ನಾಲ್ಕು ಪಥ ಹಾಗೂ ಸರ್ವಿಸ್ ರಸ್ತೆ ಸೇರಿದಂತೆ ಮೇಲ್ದರ್ಜೆಗೇರಿಸಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಹಸ್ತಾಂತರಿಸಲಾಗಿತ್ತು. ಈಗಾಗಲೇ ಜೆಪಿನಗರ ಬಳಿಯ ರಸ್ತೆ ಕೆಳ ಸೇತುವೆಯ ಕೆಲಸ ಶೇ.85ರಷ್ಟು ಪೂರ್ಣಗೊಂಡಿದ್ದು, ಇನ್ನೆರಡು ತಿಂಗಳಲ್ಲಿ ಪೂರ್ಣಗೊಳ್ಳಲಿದೆ. ಅದೇ ರೀತಿ ಕೆಆರ್‌ಎಸ್ ರಸ್ತೆ ಮತ್ತು ಮೈಸೂರು–ಬೆಂಗಳೂರು ಹೆದ್ದಾರಿ ಜಂಕ್ಷನ್ ನಡುವಿನ ಮೂರು ಸೇತುವೆ, ಸರ್ವಿಸ್ ರಸ್ತೆಗಳಿಗೂ ಕೆಳಸೇತುವೆ ನಿರ್ಮಾಣ ಕೆಲಸ ಭರದಿಂದ ಸಾಗಿದ್ದು, ಈ ವರ್ಷದ ಡಿಸೆಂಬರ್ ಅಂತ್ಯದ ವೇಳೆಗೆ ಈ ಯೋಜನೆ ಪೂರ್ಣಗೊಳ್ಳಲಿದೆ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಮೈಸೂರು ಉಪ ವಿಭಾಗದ ಅಸಿಸ್ಟೆಂಟ್ ಎಕ್ಸಿಕ್ಯುಟಿವ್ ಇಂಜಿನಿಯರ್ ರೂಪ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ. ಮಳೆಗಾಲದಲ್ಲಿ ಸಿಮೆಂಟ್ ಕಾಂಕ್ರೀಟ್ ಕಾಮಗಾರಿ ಮಾಡದ ಕಾರಣ ಕೆಲ ತಿಂಗಳ ಕಾಲ ಕೆಲಸ ಸ್ಥಗಿತಗೊಂಡಿತ್ತು. ಅಲ್ಲದೆ, ಸ್ಥಳೀಯ ■ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಗ್ರಾಹಕ : ಬ್ಯಾಂಕಿನಮನ್ನು ನುಬಿ ನಾವು ಕೋಟಿ ಕೋಟಿ ಹಾ ಠೇವಣಿ ಇಡುತ್ತೇವೆ
ಮತ್ತೊಬ್ಬ ಗ್ರಾಹಕ : ಹೌದು, ಮತ್ತೇನು....
ಗ್ರಾಹಕ : ಆದರೆ ಬ್ಯಾಂಕ್‌ನವರು ಮಾತ್ರ ನಮ್ಮನ್ನು ನಂಬಲ್ಲ.
ಮತ್ತೊಬ್ಬ ಗ್ರಾಹಕ : ಅದ್ಹೇಗೆ...!
ಗ್ರಾಹಕ : ನಿಂಗೆ ಗೊತ್ತಾ ಬ್ಯಾಂಕ್‌ನವರು 3 ರೂ. ಪೆನ್‌ಗೆ ದಾರ ಕಟ್ಟಿ ಇಟ್ಟಿರ್ತಾರೆ...!!

ಮೈಸೂರು ಮಿತ್ರ

ಮಂಗಳವಾರ, 11 ಮಾರ್ಚ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಸ್ನೇಹ, ಸೌಜನ್ಯದಿಂದ ಮನುಷ್ಯನನ್ನು ಗೆಲ್ಲಬಹುದೇ ಹೊರತು ಬರಿಯ ಶಕ್ತಿಯಿಂದಲ್ಲ –ಅರಿಸ್ಟಾಟಲ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಆರು ಕೊಟ್ಟರೆ ಅತ್ತೆ ಕಡೆ, ಮೂರು ಕೊಟ್ಟರೆ ಸೊಸೆ ಕಡೆ

ನಿಮ್ಮ ಪತ್ರಗಳು

■ ನಿರ್ವಹಣೆ ಇಲ್ಲದ ಶೌಚಾಲಯಗಳು

ಮಾನ್ಯರೆ,

ನಮ್ಮ ಮೈಸೂರು ಸ್ವಚ್ಛ ನಗರಿ ಎಂಬ ಬಿರುದಿನೊಂದಿಗೆ ವಿಶ್ವ ವಿಖ್ಯಾತವಾಗಿದ್ದು ಸದ್ಯ ಇತಿಹಾಸವಷ್ಟೆ, ಮೈಸೂರು ಜನಸಂಖ್ಯೆ 13 ಲಕ್ಷ ದಾಟಿದೆ. ಪ್ರತಿ ವರ್ಷ ಮೈಸೂರಿಗೆ ಬರುವ ಪ್ರವಾಸಿಗರ ಸಂಖ್ಯೆ ಹೆಚ್ಚಾಗುತ್ತಿದೆ. ಅದೇ ರೀತಿ ಪ್ರತಿ ದಿನ ಸಾವಿರಾರು ಜನರು ಕೆಲಸ ಅರಸಿ ಹಾಗೂ ದೈನಂದಿನ ಕಾರ್ಯಗಳಿಗೆ ಮೈಸೂರಿಗೆ ಬರುತ್ತಾರೆ. ಇಷ್ಟೊಂದು ಜನರಿಗೆ ಮೊದಲ ಮೂಲ ಸೌಕರ್ಯವೆಂದರೆ ಅದು ಶೌಚಾಲಯದ ವ್ಯವಸ್ಥೆ ಕಲ್ಪಿಸುವುದು. ಈಗಾಗಲೇ ಮೈಸೂರಿನ ಹಲವು ಕಡೆಗಳಲ್ಲಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಆದರೆ ಸೂಕ್ತ ನಿರ್ವಹಣೆ ಇಲ್ಲದೆ, ಹಳೆಯದಾದ ಹಾಗೂ ದುರಸ್ತಿ ಮಾಡದೆ ಹಲವು ಸಾರ್ವಜನಿಕ ಶೌಚಾಲಯಗಳು ದುರ್ನಾತ ಬೀರುತ್ತಾ ಅಶುಚಿತ್ವದಿಂದ ಕೂಡಿವೆ. ಹಣ ನೀಡಿ ಉಪಯೋಗಿಸುವ ಈ ಶೌಚಾಲಯಗಳು ಹಣವನ್ನು ಮಾತ್ರ ಪಡೆದು ಯಾವುದೇ ರೀತಿ ಶುಚಿತ್ವ ಕಾಪಾಡದೆ ನಿರ್ಲಕ್ಷ್ಯ ತೋರುತ್ತಿರುವುದು ಖಂಡನೀಯ. ಮಹಾ ನಗರಪಾಲಿಕೆಯ ಅಧಿಕಾರಿ ವರ್ಗ ಇವೆಲ್ಲವನ್ನು ಗಮನಿಸಿದ್ದರೂ ಸುಮ್ಮನಿರುವುದು ದುರದೃಷ್ಟಕರವಾಗಿದೆ. ಈ ಶೌಚಾಲಯಗಳಲ್ಲಿ ಸ್ವಚ್ಛತೆಯ ಬಗ್ಗೆ ಸಾರ್ವಜನಿಕರಿಂದ ಪ್ರತಿಕ್ರಿಯೆ ಪಡೆಯಲು ಅಳವಡಿಸಿರುವ ಯಂತ್ರಗಳು ಕಾರ್ಯ ನಿರ್ವಹಿಸದೆ ಅವುಗಳನ್ನು ನಿಷ್ಕ್ರಿಯಗೊಳಿಸಲಾಗಿದೆ.

ಮೈಸೂರು ಮಹಾನಗರ ಪಾಲಿಕೆ ನಿರ್ವಹಿಸುವ ನಂಜುಮಳಿಗೆ, ಸಯ್ಯಾಜಿರಾವ್ ರಸ್ತೆಯ ಶೌಚಾಲಯಗಳು, ಅಗ್ರಹಾರದ ಬಸವೇಶ್ವರ ವೃತ್ತದ ಶೌಚಾಲಯಗಳು ಹಳೆಯದಾದ ಕಟ್ಟಡಗಳಿಂದ ಸರಿಯಾದ ಬಾಗಿಲುಗಳು ಇಲ್ಲದಂತಾಗಿವೆ. ಮಹಡಿಯಿಂದ ನೀರು ಸೋರುತ್ತಿದೆ. ಹಲವು ಶೌಚಾಲಯಗಳಿಗೆ ಬೀಗ ಜಡಿಯಲಾಗಿದೆ. ಕಾರಣವೇನೆಂದು ಅಧಿಕಾರಿ ವರ್ಗದವರೇ ತಿಳಿಸಬೇಕು. ಮೈಸೂರು ಮಹಾನಗರ ಪಾಲಿಕೆ ಅಧಿಕಾರಿಗಳು ಗುತ್ತಿಗೆ ನೀಡಿ ಸ್ವಚ್ಛತೆಯನ್ನು ಪರಿಶೀಲಿಸುವ ಕರ್ತವ್ಯವನ್ನು ಮರೆತಿದ್ದಾರೆ.

ಈ ಸಾರ್ವಜನಿಕ ಶೌಚಾಲಯಗಳ ಅಸಮರ್ಪಕ ನಿರ್ವಹಣೆಯಿಂದ ಶೌಚಾಲಯದಿಂದ ಸಾಂಕ್ರಾಮಿಕ ರೋಗಗಳು ಹರಡುವುದು ನಿಶ್ಚಿತವಾಗಿದೆ. ವಿಧಿ ಇಲ್ಲದೆ ಪುರುಷರು ಇದೇ ಶೌಚಾಲಯಗಳನ್ನು ಬಳಸುತ್ತಿದ್ದಾರೆ. ಮಹಿಳೆಯರ ವಿಷಯದಲ್ಲಿ ಶೌಚಾಲಯದ ಶುಚಿತ್ವ ಬಹಳ ಮುಖ್ಯ. ಆದರೆ ಇಲ್ಲಿನ ಶೌಚಾಲಯಗಳ ಬಳಸಲು ಯೋಗ್ಯವಲ್ಲದ ಅಶುಚಿತ್ವದಿಂದ ಮಹಿಳೆಯರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿವೆ. ಮಹಾನಗರ ಪಾಲಿಕೆ ಅಧಿಕಾರಿಗಳು ಆದಷ್ಟು ಶೀಘ್ರದಲ್ಲಿ ಶೌಚಾಲಯಗಳನ್ನು ಪರಿಶೀಲಿಸಿ ಸೂಕ್ತ ಶುಚಿತ್ವ ನಿರ್ವಹಣೆಯನ್ನು ಮಾಡಲು ಸೂಚಿಸಬೇಕಾಗಿದೆ ಹಾಗೂ ಹಳೆಯದಾದ ಕಟ್ಟಡಗಳನ್ನು ನವೀಕರಣಗೊಳಿಸಬೇಕಾಗಿದೆ. ಮೈಸೂರನ್ನು ಸ್ವಚ್ಛನಗರಿಯನ್ನಾಗಿ ಮಾಡಲು ಅಧಿಕಾರಿ ವರ್ಗದವರು ಇನ್ನಾದರೂ ಎಚ್ಚೆತ್ತುಕೊಳ್ಳಬೇಕೆಂದು ಈ ಮೂಲಕ ಮನವಿ.

–ಮಂಜೇಶ್ ದೇವಗಳ್ಳಿ, ಮೈಸೂರು

■ ಸ್ವಚ್ಛ ಮೈಸೂರು ನೋಡ ಬನ್ನಿ! ರಿಂಗ್ ರಸ್ತೆಯಲ್ಲಿ ಒಂದು ಸುತ್ತು ಹಾಕಿ!!

ಮಾನ್ಯರೆ,

ಈಗ ಸ್ವಚ್ಛತಾ ಸರ್ವೇಕ್ಷಣೆ ಆರಂಭವಾಗಿದೆ. ಆದರೆ, ಮೈಸೂರಲ್ಲಿ ಸ್ವಚ್ಛತೆ ಮರೀಚಿಕೆಯಾಗಿದೆ. ಅದಕ್ಕೆ ಕಾರಣ ಜನರಲ್ಲಿ ಸ್ವಚ್ಛತೆ ಅರಿವು, ಪ್ರಜ್ಞೆ ಇಲ್ಲ; ಸಂಬಂಧಿಸಿದ ಅಧಿಕಾರಿ ವರ್ಗದಲ್ಲಿ ಬದ್ಧತೆ ಇಲ್ಲ. ನಮ್ಮ ರಿಂಗ್ ರಸ್ತೆಯನ್ನು ಒಂದು ಸುತ್ತು ಹಾಕಿದರೆ ಇದೆಲ್ಲಾ ಮನವರಿಕೆ ಆಗುತ್ತದೆ. ಎಲ್ಲೆಲ್ಲಿಂದಲೋ ಭಾರಿ ಪ್ರಮಾಣದಲ್ಲಿ ತ್ಯಾಜ್ಯವನ್ನು ತಂದು ರಿಂಗ್ ರಸ್ತೆ ಇಕ್ಕೆಲಗಳಲ್ಲಿ ಸುರಿಯಲಾಗುತ್ತಿದೆ. ಅದೂ ಹಾಡಹಗಲೇ ರಾಜಾರೋಷವಾಗಿ ತಂದು ಹಾಕುತ್ತಿದ್ದಾರೆ. ಹಾಗೆಯೇ ಕೋಳಿ, ಮೀನು ಸೇರಿದಂತೆ ಇನ್ನಿತರೆ ಪ್ರಾಣಿಗಳ ತ್ಯಾಜ್ಯವನ್ನು ತಂದು ಸುರಿಯಲಾಗುತ್ತಿದೆ. ಇದರ ಜೊತೆಗೆ ವೈನ್ ಶಾಪ್, ಬಾರ್ ಅಂಡ್ ರೆಸ್ಟೋರೆಂಟ್‌ಗಳ ತ್ಯಾಜ್ಯವನ್ನು ತಂದು ಸುರಿಯಲು ಇಲ್ಲಿ ರಹದಾರಿ ನೀಡಿದಂತಿದೆ. ಇಂತಹ ಜನರಿಗೆ ಮಾತಿನಿಂದ ಹೇಳಿದರೆ ಏನೂ ಪ್ರಯೋಜನವಿಲ್ಲ. ಬದಲಿಗೆ ಇರುವ ಕಾನೂನಿನಡಿ ಕೇಸ್ ಹಾಕಿ ಶಿಕ್ಷೆ ನೀಡಿದರೆ ಬುದ್ಧಿ ಕಲಿಯಬಹುದು. ದಿನವೂ ಚಾಮುಂಡೇಶ್ವರಿ ನೆನೆಯುವ, ಸ್ಮರಿಸುವ ಇಂತಹ ಜನರಿಗೆ ಆ ದೇವಿಯ ನೆಲೆ ಮೈಸೂರು ಸ್ವಚ್ಛವಾಗಿರಬೇಕು ಎಂಬ ಪರಿಜ್ಞಾನ ಇಲ್ಲದೆ ಇರುವುದು ದುರದೃಷ್ಟಕರ ಸಂಗತಿ. ಇನ್ನು ಇದನ್ನು ತಡೆಯುವಲ್ಲಿ ನಮ್ಮ ಅಧಿಕಾರಿ ವರ್ಗ ಸಂಪೂರ್ಣ ವಿಫಲವಾಗಿದೆ ಎಂದು ಹೇಳದೇ ವಿಧಿಯಿಲ್ಲ. ಜಿಲ್ಲಾಧಿಕಾರಿಗಳಿಗೆ ಎಲ್ಲಾ ಅಧಿಕಾರವೂ ಇದೆ. ಅವರಾದರೂ ಇಂತಹ ಸಮಸ್ಯೆಗೆ ಸ್ಪಂದಿಸುವರೇ ಕಾದು ನೋಡೋಣ.

–ನಾಗೇಶ್, ಬೋಗಾದಿ 2ನೇ ಹಂತ, ಮೈಸೂರು.

■ ಕೋತಿ ಮೊಸರನ್ನ ತಿಂದು ಮೇಕೆ ಬಾಯಿಗೆ ಒರೆಸಿದಂತೆ!?

ಮಾನ್ಯರೆ,

ಚಿನ್ನ ಸ್ಮಗ್ಲಿಂಗ್ ಮಾಡಿದ ಆರೋಪದ ಮೇಲೆ ಬಂಧಿತೆಯಾಗಿರುವ ನಟಿ ರನ್ಯಾ ರಾವ್,ಕಳೆದ ಒಂದು ವರ್ಷದಲ್ಲಿ ದುಬೈಗೆ ಸುಮಾರು 27 ಬಾರಿ ಹೋಗಿ ಬಂದಿದ್ದಳೆಂಬ ವಿಚಾರ ಡಿಆರ್‌ಐ (ಭಾರತ ಕಂದಾಯ ನಿರ್ದೇಶನಾಲಯ) ತನಿಖೆಯಿಂದ ಗೊತ್ತಾಗಿದೆ. ಈ ವಿಚಾರವಾಗಿ ಪತ್ರಿಕಾ ಪ್ರಕಟಣೆಯ ಮೂಲಕ ಪ್ರತಿಕ್ರಿಯೆ ನೀಡಿರುವ ಹಿರಿಯ ಐಪಿಎಸ್ ಅಧಿಕಾರಿ, ಪೊಲೀಸ್, ವಸತಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿರುವ ಡಿಜಿಪಿ ರಾಮಚಂದ್ರ ರಾವ್ ಕಳವಳ(!) ಬೇಸರ(!) ವ್ಯಕ್ತಪಡಿಸಿದ್ದಾರೆ. ಡಿಜಿಪಿ ರಾಮಚಂದ್ರ ರಾವ್ ಅವರು ಹೊರಡಿಸಿರುವ ಪತ್ರಿಕಾ ಪ್ರಕಟಣೆಯೇ ಕಳವಳಕಾರಿಯಾದುದು.

6–7 ವರ್ಷಗಳ ಹಿಂದೆ ಮೈಸೂರು ತಾಲೂಕಿನ ಇಲವಾಲ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಕೇರಳ ಮೂಲದ ಚಿನ್ನದ ವ್ಯಾಪಾರಿಯೊಬ್ಬರಿಂದ ಪೊಲೀಸರೇ ನಡೆಸಿದ್ದರು ಎನ್ನಲಾದ 2 ಕೋಟಿ ರೂ.ಹಣ ದರೋಡೆ ಪ್ರಕರಣ ಸಂಬಂಧ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಜಗದೀಶ, ಮುಖ್ಯ ಪೇದೆ ರವಿ, ಐಜಿಪಿ ಡಾ.ಕೆ.ರಾಮಚಂದ್ರ ರಾವ್ ಅವರ ಗನ್‌ಮ್ಯಾನ್ ಪ್ರಕಾಶ, ಪೇದೆಗಳಾದ ಸತೀಶ, ಅಶೋಕ್, ಲತೀಫ್, ಮನೋಹರ್, ಪೊಲೀಸ್ ಮಾಹಿತಿದಾರರಾದ ಸಲೀಂ, ಶರೀಫ್, ಮುಸ್ತಾಕ್ ಎಂಬುವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಾಗಿತ್ತು. ನಂತರ ನ್ಯಾಯಾಲಯವು ಈ ಆರೋಪಿಗಳನ್ನು ಖುಲಾಸೆಗೊಳಿಸಿತು.

ಪೊಲೀಸ್ ಉನ್ನತಾಧಿಕಾರಿಗಳು ಸರಕಾರಿ ವಾಹನದ ಮೂಲಕ ತಮ್ಮ ಮಕ್ಕಳನ್ನು ಮನೆಯಿಂದ ಶಾಲೆಗೆ ಕರೆದೊಯ್ಯಲು ಮತ್ತು ಶಾಲೆಯಿಂದ ಮನೆಗೆ ಕರೆತರಲು ಅಮಾಯಕ ಪೊಲೀಸ್ ಪೇದೆಗಳನ್ನು ಕಳಿಸಿ ಸರಕಾರಿ ಯಂತ್ರವನ್ನು ದುರುಪಯೋಗಪಡಿಸಿಕೊಳ್ಳುವ ಲಘು ಅಪರಾಧಗಳಿಂದ ಹಿಡಿದು ಹಲವಾರು ಗಂಭೀರ ಅಪರಾಧಗಳನ್ನು ಎಸಗಲೂ ಸಹ ತಮ್ಮ ಕೈಕೆಳಗಿನ ಅಮಾಯಕ ಪೊಲೀಸರನ್ನು ಬಳಸಿಕೊಳ್ಳುವ ಘಟನೆ ಹಲವೆಡೆ ನಡೆದಿದೆ. ಇಂತಹ ಪ್ರಕರಣ ಬಯಲಾದಾಗ ಇಂತಹ ಉನ್ನತಾಧಿಕಾರಿಗಳು ತಮ್ಮ ಪರಮಾಧಿಕಾರವನ್ನು ಬಳಸಿ ತಾವು ಬಚಾವಾಗುವ ಜೊತೆಗೆ ತಮ್ಮ ಕೈಕೆಳಗಿನ ಸಿಬ್ಬಂದಿಗಳನ್ನು ಸಲೀಸಾಗಿ ಸಿಲುಕಿಸುತ್ತಾರೆ.

ಅದೇ ಡಿಜಿಪಿ ರಾಮಚಂದ್ರ ರಾವ್ ಅವರ ಪುತ್ರಿ ರನ್ಯಾ ರಾವ್ ಚಿನ್ನದ ಸ್ಮಗ್ಲಿಂಗ್ ಮಾಡುವ ಸಮಯದಲ್ಲಿಯೂ ಸಹ ಪೊಲೀಸ್ ಪೇದೆಯ ರಕ್ಷಣೆ ದೊರಕಿರುವುದು ಅನುಮಾನ ಮೂಡಿಸಿದೆ. ರನ್ಯಾ ರಾವ್ ಚಿನ್ನದ ಸ್ಮಗ್ಲಿಂಗ್ ಮಾಡಿದ ಪ್ರಕರಣದಲ್ಲಿಯೂ ಸಹ ಬಲಿಷ್ಠರು ಬಚಾವಾಗಿ ಕನಿಷ್ಠರು ಬಲಿಪಶುಗಳಾಗುವ ಸಂಭವ ಹೆಚ್ಚಾಗಿದೆ.

ತೇನ ವಿನಾ ತೃಣಮಪಿ ನ ಚಲತಿ' ಎಂಬಂತೆ ದೊಡ್ಡವರ ಕೈವಾಡವಿಲ್ಲದೆ ಯಾವ ಅಪರಾಧವೂ ನಡೆಯದು ಎಂಬ ಸತ್ಯವನ್ನು ನಾವೆಲ್ಲಾ ಅರಿಯಬೇಕಿದೆ.

– ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು



ಡಾ. ಗುಬ್ಬಿಗೂಡು ರಮೇಶ್
ಮೊ: 97429–34512

ದೀಪ ಸಾಲು

ನಮ್ಮ ಪರಂಪರೆಯ ಹೆಮ್ಮೆಯ ಕ್ರೀಡೆ ಕಬಡ್ಡಿ

ಆಡು ಆಟ ಆಡೂ
ನೀ ಆಡು ಆಡಿನೋಡು
ಎದುರಲ್ಲಿ ನಿಗಾ ಇಡೂ
ನೀ ಎದುರಲ್ಲಿ ನಿಗಾ ಇಡೂ



> "ನಮ್ಮದೆನ್ನುವ ಕಾರಣಕ್ಕೆ ಯಾವುದೂ ಶ್ರೇಷ್ಠವಲ್ಲ. ಯಾವುದೂ ಕನಿಷ್ಠವಲ್ಲ; ಕ್ರೀಡೆ ಯಾವತ್ತೂ ಗುಣಪಕ್ಷಪಾತಿ. ಅದಕ್ಕೆ ಉಳಿಯುವ ಶಕ್ತಿಯಿತ್ತು ಅದು ಉಳಿದಿದೆ. ಬೆಳೆಸಿದವರ ದೊಡ್ಡ ದಂಡೇ ಇದೆ. ಜಾಗತಿಕ ಮಟ್ಟದಲ್ಲೀಗ ಲೀಗ್ ಪಂದ್ಯಗಳು ಶುರುವಾಗಿವೆ. ಸಂತಸದ ಸಂಗತಿಯೆಂದರೆ, ಕ್ರಿಕೆಟ್‌ನಂತೆ, ಫುಟ್ಬಾಲ್‌ನಂತೆ, ಬಿಲಿಯರ್ಡ್ಸ್, ಚೆಸ್, ಕಾಮನ್‌ವೆಲ್ತ್ ಕ್ರೀಡಾಕೂಟಗಳ ಸಾಲಿನಲ್ಲಿ ನಮ್ಮ ಕಬಡ್ಡಿ ನೇರಪ್ರಸಾರದಲ್ಲಿ ಈಗ ಎಲ್ಲರಿಗೂ ಕಾಣುತ್ತಿದೆ. ಮಾರ್ಕೆಟಿಂಗ್ ಸ್ಟ್ರಾಟರ್ಜಿಗಳ ಈ ಯುಗದಲ್ಲಿ ಕಬಡ್ಡಿ ತನ್ನನ್ನು ತಾನು ವಿಶ್ವದ ಕ್ರೀಡಾಪಟುಗಳಿಗೆ ತೆರಕೊಂಡಿದೆ.

ಈ ಹಾಡು ಕೇಳಿದ್ದೀರಲ್ಲ! ಆಟ ಆಡುವಾಗ ಎದುರಲ್ಲಿ ನಿಗಾ ಇಡದಿದ್ದರೆ ಎದುರಿನವರು ನಿಮ್ಮ ಕಾಲು ಹಿಡಿದು ಬೀಳಿಸುತ್ತಾರೆ. ಕಬಡ್ಡಿ... ಕಬಡ್ಡಿ... ಕಬಡ್ಡಿ... ಕಬಡ್ಡಿ... ಕಬಡ್ಡಿ...

ಹೇಗಿದೆ ದೇಸಿ ಆಟದ ಪರಿ. ನಮ್ಮ ಹಳ್ಳಿಯ ಹುಡುಗರು ಉಕ್ಕಿ ನಂಥ ತೊಡೆ ತಟ್ಟುತ್ತಾ ಕೈಸನ್ನೆಯಿಂದ ಮುಟ್ಟು ಬಾ ಅಂತ ಕರೆಯುವ ಸವಾಲಿನ ತವಕ ತುಂಬಿದ ಕ್ರೀಡೆ ಕಬಡ್ಡಿ. ಇಳಿಸಂಜೆಯ ಸಾಯಂಕಾಲಗಳಲ್ಲಿ ಮಾರಿಗುಡಿಯ ಅಂಗಳದಲ್ಲೋ, ಪ್ರಾಥಮಿಕ ಶಾಲೆಯ ಮುಂಭಾಗದಲ್ಲೋ ಪಂಚಾಯಿತಿ ಕಟ್ಟೆಯ ಆಸುಪಾಸಿನಲ್ಲೋ ಕಬಡ್ಡಿ... ಕಬಡ್ಡಿ... ಕಬಡ್ಡಿ... ಎಂಬ ಶಬ್ದ ನಮ್ಮ ಊರಿನ ಯಜಮಾನರುಗಳ ಕಿವಿಗೆ ಬೀಳುತ್ತಿತ್ತು. ಟೀ ಅಂಗಡಿ ಸೀನಣ್ಣನ ಹೋಟೆಲಿನಿಂದ ಟೀ ತರಿಸಿ ಕುಡಿಯುತ್ತ ಹಳ್ಳಿ ಬೋಂಡ ತಿಂದು ಊರಿನ ಹುಡುಗರ ಕಬಡ್ಡಿ ನೋಡಿ ಬಿಳಿಮೀಸೆಯ ಮರೆಯಲ್ಲಿ ಹುಡುಗರನ್ನು ಅಭಿಮಾನಿಸುತ್ತಾ, ಹೆಮ್ಮೆಪಡುತ್ತಾ ಬೆನ್ನು ತಟ್ಟುತ್ತಿದ್ದರು ಹಿರಿಯರು. ಆಟದಲ್ಲಿ ಒಬ್ಬನನ್ನು ಹಿಡಿದು ಬೀಳಿಸಿದರೆ ಕಟ್ಟೆಯ ಮೇಲೆ ಕುಳಿತಿದ್ದವರು ಆ ಕ್ರೀಡೋತ್ಸಾಹವನ್ನು ನೋಡಲು ಮೇಲೇಳುತ್ತಿದ್ದರು. ಹೀಗಿತ್ತು ನಮ್ಮ ಗ್ರಾಮಭಾರತ, ಹೀಗಿತ್ತು ನಮ್ಮ ದೇಸೀ ಆಟ. ಇಂಥ ಕಬಡ್ಡಿ ಇತ್ತೀಚಿನ ದಿನಗಳಲ್ಲಿ ತನ್ನೆಂದಿನ ವೈಭವ ಕಳೆದುಕೊಂಡು ಸೊರಗುತ್ತಿತ್ತು. ನಾಗರಿಕತೆಯ ಪ್ರಭಾವ ನಮ್ಮ ಹಳ್ಳಿಗಳಲ್ಲಿ ಅಬಾಲವೃದ್ಧರಾದಿಯಾಗಿ ಗಂಡು–ಹೆಣ್ಣುಗಳ ಭೇದವಿಲ್ಲದೆ ಎಲ್ಲರೂ ಆಟವನ್ನು ಆನಂದಿಸುತ್ತಿದ್ದರು. ಹುಡುಗರನ್ನು ಹುರಿದುಂಬಿಸುತ್ತಿದ್ದರು. ಕ್ರೀಡೆ, ಹಳ್ಳಿಯಲ್ಲಿ ಎಲ್ಲರನ್ನು ಭಾವಬಂಧವಾಗಿ ಬೆಸೆಯುತ್ತಿತ್ತು. ಗ್ರಾಮ ಭಾರತದ ಅವಿಭಾಜ್ಯ ಅಂಗವಾಗಿ ಬೆಳೆದ ಕಬಡ್ಡಿ ದೇಸಿ ಕ್ರೀಡೆಗಳ ರಾಜನಂತೆ ಮೆರೆಯುತ್ತಿತ್ತು. ಅಳಿಗುಳಿ ಮನೆಯಾಟ, ಚಿನ್ನಿದಾಂಡು, ಲಗೋರಿ, ಗೋಲಿ, ಬುಗುರಿ, ಚುಕುಬುಕು ರೈಲು... ಹೀಗೆ ನಮ್ಮಲ್ಲೇ ಹುಟ್ಟಿದ ಹಲವಾರು ಗ್ರಾಮೀಣ ಕ್ರೀಡೆಗಳು ನಮ್ಮ ಇಡೀ ಪರಂಪರೆಯನ್ನೇ ರಂಜಿಸಿವೆ. ದೃಢಕಾಯರನ್ನಾಗಿ ರೂಪಿಸಿವೆ. ಲೆಕ್ಕವಿಲ್ಲದಷ್ಟು ಜನ ಶತಾಯುಷಿಗಳಾಗಿ ಬದುಕಲು ನಮ್ಮ ಹುಡುಗರನ್ನು ಅನುವು ಮಾಡಿಕೊಟ್ಟಿವೆ. ಗೋಲಿ ಆಡುವ ಹುಡುಗನ ಕಣ್ಣಿಗೆ ಗುರಿ ಇಡುವ ಶಾರ್ಪ್‌ನೆಸ್ ಪೊಲೀಸ್ ಉದ್ಯೋಗದ ಶಾರ್ಪ್‌ಶೂಟರ್‌ಗಳ ಪ್ರಾಥಮಿಕ ಸಿದ್ಧತೆಯಂತಿದೆ. ಬುಗುರಿಯ ಕೈಚಳಕ ಶಿಲ್ಪಿಯ ಕಲೆಯಂತೆ. ಚಿನ್ನಿದಾಂಡಿನ ಅಳತೆ ನಮ್ಮ ಸರ್ವೇಯರ್‌ಗಳ ಭೂಮಿ ಅಳತೆ ಮಾಡುವ ವಿಧಾನದ ಕಲಿಕೆಯಂತೆ. ಅಳಿಗುಳಿ ಮನೆಗೆ ಚಾಕಚಕ್ಯತೆ ಬೇಕು. ಚೌಕಾಬಾರಕ್ಕೆ ಲೆಕ್ಕಾಚಾರ ಬೇಕು. ಹೀಗೆ ನಮ್ಮ ದೇಸೀ ಆಟಗಳಿಗೆ ಪ್ರತಿಭೆಗಳನ್ನು ಸೃಷ್ಟಿಸುವ ಶಿಕ್ಷಣ ಶಕ್ತಿಯಿದೆ.

ಹಳ್ಳಿಗಳಲ್ಲಿ ತಾಲೂಕು ಕೇಂದ್ರಗಳಲ್ಲಿ ಸಕ್ರಿಯವಾಗಿ ನಡೆಯುತ್ತಿದ್ದುದು ಎರಡು ತಾಲೀಮುಗಳು. ಒಂದು ಪೌರಾಣಿಕ ನಾಟಕ ತರಬೇತಿ, ಮತ್ತೊಂದು ಕಬಡ್ಡಿ ಆಟ. ಹಳ್ಳಿಗಳಲ್ಲಿ ಸಂಜೆಯ ವೇಳೆ ಎಷ್ಟೋ ಬಾರಿ ಕಬ್ಬಡಿ ಆಟಗಳಲ್ಲಿ ಔಟಾಗುವ ವಿಷಯಕ್ಕೆ ತೀರ್ಪುಗಾರರ ತೀರ್ಮಾನ ಅಸಹನೆಗೆ ತಿರುಗಿ ಕೈ ಕೈ ಮಿಲಾಯಿಸುವ ಹಂತಕ್ಕೆ ಹೋಗಿರುವುದೂ ಉಂಟು. ಕಬಡ್ಡಿಯ ಆಟದ ಕಾರಣಕ್ಕೆ ಪರಸ್ಪರ ಹಳ್ಳಿಹಳ್ಳಿಗಳ ನಡುವೆ ಗಲಾಟೆ ನಡೆದು ಒಂದು ಹಳ್ಳಿಯಲ್ಲಿ ನಿಶ್ಚಿತಾರ್ಥವಾಗಿದ್ದ ಕಬಡ್ಡಿ ಆಟಗಾರನಿಗೆ ಹೆಣ್ಣು ಕೊಡಕೂಡದೆಂದು ಊರಿನವರು ಪಂಚಾಯಿತಿ ಸೇರಿ ತೀರ್ಮಾನ ಮಾಡಿದ್ದನ್ನು ನಾನು ನೋಡಿದ್ದೇನೆ. ಆದರೆ ಎಲ್ಲದಕ್ಕೂ ಕಾಲವೆಂಬ ವೈದ್ಯ ಮುಲಾಮು ತಿಕ್ಕಿ ವಾಸಿ ಮಾಡಿದ, ಮತ್ತೆ ಎರಡೂ ಊರಿನಲ್ಲೂ ಕಬಡ್ಡಿ ಆಡಿದರು. ಆಟ ಮತ್ತೆ ಒಂದುಗೂಡಿಸಿತು. 'ಕೂಡಿ ಬಾಳಿದರೆ ಸ್ವರ್ಗ ಸುಖ' ಎಂಬಂತೆ ಕಬಡ್ಡಿ ತನ್ನ ವೈಭವವನ್ನು ಮೆರೆಯಿತು. ಮದುವೆಯೂ ಆಯಿತೆನ್ನಿ. ನಮ್ಮ ಹಳ್ಳಿ ಈಗದನ್ನು ಮರೆತಿದೆ.

ಆದರೆ ನವನಾಗರಿಕ ಯುಗದಲ್ಲಿ ನಿಂತ ನಮ್ಮ ಹಳ್ಳಿಗಳೂ ನಗರೀಕರಣದ ಸ್ಪರ್ಶ ದೊಂದಿಗೆ ನಾಗರಿಕ ಆಟಗಳಿಗೆ ಮನಸೋತಿದೆ. ನಮ್ಮ ಹಳ್ಳಿಯ ಅಂಗಳದಲ್ಲೂ ಹುಡುಗರು ಶಾಲೆ ಬಿಟ್ಟ ಮೇಲೆ ಭೀಮಸೇನ ಹೆಗಲ ಮೇಲೆ ಗದೆಯಿಟ್ಟುಕೊಂಡ ಹಾಗೆ ಹೆಗಲ ಮೇಲೆ ಬ್ಯಾಟು, ಕೈಯಲ್ಲಿ ವಿಕೆಟ್ಟು, ಜೇಬಲ್ಲಿ ಬಾಲು ತುಂಬಿಕೊಂಡು ಕ್ರಿಕೆಟ್ ಆಡುತ್ತಿದ್ದಾರೆ.

ಕ್ರಿಕೆಟ್ ಎಂಬ 11 ಜನರ ಆಟ ಅಪಾರ ಸಂಖ್ಯೆಯ ಅಭಿಮಾನಿಗಳು ನಿಬ್ಬೆರಗಾಗಿ ತನ್ನತ್ತ ನೋಡುವಂತೆ ಮಾಡಿಕೊಂಡಿದೆ. ಅಲ್ಲಿ ದುಡ್ಡಿದೆ, ಅದಕ್ಕಾಗಿ ಮೀಸಲಿಟ್ಟ ದೊಡ್ಡ ದೊಡ್ಡ ಕ್ರೀಡಾಂಗಣಗಳಿವೆ. ಎಲ್ಲಕ್ಕಿಂತ ಮಿಗಿಲಾಗಿ ಸ್ಪಾನ್ಸರ್‌ಗಳಿದ್ದಾರೆ. ಕ್ರಿಕೆಟ್ ಗೆಲ್ಲಲು ಮತ್ತೊಂದು ಬಹಳ ದೊಡ್ಡ ಕಾರಣ ಅದರ ಮಾರುಕಟ್ಟೆ, ನೇರ ಪ್ರಸಾರಗಳು, ಅದನ್ನು ಜಾಗತಿಕ ಮಟ್ಟದಲ್ಲಿ ಕ್ಲಿಕ್ ಮಾಡಿದೆ, ಆಟಗಾರರು ಸ್ಟಾರ್‌ಗಳಾಗಿದ್ದಾರೆ.

ಸುರಿಯುತ್ತಿರುವ ಧಾರಾಕಾರ ಮಳೆಯನ್ನೂ ಲೆಕ್ಕಿಸದೆ, ಎತ್ತುಗಳ ಸಮಕ್ಕೆ ಕೆಸರುಗದ್ದೆಯಲ್ಲಿ ಓಡುವ 'ಕೆಸರು ಗದ್ದೆ ಓಟ'ದ ತರುಣರು, 7 ಜನರ ಬಳಿಗೆ ಒಬ್ಬನೇ ನುಗ್ಗಿ ತೊಡೆತಟ್ಟಿ ನಿಲ್ಲುವ ಕಬಡ್ಡಿ ಆಟಗಾರರು, ಕೈಯ್ಯಲ್ಲೊಂದು ಸ್ಟಿಕ್ ಹಿಡಿದು ಓಡುತ್ತಲೇ ಗುರಿ ತಲುಪುವ ಹಾಕಿ ಮಾಂತ್ರಿಕರು, ಗೋಲ್ ಹೊಡೆದ ಆನಂದಕ್ಕೆ ಕೈಕಾಲು ಮುರಿದುಕೊಂಡಿರುವುದೂ ಗೊತ್ತಾಗದ ಪುಟ್ಬಾಲ್ ಕ್ರೀಡಾಪಟುಗಳು ಇವರಲ್ಲಿರುವ ಉತ್ಸಾಹ, ಚಾಕಚಕ್ಯತೆಗೆ ಭಾರತದಲ್ಲಿ ಬೆಲೆಯಿಲ್ಲವೆ? 11 ಜನರ ಆಟ ನೂರಾರು ಕೋಟಿ ದುಡ್ಡಿನ ಜೊತೆ ಎಲ್ಲ ದೇಶಗಳ ದೇಸಿ ಆಟಗಳ ಮೇಲೆ ಪ್ರಹಾರ ಮಾಡಿಬಿಟ್ಟಿತಲ್ಲ?–ಎಂಬ ಆತಂಕದಲ್ಲಿದ್ದ ನಮ್ಮಂಥಾ ದೇಶಗಳ ದೇಸೀ ಕ್ರೀಡೆಗಳಿಗೆ ಮತ್ತೆ ಜೀವ ಬಂದಿದೆ. ಅದರಲ್ಲೂ ನಮ್ಮ ಕಬಡ್ಡಿ ಮತ್ತೆ ರಣೋತ್ಸಾಹದಲ್ಲಿ ರಾಷ್ಟ್ರೀಯ ಕ್ರೀಡೆಯ ಇಮೇಜಿನೊಂದಿಗೆ ಪ್ರೊ ಕಬಡ್ಡಿಯಾಗಿ ರಂಗಪ್ರವೇಶ ಮಾಡಿದೆ. ಅದೇ ಹಿಂದಿನ ಉತ್ಸಾಹ, ಅದೇ ಹಿಂದಿನ ಕರಾಮತ್ತು, ಅದೇ ಹಿಂದಿನ ತಾಕತ್ತುಗಳೊಡನೆ ಹೊಸ ಚೆಡ್ಡಿ ಟೀ ಶರ್ಟುಗಳ ಹೊಸತನದೊಂದಿಗೆ ರಂಗೇರಿದೆ.

ನಮ್ಮದೆನ್ನುವ ಕಾರಣಕ್ಕೆ ಯಾವುದೂ ಶ್ರೇಷ್ಠವಲ್ಲ. ಯಾವುದೂ ಕನಿಷ್ಠವಲ್ಲ; ಕ್ರೀಡೆ ಯಾವತ್ತೂ ಗುಣಪಕ್ಷಪಾತಿ. ಅದಕ್ಕೆ ಉಳಿಯುವ ಶಕ್ತಿಯಿತ್ತು ಅದು ಉಳಿದಿದೆ. ಬೆಳೆಸಿದವರ ದೊಡ್ಡ ದಂಡೇ ಇದೆ. ಜಾಗತಿಕ ಮಟ್ಟದಲ್ಲೀಗ ಲೀಗ್ ಪಂದ್ಯಗಳು ಶುರುವಾಗಿವೆ. ಸಂತಸದ ಸಂಗತಿಯೆಂದರೆ, ಕ್ರಿಕೆಟ್‌ನಂತೆ, ಪುಟ್ಬಾಲ್‌ನಂತೆ, ಬಿಲಿಯರ್ಡ್ಸ್, ಚೆಸ್, ಕಾಮನ್‌ವೆಲ್ತ್ ಕ್ರೀಡಾಕೂಟಗಳ ಸಾಲಿನಲ್ಲಿ ನಮ್ಮ ಕಬಡ್ಡಿ ನೇರ ಪ್ರಸಾರದಲ್ಲಿ ಈಗ ಎಲ್ಲರಿಗೂ ಕಾಣುತ್ತಿದೆ. ಮಾರ್ಕೆಟಿಂಗ್ ಸ್ಟ್ರಾಟರ್ಜಿಗಳ ಈ ಯುಗದಲ್ಲಿ ಕಬಡ್ಡಿ ತನ್ನನ್ನು ತಾನು ವಿಶ್ವದ ಕ್ರೀಡಾಪಟುಗಳಿಗೆ ತೆರಕೊಂಡಿದೆ. ಆರಂಭದಲ್ಲಿ ಅಮಿತಾಬ್ ಕುಟುಂಬ 5 ಕೋಟಿ ಕೊಟ್ಟು ಕಬಡ್ಡಿ ತಂಡವನ್ನು ಖರೀದಿಸಿತ್ತು. ಆಗ ಅಮಿತಾಬ್ ಕುಟುಂಬ ಕೈಹಚ್ಚಿದ್ದರಿಂದ ಗುಣಮಟ್ಟದ ಜೊತೆಗೆ ಕಬಡ್ಡಿಗೆ ಸಾಕಷ್ಟು ಪ್ರಚಾರವೂ ಸಿಕಿತ್ತು.

ಯಾವ ಕ್ರೀಡೆಗೇ ಆಗಲಿ ತನ್ನಷ್ಟಕ್ಕೆ ತಾನೇ ಗ್ಲಾಮರ್ ಬಂದುಬಿಡುವುದಿಲ್ಲ. ಈಗಾಗಲೇ ಬೇರೆ ಬೇರೆ ಕ್ಷೇತ್ರಗಳಲ್ಲಿ ಗುರುತಿಸಿಕೊಂಡವರು ಅದರ ಪ್ರಚಾರಕ್ಕೆ ಕೈ ಹಚ್ಚಬೇಕು. ಹಿಂದಿ ಚಿತ್ರರಂಗದ ಪ್ರೀತಿ ಜಿಂಟಾ, ಶಾರುಖ್‌ಖಾನ್, ಉದ್ಯಮಿ ವಿಜಯಮಲ್ಯ, ಅಂಜಲಿ ಅಂಬಾನಿ ಇಂಥ ದೊಡ್ಡ ಕುಳಗಳೆಲ್ಲ ಕೈಹಾಕಿದ ಮೇಲೆ ಕ್ರಿಕೆಟ್‌ನ ಟ್ವೆಂಟಿ ಟ್ವೆಂಟಿ ಗೇಮ್ ಹೇಗೆ ವ್ಯಾಪಕ ಪ್ರಚಾರ ಪಡೆಯಿತೆಂಬುದನ್ನು ನೋಡಿದ್ದೇವೆ. ಆಗ ಅಮಿತಾಬ್ ಕುಟುಂಬ ಕಬಡ್ಡಿಯ ಮೇಲೆ ಕೈಯಿಟ್ಟಿತ್ತು. ಅದಕ್ಕೊಂದು ಗ್ಲಾಮರ್ ಬರಲಿ, ಎಲ್ಲಕ್ಕಿಂತ ಹೆಚ್ಚಾಗಿ ಕ್ರಿಕೆಟ್ ಕಮೆಂಟೇಟರ್ ಚಾರುಶರ್ಮ ಕಬಡ್ಡಿಗೊಂದು ವೃತ್ತಿಪರತೆಯ ಸ್ಪರ್ಶ ನೀಡಿ ತಮ್ಮದೇ ಧಾಟಿಯಲ್ಲಿ ಪ್ರಸ್ತುತ ಪಡಿಸುತ್ತಿದ್ದರು. ಕ್ರಿಕೆಟ್‌ಗೆ ಕಮೆಂಟೇಟರ್ ಆಗಿದ್ದ ಚಾರುಶರ್ಮ ಕಬಡ್ಡಿಯ ಆಟದ ರೋಚಕ ಅನುಭವಗಳಿಗೆ ಆಟದ ಕಲೆಗೆ ದನಿಯಾದದ್ದು ಕಬಡ್ಡಿಗೆ ಹೊಸ ಕಳೆ ಬಂದಂತಾಗಿತ್ತು.

ಭಾರತದ ಕ್ರಿಕೆಟ್‌ನ ಸೊಬಗಿನ ಬೆಡಗಿ ಅಂಜುಂ ಚೋಪ್ರಾ ಕೂಡ ಲಂಡನ್‌ನಲ್ಲಿ ಆರಂಭವಾದ ವಿಶ್ವ ಕಬಡ್ಡಿ ಲೀಗ್‌ನ ವೀಕ್ಷಕ ವಿವರಣೆಕಾರ್ತಿಯಾಗಿ ಕೆಲಸ ಮಾಡಿದ್ದು ನಿಮಗೆ ಗೊತ್ತಿದೆ. ಎಂಟು ತಂಡಗಳ ಈ ಟೂರ್ನಿ ನವೆಂಬರ್‌ವರೆಗೆ ಪ್ರತೀ ವಾರಾಂತ್ಯದಲ್ಲಿ ಆಗ ನಡೆಯುತಿತ್ತು.

ನೀವು ನೋಡಿ ಫ್ಯಾಷನ್‌ಶೋನಲ್ಲಿ ಸುಂದರಿಯರು ಹೆಜ್ಜೆ ಹಾಕುತ್ತಿದ್ದರೆ ಅದರ ಕಾಮೆಂಟ್ರಿ ಅವರಂತೆಯೇ ಬಳಕುತ್ತಿರುತ್ತದೆ. ಅಂದರೆ ಹೆಣ್ಣಿನ ಸೌಂದರ್ಯದಷ್ಟೇ ಆಕರ್ಷಣೀಯವಾಗಿ ಫ್ಯಾಷನ್ ಶೋನ ಕಾಮೆಂಟ್ರಿ ಕೊಡುವ ಕಮೆಂಟೇಟರ್‌ಗಳು ಇದ್ದಾರೆ. ಇಂಡಿಯಾದಲ್ಲಿ ಆಟ ಎಷ್ಟು ಮುಖ್ಯವೋ ನೋಟವೂ ಅಷ್ಟೇ ಮುಖ್ಯ, ಅದರ ವೀಕ್ಷಕ ವಿವರಣೆಯೂ ಅಷ್ಟೇ ಮುಖ್ಯ. ಈ ಎಲ್ಲ ಮುಖ್ಯಗಳ ಒಟ್ಟು ಸಮ್ಮಿಲನದಿಂದ ದೇಸೀ ಕಬಡ್ಡಿ ಲಂಡನ್ನಿಗೆ ಲಗ್ಗೆ ಹಾಕಿದೆ. 'ವಿಶ್ವ ಕಬಡ್ಡಿ ಲೀಗ್'ನಂಥ ಪಂದ್ಯಾಟಗಳು ಇಂದು ವಿಶ್ವದಾದ್ಯಂತ ಶುರುವಾಗಿದೆ. ನಮ್ಮ ದೇಶದಲ್ಲಿ ಎಲ್ಲ ರಾಜ್ಯಗಳಲ್ಲೂ ಕಬಡ್ಡಿ ಆಡುವುದಿಲ್ಲ. ಕರ್ನಾಟಕ, ಪಂಜಾಬ್, ಹರಿಯಾಣಗಳಲ್ಲಿ ಮಾತ್ರ ಇದು ಚಾಲ್ತಿಯಲ್ಲಿದೆ. ಹೊರನೋಟಕ್ಕೆ ಸ್ವಲ್ಪ ಕುಸ್ತಿಯನ್ನು ಹೋಲುತ್ತಾ ಒರಟಾಟದಂತೆ ತೋರುವ ಕಬಡ್ಡಿಯನ್ನು ಸ್ವಲ್ಪ ಪಾಲಿಶ್ ಮಾಡಬೇಕಿದೆ. ಈಗಿರುವ ಶೈಲಿಯಲ್ಲಿಯೇ ಇಡೀ ಏಷ್ಯಾ ಖಂಡವನ್ನೇ ಒಪ್ಪಿಸಿರುವ ನಮ್ಮ ಕಬಡ್ಡಿ ಆಟಗಾರರು ಮುಂದೊಂದು ದಿನ ಜಾಗತಿಕ ಮಟ್ಟದಲ್ಲಿ ಮಿಂಚುವ ಎಲ್ಲ ಸೂಚನೆಗಳು ಕಾಣುತ್ತಿವೆ.

ಒಟ್ಟಾರೆ ಇದುವರೆಗೂ ಕೋಟಿ ಕೋಟಿ ವೀಕ್ಷಕರು ಟೀವಿಯಲ್ಲಿ ನೋಡಿ ಪ್ರೋತ್ಸಾಹಿಸಿದ್ದಾರೆ. ಭಾರತದ ಶ್ರೀಮಂತ ಟೂರ್ನಿ ಐಪಿಎಲ್ ಕ್ರಿಕೆಟ್ ಬಿಟ್ಟರೆ ಇಂಡಿಯಾದಲ್ಲಿ ಪ್ರೊ ಕಬಡ್ಡಿಯೇ ಜನಪ್ರಿಯತೆಯ ತುತ್ತತುದಿಯಲ್ಲಿದೆ. ಲಂಡನ್ ಲೀಗ್ ಪಂದ್ಯಾಟಕ್ಕಿಂತ ಏಳು ಪಟ್ಟು ಅಧಿಕ ಕ್ರೀಡಾಪ್ರೇಮಿಗಳನ್ನು ಹೊಂದಿದ ಕೀರ್ತಿ ನಮ್ಮದು. ಹಾಕಿ ಮಾಂತ್ರಿಕ ಧ್ಯಾನ್‌ಚಂದ್‌ಗೆ ತುಂಬ ತಡವಾಗಿಯಾದರೂ ಮರಣೋತ್ತರ ಭಾರತ ರತ್ನ ಪ್ರಶಸ್ತಿ ಭಾರತ ಸರ್ಕಾರದಿಂದ ಸಿಕ್ಕಿದೆ. ಎಲ್ಲದಕ್ಕೂ ಒಳ್ಳೆಯ ಕಾಲಬೇಕು, ಅದಕ್ಕಾಗಿ ಕಾಯಬೇಕು. ಜುಡೋ, ಕರಾಟೆ ಕಲಿಯುತ್ತಿದ್ದ ಜಪಾನಿ ಹುಡುಗರು ಇವತ್ತು ನಮ್ಮ ಕಬಡ್ಡಿ ಕಲಿಯುತ್ತಿದ್ದಾರೆ. ಇದಕ್ಕೆ ಕಾರಣ ತರಬೇತುದಾರ ಕನ್ನಡಿಗ ಸುಂದರ್ ರಾಮ್.

ನಮ್ಮ ಅಕ್ಕಿಗೆ ನಮ್ಮ ಸಕ್ಕರೆಗೆ ನಮ್ಮ ಸೆಣಬಿಗೆ ನಮ್ಮ ಸೇಬಿಗೆ ನಮ್ಮ ಯೋಗಕ್ಕೆ ನಮ್ಮ ಧ್ಯಾನಕ್ಕೆ, ನಮ್ಮ ಕುಟುಂಬ ವ್ಯವಸ್ಥೆಗೆ ಪಶ್ಚಿಮದವರೂ ಆಕರ್ಷಿತರಾದಂತೆ, ನಮ್ಮ ಕಬಡ್ಡಿಗೂ ಒಳ್ಳೇ ಕಾಲ ಬಂದಿದೆ.

ನಮ್ಮ ಹಳ್ಳಿಯ ಅಂಗಳದಲ್ಲಿ ಕಬಡ್ಡಿ ಮತ್ತೆ ಚಿಗುರೊಡೆಯಲಿ ಚಿಗುರು ಮೀಸೆ ಹುಡುಗರಿಗೆ ನಮ್ಮ ಹಿರೀಕುಳಗಳೆಲ್ಲ ಮತ್ತೆ ಬೆನ್ನ ತಟ್ಟಿ ಪ್ರೋತ್ಸಾಹಿಸಲಿ, ಖಾಸಗೀ ಕ್ರೀಡಾಸಂಸ್ಥೆಗಳು ಸರಕಾರಿ ಕ್ರೀಡಾ ಪ್ರಾಧಿಕಾರಗಳೊಂದಿಗೆ ಮಾತಾಡಿ ರಾಷ್ಟ್ರ, ರಾಜ್ಯ, ಜಿಲ್ಲಾ ಮಟ್ಟದ ಹೊನಲು ಬೆಳಕಿನ ಪಂದ್ಯಾವಳಿಗಳನ್ನು ಆಯೋಜಿಸಿ ರಂಗೇರಿಸಲಿ, ಪ್ಯಾಡಿಲ್ಲ, ಗ್ಲೌಸಿಲ್ಲ, ಬ್ಯಾಟಿಲ್ಲ, ಬಾಲಿಲ್ಲ, ಮೈಯ್ಯ ಕಸುವು ತೊಡೆಯ ಬೀಸುಗಳಲ್ಲೇ ಹಾಸು ಹೊಕ್ಕಾದ ಆಟ ಕ್ರೀಡೆಯಾಗಿಯಷ್ಟೇ ಉಳಿಯದೇ ನಮ್ಮತನದ ದ್ಯೋತಕದಂತೆ ಮೆರೆಯಲಿ ಆಟದಲ್ಲಿ ಸೋತು ಕೆಳಗೆ ಬಿದ್ದರೆ ಭೂಮಿ ತಾಯಿ. ಗೆದ್ದು ಮೇಲೆದ್ದರೆ ವಿಜಯದ ಸ್ಥಾಯಿ. ಬನ್ನಿ ಪಟ್ಟೆ ಬಳಿಯೋಣ ಕಬಡ್ಡಿ ಕೋರ್ಟಿಗೆ ಏನಂತೀರಿ?

ಮಾನವತೆಯ ಮಿನುಗುತಾರೆ ಶಬಾನಾ ಅಜ್ಮಿ



ಚಿತ್ರರಂಗದ ಸುವಿಖ್ಯಾತ ನಟಿ ಶಬಾನಾ ಅಜ್ಮಿ ಅವರಿಗೆ 16ನೇ ಬೆಂಗಳೂರು ಅಂತರರಾಷ್ಟ್ರೀಯ ಚಲನ ಚಿತ್ರೋತ್ಸವದಲ್ಲಿ 10 ಲಕ್ಷ ರೂ. ಗೌರವ ಸಂಭಾವನೆಯ ಪ್ರತಿಷ್ಠಿತ ಅಂತಾರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಿದೆ. ಈ ಹಿನ್ನೆಲೆಯಲ್ಲಿ ನಟಿ ಶಬನಾ ಅವರ ಬದುಕು, ಸಾಧನೆ, ಸಿದ್ಧಿಯ ಮೇಲೊಂದು ಬೆಳಕು ಚೆಲ್ಲುವ ಲೇಖನವಿದು.

ಶಬನಾ ಅಜ್ಮಿ ಸಾಮಾನ್ಯ ಮಹಿಳೆ ಅಲ್ಲ! ಮತೀಯ ಹಿಂಸೆಯ ತೂಗುಖಡ್ಗದ ಅಡಿಯಲ್ಲಿ ಶಾಂತಿ ಮೂಡಿಸಲು ಹೋರಾಡುತ್ತಿರುವ ದಿಟ್ಟ ಹೋರಾಟಗಾರ್ತಿ.

ಮೇಲಿನ ಮಾತನ್ನು ಯಾರೋ ಹೇಳಿದ್ದಲ್ಲ. ಅಂತಾರಾಷ್ಟ್ರೀಯ ಪ್ರಸಿದ್ಧ ವಾರ ಪತ್ರಿಕೆ 'ದಿ ಟೈಮ್ಸ್' ಏಷ್ಯನ್ ಹೀರೋಸ್ ಹೆಸರಿನಲ್ಲಿ 2002ರಲ್ಲಿ ಪ್ರಕಟಿಸಿದ ತನ್ನ ವಿಶೇಷ ಸಂಚಿಕೆಯಲ್ಲಿ ಖ್ಯಾತ ಬಾಲಿವುಡ್ ನಟಿ, ಬಹುಭಾಷಾ ತಾರೆ ಶಬಾನಾ ಅಜ್ಮಿಯನ್ನು ಬಣ್ಣಿಸಿದ್ದ ಬಗೆಯಿದು. ಇಲ್ಲಿ ಕಿಂಚಿತ್ತೂ ಉತ್ಪ್ರೇಕ್ಷೆಯ ಅಕ್ಷರಗಳಿಲ್ಲ. ಎಲ್ಲವೂ ಸತ್ಯವಾದದ್ದು! ಎಲ್ಲಾ ಚಲನಚಿತ್ರ ತಾರೆಯರಂತೆ ತಾನಾಯಿತು ತನ್ನ ಲೋಕವಾಯಿತು ಎಂಬಂತೆ ಸಾಮಾನ್ಯ ಜನರ ಕೈಗೆಟುಕದಂತಹ ಗಗನತಾರೆಯಾಗಿಯೇ ಶಬನಾ ಇದ್ದು ಬಿಟ್ಟಿದ್ದಿದ್ದರೆ ಇವರನ್ನು ಇಂದು ಯಾರೂ ಕ್ಯಾರೆ ಅನ್ನುತ್ತಿರಲಿಲ್ಲ. ಆದರವರು ಹಾಗಾಗದೆ ಮತೀಯ ಶಕ್ತಿಯನ್ನು ಸುಡುವ ಅಗ್ನಿಯಾಗಿ, ಶೋಷಿತರಿಗೆ ಬೆಳಕಾಗಿ, ಸಂತ್ರಸ್ತರಿಗೆ ಸ್ವರವಾಗಿ, ಸಮಾಜ ಸುಧಾರಕಿಯಾಗಿ ರೂಪುಗೊಂಡ ಬಗೆ ಇಂದು ಚಿತ್ರ ತಾರೆಗಿಂತಲೂ ಮಿಗಿಲಾಗಿ ಸಮಾಜ ಸುಧಾರಕಿಯಾಗಿ ಇವರು ಮಿನುಗುವಂತೆ ಮಾಡಿದೆ.

ಇಂತಹ ಮಿನುಗುತಾರೆ, ಸಮಾಜ ಸೇವಕಿ, ರಾಜ್ಯ ಸಭಾ ಸದಸ್ಯೆಯೂ ಆಗಿದ್ದ ಶಬಾನಾ ಅಜ್ಮಿಗೆ ಚಿತ್ರದುರ್ಗದ ಶ್ರೀ ಮುರುಘಾರಾಜೇಂದ್ರ ಬೃಹನ್ಮಠದ ಪ್ರತಿಷ್ಠಿತ "ಬಸವಶ್ರೀ ರಾಷ್ಟ್ರ ಪ್ರಶಸ್ತಿ" ದೊರೆತಿದೆ ಎಂದರೆ ಇವರ ಸಾಮಾಜಿಕ ಸೇವೆಯ ಮಹತ್ವ ಎಂತಹವರಿಗೂ ಅರಿವಾದೀತು. ಹನ್ನೆರಡನೆ ಶತಮಾನದ ಬಸವಾದಿ ಶರಣರ ತತ್ವ ಚಿಂತನೆ ಮತ್ತು ಆದರ್ಶಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿ ಕೊಂಡು ಋಜುಮಾರ್ಗದಲ್ಲಿ ನಡೆಯುತ್ತಿರುವ ಮಹನೀಯರನ್ನು ಗೌರವಿಸಲು 1997ರಲ್ಲಿ ಶ್ರೀ ಶಿವಮೂರ್ತಿ ಮುರುಘಾ ಶರಣರು ಸಮಾನತೆಯ ಹರಿಕಾರ. ಕ್ರಾಂತಿ ಜ್ಯೋತಿ ಬಸವಣ್ಣನ ಹೆಸರಿನಲ್ಲಿ ಸಂಸ್ಥಾಪಿಸಿದ ಪ್ರತಿಷ್ಠಿತ ಪ್ರಶಸ್ತಿಯಿದು. ಸುಮಾರು ಎರಡು ದಶಕಗಳಿಗೂ ಹೆಚ್ಚಿನ ಇತಿಹಾಸವುಳ್ಳ ಈ ಪ್ರಶಸ್ತಿಯನ್ನು ಈವರೆಗೆ ಬೆಲ್ದಾಳ್ ಶರಣರು, ಹಿರೇಮಲ್ಲೂರು ಈಶ್ವರನ್, ಡಾ.ಹೆಚ್.ಸುದರ್ಶನ್, ಸಮಾಜ ಸೇವಾಕರ್ತ ಅಣ್ಣಾ ಹಜಾರೆ, ಹೋರಾಟಗಾರ್ತಿ ಮೇಧಾ ಪಾಟ್ಕರ್, ಬೌದ್ಧಗುರು ದಲೈಲಾಮ, ಕ್ರಾಂತಿಕಾರಿ ಗದ್ದರ್, ಡಾ.ವಂದನಾಶಿವ, ಕೃಷಿತಜ್ಞ ಸುಭಾಷ್ ಪಾಳೇಕಾರ್ ಮುಂತಾದವರು ಪಡೆದಿದ್ದು ವಿಶೇಷವಾಗಿ ಬಾಲಿವುಡ್ ನಟಿ ಶಬಾನಾ ಅಜ್ಮಿ "ಬಸವಶ್ರೀ ಪ್ರಶಸ್ತಿ"ಗೆ ಭಾಜನರಾಗುವುದರ ಮೂಲಕ ಮೊಟ್ಟ ಮೊದಲಿಗೆ ಸಿನಿಮಾತಾರೆಯೊಬ್ಬರಿಗೆ ಈ ಗೌರವ ದೊರೆತಂತಾಗಿದೆ. "ಬಸವಶ್ರೀ ಪ್ರಶಸ್ತಿ"ಯ ಬೆನ್ನಲ್ಲೇ ಶಬಾನಾ ಅಜ್ಮಿ ಅವರಿಗೆ ಅದೇ ವರ್ಷದ ಲಂಡನಿನ್ನ ಗಾಂಧಿ ಫೌಂಡೇಷನ್‌ನಿಂದ "ಅಂತಾರಾಷ್ಟ್ರೀಯ ಗಾಂಧಿ ಶಾಂತಿ ಪ್ರಶಸ್ತಿ" ಕೂಡ ಲಭಿಸಿದೆ. ಒಂದೇ ವರ್ಷದಲ್ಲಿ ಒಂದೇ ತಿಂಗಳಲ್ಲಿ, ಕೆಲವೇ ದಿನಗಳ ಅಂತರದಲ್ಲಿ ಒಟ್ಟೊಟ್ಟಿಗೆ ಎರಡು ಪ್ರತಿಷ್ಠಿತ ಪ್ರಶಸ್ತಿಗಳು ಇವರ ಮುಡಿಯನ್ನು ಅಲಂಕರಿಸಿವೆ. ಒಂದು ಸಾಮಾಜಿಕ ಕ್ರಾಂತಿಯ ಬಸವಣ್ಣನ ಹೆಸರಿನಲ್ಲಿದ್ದರೆ ಮತ್ತೊಂದು ಶಾಂತಿದೂತ ಗಾಂಧಿ ಹೆಸರಿನದ್ದು. ಒಟ್ಟಾರೆ ಈ ಇಬ್ಬರು ಮಹಾಪುರುಷರ ತತ್ವಾದರ್ಶಗಳ ಸಂಗಮದಂತಿರುವ ಶಬಾನಾ ಅವರ ಬದುಕಿನ ಸಾಮಾಜಿಕ ಕಾಳಜಿಗೆ ಸಂದ ಮಹತ್ತರ ಗೌರವವಿದು. ವಿಶೇಷವೆಂದರೆ "ಅಂತಾರಾಷ್ಟ್ರೀಯ ಗಾಂಧಿ ಶಾಂತಿ ಪ್ರಶಸ್ತಿ"ಯು ಭಾರತದ ಪಾಲಿಗೆ ಬಂದದ್ದು ಇವರಿಗೇ ಮೊದಲು! ಈ ದಿಶೆಯಲ್ಲಿ ಶಬಾನಾ ಭಾರತದ ಘನತೆಯನ್ನು ಹೆಚ್ಚಿಸಿದ್ದಾರೆಂದರೆ ಅತಿಶಯೋಕ್ತಿಯಲ್ಲ. ಬ್ರಿಟನ್ ಸಂಸತ್‌ನ ಹೌಸ್ ಆಫ್ ಕಾಮನ್ಸ್‌ನಲ್ಲಿ ವಾರ್ಷಿಕ ಭಾಷಣ ಮಾಡುವ ಗೌರವಕ್ಕೂ ಇವರು ಪಾತ್ರರಾಗಿದ್ದು ನಿಜಕ್ಕೂ ಭಾರತೀಯರು ಹೆಮ್ಮೆಪಡುವಂತಾದ್ದು.

ಖ್ಯಾತ ಉರ್ದು ಸಾಹಿತಿ ಕೈಫಿ ಅಜ್ಮಿ ಮತ್ತು ಖ್ಯಾತ ರಂಗನಟಿ ಶೌಕತ್ ಅಜ್ಮಿ ದಂಪತಿಯ ಮುದ್ದಿನ ಮಗಳಾಗಿ 1951ರ ಸೆಪ್ಟೆಂಬರ್ 18ರಂದು ಜನಿಸಿದ ಶಬನಾ ಅಜ್ಮಿಗೆ ಕಲೆ, ಸಾಹಿತ್ಯ ಹಾಗೆಯೇ ಮಾನವೀಯತೆಯ ತುಡಿತ ರಕ್ತಗತವಾಗಿಯೇ ಬಂದಿದೆ. ಶ್ಯಾಮ್ ಬೆನಗಲ್‌ರ "ಅಂಕುರ್" ಚಿತ್ರದ ಮೂಲಕ 1972ರಲ್ಲಿ ಬೆಳ್ಳಿ ತೆರೆಗೆ ಕಾಲಿಟ್ಟ ಶಬಾನಾ. ಮಂಥನ್, ಅರ್ಥ್, ಪಾರ್, ಫೈರ್, ಗಾಡ್ ಮದರ್, ಸ್ಪರ್ಶ್... ಹೀಗೆ ಒಂದಕ್ಕಿಂತ ಒಂದು ಅತ್ಯುತ್ತಮ ಚಿತ್ರಗಳಲ್ಲಿ ನಟಿಸಿ ತಮ್ಮದೇ ಆದ ಪ್ರೌಢ ಅಭಿನಯದಿಂದ ಚಿತ್ರರಸಿಕರ ಮನಸೂರೆಗೈದಿದ್ದಾರೆ. 1983ರಿಂದ 1985ರವರೆಗೆ ಸತತವಾಗಿ ಮೂರು ವರ್ಷ ತಮ್ಮ ಶ್ರೇಷ್ಠ ನಟನೆಗಾಗಿ "ರಾಷ್ಟ್ರ ಪ್ರಶಸ್ತಿ" ಗಳಿಸಿದ ಹೆಗ್ಗಳಿಕೆ ಇವರದು. ಸುಮಾರು ನೂರಕ್ಕೂ ಹೆಚ್ಚು ಹಿಂದಿ ಚಿತ್ರಗಳಲ್ಲಿ ನಟಿಸಿ ತಮ್ಮ ಭಾವಪೂರ್ಣ ನಟನೆಯಿಂದ ಬಾಲಿವುಡ್‌ನ ಬೆಳ್ಳಿ ತೆರೆಯಲ್ಲಿ ಮಿನುಗಿದ ಶಬನಾ, ತಮ್ಮ ಅಭಿನಯಕ್ಕಾಗಿ ಐದು ಬಾರಿ "ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ" ಗಳಿಸಿರುವುದು ಇವರ ಚಿತ್ರರಂಗದ ಸಾಧನೆಗೆ ಮೈಲುಗಲ್ಲು. ಶಬಾನಾ ಅಜ್ಮಿಯ ಪತಿ ಜಾವಿದ್ ಅಖ್ತರ್ ಕೂಡ ಹೆಸರಾಂತ ಚಿತ್ರಸಾಹಿತಿ ಮತ್ತು ಸಂಗೀತಗಾರರಾಗಿದ್ದಾರೆ.

ಏಡ್ಸ್ ಬಗ್ಗೆ ಜನ ಜಾಗೃತಿ ಮೂಡಿಸಲು ಹೋರಾಟಕ್ಕಿಳಿದಿರುವ ಶಬಾನಾ "ಮೆಘಲಾ ಆಕಾಶ್" ಎಂಬ ಬೆಂಗಾಲಿ ಚಲನಚಿತ್ರ ಸೇರಿದಂತೆ ಏಡ್ಸ್ ಕುರಿತ ಹಲವಾರು ಸಾಕ್ಷ್ಯಚಿತ್ರ ಮತ್ತು ಚಲನಚಿತ್ರಗಳಲ್ಲಿ ನಟಿಸಿದ್ದಾರೆ. ವಿಶೇಷವಾಗಿ ಕೋಮುವೈಷಮ್ಯ ಬಿತ್ತಿ ಕೋಮುಗಲಭೆಗಳನ್ನು ಹುಟ್ಟು ಹಾಕುವವರ ವಿರುದ್ಧ, ಮುಗ್ಧ ಜನರನ್ನು ಮೂಢನಂಬಿಕೆಗಳತ್ತ ಕರೆದೊಯ್ಯುವ ಧಾರ್ಮಿಕ ಮತಾಂಧರ ವಿರುದ್ಧ ಶಬನಾ ಸಿಡಿದು ನಿಂತು. ಸಮಾಜದ ಸಾಮರಸ್ಯಕ್ಕಾಗಿ ಶ್ರಮಿಸುತ್ತಾರೆ. 1989ರಲ್ಲಿ ಸ್ವಾಮಿ ಅಗ್ನಿವೇಶ್ ಮತ್ತು ಎಂಜಿನಿಯರ್ ಆಸ್ಗರ್ ಆಲಿ ಅವರೊಡನೆ ದೆಹಲಿಯಿಂದ ಮೀರತ್‌ವರೆಗೆ ನಡೆಸಿದ "ಕೋಮುವಾದ ವಿರೋಧಿ ಪಾದಯಾತ್ರೆ" ಶಬನಾ ಅಜ್ಮಿಯ ಸಾಮಾಜಿಕ ಕಳಕಳಿಯ ಕೆಚ್ಚಿಗೆ ಸಾಕ್ಷಿಯಾಗಿತ್ತು. ಕೊಳಚೆ ನಿವಾಸಿಗಳ ಪುನರ್ವಸತಿಗಾಗಿ, ಮತ್ತು ಕಾಶ್ಮೀರಿ ನಿರಾಶ್ರಿತರ ಕಷ್ಟಕ್ಕಾಗಿ ಹಾಗೂ ಲಾತೂರ್ ಭೂಕಂಪದಲ್ಲಿ ನಲುಗಿದವರಿಗೆ ನೆರಳಾಗಿ ಶಬಾನಾ ಹೋರಾಟ ಮಾಡಿದರು.

ಮುಂಬೈನ ಕೊಳಚೆ ಪ್ರದೇಶದ ಜನರ ಮೂಲಭೂತ ಹಕ್ಕುಗಳಿಗಾಗಿ 'ನಿವಾಹರಕ್' ಎಂಬ ಸಂಘಟನೆ ಸ್ಥಾಪಿಸಿ ಹಲವು ದಶಕಗಳಿಂದಲೂ ಹೋರಾಟ ಮಾಡುತ್ತಾ ಬಂದಿರುವ ಶಬಾನಾ ಅವರ ಹೋರಾಟ ಇತರೇ ಹೋರಾಟಗಾರರಿಗೆ, ಹೋರಾಟಗಾರ್ತಿಯರಿಗೆ ಮಾದರಿಯಾಗುವಂತಾದ್ದು. ಇವರ ಹೋರಾಟದ ಪ್ರಚಂಡ ಶಕ್ತಿಯ ಫಲವಾಗಿ ಮಹಾರಾಷ್ಟ್ರ ಸರ್ಕಾರ ಕೊಳಚೆ ಪ್ರದೇಶದ ಜನರಿಗಾಗಿ ಒಮ್ಮೆಗೇ ಮೂವತ್ತು ಸಾವಿರಕ್ಕೂ ಹೆಚ್ಚು ಮನೆಗಳನ್ನು ನಿರ್ಮಿಸಿಕೊಡುತ್ತದೆ ಎಂದರೆ ಇದೇನೂ ಸಾಮಾನ್ಯ ವಿಷಯವಲ್ಲ. ಹೋರಾಟಗಾರ್ತಿಯೊಬ್ಬರ ಕೆಚ್ಚಿಗೆ, ಕಿಚ್ಚಿಗೆ, ಮನೋಸ್ಥೈರ್ಯಕ್ಕೆ, ಮನೋಬಲಕ್ಕೆ, ಅಸಾಮಾನ್ಯ ದಿಟ್ಟತನಕ್ಕೆ ದಕ್ಕಿದ ಜಯವೆಂದೇ ಹೇಳಬಹುದು. ಶಬಾನಾ ಅಜ್ಮಿಯ ಹೋರಾಟದ ಶಕ್ತಿ ಅಂಥಾದ್ದು!



ಬನ್ನೂರು ಕೆ.ರಾಜು
ಸಾಹಿತಿ–ಪತ್ರಕರ್ತ

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ ಮಂಗಳವಾರ 11 ಮಾರ್ಚ್ 2025

ಹಾಸನ ಮಿತ್ರ

ಹಾಸನದ ಕೆಲ ಪೊಲೀಸರು ಸಂಜೆ ವೇಳೆಗೆ ಎಣ್ಣೆ ಹಾಕ್ತಾರೆ...

ಮಾಜಿ ಸಚಿವ ಹೆಚ್.ಡಿ.ರೇವಣ್ಣ ಆರೋಪ



ಮಾಜಿ ಸಚಿವ ಹೆಚ್.ಡಿ.ರೇವಣ್ಣ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಹಾಸನ, ಮಾ.10– ಕರ್ತವ್ಯದಲ್ಲಿರುವ ಜಿಲ್ಲೆಯ ಕೆಲ ಪೊಲೀಸರು ಸಂಜೆಗೆ ಎಣ್ಣೆ ಹಾಕ್ತಾರೆ... ಬಜೆಟ್‌ನಲ್ಲಿ ನಮ್ಮ ಜಿಲ್ಲೆಗೆ ಎಣ್ಣೆ, ಜೂಜು, ಮಟ್ಕಾ, ಗಾಂಜಾ ಗ್ಯಾರಂಟಿ ಕೊಟ್ಟಿದ್ದಾರೆ... ಹಾಸನ ಜಿಲ್ಲೆಯು ಕರ್ನಾಟಕ ಬಜೆಟ್ ಪುಸ್ತಕದಲ್ಲಿ ಇಲ್ಲ... ದೆಹಲಿ ಬಜೆಟ್ ಬುಕ್‌ನಲ್ಲಿದೆ... ಇದು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಸುದ್ದಿಗೋಷ್ಠಿಯಲ್ಲಿ ಮಾಡಿದ ಟೀಕೆಗಳು.

ನಗರದ ಪ್ರವಾಸಿಮಂದಿರದಲ್ಲಿ ಸೋಮವಾರ ಮಾತನಾಡಿದ ಅವರು, ಕರ್ತವ್ಯದಲ್ಲಿರುವಾಗಲೇ ಕೆಲವು ಪೊಲೀಸರು ಸಂಜೆ ಏಳು ಗಂಟೆಗೆ ಎಣ್ಣೆ ಹಾಕ್ತಾರೆ. ಇದನ್ನು ಜಿಲ್ಲೆಯ ಎಸ್ಪಿಯವರು ತಡೆಗಟ್ಟಬೇಕು. ರಾಜ್ಯದ ಐದು ಗ್ಯಾರಂಟಿಗಳು ಮುಂದುವರೆದಿದ್ದರೂ, ಹಾಸನ ಜಿಲ್ಲೆಗೆ ಯಾವುದೂ ಸಿಕ್ಕಿಲ್ಲ. ನಮ್ಮ ಜಿಲ್ಲೆಗೆ ಹೆಚ್ಚುವರಿಯಾಗಿ ಜೂಜು, ಎಣ್ಣೆ, ಮಟ್ಕಾ ಗಾಂಜಾ ಗ್ಯಾರಂಟಿ ಕೊಟ್ಟಿದ್ದಾರೆ. ಜಿಲ್ಲೆಯ ಜನ ಸರ್ಕಾರಕ್ಕೆ ಧನ್ಯವಾದ ಹೇಳಬೇಕು ಎಂದು ವ್ಯಂಗವಾಡಿದರು.

ಗೌರವಸ್ಥ ಕುಟುಂಬಗಳು ಬದುಕಲು ಆಗುತ್ತಿಲ್ಲ. ಮಟ್ಕಾ ಜೂಜು, ಮದ್ಯ ಸೇವನೆಯಿಂದ ಮನೆಗಳ ಹೆಣ್ಣು ಮಕ್ಕಳು ಒಡವೆ ಮಾರಿಕೊಳ್ಳುವ ಪರಿಸ್ಥಿತಿ ಬಂದಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಬಜೆಟ್‌ನಲ್ಲಿ ತೋಟಗಾರಿಕೆ ಕಾಲೇಜು ಮಂಜೂರು ಮಾಡುತ್ತಾರೆ ಎಂಬ ನಿರೀಕ್ಷೆ ಈಗ ವ್ಯರ್ಥವಾಗಿದೆ. ಫ್ಲೈ ಓವರ್‌ಗೆ ಅನುದಾನ ನಿರೀಕ್ಷಿಸಿದ್ದರೂ, ಬಜೆಟ್‌ನಲ್ಲಿ ಏನೂ ಸಿಕ್ಕಿಲ್ಲ. ಕುಮಾರಸ್ವಾಮಿ ಸಿಎಂ ಆಗಿದ್ದಾಗ ಜಾರಿಗೆ ತಂದ ಯೋಜನೆಗಳಿಗೆ ಮುಂದುವರಿದ ಅನುದಾನ ನೀಡಲಿಲ್ಲ. ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ನೂರು ಕೋಟಿ ನೀಡಬೇಕಿತ್ತು. ಆದರೆ ಕೊಟ್ಟಿಲ್ಲ. ಹಾಸನ ಕರ್ನಾಟಕದ ಬಜೆಟ್ ಬುಕ್‌ನಲ್ಲಿ ಇಲ್ಲ. ದೆಹಲಿ ಬಜೆಟ್ ಬುಕ್‌ನಲ್ಲಿ ಮಾತ್ರ ಇದೆ. ಕೇಂದ್ರ ಸರಕಾರದಿಂದ ಜಿಲ್ಲೆಗೆ ಯೋಜನೆಗಳನ್ನು ತರುವ ಶಕ್ತಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರಿಗಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಇದೆ ವೇಳೆ ಕ್ಷೇತ್ರದ ಶಾಸಕ ಹೆಚ್.ಪಿ. ಸ್ವರೂಪ್ ಇತರರು ಉಪಸ್ಥಿತರಿದ್ದರು.

ನಾಳೆ ಶ್ರೀ ರೇಣುಕಾಚಾರ್ಯ ಜಯಂತಿ



ಹಾಸನ, ಮಾ.10– ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಮಾ. 12 ರಂದು ಹಾಸನ ಜಿಲ್ಲಾಡಳಿತ ಹಾಗೂ ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ನಡೆಸುತ್ತಿರುವ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮಕ್ಕೆ ವೀರಶೈವ ಲಿಂಗಾಯತ ಸಮಾಜದ ಬಂಧುಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು. ಅಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಬೆಳ್ಳಿ ರಥದಲ್ಲಿ ಜಗದ್ಗುರು ರೇಣುಕಾಚಾರ್ಯರ ಫೋಟೋಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಪರಮ ಪೂಜ್ಯ ಸ್ವಾಮೀಜಿರವರು ಹಾಗೂ ಜಿಲ್ಲಾಧಿಕಾರಿಗಳು, ಕನ್ನಡ ಸಂಸ್ಕೃತಿ ಇಲಾಖೆ ಅಧಿಕಾರಿಗಳು ಚಾಲನೆ ನೀಡುವರು. ನಗರದ ಪ್ರಮುಖ ಮುಖ್ಯ ಬೀದಿಯಲ್ಲಿ ವಿವಿಧ ಕಲಾ ತಂಡದ ಮೆರವಣಿಗೆ ಸಾಗಲಿದೆ. ನಂತರದಲ್ಲಿ ಕಲಾಭವನದಲ್ಲಿ ಕಾರ್ಯಕ್ರಮ ಜರುಗಲಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಸನ ತಾಲೂಕು ಘಟಕದ ಅಧ್ಯಕ್ಷ ಕಟ್ಟಾಯ ಶಿವಕುಮಾರ್ ತಿಳಿಸಿದ್ದಾರೆ.

ಇಬ್ಬರು ಗಾಂಜಾ ಮಾರಾಟಗಾರರ ಬಂಧನ



ಕೊಣನೂರು,ಮಾ.10–ಗಾಂಜಾ ಮಾರಲು ಯತ್ನಿಸುತ್ತಿದ್ದ ಇಬ್ಬರನ್ನು ಮಾಲು ಸಮೇತ ಕೊಣನೂರು ಪೊಲೀಸರು ಬಂಧಿಸಿದ್ದಾರೆ. ಇಲ್ಲಿನ ರಾಮನಾಥಪುರದ ಐಬಿ ಸರ್ಕಲ್‌ನಲ್ಲಿ ಸ್ಥಳೀಯ ಹುಡುಗರ ಬಳಿ ಗಾಂಜಾ ಇದೆ ಖರೀದಿಸಿ ಎಂದು ಒತ್ತಾಯಿಸಿದ ಮಾಹಿತಿ ತಿಳಿದ ಸಬ್ ಇನ್‌ಸ್ಪೆಕ್ಟರ್ ಕೆ.ಎನ್.ಗಿರೀಶ್ ನೇತೃತ್ವದ ತಂಡ ದಾಳಿ ನಡೆಸಿದೆ. ಒರಿಸ್ಸಾ ಮೂಲದ ಸಮೀರ್ ಪ್ರಧಾನ್ (47) ಗೀತಾಪ್ರಧಾನ್ (26)ರನ್ನು ಮತ್ತು ಅವರ ಬಳಿಯಿದ್ದ 10.6 ಕೆಜಿ ಗಾಂಜಾ ವಶಪಡಿಸಿಕೊಂಡಿದ್ದಾರೆ. ನಂತರ ನ್ಯಾಯಾಲಯಕ್ಕೆ ಹಾಜರುಪಡಿಸಿದರು.

ಕೌಟುಂಬಿಕ ಕಲಹ: ತಾಯಿ, ಮಗ ಆತ್ಮಹತ್ಯೆ

ಹಿರೀಸಾವೆ, ಮಾ.10– ಕೌಟುಂಬಿಕ ಕಲಹದಿಂದ ಹಿರೀಸಾವೆ ಹೋಬಳಿ ಕಬ್ಬಳಿ ಗ್ರಾಮದ ಜಯಂತಿ (60) ಮತ್ತು ಅವರ ಪುತ್ರ ಭರತ್ (35) ಸೋಮವಾರ ಗ್ರಾಮದ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಕಳೆದ 8 ತಿಂಗಳ ಹಿಂದೆ ಗಂಡಸಿ ಹೋಬಳಿ ಬಾಗೂರನಹಳ್ಳಿ ಗೀತಾ ಎಂಬ ಯುವತಿಯನ್ನು ಭರತ್ ಮದುವೆಯಾಗಿದ್ದ. ಆದರೆ ಇಬ್ಬರ ನಡುವೆ ಹೊಂದಾಣಿಕೆ ಇರಲಿಲ್ಲ. ಈ ಬಗ್ಗೆ ಎರಡು ಸಲ ಪಂಚಾಯಿತಿ ಮಾಡಿದ್ದೇವೆ. ಆದರೆ ಸಂಸಾರ ಸರಿಯಾಗದೆ, ಮನನೊಂದು ಆತ್ಮಹತ್ಯೆ ಮಾಡಿ ಕೊಳ್ಳುತ್ತಿರುವುದಾಗಿ ಅವರು ಡೆತ್‌ನೋಟ್ ಬರೆದಿಟ್ಟಿದ್ದಾರೆ ಎನ್ನಲಾಗಿದೆ.

ಇವರ ಸಾವಿಗೆ ಗೀತಾ ಕಾರಣ ಎಂದು ಮೃತರ ಸಂಬಂಧಿ ಶ್ರೀನಿವಾಸ್ ಹಿರೀಸಾವೆ ಠಾಣೆಗೆ ದೂರು ನೀಡಿದ್ದಾರೆ. ಮೃತ ದೇಹಗಳನ್ನು ಅಗ್ನಿಶಾಮಕ ದಳದ ಸಿಬ್ಬಂದಿ ಮೂಲಕ ಹೊರತೆಗೆದು, ಹಿರೀಸಾವೆ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಯಿತು. ಈ ಬಗ್ಗೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಎಸ್‌ಐ ರೂಪಾ ಬಿರಾದಾರ್ ತಿಳಿಸಿದರು.

ಅಂತರರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ನಟಿ ಶಬಾನಾ ಅಜ್ಮಿಗೆ ಜೀವಮಾನ ಸಾಧನೆ ಪ್ರಶಸ್ತಿ

ಪ್ರಶಸ್ತಿ ಫಲಕ, 10 ಲಕ್ಷದ ಚೆಕ್ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ



16ನೇ ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ವೇಳೆ ಜೀವಮಾನ ಸಾಧನೆ ಪ್ರಶಸ್ತಿ ಪಡೆದ ನಟಿ ಶಬಾನಾ ಅಜ್ಮಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಪ್ರಶಸ್ತಿ ಮತ್ತು 10 ಲಕ್ಷ ರೂ. ಚೆಕ್ ನೀಡಿ ಗೌರವಿಸಿದರು.

ಬೆಂಗಳೂರು, ಮಾ.10(ಕೆಎಂಶಿ)– ನಗರದಲ್ಲಿ ಮುಕ್ತಾಯಗೊಂಡ 16ನೇ ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ವೇಳೆ ಜೀವಮಾನ ಸಾಧನೆ ಪ್ರಶಸ್ತಿ ಪಡೆದ ನಟಿ ಶಬಾನಾ ಅಜ್ಮಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಪ್ರಶಸ್ತಿ ಮತ್ತು 10 ಲಕ್ಷ ರೂ. ಚೆಕ್ ನೀಡಿ ಗೌರವಿಸಿದರು.

ಗೃಹ ನಿವಾಸ ಕಾವೇರಿಯಲ್ಲಿ ಪ್ರಶಸ್ತಿ ನೀಡಿ ಗೌರವಿಸಿ ಮಾತನಾಡಿದ ಮುಖ್ಯಮಂತ್ರಿ, ಕಾಪಿರೈಟ್ಸ್ ಕಾಯ್ದೆಯಲ್ಲಿ ಕಲಾವಿದರಿಗೆ, ಸಂಗೀತಗಾರರಿಗೆ ಅನುಕೂಲವಾಗಿರುವ ರೀತಿಯಲ್ಲಿ ಜಿಎಸ್‌ಟಿ ಕೌನ್ಸಿಲ್‌ನಲ್ಲೂ ತಮ್ಮ ಅಭಿಪ್ರಾಯ ವ್ಯಕ್ತಪಡಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಶಬಾನಾ ಅಜ್ಮಿ ಪತಿ, ಗೀತೆ ರಚನೆಕಾರ ಜಾವೇದ್ ಅಖ್ತರ್ ಉಪಸ್ಥಿತರಿದ್ದರು. ಕರ್ನಾಟಕ ಸಾಂಸ್ಕೃತಿಕ ಮತ್ತು ಸಂಗೀತಕ್ಕೆ ಅತ್ಯಂತ ಪ್ರಸಿದ್ಧಿ ಪಡೆದಿದೆ ಎಂದು ಶಬಾನಾ ಅಜ್ಮಿ ಮತ್ತು ಜಾವೇದ್ ಅಖ್ತರ್ ಮೆಚ್ಚುಗೆ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಹಿಂದೂಸ್ತಾನಿ ಸಂಗೀತದ ದಿಗ್ಗಜರಾಗಿದ್ದ ಭೀಮ್‌ಸೇನ್ ಜೋಶಿ, ಕುಮಾರ ಗಂಧರ್ವ, ಗಂಗೂಬಾಯಿ ಹಾನಗಲ್ ಕರ್ನಾಟಕದ ಹೆಮ್ಮೆ ಎಂದು ಸ್ಮರಿಸಿದರು.

ಗುತ್ತಿಗೆ ಆಧಾರದ ಮೇಲೆ 400 ಪಶು ವೈದ್ಯಾಧಿಕಾರಿಗಳ ನೇಮಕ

ಇಷ್ಟೇ ಸಂಖ್ಯೆ ಕಾಯಂ ನೇಮಕಕ್ಕೂ ಪ್ರಕ್ರಿಯೆ



ಬೆಂಗಳೂರು, ಮಾ.10(ಕೆಎಂಶಿ)– ರಾಜ್ಯದಲ್ಲಿ 400 ಪಶು ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ ಎಂದು ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ವಿಧಾನಸಭೆಗಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಜೆ.ಎನ್.ಗಣೇಶ್ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಈಗಾಗಲೇ 360 ಪಶುವೈದ್ಯರು ಕರ್ತವ್ಯಕ್ಕೆ ಹಾಜರಾಗಿದ್ದಾರೆ. ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 400 ಪಶು ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ. ಅಲ್ಲದೆ, ಇಷ್ಟೇ ಸಂಖ್ಯೆಯ ಪಶು ವೈದ್ಯಾಧಿಕಾರಿಗಳ ನೇಮಕಕ್ಕೆ ಏಪ್ರಿಲ್ 8 ಮತ್ತು 9ರಂದು ಕೆಪಿ ಎಸ್‌ಸಿ ಮೂಲಕ ಪರೀಕ್ಷೆ ನಡೆಸಲು ತಾತ್ಕಾಲಿಕ ದಿನಾಂಕ ನಿಗದಿಪಡಿಸಲಾಗುವುದು ಎಂದರು.

ಮಣಿಪಾಲ್ ಆಸ್ಪತ್ರೆಯಿಂದ ಮಹಿಳಾ ಸಾಧಕರಿಗೆ ಸನ್ಮಾನ



ಮೈಸೂರಿನ ಮಣಿಪಾಲ್ ಆಸ್ಪತ್ರೆಯಿಂದ ಮಹಿಳಾ ಸಾಧಕರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ಮೈಸೂರು,ಮಾ.10–ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮೈಸೂರಿನ ಮಣಿಪಾಲ್ ಆಸ್ಪತ್ರೆ ವತಿಯಿಂದ ತಮ್ಮ ಶೌರ್ಯ, ಕಠಿಣ ಪರಿಶ್ರಮ ಮತ್ತು ನಿಸ್ವಾರ್ಥ ಸೇವೆಯಿಂದ ಸಮಾಜದಲ್ಲಿ ಬದಲಾವಣೆಯನ್ನು ತಂದ ಸಾಧಕ ಮಹಿಳೆಯರನ್ನು ಗೌರವಿಸುವ ಮೂಲಕ ತಮ್ಮ ಮಣಿಪಾಲ್ ಸಖಿ–ಸೀಸನ್ 3 ಅನ್ನು ಆಚರಿಸಿತು.

ಮೈಸೂರಿನ ಗ್ರ್ಯಾಂಡ್ ಮರ್ಕ್ಯೂರ್‌ನಲ್ಲಿ ನಡೆದ ಈ ವಿಶೇಷ ಕಾರ್ಯಕ್ರಮದಲ್ಲಿ ಗಹನವಾದ ವೈದ್ಯಕೀಯ ಸಮಸ್ಯೆಗಳೊಂದಿಗೆ ಹೋರಾಡಿ ಜಯಿಸಿದ ರೋಗಿಗಳು, ತಮ್ಮ ನಿಸ್ವಾರ್ಥ ಸೇವೆಯಿಂದ ಇತರರಿಗೆ ಸಹಾಯ ಮಾಡುವ ಆರೈಕೆದಾರರು, ಬದಲಾವಣೆ ತರುವ ಲೋಕೋಪಕಾರಿಗಳು, ದಾಖಲೆಗಳನ್ನು ಮುರಿಯುವ ಕ್ರೀಡಾಪಟುಗಳು ಮತ್ತು ಸಮುದಾಯಗಳನ್ನು ಸುಧಾರಿಸುವ ಸಾಮಾಜಿಕ ಕಾರ್ಯಕರ್ತರು ಸೇರಿದಂತೆ ಎಲ್ಲಾ ಹಿನ್ನೆಲೆಯ ಮಹಿಳೆಯರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ಮೈಸೂರಿನ ಮಣಿಪಾಲ್ ಆಸ್ಪತ್ರೆಯ ನಿರ್ದೇಶಕ ಪ್ರಮೋದ್ ಕುಂದರ್, ಮಣಿಪಾಲ್ ಆಸ್ಪತ್ರೆಯ ವೈದ್ಯಕೀಯ ಸೇವೆಗಳ ಮುಖ್ಯಸ್ಥ ಡಾ.ಉಪೇಂದ್ರ ಶೆಣೈ ಮತ್ತಿತರರು ಉಪಸ್ಥಿತರಿದ್ದರು.

ಚಿತ್ರನಟಿ ಚಿನ್ನ ಸಾಗಾಣೆ ಪ್ರಕರಣ

ಕೃತ್ಯದ ಹಿಂದಿರುವ ಸಚಿವರ ಹೆಸರು ಬಹಿರಂಗಕ್ಕೆ ವಿಜಯೇಂದ್ರ ಆಗ್ರಹ



ಬೆಂಗಳೂರು, ಮಾ.10(ಕೆಎಂಶಿ)– ಚಿತ್ರನಟಿ ರನ್ಯಾ ರಾವ್ ಚಿನ್ನ ಕಳ್ಳ ಸಾಗಾಣೆ ಹಿಂದೆ ಕೆಲವು ಸಚಿವರು ಇರುವ ಮಾಹಿತಿ ಇದ್ದು, ಅಂಥ ಸಚಿವರ ಹೆಸರನ್ನು ಬಹಿರಂಗಪಡಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಂದಿಲ್ಲಿ ಒತ್ತಾಯಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿನ್ನ ಕಳ್ಳಸಾಗಾಣೆ ಹಿನ್ನೆಲೆಯಲ್ಲಿ ಬಂಧಿತರಾದ ರನ್ಯಾ ರಾವ್ ಹಿಂದೆ ಅನೇಕ ಘಟಾನುಘಟಿಗಳಿದ್ದಾರೆ ಎಂಬ ಅಂಶ ಹೊರಬರುತ್ತಿದೆ. ಇದು ಸಣ್ಣ ವಿಷಯವಲ್ಲ, ಕಳೆದ ಕೆಲವು ತಿಂಗಳಲ್ಲಿ 30ಕ್ಕೂ ಹೆಚ್ಚು ಬಾರಿ ರನ್ಯಾ ರಾವ್ ವಿದೇಶಕ್ಕೆ ಮತ್ತು ದುಬೈಗೆ ಹೋಗಿ ಬಂದ ಮಾಹಿತಿ ಹೊರಬಿದ್ದಿದೆ. ಪ್ರತಿ ಬಾರಿಯೂ ಬೆಂಗಳೂರಿಗೆ ಮರಳಿ ಬಂದಾಗ ಪ್ರೊಟೋಕಾಲ್ ವ್ಯವಸ್ಥೆ ನೀಡಲಾಗುತ್ತಿತ್ತು ಎಂದು ಆರೋಪಿಸಿದರು.

ರನ್ಯಾ ರಾವ್ ಒಬ್ಬ ಹಿರಿಯ ಐಪಿಎಸ್ ಅಧಿಕಾರಿ ಪುತ್ರಿ, ವಿದೇಶದಿಂದ ಬಂದಿಳಿಯುತ್ತಿದ್ದಂತೆ ಪೊಲೀಸರೇ ಎಸ್ಕಾರ್ಟ್ ನೀಡಿ ಕರೆದೊಯ್ಯುತ್ತಿದ್ದರು. ಆಕೆ ಸಾಮಾನ್ಯ ಮಹಿಳೆ ಅಲ್ಲ ಎಂಬುದು ಇದರಿಂದ ಗೊತ್ತಾಗುತ್ತದೆ. ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಪ್ರೊಟೋಕಾಲ್ ಸಿಗುತ್ತದೆ. ಸೆಕ್ಯುರಿಟಿ ತಪಾಸಣೆ ಆಗುವುದಿಲ್ಲವೆಂದರೆ, ಇದರ ಹಿಂದೆ ಕೆಲವು ಘಟಾನುಘಟಿಗಳಿದ್ದಾರೆ. ಅಲ್ಲದೇ, ಕೆಲವು ಸಚಿವರೂ ಇದ್ದಾರೆ ಎಂಬ ವಿಷಯವೂ ಬೆಳಕಿಗೆ ಬರುತ್ತಿದೆ.

ಈಗಾಗಲೇ ಸಿಬಿಐ, ಇ.ಡಿ. ತನಿಖೆ ನಡೆಯುತ್ತಿದೆ. ಈ ಗಂಭೀರ ಪ್ರಕರಣದ ಹಿಂದಿರುವವರ ಮಾಹಿತಿ ಮುಖ್ಯಮಂತ್ರಿಗಳಿಗೆ ಇದ್ದೇ ಇರುತ್ತದೆ. ಚಿನ್ನ ಕಳ್ಳ ಸಾಗಾಣೆ ಹಿಂದಿರುವ ಹವಾಲಾ, ಚಿನ್ನ ಕಳ್ಳಸಾಗಾಟ ಮಾಫಿಯಾಗಳು, ಬೆಂಬಲ ಕೊಟ್ಟ ರಾಜಕಾರಣಿಗಳು, ಮಂತ್ರಿಗಳು, ಮಾಜಿ ಮಂತ್ರಿಗಳು, ಶಾಸಕರು, ಮಾಜಿ ಶಾಸಕರು ಯಾರೆಂಬುದನ್ನು ಮುಖ್ಯಮಂತ್ರಿ ಬಹಿರಂಗಪಡಿಸಲಿ ಎಂದು ಒತ್ತಾಯಿಸಿದರು. 13 ಕೋಟಿ ರೂ. ಮೌಲ್ಯದ ಚಿನ್ನ ಕಳ್ಳ ಸಾಗಾಟದಲ್ಲಿ ರನ್ಯಾ ರಾವ್ ಬಂಧನವಾಗಿದೆ. ಚಿನ್ನ ವಶಕ್ಕೆ ಪಡೆಯಲಾಗಿದೆ. ಹಿರಿಯ ಐಪಿಎಸ್ ಅಧಿಕಾರಿ ಮಗಳ ನೇತೃತ್ವದಲ್ಲಿ ಇಷ್ಟು ದೊಡ್ಡ ಚಿನ್ನ ಕಳ್ಳಸಾಗಾಟ ನಡೆದುದನ್ನು ನಾವೆಂದೂ ಕೇಳಿರಲಿಲ್ಲ. ಇದು ಗಂಭೀರ ಸ್ವರೂಪ ಪಡೆದುಕೊಂಡಿದೆ, ಇದು ಗಾಳಿಯಲ್ಲಿ ಗುಂಡು ಹೊಡೆಯುವ ಕೆಲಸ ಅಲ್ಲ, ಮುಖ್ಯಮಂತ್ರಿ ಉತ್ತರಿಸಬೇಕು ಎಂದರು.

ರಾಜ್ಯ ಬಜೆಟ್‌ನಲ್ಲಿ ಕಾರ್ಮಿಕರ ಬಗ್ಗೆ ಯಾವುದೇ ಪ್ರಸ್ತಾಪ ಮಾಡದನ್ನು ಖಂಡಿಸಿ

ಇಂದು ಮೈಸೂರಲ್ಲಿ ಸ್ವಚ್ಛತಾ ಕಾರ್ಮಿಕರ ಪ್ರತಿಭಟನೆ

ಮೈಸೂರು,ಮಾ.10(ಎಂಟಿವೈ)– ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಸ್ವಚ್ಛತಾ ಕಾರ್ಮಿಕರ ಯಾವುದೇ ವಿಚಾರ ಪ್ರಸ್ತಾಪವಾಗದೇ ಇರುವುದನ್ನು ಖಂಡಿಸಿ ನಾಳೆ (ಮಾ.11) ಬೆಳಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಮುಂದೆ ವಿವಿಧ ಸ್ಥಳೀಯ ಸಂಸ್ಥೆಗಳ ಸ್ವಚ್ಛತಾ ಕಾರ್ಮಿಕರು ಪ್ರತಿಭಟನೆ ನಡೆಸಲಿದ್ದಾರೆ ಎಂದು ಕರ್ನಾಟಕ ರಾಜ್ಯ ಪೌರಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷ ಡಿ.ಆರ್.ರಾಜು ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿವಿಧ ಸ್ಥಳೀಯ ಸಂಸ್ಥೆಗಳಲ್ಲಿ ಮನೆ ಮನೆ ಕಸ ಸಂಗ್ರಹ ಮಾಡುವ ಸ್ವಚ್ಛತಾ ವಾಹನ ಚಾಲಕರು, ಲೋಡರ್ಸ್‌ಗಳು ಹಾಗೂ ಒಳಚರಂಡಿ ವಿಭಾಗದ ಸ್ವಚ್ಛತಾ ಕಾರ್ಮಿಕರನ್ನು ನೇರ ಪಾವತಿ ವ್ಯಾಪ್ತಿಗೆ ತರುವಂತೆ ಸರ್ಕಾರಕ್ಕೆ ಈ ಹಿಂದೆ ಮನವಿ ಸಲ್ಲಿಸಲಾಗಿತ್ತು. ಆದರೆ, ಬಜೆಟ್‌ನಲ್ಲಿ ಯಾವುದೇ ಘೋಷಣೆ ಮಾಡಿಲ್ಲ. ಇದನ್ನು ಖಂಡಿಸಿ, ನಾಳೆ ಬೆಳಗ್ಗೆ 11 ಗಂಟೆಗೆ ಮೈಸೂರು ಜಿಲ್ಲಾಧಿಕಾರಿ ಕಚೇರಿ ಮುಂದೆ ಮೈಸೂರು ಮಹಾನಗರಪಾಲಿಕೆ, ಹೂಟಗಳ್ಳಿ, ಹುಣಸೂರು, ನಂಜನಗೂಡು ನಗರಸಭೆ, ಕೆ.ಆರ್.ನಗರ, ತಿ.ನರಸೀಪುರ, ಬನ್ನೂರು ಪುರಸಭೆ, ಪಿರಿಯಾಪಟ್ಟಣ, ಹೆಚ್.ಡಿ. ಕೋಟೆ, ಸರಗೂರು, ರಮ್ಮನಹಳ್ಳಿ, ಬೋಗಾದಿ, ಶ್ರೀರಾಂಪುರ ಪಟ್ಟಣ ಪಂಚಾಯಿತಿಗಳಲ್ಲಿ ಕೆಲಸ ಮಾಡುತ್ತಿರುವ ಸ್ವಚ್ಛತಾ ಕಾರ್ಮಿಕರು, ಮನೆ ಮನೆ ಕಸ ಸಂಗ್ರಹಿಸುವವರು, ಲೋಡರ್ಸ್‌ಗಳು, ವಾಹನ ಚಾಲಕರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಚುನಾವಣೆಗೂ ಮುನ್ನ ಈ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ನೀಡಿದ್ದ ಭರವಸೆಯನ್ನು ಸರ್ಕಾರ ಈಡೇರಿಸಿಲ್ಲ. ಹೀಗಾಗಿ ಸರ್ಕಾರದ ಗಮನ ಸೆಳೆಯಲು ಈ ಸಾಂಕೇತಿಕ ಪ್ರತಿಭಟನೆ ಹಮ್ಮಿಕೊಳ್ಳಲಾಗುತ್ತಿದೆ. ಉದ್ಯೋಗ ಭದ್ರತೆ ಇಲ್ಲದೇ ಸೇವೆ ಸಲ್ಲಿಸುತ್ತಿರುವ ಸ್ವಚ್ಛತಾ ಕಾರ್ಮಿಕರು ಮೃತಪಟ್ಟಲ್ಲಿ ಅನುಕಂಪದ ಆಧಾರದ ಮೇಲೆ ಕುಟುಂಬದವರಿಗೆ ಕೆಲಸ ನೀಡುತ್ತಿಲ್ಲ. ಇದರೊಂದಿಗೆ ನಾನಾ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಈ ಪ್ರತಿಭಟನೆ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಪೌರಕಾರ್ಮಿಕರ ಸಂಘದ ಹಿರಿಯ ಸಲಹೆಗಾರ ಕೆ.ನಂಜಪ್ಪ ಬಸವನಗುಡಿ, ಕುಮಾರಸ್ವಾಮಿ, ಮಂಚಯ್ಯ, ಬಹದ್ದೂರ್ ಕೃಷ್ಣ, ವಸಂತಕುಮಾರಿ, ಪವಿತ್ರ ಇದ್ದರು.

ಮಹಾರಾಷ್ಟ್ರದಲ್ಲಿ ಕಬ್ಬು ತುಂಬಿದ್ದ ಟ್ರಕ್ ಪಲ್ಟಿಯಾಗಿ ಆರು ಕಾರ್ಮಿಕರು ಸಾವು



ಛತ್ರಪತಿ ಸಂಭಾಜಿನಗರ: ಮಹಾರಾಷ್ಟ್ರದ ಛತ್ರಪತಿ ಸಂಭಾಜಿನಗರ ಜಿಲ್ಲೆಯಲ್ಲಿ ಸೋಮವಾರ ಬೆಳಗ್ಗೆ ಕಬ್ಬು ತುಂಬಿದ್ದ ಟ್ರಕ್ ಪಲ್ಟಿಯಾಗಿ ಆರು ಕಾರ್ಮಿಕರು ಸಾವನ್ನಪ್ಪಿದ್ದು, 11 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಇಂದು ಬೆಳಗಿನ ಜಾವ 2.30ರ ಸುಮಾರಿಗೆ ಟ್ರಕ್ ಕನ್ನಡ್‌ನಿಂದ ಪಿಶೋರ್‌ಗೆ ಹೋಗುತ್ತಿದ್ದಾಗ ಪಿಶೋರ್ ಘಾಟ್‌ನಲ್ಲಿ ಈ ಅಪಘಾತ ಸಂಭವಿಸಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪಿಶೋರ್ ಘಾಟ್‌ನಲ್ಲಿ ಚಾಲಕನ ನಿಯಂತ್ರಣ ತಪ್ಪಿ ಟ್ರಕ್ ಪಲ್ಟಿಯಾಗಿದೆ. ಟ್ರಕ್‌ನಲ್ಲಿ ಸುಮಾರು 17 ಕಾರ್ಮಿಕರು ಪ್ರಯಾಣಿಸುತ್ತಿದ್ದರು ಎಂದು ಹೇಳಿದ್ದಾರೆ.

ಕಾರ್ಮಿಕರು ಕಬ್ಬಿನ ರಾಶಿಯ ಕೆಳಗೆ ಸಿಲುಕಿಕೊಂಡಿದ್ದರು ಎಂದು ಕನ್ನಡ್ ನಗರ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ಪಿಟಿಐಗೆ ತಿಳಿಸಿದ್ದಾರೆ.

ಮಾಹಿತಿ ಪಡೆದ ನಂತರ, ಪೊಲೀಸರು ಸ್ಥಳಕ್ಕೆ ಧಾವಿಸಿ ಸ್ಥಳೀಯರ ಸಹಾಯದಿಂದ ರಕ್ಷಣಾ ಕಾರ್ಯಾಚರಣೆ ನಡೆಸಿದರು. ಕಬ್ಬಿನ ರಾಶಿಯ ಅಡಿಯಲ್ಲಿ ನಾಲ್ವರು ಕಾರ್ಮಿಕರು ಮೃತಪಟ್ಟಿರುವುದು ಕಂಡುಬಂದಿದ್ದು, ಚಿಕಿತ್ಸೆಯ ಸಮಯದಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ.

ಮೃತರನ್ನು ಕಿಸಾನ್ ರಾಥೋಡ್ (30), ಮನೋಜ್ ಚವಾಣ್ (23), ಮಿಥುನ್ ಚವಾಣ್ (26), ವಿನೋದ್ ಚವಾಣ್ (28), ಕೃಷ್ಣ ರಾಥೋಡ್ (30) ಮತ್ತು ಜ್ಞಾನೇಶ್ವರ ಚವಾಣ್ (36) ಎಂದು ಗುರುತಿಸಲಾಗಿದೆ. ಮೃತ ಕಾರ್ಮಿಕರು ಸತ್ಕುಂಡ್ ಗ್ರಾಮ, ಕನ್ನಡ್ ಹಾಗೂ ಇತರ ಹತ್ತಿರದ ಪ್ರದೇಶಗಳ ನಿವಾಸಿಗಳು ಎಂದು ತಿಳಿಸಿದ್ದಾರೆ. ಗಾಯಗೊಂಡ ಇತರ 11 ಕಾರ್ಮಿಕರನ್ನು ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಐಪಿಎಲ್ ವೇಳೆ ತಂಬಾಕು, ಮದ್ಯ ಉತ್ಪನ್ನಗಳ ಜಾಹೀರಾತು ಪ್ರಸಾರ ನಿಷೇಧಿಸಿ

ಕೇಂದ್ರ ಸರ್ಕಾರದ ಸೂಚನೆ

ನವದೆಹಲಿ: ಮಾರ್ಚ್ 22ರಿಂದ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಆರಂಭವಾಗಲಿದೆ. ಕ್ರಿಕೆಟ್ ಹಬ್ಬಕ್ಕಾಗಿ ಅಭಿಮಾನಿಗಳೂ ತುದಿಗಾಲ ಮೇಲೆ ನಿಂತಿದ್ದಾರೆ. ಇದರ ನಡುವೆ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಕೇಂದ್ರ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ.

ಪಂದ್ಯಗಳ ಸಮಯದಲ್ಲಿ ಕ್ರೀಡಾಂಗಣದ ಆವರಣ ಮತ್ತು ದೂರದರ್ಶನ ಪ್ರಸಾರದಲ್ಲಿ ತಂಬಾಕು ಮತ್ತು ಮದ್ಯದ ಜಾಹೀರಾತುಗಳನ್ನು ನಿಷೇಧಿಸುವಂತೆ ಕೇಂದ್ರ ಆರೋಗ್ಯ ಸಚಿವಾಲಯವು ಐಪಿಎಲ್ ಆಡಳಿತ ಮಂಡಳಿಗೆ ಸೂಚಿಸಿದೆ.

ಐಪಿಎಲ್ ಅಧ್ಯಕ್ಷ ಅರುಣ್‌ಸಿಂಗ್ ಧುಮಾಲ್ ಅವರಿಗೆ ಪತ್ರ ಬರೆದಿರುವ ಆರೋಗ್ಯ ಸಚಿವಾಲಯ, ಕ್ರೀಡಾಂಗಣ ಮತ್ತು ವಾಹಿನಿಗಳಲ್ಲಿ ಪಂದ್ಯ ಪ್ರಸಾರದ ವೇಳೆ ತಂಬಾಕು ಮತ್ತು ಮದ್ಯ ಉತ್ಪನ್ನಗಳ ಕುರಿತು ಪ್ರಚಾರ ಮಾಡಬೇಡಿ. ಕ್ರೀಡಾಪಟುಗಳು, ಕಾಮೆಂಟೇಟರ್ಸ್ ಸೇರಿದಂತೆ ಅಂತಹ ಉತ್ಪನ್ನಗಳ ಜಾಹೀರಾತಿನಲ್ಲಿ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಕಾಣಿಸಿಕೊಳ್ಳದಂತೆ ಮನವಿ ಮಾಡಿದೆ. ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಗೂ ಪತ್ರ ರವಾನಿಸಿದ್ದು, ದೇಶದಲ್ಲಿ ಹೃದಯ ಸಂಬಂಧಿ, ಕ್ಯಾನ್ಸರ್, ಶ್ವಾಸಕೋಶ ಸಮಸ್ಯೆ, ಮಧುಮೇಹ, ಅಧಿಕ ರಕ್ತದೊತ್ತಡ ಇತ್ಯಾದಿ ಕಾಯಿಲೆಗಳಿಂದ ವರ್ಷಕ್ಕೆ ಶೇ.70ಕ್ಕಿಂತ ಹೆಚ್ಚು ಸಾವುಗಳು ಸಂಭವಿಸುತ್ತಿವೆ. ತಂಬಾಕು ಮತ್ತು ಮದ್ಯ ಸೇವನೆಯು ಈ ರೋಗಗಳಿಗೆ ಕಾರಣವಾಗುತ್ತಿದೆ. ಹೀಗಾಗಿ, ಇದರ ಪ್ರಚಾರದಿಂದ ದೂರ ಇರೋಣ ಎಂದು ಸಲಹೆ ನೀಡಿದೆ. ಐಪಿಎಲ್ ದೇಶದಲ್ಲಿ ಕೋಟ್ಯಾಂತರ ಜನರು ಇದನ್ನು ವೀಕ್ಷಿಸುತ್ತಾರೆ. ಈ ವೇಳೆ ತಂಬಾಕು–ಮದ್ಯದ ಉತ್ಪನ್ನಗಳ ಪ್ರಚಾರ ನಡೆಸಿದಲ್ಲಿ ಸಾರ್ವಜನಿಕ ಆರೋಗ್ಯ ಮತ್ತು ಫಿಟ್‌ನೆಸ್ ವಿರುದ್ಧ ಸಂದೇಶ ರವಾನಿಸಿದಂತಾಗುತ್ತದೆ. ಆದ್ದರಿಂದ, ಕ್ರೀಡಾ ಕೂಟಕ್ಕೆ ಸಂಬಂಧಿಸಿದ ಎಲ್ಲ ವೇದಿಕೆಗಳಲ್ಲಿ ಈ ಉತ್ಪನ್ನಗಳ ಪ್ರಚಾರ ನಿಷೇಧಿಸಿದೆ.

ತೆರೆ–ಮರೆ ಕೆಲಸ ಮಾಡುವ ಸಾಧಕಿಯರ ಗುರುತಿಸಿ

ಕನ್ನಡ ಸಾಹಿತ್ಯ ಪರಿಷತ್ ಮೈಸೂರು ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್ ಸಲಹೆ



ಮೈಸೂರಿನ ರಾಮಕೃಷ್ಣನಗರದ ರಮಾಗೋವಿಂದ ಸಭಾ ಭವನದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನ ಕಾರ್ಯಕ್ರಮ ನಡೆಯಿತು.

ಮೈಸೂರು, ಮಾ.10(ಬಿಎಲ್‌ಯು)– ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ತೆರೆಮರೆಯಲ್ಲಿ ಕೆಲಸ ಮಾಡುವ ಬಹಳಷ್ಟು ಮಹಿಳೆಯರು ಕಾರಣರಾಗಿದ್ದು, ಅವರನ್ನು ಗುರುತಿಸಿ ಉತ್ತೇಜಿಸಬೇಕು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಸಲಹೆ ನೀಡಿದರು.

ರಾಮಕೃಷ್ಣನಗರದ ರಮಾಗೋವಿಂದ ಸಭಾ ಭವನದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಸಾಹಿತ್ಯ, ಸಂಸ್ಕೃತಿ, ಸಮ್ಮಿಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಹಳಷ್ಟು ಮಹಿಳೆಯರು ಪ್ರಚಾರಕ್ಕೆ ಬಾರದೆ, ಯಾವುದೇ ಪ್ರಶಸ್ತಿಗೆ ಆಸೆ ಪಡದೆ ಸಮಾಜಮುಖಿ ಕೆಲಸ ಮಾಡುತ್ತಿದ್ದಾರೆ. ಇಂತಹ ಸಾಧಕಿಯರನ್ನು ಗುರುತಿಸಿ ಸಮಾಜಕ್ಕೆ ಅವರ ಸಾಧನೆ ತಿಳಿಸಬೇಕಿದೆ ಎಂದರು.

ತಾಯಿಯ ಸ್ಥಾನವನ್ನು ತುಂಬಲು ಯಾರಿಂದಲೂ ಸಾಧ್ಯವಿಲ್ಲ. ಅಮೃತ ಸಮಾನ ತಾಯಿಯ ಎದೆ ಹಾಲಿಗೆ ಪರ್ಯಾಯವೇ ಇಲ್ಲ. ಇಡೀ ವಿಶ್ವದಲ್ಲಿ ಬಹಳಷ್ಟು ಸಂಶೋಧನೆ ನಡೆಯಿತು. ಆದರೆ ಕೃತಕ ಹಾಲು ತಾಯಿಯ ಎದೆ ಹಾಲಿಗೆ ಸಮಾನವಲ್ಲ ಎಂಬ ಸತ್ಯ ಗೋಚರವಾಯಿತು. ಇದು ತಾಯಿಯ ಮಹತ್ವವನ್ನು ಸಾರಿ ಹೇಳುತ್ತದೆ ಎಂದು ಅಭಿಪ್ರಾಯಪಟ್ಟರು.

ಹೆಣ್ಣು ಮನೆಯೊಳಗಿನ ವಾತಾವರಣಕ್ಕೆ, ಅಡುಗೆ ಮನೆಗೆ ಸೀಮಿತ ಎಂಬ ಕಾಲವೊಂದಿತ್ತು. ಆದರೆ ಇಂದು ಹೆಣ್ಣು ಪ್ರತಿಯೊಂದು ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಾಳೆ. ಈ ಮೂಲಕ ತನ್ನ ಶಕ್ತಿ ಏನೆಂದು ತೋರಿಸಿದ್ದಾಳೆ. ಪ್ರತಿ ವರ್ಷ ನಡೆಯುವ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ವೇಳೆ ಹೆಣ್ಣಿನ ಪ್ರಬುದ್ಧತೆಯನ್ನು ತಿಳಿ ಹೇಳಬೇಕಿದೆ ಎಂದು ಹೇಳಿದರು.

ಇದೇ ವೇಳೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಹರಿಪ್ರಸಾದ್, ಅನಸೂಯಮ್ಮ, ವಿಜಯಾಹರನ್, ಸುಮತಿ, ಬಿ.ಕೆ.ಮೀನಾಕ್ಷಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಸಾಹಿತಿ ಡಾ.ಕೆ.ಲೀಲಾ ಪ್ರಕಾಶ್, ಡಾ.ಎಸ್.ಸುಧಾ ರಮೇಶ್, ಸವಿತಾ ಪ.ಮಲ್ಲೇಶ್, ವಿಜ್ಞಾನ ಲೇಖಕ ಎಸ್.ರಾಮಪ್ರಸಾದ್, ಲತಾ ಮೋಹನ್, ಕನ್ನಡ ಸಾಹಿತ್ಯ ಪರಿಷತ್‌ನ ಮಹಿಳಾ ಘಟಕದ ಅಧ್ಯಕ್ಷೆ ಡಾ.ರತ್ನ ಹಾಲಪ್ಪಗೌಡ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮೈಸೂರು ಮಿತ್ರ

ಮಂಗಳವಾರ 11 ಮಾರ್ಚ್ 2025

ಕೆ.ಬೆಟ್ಟಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ

ಎಲ್ಲಾ 12 ಸ್ಥಾನಗಳಲ್ಲೂ ಜೆಡಿಎಸ್ ಜಯಭೇರಿ

ಪಾಂಡವಪುರ: ತಾಲೂಕಿನ ಕೆ.ಬೆಟ್ಟಹಳ್ಳಿ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನಿರ್ದೇಶಕರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ 12ಕ್ಕೆ 12 ಸ್ಥಾನಗಳಲ್ಲೂ ಜೆಡಿಎಸ್ ಬೆಂಬಲಿತ ನಿರ್ದೇಶಕರು ಭರ್ಜರಿ ಗೆಲುವು ಸಾಧಿಸಿದ್ದು, ರೈತಸಂಘ-ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ಸೋಲುವ ಮೂಲಕ ತೀವ್ರ ಮುಖಭಂಗ ಅನುಭವಿಸಿದ್ದಾರೆ.


ಸಹಕಾರ ಸಂಘದ 12 ನಿರ್ದೇಶಕ ಸ್ಥಾನಕ್ಕೆ ಭಾನುವಾರ ಚುನಾವಣೆ ನಡೆಯಿತು. ಚುನಾವಣೆಯಲ್ಲಿ ಎರಡೂ ಪಕ್ಷದ ಅಭ್ಯರ್ಥಿಗಳು ಗೆಲುವಿಗಾಗಿ ಸೆಣಸಾಟ ನಡೆಸಿದರು. ಅಂತಿಮವಾಗಿ ಮತದಾರರು ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಮೂಲಕ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರ ಕೈ ಬಲಪಡಿಸಿದರು. ಚುನಾವಣೆಯಲ್ಲಿ ರೈತ ಸಂಘ-ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳ ಸೋಲು ಹಾಲಿ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರಿಗೆ ಮುಖಭಂಗ ಮಾಡಿದಂತಾಗಿದೆ.

ಸಾಲಗಾರ ಕ್ಷೇತ್ರದ ಸಾಮಾನ್ಯ ಕ್ಷೇತ್ರದಿಂದ ಶ್ಯಾದನಹಳ್ಳಿ ಪಿ.ಚಲುವರಾಜು, ವಡ್ಡರಹಳ್ಳಿ ವಿ.ಎಸ್.ನಿಂಗೇಗೌಡ, ಹುಲ್ಕೆರೆಕೊಪ್ಪಲು ಎಚ್.ಆರ್.ಮಧುಸೂದನ್, ಡಾಮಡಹಳ್ಳಿ ಡಿ.ಜೆ.ಮಹೇಶ್, ಕೆ.ಬೆಟ್ಟಹಳ್ಳಿ ಕೆ.ಎಸ್.ಮನೋಹರ್, ಮಹಿಳಾ ಮೀಸಲು ಕ್ಷೇತ್ರದಿಂದ ನಂಜಾಮಣಿ, ಸಾವಿತ್ರಮ್ಮ, ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಿಂದ ನರಸಿಂಹನಾಯಕ, ಪರಿಶಿಷ್ಟ ಜಾತಿ ಕ್ಷೇತ್ರದಿಂದ ಎ.ಅಂಕಯ್ಯ, ಹಿಂದುಳಿದ ವರ್ಗಗಳ ಬಿ ಮೀಸಲು ಕ್ಷೇತ್ರದಿಂದ ಶಂಭೂನಹಳ್ಳಿ ಗುರುಸ್ವಾಮಿ, ಹಿಂದುಳಿದ ವರ್ಗ ಪ್ರವರ್ಗ ಎ ಮೀಸಲು ಕ್ಷೇತ್ರ ಬಿ.ಎಸ್.ವಿಜೇಂದ್ರಕುಮಾರ್, ಸಾಲಗಾರರಲ್ಲದ ಸಾಮಾನ್ಯ ಕ್ಷೇತ್ರದಿಂದ ಕೆ.ಬೆಟ್ಟಹಳ್ಳಿ ಎನ್.ಸುಪ್ರೀತ್‌ಗೌಡ ಅವರು ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸುವ ಮೂಲಕ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಆರ್.ನಿರ್ಮಲ ಘೋಷಿಸಿದರು. ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳು ಆಯ್ಕೆಯಾಗುತ್ತಿದ್ದಂತೆಯೇ ಬೆಂಬಲಿಗರು ಪಟಾಕಿಸಿಡಿಸಿ ಸಂಭ್ರಮಿಸಿದರು.

ಸಿಎಸ್‌ಪಿಯಿಂದ ಅಭಿನಂದನೆ: ಕೆ.ಬೆಟ್ಟಹಳ್ಳಿ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನಿರ್ದೇಶಕರಾಗಿ ಆಯ್ಕೆಯಾದ ಎಲ್ಲಾ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಗ್ರಾಮದ ಶ್ರೀಲಕ್ಷ್ಮೀ ದೇವಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ನಂತರ ಎಲ್ಲಾ ನಿರ್ದೇಶಕರನ್ನು ಅಭಿನಂದಿಸಿದರು.

ಸಿ.ಎಸ್.ಪುಟ್ಟರಾಜು ಮಾತನಾಡಿ, ಕೆ.ಬೆಟ್ಟಹಳ್ಳಿ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘ ಜಿಲ್ಲೆಗೆ ಮಾದರಿಯಾಗಿದ್ದು, ರಾಜ್ಯಕ್ಕೆ ಒಂದು ಸಂದೇಶ ಕೊಟ್ಟಂತಹ ಸಹಕಾರ ಸಂಘವಾಗಿದೆ ಸಂಘದಲ್ಲಿ ಸಹಕಾರಿ ಕ್ಷೇತ್ರದಲ್ಲಿ ಹೆಸರುಗಳಿಸಿದ ಸದಸ್ಯರಿದ್ದಾರೆ. ಯಾವುದೇ ಒಬ್ಬ ವ್ಯಕ್ತಿಗೆ ಸೋಲು ಖಚಿತ ಎಂಬುದು ತಿಳಿದ ಮೇಲೆ ಕೊನೆಯ ಅಸ್ತ್ರವಾಗಿ ಅಪಪ್ರಚಾರಗಳನ್ನು ಮಾಡುತ್ತಾರೆ. ಅದೇ ರೀತಿ ವಿರೋಧಿಗಳು ಸಾಕಷ್ಟು ಅಪಪ್ರಚಾರ ನಡೆಸಿದರು. ಆದರೂ ಸಹ ಚುನಾವಣೆಯಲ್ಲಿ ಎಲ್ಲಾ ಷೇರುದಾರ ರೈತರು ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ವಿರೋಧಿಗಳಿಗೆ ತಕ್ಕ ಉತ್ತರ ನೀಡಿದ್ದಾರೆ ಎಂದರು.

ಸಂದರ್ಭದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಪಿ.ಚಲುವರಾಜು, ಗುರುಸ್ವಾಮಿ, ನಿರ್ದೇಶಕರಾದ ವಿ.ಎಸ್.ನಿಂಗೇಗೌಡ, ಎಚ್.ಆರ್.ಮಧುಸೂದನ್, ಮನೋಹರ್, ಡಿ.ಜೆ.ಮಹೇಶ್, ನಂಜಾಮಣಿ, ಸಾವಿತ್ರಮ್ಮ, ನರಸಿಂಹನಾಯಕ, ಎ.ಅಂಕಯ್ಯ, ಬಿ.ಎಸ್.ವಿಜೇಂದ್ರಕುಮಾರ್, ಎನ್.ಸುಪ್ರೀತ್‌ಗೌಡ ಮುಖಂಡರಾದ ದ್ಯಾವಪ್ಪ, ನಾರಾಯಣ, ಸ್ವಾಮಿ ಗ್ರಾಮಸ್ಥರು, ಮುಖಂಡರು ಹಾಜರಿದ್ದರು.



ನಿರ್ದೇಶಕ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಆಯ್ಕೆಯಾದ ಎಲ್ಲಾ ಜೆಡಿಎಸ್ ಬೆಂಬಲಿತ ನಿರ್ದೇಶಕರನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅಭಿನಂದಿಸಿದರು.

ಹೆಣ್ಣು ಭ್ರೂಣ ಹತ್ಯೆ ತಡೆಯುವುದು ಪ್ರತಿಯೊಬ್ಬ ಮಹಿಳೆಯ ಕರ್ತವ್ಯ: ಸುನಂದ ಜಯರಾಂ

ಮಂಡ್ಯ: ಜಿಲ್ಲೆಯಲ್ಲಿ ಹೆಣ್ಣು ಭ್ರೂಣ ಹತ್ಯೆಯಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬ ಮಹಿಳೆಯರ ಕರ್ತವ್ಯವಾಗಿದೆ ಎಂದು ರೈತ ನಾಯಕಿ ಸುನಂದ ಜಯರಾಂ ಅವರು ತಿಳಿಸಿದರು.

ಕರ್ನಾಟಕ ಸಂಘದ ಆವರಣದಲ್ಲಿ ಮಂಗಲ ಟಿ.ತಿಮ್ಮೇಗೌಡ ಪ್ರತಿಷ್ಠಾನ ಹಾಗೂ ಕನ್ನಿಕ ಶಿಲ್ಪ ನವೋದಯ ಎಜುಕೇಷನ್ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಹಿಳಾ ಸಾಧಕರಿಗೆ ಸನ್ಮಾನ ಹಾಗೂ ಹೆಚ್.ಆರ್.ಕನ್ನಿಕ ಅವರ ಬದುಕ ಶುಭದೋಸಗೆ ಕೃತಿ ಲೋಕಾರ್ಪಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಂಡ್ಯ ಜಿಲ್ಲೆಯಲ್ಲಿ ದೊಡ್ಡ ಸಾಮಾಜಿಕ ಪಿಡುಗಾಗಿರುವ ಹೆಣ್ಣು ಭ್ರೂಣ ಹತ್ಯೆಯಾಗದಂತೆ ನೋಡಿಕೊಳ್ಳಲು ಪ್ರತಿಯೊಬ್ಬರು ಕೈಜೋಡಿಸಬೇಕು. ಮಹಿಳೆಯರಿಗೆ ನೀಡಲಾಗುತ್ತಿದ್ದ ವೇತನ ತಾರತಮ್ಯದ ಬಗ್ಗೆ ದನಿಯೆತ್ತಿ ಹೋರಾಟ ನಡೆಸಿದ ಹಿನ್ನೆಲೆಯಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನವನ್ನು ಮಾ.8ರಂದು ಆಚರಿಸಲಾಗುತ್ತಿದೆ ಎಂದರು.

ಮಹಿಳೆಯರು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ರೂಢಿಸಿಕೊಳ್ಳಬೇಕು. ಮಹಿಳೆಯರು ತಮ್ಮ ವಿರುದ್ಧ ಅನ್ಯಾಯವಾದಾಗ ದನಿಯೆತ್ತಲೇಬೇಕು ಹಾಗೂ ಸಂಘಟಿತರಾಗಬೇಕು ಎಂದು ಕರೆ ನೀಡಿದರು.

ಮಹಿಳೆಯರಿಗೆ ಸಮಾನ ಅವಕಾಶ ಹಾಗೂ ರಕ್ಷಣೆಯನ್ನು ಸಂವಿಧಾನ ನೀಡಿದೆ. ಮಹಿಳೆಯರು ಸರಳ ಕಾನೂನುಗಳ ಬಗ್ಗೆ ತಿಳಿದುಕೊಳ್ಳಬೇಕು. ಇದರಿಂದ ಪ್ರತಿಯೊಂದು ಹಂತದಲ್ಲಿ ಮಹಿಳೆಯರು ನಿರ್ಭಯವಾಗಿ ಜೀವನ ನಡೆಸಬಹುದು ಎಂದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಭಾಧ್ಯಕ್ಷೆ ಡಾ.ಮೀರಾ ಶಿವಲಿಂಗಯ್ಯ ಮಾತನಾಡಿ, ಮಹಿಳೆಯರಿಗೆ ಪುರುಷರಿಗಿಂತ ಹೆಚ್ಚಿನ ಕೆಲಸ ಮಾಡುವ ಶಕ್ತಿ ಇದೆ. ಮನೆಯನ್ನು ನಿರ್ವಹಿಸುತ್ತಾಳೆ. ಹೊರಗೆ ಹೋಗಿ ಉದ್ಯೋಗ ಮಾಡುತ್ತಾಳೆ. ಮಹಿಳೆಯರಿಗೆ ಸಮಾನ ಹಕ್ಕು ಹಾಗೂ ಅವಕಾಶ ನೀಡುವ ಕೆಲಸಗಳು ವೇಗವಾಗಿ ನಡೆಯಬೇಕು. ಮಹಿಳಾ ಸಾಧಕಿಯರಿಗೂ ಆದರ್ಶವಾಗಬೇಕು. ಋಗ್ವೇದದಲ್ಲಿ ಕೆಲವು ಭಾಗವನ್ನು ಮಹಿಳೆಯರು ಬರೆದಿರುವ ನಿದರ್ಶನಗಳಿವೆ ಎಂದು ಹೇಳಿದರು.

ಪಿ.ಇ.ಎಸ್ ಪದವಿಪೂರ್ವ ಕಾಲೇಜಿನ ಉಪನ್ಯಾಸಕಿ ಡಾ.ಎಂ.ಎಸ್.ಅನಿತಾ ಮಂಗಲ, ಹೆಚ್.ಆರ್.ಕನ್ನಿಕ ಅವರ ರಚಿತ ಕೃತಿ ಬದುಕ ಶುಭದೋಸಗೆಯನ್ನು ಲೋಕಾರ್ಪಣೆ ಮಾಡಿ ಕೃತಿಯ ಪರಿಚಯ ಮಾಡಿಕೊಟ್ಟರು.

ಕಾರ್ಯಕ್ರಮದಲ್ಲಿ ಸಮಗ್ರ ಶಿಕ್ಷಣ ಉಪಯೋಜನಾ ಸಮನ್ವಯಾಧಿಕಾರಿ ಟಿ.ಲಕ್ಷ್ಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲ, ಕನ್ನಿಕಾ ಶಿಲ್ಪ ನವೋದಯ ಟ್ರಸ್ಟ್‌ನ ಉಪಾಧ್ಯಕ್ಷೆ ಎಲ್.ಕಮಲ, ರಾಷ್ಟ್ರ ಪ್ರಶಸ್ತಿ ಪುರಸ್ಕೃತೆ ಅನುಪಮ, ಮಂಗಲ ಜಿ.ತಿಮ್ಮೇಗೌಡ ಪ್ರತಿಷ್ಠಾನದ ಅಧ್ಯಕ್ಷ ಎ.ಸಿ.ರಮೇಶ್, ಕಾರ್ಯದರ್ಶಿ ಕೆಎಂ. ಕೃಷ್ಣೇಗೌಡ ಸೇರಿದಂತೆ ಇತರರಿದ್ದರು.



ಕಾರ್ಯಕ್ರಮದಲ್ಲಿ ಮಹಿಳಾ ಸಾಧಕಿಯರನ್ನು ಗೌರವಿಸಲಾಯಿತು.

ಮಂಡ್ಯ ವಿವಿಗಿಂತ ಮೈಸೂರು ವಿವಿ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಸಾಧ್ಯ

ವಿಧಾನಪರಿಷತ್ ಮಾಜಿ ಉಪ ಸಭಾಪತಿ ಮರಿತಿಬ್ಬೇಗೌಡ



ಮಂಡ್ಯ,ಮಾ.10- ವಿಶ್ವದಲ್ಲೇ ಮೈಸೂರು ವಿಶ್ವವಿದ್ಯಾನಿಲಯಕ್ಕೆ ತನ್ನದೇ ಆದ ಹೆಸರಿದ್ದು, ಮಂಡ್ಯ ಭಾಗದ ವಿದ್ಯಾರ್ಥಿಗಳು ಮೈಸೂರು ವಿವಿ ಅಡಿಯಲ್ಲೇ ಉತ್ತಮ ಶಿಕ್ಷಣ ಪಡೆಯಲು ಸಾಧ್ಯವಿದ್ದು, ಯಾವುದೇ ರೀತಿಯ ಸೌಲಭ್ಯವಿಲ್ಲದ ಮಂಡ್ಯ ವಿವಿಗಿಂತ ಮೈಸೂರು ವಿವಿಯೇ ವಿದ್ಯಾರ್ಥಿಗಳಿಗೆ ಸೂಕ್ತ ಎಂದು ವಿಧಾನಪರಿಷತ್ ಮಾಜಿ ಉಪಸಭಾಪತಿ ಮರಿತಿಬ್ಬೇಗೌಡ ಅಭಿಪ್ರಾಯಿಸಿದರು.

ಸೋಮವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಹಿಂದಿನ ಸರ್ಕಾರ ಮನಬಂದಂತೆ ರಾಜ್ಯದಲ್ಲಿ ವಿಶ್ವವಿದ್ಯಾನಿಲಯಗಳನ್ನು ಸ್ಥಾಪಿಸಿದೆ. ಆದರೆ ಅದಕ್ಕೆ ಮೂಲಸೌಕರ್ಯಗಳನ್ನು ಒದಗಿಸಿಲ್ಲ. ಕನಿಷ್ಟ ಪಕ್ಷ ಒಂದು ವಿವಿ ಸ್ಥಾಪನೆಗೆ 500 ಕೋಟಿ ಹಣ, 50 ಎಕರೆ ಜಾಗಬೇಕು. ಆದರೆ ಹಿಂದಿನ ಸರ್ಕಾರ ಆರಂಭದಲ್ಲಿ 2 ಕೋಟಿ ಘೋಷಿಸಿ, ಕೇವಲ 10 ಲಕ್ಷ ನೀಡಿದರೆ ವಿವಿ ತೆರೆಯಲು ಆಗುತ್ತಾ ಎಂದು ಪ್ರಶ್ನಿಸಿದರು.

ನಾಯಿಕೊಡೆಯಂತೆ ವಿವಿಗಳನ್ನು ಸ್ಥಾಪಿಸುವ ಬದಲು, ಮೈಸೂರು, ಬೆಂಗಳೂರು, ಧಾರವಾಡ, ದಾವಣಗೆರೆ, ಮಂಗಳೂರು, ಹಂಪಿ ವಿವಿಗಳನ್ನು ಉತ್ತಮ ರೀತಿ ಅಭಿವೃದ್ಧಿಪಡಿಸಿ, ಹೆಚ್ಚಿನ ಉಪನ್ಯಾಸಕರು ಹಾಗೂ ಮೂಲ ಸೌಕರ್ಯ ಒದಗಿಸಿದರೆ, ವಿದ್ಯಾರ್ಥಿಗಳಿಗೆ ಅಲ್ಲಿಂದ ಶಿಕ್ಷಣ ಪಡೆಯುತ್ತಾರೆ. ಜೊತೆಗೆ ಉತ್ತಮ ವಿವಿಗಳಲ್ಲಿ ಓದಿದೆ ಎಂಬ ಕೀರ್ತಿ ಸಹ ಅವರಿಗೆ ಸಿಕ್ಕಿ ಮುಂದೆ ಉದ್ಯೋಗ ಅಥವಾ ಉನ್ನತ ಶಿಕ್ಷಣಕ್ಕೆ ಸಹಕಾರಿಯಾಗುತ್ತದೆ ಎಂದು ಹೇಳಿದರು.

ಮೈಸೂರು ವಿವಿಗೆ ತನ್ನದೇ ಆದ ಇತಿಹಾಸವಿದೆ. ಒಬ್ಬ ವಿದ್ಯಾರ್ಥಿಗೆ ತನಗೆ ಮೈಸೂರು ವಿವಿ ಬೇಕೋ, ಮಂಡ್ಯ ವಿವಿ ಬೇಕೋ ಎಂದರೆ ಆತ ಶಿಕ್ಷಣಕ್ಕೆ ಮೈಸೂರು ವಿವಿ ಬೇಕು ಅಂತಾನೆ. ಹೀಗಾದರೆ ಮಂಡ್ಯ ವಿವಿ ಬೆಳೆಯುವುದಾದರೂ ಹೇಗೆ? ಅದೇ ಹೀಗಿರುವ ವಿವಿಯನ್ನು ಮೈಸೂರು ವಿವಿ ಜೊತೆಗೆ ವಿಲೀನ ಮಾಡಿ, ಉಪನ್ಯಾಸಕರನ್ನು ಉತ್ತಮ ರೀತಿಯಲ್ಲಿ ಒದಗಿಸಿದರೆ ಮೈಸೂರು ವಿವಿಯ ಸುಪರ್ದಿಗೆ ಬರುವ ಮಂಡ್ಯ ಕಾಲೇಜಿಗೂ ನೂರಾರು ವಿದ್ಯಾರ್ಥಿಗಳು ಸೇರ್ಪಡೆಯಾಗುತ್ತಾರೆ ಎಂದು ಸಲಹೆ ನೀಡಿದರು.

ಸರ್ಕಾರ ಈ ಕೂಡಲೇ ವಿವಿಗಳಲ್ಲಿ ಸೂಕ್ತ ಅಧ್ಯಾಪಕರ ನೇಮಕಕ್ಕೆ ಮುಂದಾಗಬೇಕು. ಕೆಲವೆಡೆ ಸಮರ್ಪಕ ವೇತನ ನೀಡುತ್ತಿಲ್ಲ. ಈ ನಿಟ್ಟಿನಲ್ಲಿ ವೇತನ ನೀಡಲು ಮುಂದಾಗಬೇಕು. ರಾಜಕೀಯ ಹಿತಾಸಕ್ತಿಯನ್ನು ವಿದ್ಯಾರ್ಥಿಗಳ ಮೇಲೆ ಏರಬಾರದೆಂದು ಒತ್ತಾಯಿಸಿದರು.

ಗೋಷ್ಠಿಯಲ್ಲಿ ಮಂಗಳೂರು ವಿವಿ ವಿಶ್ರಾಂತ ಜಂಟಿ ನಿರ್ದೇಶಕ ಡಾ.ಎಂ.ರಾಮೇಗೌಡ, ವಿಶ್ರಾಂತ ಪ್ರಾಂಶುಪಾಲರಾದ ಪ್ರೊ.ಎಸ್.ರಾಮು, ನಾಗಾನಂದ್, ಕೀಲಾರ ಜಯರಾಮು, ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಶಂಕರೇಗೌಡ ಉಪಸ್ಥಿತರಿದ್ದರು.

ನಾಗಮಂಗಲದಲ್ಲಿ ರಾಷ್ಟ್ರೀಯ ಲೋಕ ಅದಾಲತ್

ರಾಜಿ ಸಂಧಾನದ ಮೂಲಕ 293 ಪ್ರಕರಣಗಳು ಇತ್ಯರ್ಥ

ನಾಗಮಂಗಲ: ಕ್ಷುಲ್ಲಕ ಕಾರಣಕ್ಕೆ ಅಥವಾ ಅಣ್ಣ-ತಮ್ಮಂದಿರು ಸೇರಿದಂತೆ ಇತರರು ತಮ್ಮ ವೈಮನಸ್ಸಿನಿಂದ ನ್ಯಾಯಾಲಯದಲ್ಲಿ ದಾವೆಯನ್ನು ಹೂಡಿರುತ್ತಾರೆ, ಇಂತಹ ಕೆಲವೊಂದು ರಾಜಿಯಾಗಬಲ್ಲ ಪ್ರಕರಣಗಳನ್ನು ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಇತ್ಯರ್ಥಪಡಿಸಿಕೊಳ್ಳಲಿ ಎಂದು ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ಯೋಗೇಶ್ ತಿಳಿಸಿದರು.

ಪಟ್ಟಣದ ನಾಲ್ಕು ವಿಭಾಗಗಳ ನ್ಯಾಯಾಲಯಗಳಲ್ಲಿ ಲೋಕ ಅದಾಲತ್‌ನಲ್ಲಿ ಇತ್ಯರ್ಥಕ್ಕೆ ಬಾಕಿ ಇದ್ದ ವಿವಿಧ ವ್ಯಾಜ್ಯಗಳಿಗೆ ಸಂಬಂಧಿಸಿದಂತೆ 1.75 ಕೋಟಿ ರೂಗಳಿಗೂ ಅಧಿಕ ಮೌಲ್ಯದ 293 ಪ್ರಕರಣಗಳನ್ನು ನ್ಯಾಯಾಧೀಶರು ರಾಜಿ ಸಂಧಾನದ ಮೂಲಕ ಇತ್ಯರ್ಥಗೊಳಿಸಿದರು.

ಅಪಾರ ಹಿರಿಯ ಶ್ರೇಣಿಯ ನ್ಯಾಯಾಲಯದಲ್ಲಿ 2025ರ ಮಾರ್ಚ್ ತಿಂಗಳ ಅಂತ್ಯಕ್ಕೆ ಇತ್ಯರ್ಥಕ್ಕೆ ಬಾಕಿ ಇರುವ 1445 ಪ್ರಕರಣಗಳ ಪೈಕಿ 173 ಪ್ರಕರಣಗಳನ್ನು ರಾಜಿ ಸಂಧಾನಕ್ಕೆ ಕೈಗೆತ್ತಿಕೊಳ್ಳಲಾಗಿತ್ತು. ಇದರಲ್ಲಿ 4230596 ಆರ್ಥಿಕ ಮೌಲ್ಯವುಳ್ಳ 45 ಪ್ರಕರಣಗಳು ಇತ್ಯರ್ಥಗೊಂಡವು. ಪ್ರಧಾನ ಸಿವಿಲ್ ನ್ಯಾಯಾಧೀಶರಲ್ಲಿ 2025 ಮಾರ್ಚ್ ತಿಂಗಳ ಅಂತ್ಯಕ್ಕೆ ಬಾಕಿ ಇರುವ 2271 ಪ್ರಕರಣಗಳ ಪೈಕಿ 181 ಪ್ರಕರಣಗಳು ರಾಜಿ ಸಂಧಾನಕ್ಕೆ ಕೈಗೆತ್ತಿಕೊಳ್ಳಲಾಗಿದ್ದು ಇದರಲ್ಲಿ 39.30 ಲಕ್ಷ ಆರ್ಥಿಕ ಮೌಲ್ಯವುಳ್ಳ 27 ಪ್ರಕರಣಗಳು ಇತ್ಯಾದಿಗೊಂಡವು.

ಹಿರಿಯ ಶ್ರೇಣಿಯ ನ್ಯಾಯಾಲಯದಲ್ಲಿ 2025 ಮಾರ್ಚ್ ಅಂತ್ಯಕ್ಕೆ ಬಾಕಿ ಇರುವ 2261 ಪ್ರಕರಣಗಳ ಪೈಕಿ 235 ಪ್ರಕರಣಗಳು ಲೋಕ ಅದಾಲತ್‌ನಲ್ಲಿ ರಾಜಿ ಸಂಧಾನಕ್ಕೆ ಕೈಗೆತ್ತಿಕೊಂಡಿದ್ದು ಈ ಪೈಕಿ 75.38 ಲಕ್ಷ ರೂ. ಆರ್ಥಿಕ ಮೌಲ್ಯವುಳ್ಳ 121 ಪ್ರಕರಣಗಳು ಎರಡು ಕಡೆಯ ಕಕ್ಷಿದಾರರು ಮತ್ತು ವಕೀಲರ ಸಮಕ್ಷಮದಲ್ಲಿ ಇತ್ಯರ್ಥಗೊಂಡವು.

ಬ್ಯಾಂಕ್ ಸೇರಿದಂತೆ ವಿವಿಧ ಇಲಾಖೆಗೆ ಸಂಬಂಧಿಸಿದ 11806 ಪ್ರಕರಣ ರಾಜಿ ಸಂಧಾನಕ್ಕೆ ಕೈಗೆತ್ತಿಕೊಂಡಿದ್ದು 37.69. 494 ರೂ ಆರ್ಥಿಕ ಮೌಲ್ಯವುಳ್ಳ 11167 ಪ್ರಕರಣಗಳು ಇತ್ಯರ್ಥಗೊಂಡವು.

ಈ ವೇಳೆ ಹಿರಿಯ ಶ್ರೇಣಿಯ ನ್ಯಾಯಾಧೀಶ ಯೋಗೇಶ್ ಮಾತನಾಡಿ, ಕಾನೂನಿನ ಅರಿವಿನ ಕೊರತೆಯಿಂದಾಗಿ ಗ್ರಾಮೀಣ ಪ್ರದೇಶದ ಜನರು ರಾಜಿಯಾಗಬಲ್ಲ ಅಪರಾಧಿಕ ಪ್ರಕರಣ, ಬ್ಯಾಂಕ್ ವಸೂಲಾತಿ, ಕೈಗಾರಿಕಾ ಕಾರ್ಮಿಕರ ಪ್ರಕರಣಕ್ಕೆ ಸಂಬಂಧಿಸಿದ ಕ್ಲೈಂಗಳು ಉದ್ಯೋಗದಲ್ಲಿ ಪುನರ್ ಸ್ಥಾಪಿಸುವ ಪ್ರಕರಣ, ವೈವಾಹಿಕ ಕುಟುಂಬದ ನ್ಯಾಯಾಲಯದ ಪ್ರಕರಣಗಳು, ಸಾಲ ವಸತಿ ಪ್ರಕರಣಗಳು, ಅಪಘಾತ ಪ್ರಕರಣಗಳು, ಕಾರ್ಮಿಕ ವಿವಾದಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು, ರಾಜಿಯಾಗಬಲ್ಲ ಸಿವಿಲ್ ಪ್ರಕರಣಗಳನ್ನು ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದು ಎಂದು ಹೇಳಿದರು.

ಕಳೆದ 2005ರಲ್ಲಿ ಮಂಡ್ಯದ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣ ನಾಗಮಂಗಲದ ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಲಯಕ್ಕೆ ವರ್ಗಾವಣೆಯಾಗಿತ್ತು, 23 ವರ್ಷಗಳ ಹಿಂದಿನ ಈ ಪ್ರಕರಣವನ್ನು ಎರಡು ಕಡೆಯ ಕಕ್ಷಿದಾರರು ಮತ್ತು ವಕೀಲರ ಸಮಕ್ಷಮದಲ್ಲಿ ನ್ಯಾಯಾಧೀಶ ಎಂ ನರಸಿಂಹಮೂರ್ತಿ ಅವರು ಇತ್ಯರ್ಥಪಡಿಸಿದರು.

ಇಂದು ವಿದ್ಯುತ್ ವ್ಯತ್ಯಯ

ಶ್ರೀರಂಗಪಟ್ಟಣ: ತಾಲೂಕಿನ ಬೆಳಗೊಳ ಶಾಖೆಯ ವಿದ್ಯುತ್ ಉಪ ವಿತರಣಾ ಕೇಂದ್ರದ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ಮಾ.11 ರಂದು ಬೆಳಗ್ಗೆ 10 ಗಂಟೆಯಿಂದ 6 ಗಂಟೆವರೆಗೆ ಬೆಳಗೊಳ ವಿದ್ಯುತ್ ವಿತರಣಾ ಕೇಂದ್ರದ ಬೆಳಗೊಳ, ಕೆ.ಆರ್.ಸಾಗರ, ಹೊಸ ಆನಂದೂರು, ಮೊಗರಹಳ್ಳಿ, ಕಾರೇಕುರ, ಕುಪ್ಪೆದಡ, ಕೆಐಡಿಬಿ ಇಂಡಸ್ಟ್ರಿಯಲ್, ಹೊಂಗಹಳ್ಳಿ ವಾಟರ್ ಸಪ್ಲೈ, ಅನಗಹಳ್ಳಿ, ಹೊಸ ಉಂಡವಾಡಿ, ಮಜ್ಜಿಗೆಪುರ, ಎಂಎಂಜಿ ಲೇಔಟ್, ಹುಲಿಕೆರೆ, ಹೊಸಹಳ್ಳಿ, ಪಾಲಹಳ್ಳಿ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸಹಕರಿಸುವಂತೆ ಪ್ರಕಟಣೆಯಲ್ಲಿ ಕೋರಿದ್ದಾರೆ.

ಮೂರನೇ ಪುಟದಿಂದ

ಮಾಹಿತಿ ಕೇಳಿದ ಕಾಂಗ್ರೆಸ್ ವರಿಷ್ಠರು!

ತಂದೆ ಪೊಲೀಸ್ ಮಹಾನಿರ್ದೇಶಕರಾಗಿದ್ದಾರೆ. ಹಾಗಾಗಿ ಅವರು ಪೊಲೀಸ್ ವಾಹನದಲ್ಲಿ ಹೋಗಿ ಬರುತ್ತಿದ್ದರೆಂಬ ಮಾಹಿತಿ ಇದೆ, ಆ ಬಗ್ಗೆ ಇಲಾಖೆ ತನಿಖೆ ನಡೆಸುತ್ತದೆ ಎಂದರು. ಇದಕ್ಕೂ ಮುನ್ನ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಹಾಗೂ ಸುನೀಲ್ ಕುಮಾರ್ ವಿಷಯ ಪ್ರಸ್ತಾಪಿಸಿ, ಚಿತ್ರನಟಿ ರನ್ಯಾ ರಾವ್ ದುಬೈನಿಂದ ಚಿನ್ನ ಕಳ್ಳಸಾಗಾಣಿಕೆಯಲ್ಲಿ ಸಿಕ್ಕಿ ಬಿದ್ದಿದ್ದಾರೆ. ನಮ್ಮ ದೇಶದ ಬೇರೆ ರಾಜ್ಯಗಳಿಗೂ ಕಳ್ಳಸಾಗಾಣಿಕೆಗೆ ಬೆಂಗಳೂರು ಕೇಂದ್ರ ಸ್ಥಾನವಾಗಿದೆಯೇ ಎಂಬ ಅನುಮಾನ ಬರುತ್ತಿದೆ. ಈಕೆಗೆ ಪೊಲೀಸರ ಪ್ರೋಟೋಕಾಲ್ ನೀಡಿದವರು ಯಾರು ಎಂದು ಪ್ರಶ್ನಿಸಿದರು. ಆರೋಪಿ ಜೊತೆಗೆ ಸಚಿವರ ಸಂಪರ್ಕ ಇರುವ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿದೆ. ಸರ್ಕಾರ ಚಿನ್ನ ಕಳ್ಳಸಾಗಾಣಿಕೆಯಲ್ಲಿ ಭಾಗಿಯಾಗಿದೆಯೇ ಎಂದು ಖಾರವಾಗಿ ಪ್ರಶ್ನಿಸಿದರು. ರನ್ಯಾ ಅವರ ತಂದೆ ಪೊಲೀಸ್ ಮಹಾನಿರ್ದೇಶಕರಾಗಿದ್ದಾರೆ. ಹಾಗಾಗಿ ಪೊಲೀಸ್ ವಾಹನದಲ್ಲಿ ಹೋಗಿ, ಬರುತ್ತಿದ್ದರು ಎಂಬ ಮಾಹಿತಿ ಇದೆ. ಅದೂ ತನಿಖೆಯಾಗಲಿ, ಸಚಿವರ ಕೈವಾಡದ ಬಗ್ಗೆಯೂ ಸಿಬಿಐ ತನಿಖೆ ಮಾಡಲಿ, ವರದಿಯಲ್ಲಿ ಸತ್ಯಾಂಶ ಕಂಡು ಬಂದರೆ ಮುಂದೆ ಏನಾಗಲಿದೆ ಎಂದು ಎಲ್ಲರಿಗೂ ಗೊತ್ತಿದೆ ಎಂದರು. ಗೃಹ ಸಚಿವರು ಮಾಹಿತಿ ಇಲ್ಲ ಎಂದು ಅಸಹಾಯ ಕತೆ ವ್ಯಕ್ತಪಡಿಸುವುದು ಸರಿಯಲ್ಲ. ಅಷ್ಟು ದೊಡ್ಡ ಪ್ರಮಾಣದ ಅಪರಾಧದ ಬಗ್ಗೆ ವಿಷಯವೇ ಗೊತ್ತಿಲ್ಲ ಎಂದರೆ ಇದನ್ನು ಒಪ್ಪಲು ಸಾಧ್ಯವಿಲ್ಲ. ಆಕೆ ಪೊಲೀಸರ ವಾಹನ ಬಳಸುತ್ತಿದರೂ ಅದರ ಕುರಿತು ತನಿಖೆಯನ್ನೂ, ರಾಜ್ಯ ಸರ್ಕಾರ ಸಿಬಿಐಗೆ ಒಪ್ಪಿಸಬೇಕು. ಹಿರಿಯ ಅಧಿಕಾರಿ ಹಾಗೂ ಸಚಿವರ ಹೆಸರು ಕೇಳಿ ಬಂದಿರುವುದರಿಂದ ಕೇಂದ್ರ ತನಿಖಾ ಸಂಸ್ಥೆಗಳೇ ತನಿಖೆ ನಡೆಸುವುದು ಸೂಕ್ತ ಎಂದರು.

ತರುಣ್ ರಾಜು ಬಂಧನ

ಅಕ್ರಮ ಸಾಗಾಣೆ ಮಾಡಲಾಗಿದೆ ಎಂದು ಕೋರ್ಟ್‌ಗೆ ಡಿಆರ್‌ಐ ಮಾಹಿತಿ ನೀಡಿದೆ. ನಟಿ ರನ್ಯಾ ರಾವ್ ಅವರು ಮೂರ್ನಾಲ್ಕು ದಿನಗಳಿಂದ ಪೊಲೀಸರ ವಶದಲ್ಲಿದ್ದು ತನಿಖೆ ವೇಳೆ ನನಗೇನೂ ಗೊತ್ತಿಲ್ಲ ಎಂದು ಕಣ್ಣೀರು ಹಾಕುತ್ತಿದ್ದಾರೆ ಎನ್ನಲಾಗಿದೆ. ನನ್ನನ್ನು ಟ್ರ್ಯಾಪ್ ಮಾಡಲಾಗಿದೆ. ನನ್ನದೇನೂ ತಪ್ಪಿಲ್ಲ. ಹಿಂದೆ ಯಾವತ್ತೂ ಹೀಗೆ ಮಾಡಿಲ್ಲ ಎಂದಷ್ಟೇ ತನಿಖಾಧಿಕಾರಿಗಳ ಪ್ರಶ್ನೆಗಳಿಗೆ ರನ್ಯಾ ಉತ್ತರ ನೀಡಿದ್ದಾರಂತೆ.

ದೆಹಲಿ ಪ್ರಕರಣಕ್ಕೆ ನಂಟು: ರನ್ಯಾ ಬಂಧನದ ಬೆನ್ನಲ್ಲೇ ಚಿನ್ನ ಕಳ್ಳಸಾಗಣೆ ಮತ್ತೆರಡು ಪ್ರಕರಣಗಳು ಪತ್ತೆಯಾಗಿವೆ. ನವದೆಹಲಿ ವಿಮಾನ ನಿಲ್ದಾಣದಲ್ಲಿ ಮೂರು ಮಂದಿ ಚಿನ್ನ ಕಳ್ಳ ಸಾಗಾಣೆ ಮಾಡುವ ಯತ್ನದಲ್ಲಿ ಸಿಕ್ಕಿಬಿದ್ದಿದ್ದರು. ಆ ಆರೋಪಿಗಳಿಗೂ ರನ್ಯಾಗೂ ಸಂಬಂಧ ಇದೆಯೇ ಎಂಬ ಆಯಾಮದಲ್ಲಿ ಡಿಆರ್‌ಐ ಅಧಿಕಾರಿಗಳು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ. ಮೂರೂ ಪ್ರಕರಣಗಳಲ್ಲಿ ಚಿನ್ನದ ಬಿಸ್ಕತ್‌ಗಳನ್ನು ಕಳ್ಳ ಸಾಗಾಣೆ ಮಾಡಲಾಗಿದೆ. ಅಲ್ಲದೆ, ಮೂರೂ ಪ್ರಕರಣಗಳಲ್ಲಿ ವಶಪಡಿಸಿಕೊಂಡಿರುವ ಚಿನ್ನದ ಬಿಸ್ಕತ್‌ಗಳು ಒಂದೇ ಮಾದರಿಯಲ್ಲಿ ಇರುವುದು ತನಿಖಾಧಿಕಾರಿಗಳ ಅನುಮಾನಕ್ಕೆ ಕಾರಣವಾಗಿದೆ.

ರನ್ಯಾ ಸಂಪರ್ಕದಲ್ಲಿದ್ದವರಿಗೆ ನಡುಕ: ರನ್ಯಾ ಜತೆಗೆ ಸಂಪರ್ಕದಲ್ಲಿದ್ದ ವ್ಯಕ್ತಿಗಳ ಬಗ್ಗೆ ಡಿಆರ್‌ಐ ಅಧಿಕಾರಿಗಳು ಹೆಚ್ಚಿನ ಮಾಹಿತಿ ಕಲೆ ಹಾಕಿ ದ್ದಾರೆ. ರನ್ಯಾ ರಾಜಕಾರಣಿಗಳು, ಚಿನ್ನಾಭರಣ ವ್ಯಾಪಾರಿಗಳು, ರಿಯಲ್ ಎಸ್ಟೇಟ್ ಉದ್ಯಮಿಗಳ ಜತೆ ನಂಟು ಹೊಂದಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ದುಬೈನಲ್ಲಿ ಕೆ.ಜಿ. ಗಟ್ಟಲೇ ಚಿನ್ನ ಖರೀದಿಸಲು ಹಣ ಕೊಟ್ಟವರು ಯಾರೆಂದು ರನ್ಯಾ ಅವರು ಈವರೆಗೂ ಬಾಯ್ಬಿಟ್ಟಿಲ್ಲ. ತನ್ನನ್ನು ಪ್ರಕರಣದಲ್ಲಿ ಸಿಲುಕಿಸಲಾಗಿದೆ ಎಂದು ತನಿಖೆಯ ಆರಂಭದಲ್ಲಿ ಹೇಳಿದ್ದ ರನ್ಯಾ, ಟ್ರ್ಯಾಪ್ ಮಾಡಿದವರು ಯಾರೆಂಬ ಬಗ್ಗೆ ಮಾಹಿತಿ ಕೊಟ್ಟಿಲ್ಲ. ಸಿಬಿಐ ಅಧಿಕಾರಿಗಳು ರನ್ಯಾ ಅವರನ್ನು ವಿಚಾರಣೆ ನಡೆಸುವ ಉದ್ದೇಶಕ್ಕೆ ಕಸ್ಟಡಿಗೆ ನೀಡುವಂತೆ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸುವ ಸಾಧ್ಯತೆಯಿದೆ.

ಪಾಲಿಕೆ ಮುನ್ನಲೆಗೆ

ಗಣನೆಗೆ ತೆಗೆದುಕೊಂಡು ಪಾಲಿಕೆಗೆ ಹೊಂದಿಕೊಂಡಂತಿರುವ ನಗರಸಭೆ, ಪಟ್ಟಣ ಪಂಚಾಯ್ತಿ, ಗ್ರಾಮ ಪಂಚಾಯ್ತಿಗಳನ್ನು ವಿಲೀನಗೊಳಿಸಿ ಯೋಜನಾ ಬದ್ಧ ಅಭಿವೃದ್ಧಿಗೆ ಸರ್ಕಾರ ಮುಂದಾಗಿದೆ.

30 ಹಳ್ಳಿಗಳನ್ನು ಸೇರಿಸಿಕೊಂಡು ಯೋಜನಾ ವರದಿ ತಯಾರಿಸಿ, ಪ್ರಸ್ತಾವನೆಯೊಂದಿಗೆ ಸಿದ್ಧರಾಗಿ. ಮುಖ್ಯಮಂತ್ರಿ ಸಿದ್ದರಾಮಯ್ಯರ ಬಳಿಗೆ ತೆರಳಿ ಅಗತ್ಯ ಮಾಹಿತಿಯೊಂದಿಗೆ ವಿವರಿಸಿಸೋಣ. ಬೃಹತ್ ಮೈಸೂರು ಮಹಾನಗರ ಪಾಲಿಕೆ ಮಾಡುವ ಬಗ್ಗೆ ಮನವಿ ಮಾಡಿಕೊಳ್ಳೋಣ ಎಂದು ಬೈರತಿ ಸುರೇಶ್, ಮೈಸೂರಿನ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಮೈಸೂರು ಮಹಾನಗರ ಪಾಲಿಕೆಯ 65 ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟಾರೆ 13.3 ಲಕ್ಷ ಜನಸಂಖ್ಯೆಯು ಸುತ್ತಲಿನ ಸ್ಥಳೀಯ ಸಂಸ್ಥೆಗಳನ್ನು ವಿಲೀನಗೊಳಿಸಿದರೆ ಅದು 16.8 ರಷ್ಟಾಗಲಿದೆ. ವ್ಯಾಪ್ತಿ ವಿಸ್ತಾರವಾದಂತೆ ಪಾಲಿಕೆಗೂ ಹೆಚ್ಚಿನ ಆದಾಯ ಕ್ರೋಢೀಕರಣವಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ, ಸಚಿವರಿಗೆ ನಕ್ಷೆ ಆಧರಿಸಿ ಮಾಹಿತಿ ನೀಡಿದರು. ಮೈಸೂರು ನಗರಕ್ಕೆ ಹೊಂದಿಕೊಂಡಂತಿರುವ ಹಲವು ಖಾಸಗಿ ಬಡಾವಣೆ, ಕಂದಾಯ ಬಡಾವಣೆಗಳಿಗೂ ಪಾಲಿಕೆಯಿಂದಲೇ ಕುಡಿಯುವ ನೀರು, ಸ್ವಚ್ಛತೆ, ಒಳಚರಂಡಿಯಂತಹ ಸೌಲಭ್ಯ ಒದಗಿಸಲಾಗುತ್ತಿದೆ. ಅದಾಗ್ಯೂ ಅಲ್ಲಿನ ನಿವಾಸಿಗಳು ರಸ್ತೆ, ಬೀದಿ ದೀಪ, ಉದ್ಯಾನವನ ಸೇರಿದಂತೆ ಸಮಗ್ರ ಅಭಿವೃದ್ಧಿಗೆ ಒತ್ತಾಯಿಸುತ್ತಿರುವುದರಿಂದ ಸುತ್ತಲಿನ ಗ್ರಾಮಗಳನ್ನು ಸೇರಿಸಿ ಬೃಹತ್ ಮಹಾನಗರ ಮಾಡುವುದು ಒಳಿತು ಎಂದು ಅವರು ಸಚಿವರಿಗೆ ಮಾಹಿತಿ ನೀಡಿದ್ದಾರೆ. ಹೂಟಗಳ್ಳಿ ನಗರಸಭೆ, ಶ್ರೀರಾಂಪುರ, ರಮ್ಮನಹಳ್ಳಿ, ಕಡಕೋಳ ಮತ್ತು ಬೋಗಾದಿ ಪಟ್ಟಣ ಪಂಚಾಯಿತಿ, ಇಲವಾಲ, ಸಿದ್ದಲಿಂಗಪುರ, ಚಾಮುಂಡಿ ಬೆಟ್ಟ, ಆಲನಹಳ್ಳಿ, ಶಾದನಹಳ್ಳಿ ಮತ್ತು ನಾಗನಹಳ್ಳಿ ಗ್ರಾಮ ಪಂಚಾಯಿತಿಗಳು ಮೈಸೂರು ಮಹಾನಗರ ಪಾಲಿಕೆಯ ಸರಹದ್ದಿಗೆ ಹೊಂದಿಕೊಂಡಿವೆ. ಇವುಗಳಲ್ಲಿ ಕೆಲ ಸ್ಥಳೀಯ ಸಂಸ್ಥೆಯ ಕೌನ್ಸಿಲ್ ಸಭೆಯಲ್ಲಿ ಬೃಹತ್ ಮೈಸೂರು ಮಹಾನಗರ ಪಾಲಿಕೆಗೆ ಸೇರುವ ಪ್ರಸ್ತಾವನೆಗೆ ಸರ್ವಾನುಮತದಿಂದ ಒಪ್ಪಿಗೆ ಸೂಚಿಸಲಾಗಿದೆ ಎಂದು ಅಧಿಕಾರಿಗಳು ಸಭೆಗೆ ತಿಳಿಸಿದ್ದಾರೆ.

ಬಾಕಿ ಉಳಿದ ಸ್ಥಳೀಯ ಸಂಸ್ಥೆಯ ಕೌನ್ಸಿಲ್ ಸಭೆಯಲ್ಲಿ ಪ್ರಸ್ತಾವನೆಯನ್ನು ಇರಿಸಿ ಅನುಮೋದನೆಯನ್ನು ಪಡೆದು ಸರ್ಕಾರಕ್ಕೆ ಅದಷ್ಟು ಬೇಗ ಮೈಸೂರು ಮಹಾನಗರ ಪಾಲಿಕೆಯನ್ನು ಮೇಲ್ದರ್ಜೆಗೇರಿಸಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಬೈರತಿ ಸುರೇಶ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್, ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ವ್ಯವಸ್ಥಾಪಕ ನಿರ್ದೇಶಕ ಬಿ. ಶರತ್, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಡಾ॥ ಸೆಲ್ವಮಣಿ, ನಗರಾಭಿವೃದ್ಧಿ ಪ್ರಾಧಿಕಾರಗಳು ಮತ್ತು ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯದ ಆಯುಕ್ತರಾದ ಆರ್. ವೆಂಕಟಾಚಲಪತಿ, ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಎ.ಎನ್. ರಘುನಂದನ್, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರಾದ ಎನ್.ಕೆ. ತಿಪ್ಪೇಸ್ವಾಮಿ ಹಾಗೂ ಇತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

ವಿಧೇಯಕ ಅಂಗೀಕಾರ

ನಾಯಕ ಅರವಿಂದ ಬೆಲ್ಲದ್ ಮಾತನಾಡಿ, ಈ ಫೈನಾನ್ಸ್ ಜಾಲ ಬಲಾಢ್ಯವಾಗಿದೆ. ಇಸ್ಪೀಟ್ ದಂಧೆ, ಗಾಂಜಾ ಮಾಫಿಯಾ, ವೇಶ್ಯಾವಾಟಿಕೆ ದಂಧೆ, ಹೀಗೆ ಕೆಟ್ಟ ದಂಧೆಕೋರರು ಫೈನಾನ್ಸ್ ನಡೆಸುತ್ತಾರೆ. ಇದಕ್ಕೆ ಶೇ.10ರಷ್ಟು ಬಡ್ಡಿ ವಿಧಿಸಲಾಗುತ್ತಿದೆ. ಇದಕ್ಕೆ ಪರೋಕ್ಷವಾಗಿ ಪೊಲೀಸರ ಕುಮ್ಮಕ್ಕು ಇರುತ್ತದೆ. ಹೀಗಾಗಿ, ಸರ್ಕಾರ ನಿರ್ದಿಷ್ಟ ಕಾನೂನುಗಳ ಮೂಲಕ ಬಡಜನರ ಮೇಲಿನ ದೌರ್ಜನ್ಯ ಆಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು. ಇದೇ ವೇಳೆ ಕಾಂಗ್ರೆಸ್ ಸದಸ್ಯರಾದ ಲಕ್ಷಣ ಸವದಿ, ಡಾ.ರಂಗನಾಥ, ನಂಜೇಗೌಡ, ಪ್ರತಿಪಕ್ಷದ ಸದಸ್ಯ ಸಿದ್ದು ಸವದಿ ಸೇರಿದಂತೆ ಹಲವು ಸದಸ್ಯರು ವಿಧೇಯಕ ಕುರಿತ ಚರ್ಚೆಯಲ್ಲಿ ಪಾಲ್ಗೊಂಡರು.

ಸದಸ್ಯರ ಸಲಹೆಗಳಿಗೆ ಪ್ರತಿಕ್ರಿಯಿಸಿದ ಸಚಿವ ಹೆಚ್.ಕೆ.ಪಾಟೀಲ್, ಆರ್ಥಿಕವಾಗಿ ದುರ್ಬಲ ಗುಂಪುಗಳು ಮತ್ತು ವ್ಯಕ್ತಿಗಳು, ವಿಶೇಷವಾಗಿ ಮಹಿಳೆಯರು ಹಾಗೂ ಮಹಿಳಾ ಸ್ವಸಹಾಯ ಗುಂಪುಗಳನ್ನು ರಕ್ಷಿಸಲು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಅಥವಾ ಸಾಲ ನೀಡಿಕೆ ಏಜೆನ್ಸಿಗಳು ಅಥವಾ ಸಂಸ್ಥೆಗಳನ್ನು ನಿಯಂತ್ರಿಸಲು ಪರಿಣಾಮಕಾರಿ ಕಾರ್ಯವ್ಯವಸ್ಥೆಯನ್ನು ಸೃಜಿಸುವ ಉದ್ದೇಶವನ್ನು ವಿಧೇಯಕ ಒಳಗೊಂಡಿದೆ ಎಂದರು.

10 ವರ್ಷಗಳ ಜೈಲುವಾಸ: ಕಾನೂನು ಚೌಕಟ್ಟುಗಳವರೆಗೆ ಕಾರ್ಯಾಚರಣೆಗೆ ನೋಂದಾಯಿತವಲ್ಲದ ಲೇವಾದೇವಿದಾರರನ್ನು ನಿಯಂತ್ರಿಸುವುದು, ಮೂಲಭೂತ ಹಕ್ಕುಗಳ ರಕ್ಷಣೆಯನ್ನು ಖಚಿತಪಡಿಸುವುದು, ಆರ್‌ಬಿಐನ ಕಣ್ತಪ್ಪಿಗೆ ಒಳಪಡದೇ, ನೋಂದಾಯಿತವಲ್ಲದ ಮತ್ತು ಅನಿಯಂತ್ರಿತ ಲೇವಾದೇವಿದಾರರಿಗೆ ಈ ವಿಧೇಯಕ ಅನ್ವಯವಾಗಲಿದೆ. ಕಾನೂನುಬದ್ಧ ಲೇವಾದೇವಿಯನ್ನು ನಿಷೇಧಿಸುವುದಿಲ್ಲ. ಆದರೆ, ಬಲವಂತದ ವಸೂಲಾತಿಗಳನ್ನು ನಿರ್ಬಂಧಿಸುತ್ತದೆ. ಬಲವಂತದ ಹಾಗೂ ಅಮಾನವೀಯ ಸಾಲ ವಸೂಲಾತಿಯಲ್ಲಿ ತಪ್ಪಿತಸ್ಥರಿಗೆ 10 ವರ್ಷಗಳಿಗೆ ವಿಸ್ತರಿಸಬಹುದಾದ ಜೈಲುವಾಸ, 5 ಲಕ್ಷ ರೂ. ವರೆಗೆ ವಿಸ್ತರಿಸಬಹುದಾದ ದಂಡವನ್ನು ಈ ವಿಧೇಯಕದಲ್ಲಿ ಪ್ರಸ್ತಾಪಿಸಲಾಗಿದೆ. ರಾಜ್ಯ ಸರ್ಕಾರ ಈಗಾಗಲೇ ಅಧ್ಯಾದೇಶದ ಮೂಲಕ ಜಾರಿ ಮಾಡಿದ್ದ ಕಾನೂನನ್ನು ಈ ವಿಧೇಯಕದಲ್ಲಿ ಪ್ರಸ್ತಾಪಿಸಲಾಗಿದೆ ಎಂದು ಹೆಚ್.ಕೆ. ಪಾಟೀಲ್ ತಿಳಿಸಿದರು. ಬಳಿಕ ವಿಧೇಯಕಕ್ಕೆ ಆಡಳಿತ-ಪ್ರತಿಪಕ್ಷ ನಡುವೆ ಸಹಮತ ಬಂದ ಹಿನ್ನೆಲೆಯಲ್ಲಿ ವಿಧಾನಸಭೆಯ ಸ್ಪೀಕರ್ ಯು.ಟಿ.ಖಾದರ್ ವಿಧೇಯಕವನ್ನು ಮತಕ್ಕೆ ಹಾಕಿದಾಗ ಧ್ವನಿಮತದೊಂದಿಗೆ ವಿಧೇಯಕ ಅಂಗೀಕಾರಗೊಂಡಿತು.

ಕೆಳಸೇತುವೆ ಕಾಮಗಾರಿ ವರ್ಷಾಂತ್ಯಕ್ಕೆ ಪೂರ್ಣ

ಸಂಚಾರ ಪೊಲೀಸರು ರಿಂಗ್ ರಸ್ತೆ ಮಾರ್ಗದಲ್ಲಿ ವಾಹನ ಸಂಚಾರ ನಿರ್ಬಂಧಿಸಿ, ಪರ್ಯಾಯ ಮಾರ್ಗದ ವ್ಯವಸ್ಥೆ ಮಾಡಿಕೊಡುವ ಪ್ರಕ್ರಿಯೆಯಲ್ಲಿ ಸ್ವಲ್ಪ ತಡವಾದ ಹಿನ್ನೆಲೆಯಲ್ಲಿ ಕೆಳ ಸೇತುವೆಗಳ ಕಾಮಗಾರಿ ನಿಧಾನವಾಗಿತ್ತು. ಆದರೀಗ ಹಗಲು-ರಾತ್ರಿ ಕಾಮಗಾರಿ ತ್ವರಿತಗತಿಯಲ್ಲಿ ನಡೆಯು ತ್ತಿರುವುದರಿಂದ ಡಿಸೆಂಬರ್ ಒಳಗೆ ಎಲ್ಲಾ ನಾಲ್ಕು ಕೆಳ ಸೇತುವೆ ಕಾಮಗಾರಿಗಳು ಪೂರ್ಣಗೊಂಡು ರಿಂಗ್ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗುವುದು ಎಂದು ಯೋಜನೆಯ ನಿರ್ವಹಣೆ ಮಾಡುತ್ತಿರುವ ಪ್ರಾಜೆಕ್ಟ್ ಮ್ಯಾನೇಜರ್ ಅಜಯ್‌ಕುಮಾರ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿ 'ಎಪಿಕ್' ಕುರಿತ ಚರ್ಚೆಗೆ ನಿರಾಕರಣೆ: ವಿಪಕ್ಷಗಳಿಂದ ಸಭಾತ್ಯಾಗ




ನವದೆಹಲಿ, ಮಾ.10- ದೋಷಪೂರಿತ ಮತದಾರರ ಪಟ್ಟಿ ಕುರಿತು ಉಭಯ ಸದನಗಳಲ್ಲಿ ಚರ್ಚೆ ನಡೆಸಬೇಕು ಎಂದು ವಿರೋಧ ಪಕ್ಷದ ಸದಸ್ಯರು ಸೋಮವಾರ ಪಟ್ಟು ಹಿಡಿದಿದರು.

ಲೋಕಸಭೆಯಲ್ಲಿ ವಿಪಕ್ಷ ನಾಯಕ ರಾಹುಲ್ ಗಾಂಧಿ ಈ ವಿಷಯ ಪ್ರಸ್ತಾಪಿಸಿದರು. 'ಎಪಿಕ್' ಕುರಿತು ಕೂಡಲೇ ಚರ್ಚೆಯಾಗಬೇಕು ಎಂದು ರಾಜ್ಯಸಭೆಯಲ್ಲಿ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಆಗ್ರಹಿಸಿದರು. ಈ ಬೇಡಿಕೆಯನ್ನು ಸಭಾಪತಿ ತಿರಸ್ಕರಿಸಿದರು. ಖರ್ಗೆ ನೇತೃತ್ವದಲ್ಲಿ ಕಾಂಗ್ರೆಸ್ ಸದಸ್ಯರು ಸಭಾತ್ಯಾಗ ಮಾಡಿದರು.

ಲೋಕಸಭೆಯಲ್ಲಿ ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಟಿಎಂಸಿ ಸಂಸದ ಸೌಗತ ರಾಯ್, ಮತದಾರರ ಪಟ್ಟಿಯಲ್ಲಿ ದೋಷಗಳಿವೆ ಎಂದು ದೂರಿದರು. ಮುರ್ಷಿದಾಬಾದ್ ಮತ್ತು ಬುರ್ದ್ವಾನ್ ಲೋಕಸಭಾ ಕ್ಷೇತ್ರಗಳು ಹಾಗೂ ಹರಿಯಾಣದಲ್ಲಿ ಒಂದೇ ರೀತಿಯ ಎಪಿಕ್ ಸಂಖ್ಯೆಗಳನ್ನು ಹೊಂದಿರುವ ಮತದಾರರು ಇದ್ದಾರೆ ಎಂದು ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಬೊಟ್ಟು ಮಾಡಿ ತೋರಿಸಿದ್ದಾರೆ ಎಂದರು. ಈ ಪಟ್ಟಿಯಲ್ಲಿ ಗಂಭೀರ ನ್ಯೂನತೆಗಳಿವೆ. ಮಹಾರಾಷ್ಟ್ರ ಹಾಗೂ ಹರಿಯಾಣದಲ್ಲಿ ಇಂತಹ ಘಟನೆಗಳು ನಡೆದಿವೆ. ಮುಂದಿನ ವರ್ಷ ಚುನಾವಣೆ ನಡೆಯಲಿರುವ ಅಸ್ಸಾಂ ಹಾಗೂ ಪಶ್ಚಿಮ ಬಂಗಾಳದಲ್ಲಿ ಇದೇ ರೀತಿ ನಡೆಯುವ ಸಂಭವ ಇದೆ. ಒಟ್ಟು ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ಪರಿಷ್ಕರಿಸಲಿ. ಪಟ್ಟಿಯಲ್ಲಿ ಆಗಿರುವ ತಪ್ಪುಗಳ ಬಗ್ಗೆ ಚುನಾವಣಾ ಆಯೋಗ ಉತ್ತರಿಸಬೇಕು ಎಂದು ಆಗ್ರಹಿಸಿದರು. ಆಗ ಮಧ್ಯಪ್ರವೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ಮತದಾರರ ಪಟ್ಟಿಗಳ ಕುರಿತು ಇಡೀ ವಿರೋಧ ಪಕ್ಷವು ಚರ್ಚೆಗೆ ಒತ್ತಾಯಿಸುತ್ತಿದೆ ಎಂದರು. ಮತದಾರರ ಪಟ್ಟಿಯನ್ನು ಸರ್ಕಾರ ಸಿದ್ಧಪಡಿಸುವುದಿಲ್ಲ ಎಂಬ ಲೋಕಸಭಾಧ್ಯಕ್ಷ ಓಂಬಿರ್ಲಾ ಅವರ ಹೇಳಿಕೆಯನ್ನು ನಾವು ಒಪ್ಪುತ್ತೇವೆ. ಆದರೆ ಈ ವಿಷಯದ ಕುರಿತು ವಿಸ್ತೃತ ಚರ್ಚೆಯಾಗಬೇಕು. ಇಡೀ ದೇಶದಲ್ಲಿ ಈ ಬಗ್ಗೆ ಚರ್ಚೆಯಾಗುತ್ತಿದೆ. ಮಹಾರಾಷ್ಟ್ರ ಸೇರಿದಂತೆ ಪ್ರತಿಯೊಂದು ರಾಜ್ಯದಲ್ಲಿ ವಿರೋಧ ಪಕ್ಷಗಳು ಏಕ ಧ್ವನಿಯಲ್ಲಿ ಪ್ರಶ್ನೆಗಳನ್ನು ಕೇಳುತ್ತಿವೆ ಎಂದು ಗಮನ ಸೆಳೆದರು. ಎಪಿಕ್ ವಿಷಯದ ಬಗ್ಗೆ ಕೂಡಲೇ ಚರ್ಚೆಯಾಗಬೇಕು ಎಂದು ವಿಪಕ್ಷ ಸದಸ್ಯರು ರಾಜ್ಯಸಭೆಯಲ್ಲಿ ಆಗ್ರಹಿಸಿದರು.

ಅನ್ನ ಸಂತರ್ಪಣೆ



ಮೈಸೂರು, ಮಾ.10(ಎಂಕೆ)- ಮೈಸೂರು-ಬೆಂಗಳೂರು ರಸ್ತೆಯಲ್ಲಿರುವ ಶ್ರೀ ದಂಡಿನಮಾರಮ್ಮ ಮತ್ತು ಬಿಸಿಲು ಮಾರಮ್ಮ ಜಾತ್ರಾ ಮಹೋತ್ಸವದ ಅಂಗವಾಗಿ ನಾಳೆ(ಮಾ.11) ಮಧ್ಯಾಹ್ನ 12 ಗಂಟೆಗೆ ಅನ್ನ ಸಂತರ್ಪಣೆ ನೆರವೇರಲಿದೆ.

ಪ್ರತಿವರ್ಷದಂತೆ ಈ ವರ್ಷವೂ ಮಾ.1 ರಿಂದ 11ರವರೆಗೆ ಶ್ರೀ ಮನೆ ಮಂಚಮ್ಮ, ಶ್ರೀ ದಂಡಿನ ಮಾರಮ್ಮ, ಶ್ರೀ ಬಿಸಿಲು ಮಾರಮ್ಮ ಜಾತ್ರಾ ಮಹೋತ್ಸವ ಶ್ರದ್ಧಾ-ಭಕ್ತಿಯಿಂದ ನಡೆದಿದ್ದು, ಕಡೆಯ ದಿನವಾದ ಮಂಗಳವಾರ ಶ್ರೀ ಕ್ಷೇತ್ರ ದಂಡಿನ ಮಾರಮ್ಮ ದೇವಸ್ಥಾನದ ಆವರಣದಲ್ಲಿ ಸಾವಿರಾರು ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ನಡೆಯಲಿದೆ ಎಂದು ಅಮ್ಮನವರ ಗುಡ್ಡಪ್ಪನವರಾದ ಶಿವಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೂವಿನ ಹೋಳಿ ಹಬ್ಬ

ಮೈಸೂರು,ಮಾ.10-ಮೈಸೂರಿನ ವೇದಶ್ರೀ ಪ್ರತಿಷ್ಠಾನದ ವತಿಯಿಂದ ಮಾ.14ರಂದು ಸಂಜೆ 6.30ರಿಂದ ರಾತ್ರಿ 9.30 ರವರೆಗೆ ವಿಜಯನಗರದ ವಿಠಲ ರುಕ್ಮಿಣಿ ಹಾಲ್‌ನಲ್ಲಿ ಹೂವಿನ ಹೋಳಿ ಹಬ್ಬ ಆಯೋಜಿಸಲಾಗಿದೆ. ಸುಮಧುರ ಕೀರ್ತನೆ, ದೇವರಿಗೆ ಹೂವಿನ ಅಭಿಷೇಕ ಇನ್ನಿತರೆ ಕಾರ್ಯಕ್ರಮದ ಮುಖ್ಯ ಆಕರ್ಷಣೆಯಾಗಿವೆ. ಮಾಹಿತಿಗೆ ಮೊ.903 5276643 ಸಂಪರ್ಕಿಸಬಹುದು.

ಧರ್ಮೇಂದ್ರ ಪ್ರಧಾನ್ ನೀವೊಬ್ಬ 'ದುರಹಂಕಾರಿ' ಎಂದು ಜರಿದ ಮುಖ್ಯಮಂತ್ರಿ ಸ್ಟಾಲಿನ್!

ಚೆನ್ನೈ: ತಮಿಳುನಾಡಿನಲ್ಲಿ ತ್ರಿಭಾಷಾ ನೀತಿ ಕುರಿತು ಮುಖ್ಯಮಂತ್ರಿ ಎಂ.ಕೆ ಸ್ಟಾಲಿನ್ ಮತ್ತು ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ನಡುವಿನ ಜಟಾಪಟಿ ಮುಂದುವರೆದಿದೆ. ಎಂ.ಕೆ.ಸ್ಟಾಲಿನ್, ಧರ್ಮೇಂದ್ರ ಪ್ರಧಾನ್ ಅವರನ್ನು ದುರ ಹಂಕಾರಿ ಎಂದು ಕರೆದಿದ್ದಾರೆ. ಅಲ್ಲದೆ 'ಸರ್ವಾಧಿಕಾರಿಯಂತೆ ದುರಹಂಕಾರದಿಂದ ಮಾತನಾಡುತ್ತಿದ್ದೀರಾ. ನಿಮ್ಮ ನಾಲಿಗೆ ಮೇಲೆ ಹಿಡಿತವಿರಲಿ' ಎಂದು ಸ್ಟಾಲಿನ್ ಎಚ್ಚರಿಸಿದ್ದಾರೆ. ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಡಿಎಂಕೆಯನ್ನು ಅಪ್ರಾಮಾಣಿಕ ಎಂದು ಕರೆದಿದ್ದು, ಅದು ತಮಿಳುನಾಡು ವಿದ್ಯಾರ್ಥಿಗಳ ಭವಿಷ್ಯವನ್ನು ಹಾಳುಮಾಡುತ್ತಿದೆ ಎಂದು ಆರೋಪಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ತಮಿಳುನಾಡು ಸಿಎಂ ಎಂ.ಕೆ. ಸ್ಟಾಲಿನ್, ಕೇಂದ್ರ ಶಿಕ್ಷಣ ಸಚಿವರನ್ನು ಗುರಿಯಾಗಿಸಿಕೊಂಡು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದು, ಶಿಕ್ಷಣ ಸಚಿವರು ಶಿಸ್ತುಬದ್ಧರಾಗಿರಬೇಕು ಎಂದು ಬರೆದಿದ್ದಾರೆ. ತಮಿಳುನಾಡಿನಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ)ಯನ್ನು ಜಾರಿಗೆ ತರಲು ರಾಜ್ಯ ಸರ್ಕಾರ ನಿರಾಕರಿಸಿದೆ. ಅದನ್ನು ಜಾರಿಗೆ ತರಲು ಯಾರೂ ಒತ್ತಾಯಿಸಲು ಸಾಧ್ಯವಿಲ್ಲ ಎಂದು ಬರೆದಿದ್ದಾರೆ. ತಾನು ಸರ್ವಾಧಿಕಾರಿಯಂತೆ ಭಾವಿಸಿ ದುರಹಂಕಾರದಿಂದ ಮಾತನಾಡುವ ಕೇಂದ್ರ ಶಿಕ್ಷಣ ಸಚಿವರನ್ನು ಶಿಸ್ತುಬದ್ಧಗೊಳಿಸಬೇಕು! ನೀವು ತಮಿಳುನಾಡಿನ ಸಂಸದರೊಂದಿಗೆ ಅಗೌರವದಿಂದ ವರ್ತಿಸುತ್ತಿದ್ದೀರಾ. ತಮಿಳುನಾಡಿನ ಹಣವನ್ನು ತಡೆಹಿಡಿಯುತ್ತಿದ್ದೀರಾ. ನೀವು ತಮಿಳುನಾಡಿನ ಜನರನ್ನು ಅವಮಾನಿಸುತ್ತಿದ್ದೀರಿ. ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿ ಇದನ್ನು ಒಪ್ಪುತ್ತಾರೆಯೇ ಎಂದು ಅವರು ಬರೆದಿದ್ದಾರೆ. ಪ್ರಧಾನ್ ಅವರೇ, ನಾವು ಜನರ ಅಭಿಪ್ರಾಯಗಳನ್ನು ಗೌರವಿಸಿ ಮಾತ್ರ ಕೆಲಸ ಮಾಡುತ್ತೇವೆ. ನಿಮ್ಮಂತೆ ನಾಗ್ಪುರದ ಮಾತುಗಳಿಗೆ ಬದ್ಧರಲ್ಲ. ನಿಮ್ಮ ಯೋಜನೆಯನ್ನು ಕಾರ್ಯಗತಗೊಳಿಸಲು ನಾವು ಸಿದ್ಧರಿಲ್ಲ. ಮತ್ತು ಅದನ್ನು ಕಾರ್ಯಗತಗೊಳಿಸಲು ಯಾರೂ ನನ್ನನ್ನು ಒತ್ತಾಯಿಸಲು ಸಾಧ್ಯವಿಲ್ಲ. ತಮಿಳುನಾಡು ವಿದ್ಯಾರ್ಥಿಗಳಿಗೆ ಹಣವನ್ನು ಬಿಡುಗಡೆ ಮಾಡಲು ಮತ್ತು ನಮ್ಮಿಂದ ಸಂಗ್ರಹಿಸಿದ ತೆರಿಗೆಯನ್ನು ಬಿಡುಗಡೆ ಮಾಡಲು ಸಾಧ್ಯವೇ ಎಂದು ಉತ್ತರಿಸಿ ಎಂದು ಅವರು ಹೇಳಿದ್ದಾರೆ.



ಪ್ರಧಾನ್



ಸ್ಟಾಲಿನ್

ಬಿಸಿಯೂಟ ತಯಾರಿಸಲು ಅಡುಗೆ ಎಣ್ಣೆ-ಬೇಳೆ ಕೊಟ್ಟಿಲ್ಲ

ಸರ್ಕಾರದ ವಿರುದ್ಧವೇ ಪರಿಷತ್‌ನಲ್ಲಿ ಕಾಂಗ್ರೆಸ್ ಸದಸ್ಯ ಟೀಕೆ

ಬೆಂಗಳೂರು, ಮಾ.10- ಮಧ್ಯಾಹ್ನದ ಬಿಸಿಯೂಟ ತಯಾರಿಸಲು ಅಡುಗೆ ಎಣ್ಣೆ ಮತ್ತು ಬೇಳೆಯನ್ನು ಸರ್ಕಾರ 3 ತಿಂಗಳಿಂದ ಕೊಡುತ್ತಿಲ್ಲ ಎಂದು ಸರ್ಕಾರದ ವಿರುದ್ಧ ಆಡಳಿತ ಪಕ್ಷದ ಸದಸ್ಯರೇ ಆರೋಪ ಮಾಡಿದ ಘಟನೆ ವಿಧಾನಪರಿಷತ್‌ನಲ್ಲಿಂದು ನಡೆಯಿತು. ಅಲ್ಲದೆ ವಿದ್ಯಾರ್ಥಿಗಳಿಗೆ ಶಾಲೆಗಳಲ್ಲಿ ಕೊಡುತ್ತಿರುವ ಮೊಟ್ಟೆ ಖರೀದಿಗೆ ನಿಗದಿ ಮಾಡಿರುವ ಹಣವನ್ನು ಜಾಸ್ತಿ ಮಾಡುವಂತೆ ಕಾಂಗ್ರೆಸ್ ಸದಸ್ಯ ಅನಿಲ್ ಕುಮಾರ್ ಒತ್ತಾಯ ಮಾಡಿದರು.



ಪ್ರಶ್ನೋತ್ತರ ಕಲಾಪದಲ್ಲಿ ಪ್ರಶ್ನೆ ಕೇಳಿದ ಅವರು, ಮಧ್ಯಾಹ್ನದ ಬಿಸಿಯೂಟ ಯೋಜನೆ ಅಡಿ ಅಡುಗೆ ಮಾಡಲು ಸರ್ಕಾರ ಎಣ್ಣೆ ಮತ್ತು ಬೇಳೆಕಾಳು ಅಡ್ವಾನ್ಸ್ ಆಗಿ ಕೊಡುತ್ತಿಲ್ಲ. 2-3 ತಿಂಗಳಿಗೊಮ್ಮೆ ಎಣ್ಣೆ ಕೊಡುತ್ತಾರೆ. ಡಿಸೆಂಬರ್‌ನಿಂದ ಈವರೆಗೂ ಎಣ್ಣೆ ಕೊಟ್ಟೇ ಇಲ್ಲ. ಈ ಬಗ್ಗೆ ಸರ್ಕಾರ ಕ್ರಮವಹಿಸಬೇಕು. ಸರ್ಕಾರಿ ಶಾಲೆಗಳಲ್ಲಿ ಮೊಟ್ಟೆ ಯೋಜನೆ ಕೊಡುತ್ತಿದೆ. ಒಂದು ಮೊಟ್ಟೆಗೆ 5 ರೂಪಾಯಿ ಸರ್ಕಾರ ಕೊಡುತ್ತಿದೆ. ಮೊಟ್ಟೆಗೆ ಕೊಡುತ್ತಿರುವ ಹಣ ಸಾಕಾಗುತ್ತಿಲ್ಲ, ಜಾಸ್ತಿ ಮಾಡಬೇಕು. ಅಡುಗೆ ಮಾಡುವ ಸಿಬ್ಬಂದಿಗೆ ಸಂಬಳ ಜಾಸ್ತಿ ಮಾಡಬೇಕು ಮತ್ತು ಪ್ರಥಮ-ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೂ ಬಿಸಿಯೂಟ ಯೋಜನೆ ವಿಸ್ತರಿಸಬೇಕು ಎಂದು ಆಗ್ರಹಿಸಿದರು.

ಇದಕ್ಕೆ ಸಚಿವ ಮಧು ಬಂಗಾರಪ್ಪ ಉತ್ತರಿಸಿ, ಕೇಂದ್ರ ಸರ್ಕಾರದ ನಿಯಮದಂತೆ ಅಡುಗೆ ಮಾಡುವ ಸಿಬ್ಬಂದಿಗೆ ಸಂಬಳ ಕೊಡುತ್ತಿದ್ದೇವೆ. ಕೇಂದ್ರ ಜಾಸ್ತಿ ಮಾಡಿದರೆ ನಾವು ಜಾಸ್ತಿ ಮಾಡುತ್ತೇವೆ. ಅಡುಗೆ ಸಿಬ್ಬಂದಿಗೆ ಮೊನ್ನೆ ಮಂಡನೆಯಾದ ಬಜೆಟ್‌ನಲ್ಲಿ 1 ಸಾವಿರ ಸಂಬಳ ಜಾಸ್ತಿ ಮಾಡಲಾಗಿದೆ. ಕೇಂದ್ರ ಸರ್ಕಾರಕ್ಕಿಂತ ರಾಜ್ಯ ಸರ್ಕಾರ ಸಂಬಳ ಜಾಸ್ತಿ ಕೊಡುತ್ತಿದೆ ಎಂದು ತಿಳಿಸಿದರು.

ಮೊಟ್ಟೆಗೆ ಹಣ ಜಾಸ್ತಿ ಕೊಡುವ ಬಗ್ಗೆ ಆರ್ಥಿಕ ಇಲಾಖೆ ಜೊತೆ ಚರ್ಚೆ ಮಾಡುತ್ತೇನೆ. 4.50 ರೂ.ಗೆ ಮೊಟ್ಟೆ ಸಿಗುವ ಉದಾಹರಣೆ ಇದೆ. ನ್ಯಾಷನಲ್ ಮಾರ್ಕೆಟ್‌ನಲ್ಲಿ 4.70 ರೂ ಇದೆ. ಆದರೂ ಮೊಟ್ಟೆ ಹಣ ಜಾಸ್ತಿ ಮಾಡುವ ಬಗ್ಗೆ ಪರಿಶೀಲನೆ ಮಾಡುತ್ತೇನೆ ಎಂದರು. ಅಡುಗೆ ಎಣ್ಣೆ ಮತ್ತು ಬೇಳೆ ಸರಬರಾಜು ತಡ ಆಗಿದ್ದರೆ ಅದರ ಬಗ್ಗೆ ಕ್ರಮ ತೆಗೆದುಕೊಳ್ಳುತೇವೆ. ಶಾಲಾ ಮಕ್ಕಳಿಗೆ ಈಗ ಮೊಟ್ಟೆ, ಬಾಳೆಹಣ್ಣು ಕೊಡುತ್ತಿದ್ದೇವೆ. ಚಿಕ್ಕಿ ಕೊಡೋದನ್ನು ನಿಲ್ಲಿಸಲಾಗಿದೆ. ಪಿಯುಸಿ ಮಕ್ಕಳಿಗೆ ಬಿಸಿಯೂಟ ಕೊಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ. ಈ ಬಗ್ಗೆ ಸಿಎಂ ಅವರಲ್ಲಿ ಮನವಿ ಮಾಡೋಣ ಎಂದು ಹೇಳಿದರು.

ಸಂಶೋಧನೆಗಳು ಸಮಾಜಕ್ಕೆ ಅನುಕೂಲಕಾರಿಯಾಗಿರಬೇಕು

ಮೈಸೂರು ವಿವಿಯ ಸಮಾಜ ಕಾರ್ಯ ವಿಭಾಗದ ಪ್ರಾಧ್ಯಾಪಕಿ ಡಾ.ಜ್ಯೋತಿ ಕಿವಿಮಾತು

ಮೈಸೂರು,ಮಾ.10(ಎಂಟಿವೈ)- ವಿದ್ಯಾರ್ಥಿ ವೇತನ ಪಡೆಯುವುದಕ್ಕಾಗಿ ಸಂಶೋಧನೆ ಮಾಡದೇ ಸಮಾಜಕ್ಕೆ ಏನಾದರೂ ಕೊಡುಗೆ ನೀಡುವ ನಿಟ್ಟಿನಲ್ಲಿ ಅರಣ್ಯಾಧಾರಿತ ವಿಷಯಗಳಲ್ಲಿ ಸಂಶೋಧನೆ ಮಾಡಲು ಮುಂದಾಗಬೇಕು ಎಂದು ಮೈಸೂರು ವಿಶ್ವವಿದ್ಯಾನಿಲಯದ ಸಮಾಜ ಕಾರ್ಯ (ಎಂಎಸ್‌ಡಬ್ಲ್ಯೂ) ವಿಭಾಗದ ಪ್ರಾಧ್ಯಾಪಕರಾದ ಡಾ.ಜ್ಯೋತಿ ಸಲಹೆ ನೀಡಿದ್ದಾರೆ.



ಮೈಸೂರಿನ ಬುಡಕಟ್ಟು ಸಂಶೋಧನಾ ಕೇಂದ್ರದಲ್ಲಿ ನಡೆದ ಸಂಶೋಧನಾ ವಿದ್ಯಾರ್ಥಿಗಳ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಶಿಬಿರಾರ್ಥಿಗಳಿಗೆ ಮೈಸೂರು ವಿವಿ ಎಂಎಸ್‌ಡಬ್ಲ್ಯೂ ಪ್ರಾಧ್ಯಾಪಕಿ ಡಾ.ಜ್ಯೋತಿ ಪ್ರಮಾಣ ಪತ್ರ ವಿತರಿಸಿದರು.

ಮೈಸೂರಿನ ಬೋಗಾದಿಯಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 'ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ 10 ದಿನಗಳ ಸಂಶೋಧನಾ ಸಾಮರ್ಥ್ಯ ಅಭಿವೃದ್ಧಿ ಕಾರ್ಯಾಗಾರ'ದ ಸಮಾರೋಪ ಸಮಾರಂಭದಲ್ಲಿ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿ ಮಾತನಾಡಿದ ಅವರು, ಸಂಶೋಧನಾ ವಿದ್ಯಾರ್ಥಿಗಳು ಆಳವಾದ ಅಧ್ಯಯನ ಮಾಡುವ ಮೂಲಕ ಮಹತ್ತರ ಮಾಹಿತಿಯನ್ನು ಹೆಕ್ಕಿ ತೆಗೆಯುವ ಸಂಶೋಧನೆ ಮಾಡಬೇಕು. ಕೇವಲ ಸ್ಕಾಲರ್‌ಶಿಪ್ ಪಡೆಯುವ ಉದ್ದೇಶದಿಂದ ಸಂಶೋಧನೆ ಮಾಡಲು ಬಂದರೆ ಅದರಿಂದ ಸಮಾಜಕ್ಕೆ ಪ್ರಯೋಜನವಾಗುವುದಿಲ್ಲ ಎಂದರು.

ಸಂಶೋಧನೆ ಎಂದರೆ ಹೊಸ ಹೊಸ ಆವಿಷ್ಕಾರವನ್ನು ಮಾಡುವುದೇ ಆಗಿದೆ. ಮೂರೂವರೆ ವರ್ಷದಲ್ಲಿ ಸಂಶೋಧನೆ ಪೂರ್ಣಗೊಳಿಸಬೇಕು. ಮುಂದಿನ ದಿನಗಳಲ್ಲಿ ಸಂಶೋಧನೆ ಮಾಡಲು ಮುಂದಾಗುವ ವಿದ್ಯಾರ್ಥಿಗಳು ಅರಣ್ಯಾಧಾರಿತ, ಬುಡಕಟ್ಟು ಜನರ ಸಮಸ್ಯೆ ಬಗ್ಗೆ ಬೆಳಕು ಚೆಲ್ಲುವ ವಿಷಯಗಳ ಮೇಲೆ ಹೆಚ್ಚಾಗಿ ಸಂಶೋಧನೆ ಮಾಡಬೇಕು. ಸಂಶೋಧನೆ ವೇಳೆ ಮಾರ್ಗದರ್ಶಕ(ಗೈಡ್)ರೊಂದಿಗೆ ಉತ್ತಮ ಬಾಂಧವ್ಯ ಇಟ್ಟುಕೊಳ್ಳಬೇಕು. ಅಗತ್ಯ ಸಲಹೆ ಸೂಚನೆ ಪಡೆದುಕೊಳ್ಳುವುದರೊಂದಿಗೆ ಸಂಶೋಧನೆ ವೇಳೆ ಅನುಸರಿಸಬೇಕಾದ ಕ್ರಮ ಕುರಿತಂತೆ ಮಾಹಿತಿ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ನಿವೃತ್ತ ಪ್ರಾಧ್ಯಾಪಕ ಪ್ರೊ.ವಿ.ರಮಣಯ್ಯ ಮಾತನಾಡಿ, ಸಂಶೋಧನಾ ವಿದ್ಯಾರ್ಥಿಗಳಿಗಾಗಿ ಆಯೋಜಿಸುವ ತರಬೇತಿ ಕಾರ್ಯಾಗಾರಗಳಿಗೆ ಗೈಡ್‌ಗಳು ಪ್ರೋತ್ಸಾಹ ನೀಡಬೇಕು. ಸಂಶೋಧನೆ ಮಾಡಿರುವ ಗೈಡ್‌ಗಳಿಗೂ ತರಬೇತಿ ನೀಡಬೇಕು. ಕಲಿಕೆ ನಿರಂತರ. ಜೀವನದುದ್ದಕ್ಕೂ ಕಲಿಕೆ ಹಾಗೂ ಓದು ನಿರಂತರವಾಗಿರಬೇಕು. ಪಿಹೆಚ್.ಡಿ ಮಾಡುವುದಕ್ಕೂ ಮೊದಲು ಸಂಶೋಧಕರಿಗೆ ತರಬೇತಿ ನೀಡಿದರೆ ಸಂಶೋಧಕರು ಉತ್ತಮವಾದ ವಿಷಯ ತೆಗೆದುಕೊಳ್ಳಬಹುದು ಎಂದರು.

ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಉಪನಿರ್ದೇಶಕಿ ಬಿ.ಎಸ್. ಪ್ರಭಾ ಅರಸ್ ಮಾತನಾಡಿ, ಸಂಶೋಧಕರಿಗೆ ನೆರವಾಗುವ ನಿಟ್ಟಿನಲ್ಲಿ ಕಾರ್ಯಾಗಾರ ಆಯೋಜಿಸಲಾಗಿತ್ತು. ಇದರಲ್ಲಿ ಪಾಲ್ಗೊಂಡಿದ್ದ ವಿದ್ಯಾರ್ಥಿಗಳಲ್ಲಿ ಬಹುತೇಕರು ಆಧುನಿಕ ತಂತ್ರಜ್ಞಾನದ ಬಗ್ಗೆ ಹೆಚ್ಚಿನ ತರಬೇತಿ ಹಾಗೂ ಹಾಡಿಗಳಿಗೆ ಹೆಚ್ಚು ದಿನ ಭೇಟಿ ಮಾಡಲು ಅವಕಾಶ ನೀಡುವಂತೆ ಮನವಿ ಮಾಡಿದ್ದಾರೆ.

ಸಮಾರಂಭದಲ್ಲಿ ನಿವೃತ್ತ ಪ್ರಾಧ್ಯಾಪಕ ಪ್ರೊ.ಜಿ.ವೆಂಕಟೇಶ್‌ಕುಮಾರ್ ಮಾತನಾಡಿದರು. ಸಂಶೋಧನಾಧಿಕಾರಿ ಕೆ.ಶ್ರೀನಿವಾಸ್, ಡಾ.ಮೋಹನ್‌ಕುಮಾರ್, ಡಾ.ಮಂಜುನಾಥ್, ಡಾ.ರವಿಕುಮಾರ್, ಡಾ.ಕಲಾವತಿ, ಡಾ.ವಿ.ಜೆ.ಗಿರೀಶ್, ಬಿ.ಆರ್. ಭವ್ಯ, ರಮೇಶ್, ವೇಣುಕಾಂತ, ಗಂಗಾಧರಯ್ಯ, ಹೇಮಚಂದ್ರ, ಡಾ.ವೆಂಕಟೇಶ್‌ಪ್ರಸಾದ್, ಗುಣಧರ್, ಪುಷ್ಪಲತಾ, ದಾಕ್ಷಾಯಿಣಿ, ಪಿ.ಮಮತ, ಸಿಬ್ಬಂದಿ ಉಪಸ್ಥಿತರಿದ್ದರು.

ಮೈಸೂರು ಜಿಲ್ಲಾ ವಕೀಲರ ಸಂಘದಿಂದ ಲಾ ಗೈಡ್ ಎಚ್.ಎನ್.ವೆಂಕಟೇಶ್ ಅವರಿಗೆ ಗೌರವ ಸಮರ್ಪಣೆ



ಮೈಸೂರು ಜಿಲ್ಲಾ ವಕೀಲರ ಸಂಘದ ವತಿಯಿಂದ ಹಿರಿಯ ವಕೀಲರೂ ಆದ 'ಲಾ ಗೈಡ್' ಕನ್ನಡ ಕಾನೂನು ಮಾಸಪತ್ರಿಕೆ ಗೌರವ ಸಂಪಾದಕರಾದ ಎಚ್.ಎನ್.ವೆಂಕಟೇಶ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಈ ವೇಳೆ ಮೈಸೂರು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಉಷಾರಾಣಿ, ನ್ಯಾಯಾಧೀಶರಾದ ಪುಟ್ಟಸ್ವಾಮಿ, ವಕೀಲರ ಸಂಘದ ಅಧ್ಯಕ್ಷ ಎಸ್.ಲೋಕೇಶ್, ಉಪಾಧ್ಯಕ್ಷ ಎಂ.ವಿ.ಚಂದ್ರಶೇಖರ್, ಕಾರ್ಯದರ್ಶಿ ಎ.ಜಿ.ಸುಧೀರ್, ಮಹಿಳಾ ಜಂಟಿ ಕಾರ್ಯದರ್ಶಿ ವಿನೋದ ಬಿ.ವಿ., ರಾಜ್ಯ ವಕೀಲರ ಪರಿಷತ್ ಸದಸ್ಯ ಚಂದ್ರಮೌಳಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಜೈನ ಸಮುದಾಯದ ಅಭಿವೃದ್ಧಿಗೆ ಪ್ರತ್ಯೇಕ ನಿಗಮ ಸ್ಥಾಪಿಸುವ ಉದ್ದೇಶ

ಅಲ್ಪಸಂಖ್ಯಾತರ ಸಚಿವ ಜಮೀರ್ ಅಹಮದ್ ಮಾಹಿತಿ

ಬೆಂಗಳೂರು, ಮಾ.10 (ಕೆಎಂಶಿ) -ಜೈನ ಸಮುದಾಯದ ಅಭಿವೃದ್ಧಿಗೆ ಪ್ರತ್ಯೇಕ ನಿಗಮ ಸ್ಥಾಪಿಸುವ ಪ್ರಸ್ತಾಪ ಸರ್ಕಾರದ ಮುಂದಿದೆ. ಆದಷ್ಟು ಶೀಘ್ರ ಮುಖ್ಯಮಂತ್ರಿ ಗಮನಕ್ಕೆ ತರಲಾಗುವುದು ಎಂದು ಅಲ್ಪಸಂಖ್ಯಾತರ ಖಾತೆ ಸಚಿವ ಜಮೀರ್ ಅಹಮದ್ ಖಾನ್ ವಿಧಾನಸಭೆಗಿಂದು ತಿಳಿಸಿದ್ದಾರೆ.



ಪ್ರಶ್ನೋತ್ತರ ವೇಳೆಯಲ್ಲಿ ಲಕ್ಷ್ಮಣ ಸಂಗಪ್ಪ ಸವದಿ ಪ್ರಸ್ತಾವಕ್ಕೆ ಉತ್ತರಿಸಿದ ಅವರು, ರಾಜ್ಯದಲ್ಲಿ ಜೈನ ಸಮುದಾಯದವರು 20 ಲಕ್ಷದಷ್ಟು ಇದ್ದಾರೆ. ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಭಾಗದಲ್ಲಿ 15 ಲಕ್ಷ ಜೈನರಿದ್ದಾರೆ. ರಾಜಸ್ಥಾನದಿಂದ ಬಂದವರಷ್ಟೇ ಅಲ್ಲ, ಕನ್ನಡ ಮಾತನಾಡುವ ಜೈನರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ ಎಂದರು.

ರಾಜ್ಯದ ಜನಸಂಖ್ಯೆಯಲ್ಲಿ ಶೇ.14ರಷ್ಟು ಮುಸ್ಲಿಮರಿದ್ದಾರೆ. ಅರ್ಥಾತ್, ಅಲ್ಪಸಂಖ್ಯಾತರಲ್ಲಿ ಶೇ.85ರಷ್ಟು ಮುಸ್ಲಿಂರೇ ಇದ್ದಾರೆ.

ಲಕ್ಷ್ಮಣ ಸಂಗಪ್ಪ ಸವದಿ ಮಾತನಾಡಿ, ಜೈನರು ಸಾತ್ವಿಕ ಸಸ್ಯಾಹಾರಿಗಳಾಗಿದ್ದು, ಆ ಜನಾಂಗದ ವಿದ್ಯಾರ್ಥಿಗಳಿಗೆ ಹಾಸ್ಟೆಲ್‌ನಲ್ಲಿ ಸಾತ್ವಿಕ ಆಹಾರ ಸಿಗುವುದಿಲ್ಲ, ಪ್ರತ್ಯೇಕ ವಿದ್ಯಾರ್ಥಿನಿಲಯ ಸ್ಥಾಪಿಸಬೇಕು ಹಾಗೂ ಜೈನ ಸಮುದಾಯ ಅಭಿವೃದ್ಧಿಗೆ ರಾಜ್ಯದಲ್ಲಿ ಪ್ರತ್ಯೇಕ ಜೈನ ಅಭಿವೃದ್ಧಿ ನಿಗಮ ಸ್ಥಾಪಿಸಬೇಕೆಂದು ಒತ್ತಾಯಿಸಿದರು.

ಬಗರ್‌ಹುಕುಂ ಅರ್ಜಿ ವಿಲೇವಾರಿವರೆಗೆ ರೈತರನ್ನು ಒಕ್ಕಲೆಬ್ಬಿಸುವಂತಿಲ್ಲ

ವಿಧಾನಸಭೆಯಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟನೆ

ಬೆಂಗಳೂರು, ಮಾ.10(ಕೆಎಂಶಿ)- ಬಗರ್‌ಹುಕುಂ ಅಡಿ ಜಮೀನು ಸಕ್ರಮಕ್ಕೆ ಅರ್ಜಿ ಸಲ್ಲಿಸಿದ ನಂತರ ಅದು ವಿಲೇವಾರಿ ಆಗುವವರೆಗೂ ರೈತರನ್ನು ಒಕ್ಕಲೆಬ್ಬಿಸುವಂತಿಲ್ಲ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ವಿಧಾನಸಭೆಯಲ್ಲಿಂದು ಸ್ಪಷ್ಟಪಡಿಸಿದ್ದಾರೆ.



ಪ್ರಶ್ನೋತ್ತರ ವೇಳೆಯಲ್ಲಿ ಡಾ.ಶೈಲೇಂದ್ರ ಬೆಲ್ದಾಳೆ, ಭೀಮಣ್ಣ ನಾಯಕ್, ರವಿಕುಮಾರ್ ಗಣಿಗ, ಕೆ.ಎಸ್. ಆನಂದ್ ಅವರು ಮಾಡಿದ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ನಮೂನೆ 50 ಹಾಗೂ 53ರಲ್ಲಿ ಸಾಗುವಳಿ ಚೀಟಿ ಕೋರಿ ಬಗರ್‌ಹುಕುಂ ಸಮಿತಿಗೆ ಅರ್ಜಿ ಸಲ್ಲಿಸಿ ವಿಲೇವಾರಿ ಆಗದೇ ಇದ್ದರೆ ಮಾತ್ರ ಬಾಕಿ ಉಳಿದಿರುವ ಅರ್ಜಿ ಪರಿಶೀಲನೆಗೆ ಅವಕಾಶವಿದೆ.

ಒಂದು ವೇಳೆ ಬಗರ್‌ಹುಕುಂ ಸಮಿತಿ ಉಪವಿಭಾಗಾಧಿಕಾರಿ, ಜಿಲ್ಲಾಧಿಕಾರಿಗಳ ಹಂತದಲ್ಲಿ ತಿರಸ್ಕೃತಗೊಂಡಿದ್ದರೆ, ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ಇಲ್ಲ. ಆದರೆ, ಪುನರ್ ಪರಿಶೀಲನೆಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿದೆ ಎಂದರು.

ಸುಮಾರು 60 ವರ್ಷಗಳಿಂದ ಬಡವರು, ಬೀಳು ಜಮೀನುಗಳಿಗೆ ಸಂಬಂಧಿಸಿದಂತೆ ಅರ್ಜಿ ಸಲ್ಲಿಸಲು 2012ರಿಂದ 2014ರವರೆಗೆ ಅವಕಾಶ ಕಲ್ಪಿಸಲಾಗಿತ್ತು.

ವಿಲೇವಾರಿ ಆಗದೆ, ಬಾಕಿ ಉಳಿದಿರುವ ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡುವುದಾಗಿ ತಿಳಿಸಿದರು.

ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದರೆ, ಬಹಳಷ್ಟು ಸಮಸ್ಯೆಗಳು ಎದುರಾಗುತ್ತವೆ. ಬಹಳಷ್ಟು ಕಡೆ ಮೂಲ ಮಾಲೀಕರಿಲ್ಲ, ಸಂಘ ಸಂಸ್ಥೆಗಳು, ಶಾಲೆಗಳಿಗೆ ಮಂಜೂರಾಗಿವೆ.

ಕೆಲವರು ಸಾಗುವಳಿ ಬಿಟ್ಟಿದ್ದಾರೆ. ಹೀಗಾಗಿ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದರೆ ತೊಂದರೆಯಾಗುತ್ತದೆ ಎಂದು ಹೇಳಿದರು.

ಸಮಾಜದ ಒಳಿತಿಗೆ ಮಹಿಳೆ ಕೊಡುಗೆ ಅನನ್ಯ: ಚಿತ್ರನಟ ಆದಿ ಲೋಕೇಶ್

ಮೈಸೂರು, ಮಾ. 10- ಮಹಿಳೆಯರಲ್ಲಿ ಅಗಾಧವಾದ ಶಕ್ತಿ ಅಡಗಿದೆ. ಸಮಾಜದ ಅಭ್ಯುದಯದಲ್ಲಿ ಮಹಿಳಾ ಶಕ್ತಿಯ ಕೊಡುಗೆ ವಿಶಿಷ್ಟ ಎಂದು ನಟ ಆದಿ ಲೋಕೇಶ್ ಹೇಳಿದರು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಮಲೆ ಮಾದೇಶ್ವರ ಸೇವಾ ಸಂಸ್ಥೆ ವತಿಯಿಂದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಹಿಳೆಯರು ಹಾಗೂ ಮಕ್ಕಳಿಗೆ ಆಯೋಜಿಸಿದ್ದ ಫ್ಯಾಷನ್ ಶೋ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಗೆ ಸರಿಸಾಟಿಯಾರೂ ಇಲ್ಲ. ಮಹಿಳೆ ಕಲಿತರೆ ಶಾಲೆಯೊಂದು ತೆರೆದಂತೆ. ಮಹಿಳೆಯರು ಕಡ್ಡಾಯವಾಗಿ ಶಿಕ್ಷಣ ಪಡೆಯಬೇಕು. ತಮ್ಮಲ್ಲಿನ ಕೀಳರಿಮೆ ತೊರೆದು ಸಮಾಜದ ಒಳಿತಿಗೆ ದುಡಿಯಬೇಕು ಎಂದರು.



ಮೈಸೂರಲ್ಲಿ ಮಾದೇಶ್ವರ ಸೇವಾ ಸಂಸ್ಥೆ ವತಿಯಿಂದ ಮಹಿಳೆಯರು ಹಾಗೂ ಮಕ್ಕಳ ಫ್ಯಾಷನ್ ಶೋ ಆಯೋಜಿಸಲಾಗಿತ್ತು.

ರೂಪದರ್ಶಿ ಜ್ಯೋತಿ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ವಿಶೇಷಚೇತನರ ಅಂತಾರಾಷ್ಟ್ರೀಯ ಕ್ರೀಡಾಪಟು ಅಲೋಕ್ ಜೈನ್, ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷೆ ರೇಖಾ ಶ್ರೀನಿವಾಸ್, ಸೌಮ್ಯ ಆದಿ ಲೋಕೇಶ್, ರಿಷಿ ಆದಿ ಲೋಕೇಶ್, ಶಿಕ್ಷಕಿಯರಾದ ದೀಪ, ಅನುಸೂಯ, ಸಂಸ್ಥೆಯ ಅಧ್ಯಕ್ಷ ಮಹಾನ್ ಶ್ರೇಯಸ್, ಅಮಿತ್‌ಕುಮಾರ್, ಕಿರಣ್ ಜೈನ್, ಚಾಂದಿನಿ, ಸಾಧನಾ, ಕಾವನ, ಸ್ಮಿತಾ, ಡಾ.ಪ್ರಸಾದ್ ಇನ್ನಿತರರಿದ್ದರು.

ಪಂಡಿತ್ ಪುಟ್ಟರಾಜ ಗವಾಯಿಗಳ ಪುಣ್ಯಸ್ಮರಣೆ



ಪಂಡಿತ್ ಪುಟ್ಟರಾಜ ಗವಾಯಿಗಳ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ ನಡೆಯಿತು.

ಮೈಸೂರು, ಮಾ. 10- ಮೈಸೂರಿನ ಶಿವ ಸನ್ನಿಧಿ ಸಮಾನಮನಸ್ಕ ಗೆಳೆಯರ ಬಳಗದ ವತಿಯಿಂದ ಪಂಡಿತ್ ಪುಟ್ಟರಾಜ ಗವಾಯಿಗಳ ಪುಣ್ಯ ಸ್ಮರಣೋತ್ಸವ ಮತ್ತು ಮಹಿಳಾ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು

ಪುಟ್ಟರಾಜ ಗವಾಯಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಲೇಖಕ ನಗರ್ಲೆ ಶಿವಕುಮಾರ, ಶ್ರೀಯುತರು 6 ತಿಂಗಳ ಮಗುವಾಗಿದ್ದಾಗಲೇ ದೃಷ್ಟಿ ಕಳೆದುಕೊಂಡು 2 ವರ್ಷವಾಗಿದ್ದಾಗ ತಂದೆ-ತಾಯಿ ಕಳೆದುಕೊಂಡು ಅನಾಥರಾದರೂ ಸೋದರಮಾವ ಸಂಗೀತದಲ್ಲಿ ಇವರಿಗೆ ಇದ್ದ ಆಸಕ್ತಿ ಗುರುತಿಸಿ ಪಂಚಾಕ್ಷರಿ ಗವಾಯಿಗಳ ಮಡಿಲಿಗೆ ಹಾಕಿದರು.

ಶಿವ ಸನ್ನಿಧಿ ಗೆಳೆಯರ ಬಳಗದ ಸಂಸ್ಥಾಪಕ ಅಧ್ಯಕ್ಷ ಕಲ್ಮಳ್ಳಿ ನಟರಾಜು ಮಾತನಾಡಿ, ವಿಶ್ವಕ್ಕೆ ಮಾನವೀಯ ಧರ್ಮವನ್ನು ಕೊಟ್ಟ ಕೀರ್ತಿ ಭಾರತಕ್ಕೆ ಸಲ್ಲುತ್ತದೆ. ಅನಾದಿ ಕಾಲದಿಂದ ಅಧುನಿಕ ಕಾಲ ಘಟ್ಟದವರೆವಿಗೆ ಭಾರತೀಯ ಸಂತ ಶ್ರೇಷ್ಠರಾದ ಋಷಿ ಮುನಿಗಳು ವೇದಾಂತಿಗಳು ಬುದ್ಧ ಬಸವ ಗಾಂಧಿ ಅಂಬೇಡ್ಕರ್ ರವರ ಬದುಕಿನಲ್ಲಿ ಇಂತಹ ಆದರ್ಶ ಮಹನೀಯರ ಎಲ್ಲ ವ್ಯಕ್ತಿತ್ವ ನಿರ್ಮಾಣ ಮಾಡುವಲ್ಲಿ ಸಹಕಾರಿಯಾಗಿದೆ ಎಂದರು.

ಲೇಖಕಿ ಲೀಲಾಂಬಿಕೆ, ಅನಿಕೇತನ ಸೇವಾ ಸಂಸ್ಥೆ ಅಧ್ಯಕ್ಷ ಕೆ.ವಿ.ಮಲ್ಲೇಶ್, ಅಖಿಲ ಭಾರತ ಪೂರ್ವ ಅಧ್ಯಕ್ಷ ಕಾರ್ಯ ಶಿವಮೂರ್ತಿ, ಕೆಆರ್ ಬ್ಯಾಂಕ್ ಸಿದ್ದಪ್ಪ, ಶಿಕ್ಷಕರಾದ ಮಹಾದೇವಪ್ಪ, ಶಿವಕುಮಾರ, ಮಹಾದೇವ ಮತ್ತಿತರರು ಉಪಸ್ಥಿತರಿದ್ದರು.

ಸರ್ಕಾರಿ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳಿಂದ ಪ್ರತಿಜ್ಞಾ ವಿಧಿ ಸ್ವೀಕಾರ

ಮೈಸೂರು, ಮಾ.10(ಆರ್‌ಕೆ)- ಮೈಸೂರಿನ ಜೆ.ಕೆ.ಮೈದಾನದಲ್ಲಿರುವ ಅಮೃತ ಮಹೋತ್ಸವ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಸಮಾರಂಭದಲ್ಲಿ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ 2024-25ನೇ ಸಾಲಿನ ಸರ್ಕಾರಿ ಬಿ.ಎಸ್ಸಿ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಡೀನ್ ಮತ್ತು ಡೈರೆಕ್ಟರ್ ಡಾ.ಕೆ.ಆರ್.ದಾಕ್ಷಾಯಿಣಿ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಸರ್ಕಾರಿ ಶುಶ್ರೂಷ ಮಹಾವಿದ್ಯಾಲಯದ ಪ್ರಥಮ ಬಿ.ಎಸ್ಸಿ ನರ್ಸಿಂಗ್ ವಿದ್ಯಾರ್ಥಿಗಳಿಗೆ ಸಹಾಯಕ ಪ್ರಾಧ್ಯಾಪಕಿ ಎನ್.ಜ್ಯೋತಿ ಅವರು ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಸಂದರ್ಭ ಮಾತನಾಡಿದ ಡಾ.ದಾಕ್ಷಾಯಿಣಿ ಅವರು, ಸಂಸ್ಥೆಯ ಶುಶ್ರೂಷ ಮಹಾವಿದ್ಯಾಲಯದಲ್ಲಿ ಉತ್ತಮವಾದ ಕ್ಲಿನಿಕಲ್ ಮೆಟಿರಿಯಲ್ ಸೌಲಭ್ಯವಿದೆ. ವಿದ್ಯಾರ್ಥಿಗಳ ಕಲಿಕೆಗೆ ಅಗತ್ಯವಿರುವ ಎಲ್ಲಾ ಸಲಕರಣೆಗಳನ್ನು ಒದಗಿಸಲಾಗಿದ್ದು, ಅವುಗಳನ್ನು ಸಮರ್ಪಕವಾಗಿ ಬಳಸಿಕೊಂಡು ಗುಣಮಟ್ಟದ ಶುಶ್ರೂಷ ಸೇವೆಗೆ ಸಿದ್ಧರಾಗುವಂತೆ ಕರೆ ನೀಡಿದರು.



ಮೈಸೂರಿನ ಜೆ.ಕೆ.ಮೈದಾನದಲ್ಲಿರುವ ಅಮೃತ ಮಹೋತ್ಸವ ಭವನದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ 2024-25ನೇ ಸಾಲಿನ ಸರ್ಕಾರಿ ಬಿ.ಎಸ್ಸಿ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ಶುಶ್ರೂಷ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ನಂದಪ್ರಕಾಶ್, ಎಂಎಂಸಿ ಅಂಡ್ ಆರ್‌ಐ ಪ್ರಾಂಶುಪಾಲ ಡಾ.ಕೆ.ಸತೀಶ್, ಮುಖ್ಯ ಆಡಳಿತಾಧಿಕಾರಿ ಸಿ.ಆರ್.ಕಲ್ಪಶ್ರೀ, ಆರ್ಥಿಕ ಸಲಹೆಗಾರರಾದ ಎನ್.ನೂತನಶ್ರೀ, ಕೆ.ಆರ್.ಆಸ್ಪತ್ರೆ ವೈದ್ಯಕೀಯ ಅಧೀಕ್ಷಕಿ ಡಾ.ಹೆಚ್.ಪಿ.ಶೋಭಾ, ಚೆಲುವಾಂಬ ಆಸ್ಪತ್ರೆಯ ಡಾ.ಆರ್.ಸುಧಾ, ಪಿಕೆಟಿಬಿ ಆಸ್ಪತ್ರೆಯ ಡಾ.ಸಿ.ಪ್ರಶಾಂತ್, ಕೆ.ಆರ್.ಆಸ್ಪತ್ರೆ ಸ್ಥಾನಿಕ ವೈದ್ಯಾಧಿಕಾರಿ ಡಾ.ನಯಾಜ್ ಪಾಷ, ಚೆಲುವಾಂಬ ಆಸ್ಪತ್ರೆಯ ಡಾ.ಶಿವರಾಮಕೃಷ್ಣ, ಸರ್ಕಾರಿ ಶುಶ್ರೂಷ ಶಾಲೆ ಪ್ರಾಂಶುಪಾಲರಾದ ಯು.ಪಿ.ಚಂದ್ರಕಲಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಅದೇ ವೇಳೆ ಚೆಲುವಾಂಬ ಆಸ್ಪತ್ರೆ ನರ್ಸಿಂಗ್ ಸೂಪರಿಂಟೆಂಡೆಂಟ್ ಪ್ರೇಮಾವತಿ, ಕೆ.ಆರ್.ಆಸ್ಪತ್ರೆಯ ಡಿ.ಬಿ.ರತಿ, ಪಿಕೆಟಿಬಿ ಆಸ್ಪತ್ರೆಯ ಸುನಂದಮ್ಮ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಎಂ.ಆರ್. ಮಂಜುನಾಥ್, ಟ್ರಾಮಾ ಕೇರ್ ಸೆಂಟರ್‌ನ ಎನ್.ಸುಚಿತ್ರ ಅವರುಗಳು ಪ್ರತಿಜ್ಞಾ ವಿಧಿ ಸ್ವೀಕಾರ ಮತ್ತು ಲ್ಯಾಂಪ್ ಲೈಟಿಂಗ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಿದ್ಯಾರ್ಥಿಗಳಿಗೆ ಹಿತವಚನ ನೀಡಿದರು.

ದೇಶ - ವಿದೇಶ

ಅಮೆರಿಕದಲ್ಲಿ ಭಾರತೀಯ ಮೂಲದ ವಿದ್ಯಾರ್ಥಿನಿ ನಾಪತ್ತೆ



ಪಿಟ್ಸ್‌ಬರ್ಗ್: ಪಿಟ್ಸ್‌ಬರ್ಗ್ ವಿಶ್ವವಿದ್ಯಾಲಯದ ವಿದ್ಯಾರ್ಥಿನಿ, ಭಾರತೀಯ ಮೂಲದ 20 ವರ್ಷದ ಸುದೀಕ್ಷಾ ಕೊನಂಕಿ ಅವರು ಡೊಮಿನಿಕನ್ ಗಣರಾಜ್ಯದ ರೆಸಾರ್ಟ್‌ನಿಂದ ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ.

ನ್ಯೂಯಾರ್ಕ್ ಪೋಸ್ಟ್ ವರದಿ ಪ್ರಕಾರ ಸುದೀಕ್ಷಾ ಅವರು ತಮ್ಮ ಸ್ನೇಹಿತರೊಂದಿಗೆ ರಜೆಗೆ ಪ್ರವಾಸ ಹೋಗಿದ್ದರು. ಮಾ.6 ರಂದು ಪಂಟಾ ಕಾನಾದ ರೆಸಾರ್ಟ್ ಪಟ್ಟಣದ ರಿಯು ರಿಪಬ್ಲಿಕಾ ಹೋಟೆಲ್‌ನ ಬೀಚ್‌ನಲ್ಲಿ ಕೊನೆಯ ಬಾರಿಗೆ ಕಾಣಿಸಿಕೊಂಡಿದ್ದರು ಎಂದು ವರದಿಯಾಗಿದೆ. ಶನಿವಾರ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಡೊಮಿನಿಕನ್ ಗಣರಾಜ್ಯದಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಕೊನಂಕಿಯ ಪೋಷಕರೊಂದಿಗೆ ಸಂಪರ್ಕದಲ್ಲಿದ್ದು, ಹುಡುಕಾಟದಲ್ಲಿ ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುವುದಾಗಿ ದೃಢಪಡಿಸಿದೆ. ಕೊನಂಕಿ ವಾಸಿಸುವ ವರ್ಜೀನಿಯಾದ ಲೌಡೌನ್ ಕೌಂಟಿಯಲ್ಲಿರುವ ಶೆರಿಫ್ ಕಚೇರಿಯು, ಅವರು ಪಿಟ್ಸ್‌ಬರ್ಗ್ ವಿಶ್ವವಿದ್ಯಾಲಯದ ಇತರ ಐದು ಮಹಿಳಾ ಸ್ನೇಹಿತರೊಂದಿಗೆ ಬೀಚ್ ರೆಸಾರ್ಟ್‌ನಲ್ಲಿದ್ದರು ಎಂದು ತಿಳಿಸಿದೆ. ಸದ್ಯ ಹೋಟೆಲ್‌ನ ಸಿಸಿಟಿವಿ ಆಧರಿಸಿ ಡೊಮಿನಿಕನ್ ರಿಪಬ್ಲಿಕ್ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಗುರುವಾರ ಬೆಳಿಗ್ಗೆ ಕೊಣಂಕಿ ನಾಪತ್ತೆಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಯೂಟ್ಯೂಬ್ ನೋಡಿ ಡಯಟ್ ಮಾಡಿ ಯುವತಿ ಸಾವು

ಕಣ್ಣೂರು: ತೂಕ ಇಳಿಸಿಕೊಳ್ಳಲು ಯೂಟ್ಯೂಬ್ ನೋಡಿ ಡಯಟ್ ಮಾಡಿ ಆರೋಗ್ಯ ಸಮಸ್ಯೆಗಳಿಗೆ ಚಿಕಿತ್ಸೆ ಪಡೆಯುತ್ತಿದ್ದ ವಿದ್ಯಾರ್ಥಿಯೊಬ್ಬಳು ಸಾವನ್ನಪ್ಪಿದ್ದಾಳೆ.



ಕಣ್ಣೂರಿನ ಕೂತುಪರಂಬದ ಮೇರುವಾಂಬೈ ಆರೋಗ್ಯ ಕೇಂದ್ರದ ಬಳಿಯ ಕೈತೇರಿಕಂಡಿ ನಿವಾಸಿ 18 ವರ್ಷದ ಎಂ. ಶ್ರೀನಂದ ಮೃತ ಯುವತಿ. ಈಕೆ ಮಟ್ಟನೂರಿನ ಪಳಸ್ಸಿ ರಾಜ ಎನ್‌ಎಸ್‌ಎಸ್ ಕಾಲೇಜಿನಲ್ಲಿ ಪ್ರಥಮ ವರ್ಷದ ಪದವಿ ಪೂರ್ವ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದಳು. ಶ್ರೀನಂದ ಅಧಿಕ ತೂಕ ಹೊಂದಿದ್ದಾಳೆಂದು ಭಾವಿಸಿ ಯೂಟ್ಯೂಬ್ ನೋಡಿ ಆಹಾರ ಕ್ರಮವನ್ನು ಅನುಸರಿಸುತ್ತಿದ್ದಳು.

ತೂಕ ಇಳಿಸಿಕೊಳ್ಳಲು ಬಯಸಿದ್ದರಿಂದ ಶ್ರೀನಂದ ತುಂಬಾ ಕಡಿಮೆ ಆಹಾರವನ್ನು ಸೇವಿಸುತ್ತಿದ್ದಳು. ಇದು ಆಕೆಯ ದೇಹದ ಮೇಲೆ ಗಂಭೀರ ಪರಿಣಾಮ ಬೀರಿದ್ದರಿಂದ, ಹುಡುಗಿಯ ಕುಟುಂಬವು ಆಕೆಯನ್ನು ಆಸ್ಪತ್ರೆಗೆ ದಾಖಲಿಸಿತು. ಆದರೆ, ಅವರ ಸ್ಥಿತಿ ಹದಗೆಟ್ಟ ನಂತರ, ಅವರನ್ನು ತಲಶ್ಶೇರಿ ಸಹಕಾರಿ ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಯುವತಿ ಸಾವನ್ನಪ್ಪಿದ್ದಾಳೆ ಎಂದು ತಿಳಿದುಬಂದಿದೆ.

ಕೆನಡಾ ನೂತನ ಪ್ರಧಾನಿ ಮಾರ್ಕ್ ಕಾರ್ನಿ

ಒಟ್ಟಾವಾ: ಕೆನಡಾದ ಲಿಬರಲ್ ಪಕ್ಷವು ದೇಶದ ಮುಂದಿನ ಪ್ರಧಾನಿಯಾಗಿ ಮಾರ್ಕ್ ಕಾರ್ನಿ ಅವರನ್ನು ಬಹುಮತದಿಂದ ಆಯ್ಕೆ ಮಾಡಿದೆ. ಕಾರ್ನಿಯವರು ಆಯ್ಕೆಯಾಗುತ್ತಿದ್ದಂತೆ ಅಮೆರಿಕಾ ಅಧ್ಯಕ್ಷರ ಮೇಲೆ ಹರಿಹಾಯ್ದಿದ್ದು, ಕೆನಡಾದ ಕಾರ್ಮಿಕರು, ಕುಟುಂಬಗಳು ಮತ್ತು ವ್ಯವಹಾರಗಳ ಮೇಲೆ ಅಮೆರಿಕ ದಾಳಿ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ಅವರು ಯಶಸ್ವಿಯಾಗಲು ನಾವು ಬಿಡುವುದಿಲ್ಲ ಎಂದ 59 ವರ್ಷದ ಮಾರ್ಕ್ ಕಾರ್ನಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಲೆ ಗುಡುಗಿದ್ದಾರೆ. ನಿರ್ಗಮಿತ ಲಿಬರಲ್ ನಾಯಕ ಪ್ರಧಾನಿ ಜಸ್ಟಿನ್ ಟ್ರುಡೊ ಅವರಿಂದ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸುಂಕ ಸಮರ ಮತ್ತು ದೇಶವನ್ನು ವಶಪಡಿಸಿಕೊಳ್ಳುವ ಬೆದರಿಕೆಯನ್ನು ಎದುರಿಸುತ್ತಿರುವ ಸಂದರ್ಭದಲ್ಲಿ ನೂತನ ಪ್ರಧಾನಿ ಆಯ್ಕೆ ಮಹತ್ವ ಪಡೆದುಕೊಂಡಿದೆ. ಕೆನಡಾ ಅಕ್ಟೋಬರ್ ವೇಳೆಗೆ ಚುನಾವಣೆಗಳನ್ನು ನಡೆಸಬೇಕು. ಪ್ರಸ್ತುತ ಸಮೀಕ್ಷೆಗಳು ವಿರೋಧ ಪಕ್ಷ ಕನ್ಸರ್ವೇಟಿವ್ ಪರವಾಗಿವೆ.



ಮಧ್ಯಪ್ರದೇಶದಲ್ಲಿ ಅಪಘಾತ: 8 ಮಂದಿ ಸಾವು

ಸಿಧಿ(ಮಧ್ಯ ಪ್ರದೇಶ): ಮಧ್ಯಪ್ರದೇಶದ ಸಿಧಿ ಜಿಲ್ಲೆಯಲ್ಲಿ ಸೋಮವಾರ ಮುಂಜಾನೆ ಟ್ರಕ್ ಮತ್ತು ಸ್ಪೋರ್ಟ್ಸ್ ಯುಟಿಲಿಟಿ ವೆಹಿಕಲ್ (SUV) ನಡುವೆ ಡಿಕ್ಕಿ ಸಂಭವಿಸಿ 8 ಮಂದಿ ಮೃತಪಟ್ಟು, 13 ಮಂದಿ ಗಾಯಗೊಂಡಿದ್ದಾರೆ. ಸಿಧಿ-ಬಹ್ರಿ ರಸ್ತೆಯ ಉಪ್ನಿ ಪೆಟ್ರೋಲ್ ಪಂಪ್ ಬಳಿ ನಸುಕಿನ ಜಾವ ಸುಮಾರು 2.30ರ ಸುಮಾರಿಗೆ ಈ ಘಟನೆ ನಡೆದಿದೆ ಎಂದು ಪೊಲೀಸ್ ಉಪವರಿಷ್ಠಾಧಿಕಾರಿ ಗಾಯತ್ರಿ ತಿವಾರಿ ತಿಳಿಸಿದ್ದಾರೆ. ಕುಟುಂಬದ ಸದಸ್ಯರನ್ನು ಕರೆದೊಯ್ಯುತ್ತಿದ್ದ ಎಸ್‌ಯುವಿ (ಟ್ಯಾಕ್ಸಿ ಸೇವೆ) ಟ್ರಕ್ ಸಿಧಿಯಿಂದ ಬಹ್ರಿಗೆ ಮೈಹಾರ್ ಕಡೆಗೆ ಹೋಗುತ್ತಿದ್ದಾಗ ವಾಹನಗಳು ಮುಖಾಮುಖಿ ಡಿಕ್ಕಿ ಹೊಡೆದವು. ಎಸ್‌ಯುವಿಯಲ್ಲಿ ಪ್ರಯಾಣಿಸುತ್ತಿದ್ದ 7 ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗಾಯಾಳುಗಳಾದ 14 ಜನರಲ್ಲಿ 9 ಮಂದಿ ಹೆಚ್ಚಿನ ಚಿಕಿತ್ಸೆಗಾಗಿ ರೇವಾಕ್ಕೆ ಕಳುಹಿಸಲಾಯಿತು. ಗಂಭೀರವಾಗಿ ಗಾಯಗೊಂಡವರಲ್ಲಿ ಒಬ್ಬರು ಮೃತಪಟ್ಟರು ಎಂದು ಸಿಧಿಯ ಪೊಲೀಸ್ ವರಿಷ್ಠಾಧಿಕಾರಿ ರವೀಂದ್ರ ವರ್ಮಾ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ. ಉಳಿದವರಿಗೆ ಸಿಧಿ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಟ್ರಕ್ ಚಾಲಕನನ್ನು ಬಂಧಿಸಲಾಗಿದೆ ಎಂದು ಹೇಳಿದರು.



ಕೈಕೊಟ್ಟ ಟಾಯ್ಲೆಟ್; ದೆಹಲಿ ವಿಮಾನ ಅಮೆರಿಕದಲ್ಲಿ ಲ್ಯಾಂಡಿಂಗ್

ಅಮೆರಿಕ: ಚಿಕಾಗೋದಿಂದ ದೆಹಲಿಗೆ ತೆರಳುತ್ತಿದ್ದ ಏರ್ ಇಂಡಿಯಾ ವಿಮಾನವೊಂದು ಹತ್ತು ಗಂಟೆಗಳಿಗೂ ಹೆಚ್ಚು ಕಾಲ ಹಾರಾಟ ನಡೆಸಿದ ನಂತರ ಪುನಃ ಅಮೆರಿಕ ನಗರಕ್ಕೆ ಮರಳಿದ ಘಟನೆ ವರದಿಯಾಗಿದೆ. ಈ ಘಟನೆಗೆ ಸಂಬಂಧಿಸಿದಂತೆ ಏರ್ ಇಂಡಿಯಾ ವಿಮಾನಯಾನ ಸಂಸ್ಥೆಯು, ವಿಮಾನ ಪುನಃ ಚಿಕಾಗೋಗೆ ಮರಳಲು ತಾಂತ್ರಿಕ ದೋಷ ಕಾರಣವೆಂದು ಉಲ್ಲೇಖಿಸಿದೆ. ಆದರೆ ಈ ಘಟನೆಗೆ ನೈಜ ಪರಿಸ್ಥಿತಿ ಬಗ್ಗೆ ತಿಳಿದಿರುವ ಮೂಲವೊಂದು ಹಲವಾರು ಶೌಚಾಲಯಗಳು ಮುಚ್ಚಿಹೋಗಿದ್ದರಿಂದ ವಿಮಾನ ಹಿಂತಿರುಗಬೇಕಾಯಿತು ಎಂದು ಪಿಟಿಐ ಸುದ್ದಿ ಸಂಸ್ಥೆ ವರದಿ ಮಾಡಿದೆ. ದಿ ನ್ಯೂಯಾರ್ಕ್ ಪೋಸ್ಟ್ ಪ್ರಕಾರ ಒಂದು ಶೌಚಾಲಯವನ್ನು ಹೊರತುಪಡಿಸಿ ಉಳಿದೆಲ್ಲ ಶೌಚಾಲಯಗಳು ಮುಚ್ಚಿದ್ದರಿಂದ ಪ್ರಯಾಣಿಕರು ಎಲ್ಲಿಯೂ ಹೋಗದೆ ತೊಂದರೆ ಅನುಭವಿಸಿದರು. ಏರ್ ಇಂಡಿಯಾ ನಿರ್ವಹಿಸುವ ಬೋಯಿಂಗ್ 777-300ER ವಿಮಾನದಲ್ಲಿ ಪ್ರಥಮ ದರ್ಜೆ ಪ್ರಯಾಣಿಕರಿಗೆ ಎರಡು ಸೇರಿದಂತೆ 10 ಶೌಚಾಲಯಗಳಿವೆ ಮತ್ತು ಪ್ರಥಮ, ವ್ಯವಹಾರ ಮತ್ತು ಆರ್ಥಿಕ ವರ್ಗದ ಸೀಟುಗಳು ಸೇರಿದಂತೆ 340 ಕ್ಕಿಂತ ಹೆಚ್ಚು ಆಸನಗಳನ್ನು ಹೊಂದಿದೆ ಎಂದು ಮೂಲಗಳು ತಿಳಿಸಿವೆ.



ಕೊಡಗು ವಿವಿ ಉಳಿವಿಗಾಗಿ ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಮನವಿ



ಕೊಡಗು ವಿವಿ ಹಿತರಕ್ಷಣಾ ಬಳಗದ ನಿಯೋಗ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿತು.

ಮಡಿಕೇರಿ, ಮಾ.10– ಕೊಡಗು ವಿವಿ ರದ್ದು ಮಾಡದಂತೆ ಹಾಗೂ ಬೇರೆ ವಿವಿಗಳೊಂದಿಗೆ ವಿಲೀನಗೊಳಿಸದಂತೆ ಆಗ್ರಹಿಸಿ ಮಡಿಕೇರಿ ಕ್ಷೇತ್ರ ಶಾಸಕ ಡಾ. ಮಂತರ್‌ಗೌಡ ನೇತೃತ್ವದಲ್ಲಿ ಕೊಡಗು ವಿವಿ ಹಿತರಕ್ಷಣಾ ಬಳಗದ ನಿಯೋಗ ಬೆಂಗಳೂರಿಗೆ ತೆರಳಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ, ಮನವಿ ಸಲ್ಲಿಸಿತು.

ಕೊಡಗು ವಿವಿಯ ಅಗತ್ಯತೆ, ವಿದ್ಯಾರ್ಥಿಗಳ ಭವಿಷ್ಯ, ಸರ್ಕಾರದ ಅನುದಾನ, ವಿವಿಯಲ್ಲಿರುವ ಸೌಲಭ್ಯಗಳ ಸಹಿತ ವಿವಿಧ ವಿಚಾರಗಳ ಕುರಿತು ನಿಯೋಗ ಡಿ.ಕೆ.ಶಿವಕುಮಾರ್ ಅವರ ಗಮನ ಸೆಳೆಯಿತು. ಇದೇ ವೇಳೆ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜು ಅವರನ್ನೂ ಕೂಡ ಭೇಟಿ ಮಾಡಿ ಮನವಿ ಸಲ್ಲಿಸಿತು.

ನಿಯೋಗದಲ್ಲಿ ಕೊಡಗು ವಿವಿ ಹಿತ ರಕ್ಷಣಾ ಬಳಗ ಸಂಚಾಲಕ ವಿ.ಪಿ. ಶಶಿಧರ್, ಹಿರಿಯ ವಕೀಲ ಮತ್ತು ಕಾಂಗ್ರೆಸ್ ಮುಖಂಡ ಹೆಚ್.ಎಸ್.ಚಂದ್ರಮೌಳಿ, ಜಿ.ಪಂ ಮಾಜಿ ಸದಸ್ಯೆ ಕೆ.ಪಿ. ಚಂದ್ರಕಲಾ ಸೇರಿದಂತೆ ಮತ್ತಿತ್ತರರಿದ್ದರು.

ಗೌಡ ಸಮಾಜದಲ್ಲಿ ವಿಶ್ವ ಮಹಿಳಾ ದಿನಾಚರಣೆ




ಚೇರಂಬಾಣೆ, ಕಾರುಗುಂದ ಗೌಡ ಸಮಾಜದಲ್ಲಿ ವಿಶ್ವ ಮಹಿಳಾ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ನಾಪೋಕ್ಲು, ಮಾ.10 (ದುಗ್ಗಳ)– ಚೇರಂಬಾಣೆ, ಕಾರುಗುಂದ ಗೌಡ ಸಮಾಜದಲ್ಲಿ ವಿಶ್ವ ಮಹಿಳಾ ದಿನವನ್ನು ವಿವಿಧ ಕಾರ್ಯಕ್ರಮ ಗಳೊಂದಿಗೆ ಅರ್ಥಪೂರ್ಣವಾಗಿ ಶನಿವಾರ ಆಚರಿಸಲಾಯಿತು.

ಗೌಡ ಸಮಾಜದ ಅಧ್ಯಕ್ಷರಾದ ಕೊಡಪಾಲು ಗಣಪತಿ ಅವರು ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಮಹಿಳಾ ದಿನಾಚರಣೆಯನ್ನು ಇದೇ ಮೊದಲ ಬಾರಿಗೆ ಸಮಾಜದ ವತಿಯಿಂದ ಆಯೋಜಿಸಿದ್ದು ಸಮಾಜದ ಸರ್ವತೋಮುಖ ಬೆಳವಣಿಗೆಗೆ ಮಹಿಳೆಯರು ನೀಡುತ್ತಿರುವ ಸಹಕಾರವನ್ನು ಸ್ಮರಿಸಿಕೊಂಡರು. ಚೇರಂಬಾಣೆ ಗೌಡ ಸಮಾಜ ಲೋಕಾರ್ಪಣೆಗೊಂಡು ಎರಡು ವರ್ಷ ಕಳೆದಿದ್ದರೂ ಇದರಲ್ಲಿ ಯಾವುದೇ ಉಪಸಮಿತಿಗಳು ಇರುವುದಿಲ್ಲ ಇನ್ನು ಮುಂದೆ ಮಹಿಳಾ ಒಕ್ಕೂಟ ಹಾಗೂ ಯುವ ಒಕ್ಕೂಟ ರಚನೆಯಾದಲ್ಲಿ ಸಮಾಜಕ್ಕೆ ಇನ್ನಷ್ಟು ಬಲ ಸಿಗುತ್ತದೆ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಕಡ್ಲೇರ ತುಳಸಿ ಮೋಹನ್ ಮಾತನಾಡಿ, ಮಹಿಳೆಯರ ಸಾಧನೆಯನ್ನು ಗುರುತಿಸುವ ದಿನ ವಿಶ್ವ ಮಹಿಳಾ ದಿನ ತೊಟ್ಟಿಲ ತೂಗುವ ಕೈ ದೇಶವನ್ನಾಳುವುದು ಎನ್ನುವ ಮಾತಿಗೆ ಉದಾಹರಣೆಯಂತೆ ಇಂದು ದೇಶದ ಅತ್ಯುನ್ನತ ಪದವಿಯಲ್ಲಿ ಮಹಿಳೆಗೆ ಸ್ಥಾನಮಾನ ದೊರೆತಿರುವುದು ಸಾಕ್ಷಿಯಾಗಿದೆ. ಇಂದು ಮಹಿಳೆ ಎಲ್ಲಾ ಕ್ಷೇತ್ರದಲ್ಲೂ ತನ್ನ ಛಾಪು ಮೂಡಿಸಿ ಪುರುಷ ಪ್ರಧಾನ ಸಮಾಜದಲ್ಲಿ ಪ್ರತಿ ಪುರುಷನ ಹಿಂದೆ ನೆರಳಾಗಿ ಮಹಿಳೆ ಪ್ರತಿಯೊಂದು ಹಂತದಲ್ಲೂ ತನ್ನ ನಿಲುವನ್ನು ತೋರಿಸುತ್ತಿದ್ದಾಳೆ. ಹಾಗಾಗಿ ಸನ್ಮಾನ ಪ್ರಶಸ್ತಿ ಪುರಸ್ಕಾರಗಳು ಹೆಚ್ಚಿನ ಪಾಲು ಮಹಿಳೆಯದ್ದೇ ಆಗುತ್ತಿವೆ.ಸ್ತ್ರೀ ಯನ್ನು ಕವಿ ನದಿ ಪರಿಸರ ಹೊನ್ನು ಮಣ್ಣಿಗೆ ಹೋಲಿಸಿದ್ದಾರೆ ಆದ್ದರಿಂದ ಹೆಣ್ಣಿಲ್ಲದೆ ವಿಶ್ವ ನಶ್ವರ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯದರ್ಶಿ ಬೆಳ್ಯನ ಚಂದ್ರಪ್ರಕಾಶ್ ಮಾತನಾಡಿ, ಮೂರು ವರ್ಷಗಳಿಂದ ಈ ಭಾಗದಲ್ಲಿ ಮಹಿಳಾ ಒಕ್ಕೂಟ ರಚನೆಯಾಗಬೇಕೆಂದು ಆಲೋಚಿಸಿದ್ದು ಇಂದು ಸದವಕಾಶ ಒದಗಿ ಬಂದಿದೆ. ಮಹಿಳಾ ಒಕ್ಕೂಟ ರಚನೆಯಾದಲ್ಲಿ ಸಮಾಜದ ಬಲ ಹೆಚ್ಚುತ್ತದೆ ಹಾಗೂ ಸಂಘಟನೆಯು ಉತ್ತಮವಾಗುತ್ತದೆ ಎಂದು ಕಿವಿಮಾತು ಹೇಳಿದರು .

ಸಮಾಜದ ಉಪಾಧ್ಯಕ್ಷರಾದ ಕೇಕಡ ದಿನೇಶ್ ಮಾತನಾಡಿ, ಮಹಿಳಾ ದಿನಾಚರಣೆಯ ಶುಭ ಸಂದರ್ಭದಲ್ಲಿ ಸಮಾಜದ ಉಪಸಮಿತಿಯಂತೆ ಮಹಿಳಾ ಒಕ್ಕೂಟ ರಚನೆಯಾಗಿರುವುದು ಅಭಿವೃದ್ಧಿಯ ಸಂಕೇತ ಎಂದು ನೂತನ ಸಮಿತಿಗೆ ಶುಭ ಹಾರೈಸಿದರು.

ಬಳಿಕ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಈ ಸಂದರ್ಭ ಕಾರ್ಯಕ್ರಮದಲ್ಲಿ ಗೌಡ ಸಮಾಜದ ನಿರ್ದೇಶಕರಾದ ನೆಯ್ಯಣಿ ಹೇಮಲತಾ ತಾರೇಂದ್ರ, ಕೊಡಗನ ತೀರ್ಥ ಪ್ರಸಾದ್, ಎಡಿಕೇರಿ ಪ್ರವೀಣ್. ಹಿರಿಯರಾದ ಬೈಮನ ವಿಜಯಲಕ್ಷ್ಮಿ ಸೇರಿದಂತೆ ಸಮುದಾಯ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಸಮಾಜದ ಕಾರ್ಯದರ್ಶಿ ಚಂದ್ರಪ್ರಕಾಶ್ ಸ್ವಾಗತಿಸಿ ನೂತನ ಮಹಿಳಾ ಒಕ್ಕೂಟದ ಕಾರ್ಯದರ್ಶಿ ಕೇಕಡ ಪೂಜಾ ನಾಗೇಂದ್ರ ಸರ್ವರನ್ನು ವಂದಿಸಿದರು.

ನಾಳೆ ಜನ ಸಂಪರ್ಕ ಸಭೆ

ಮಡಿಕೇರಿ ಮಾ.10–ವಿರಾಜಪೇಟೆ ಉಪ ವಿಭಾಗ ವ್ಯಾಪ್ತಿಯ ವಿದ್ಯುತ್ ಗ್ರಾಹಕರ ಕುಂದು ಕೊರತೆ ನಿವಾರಿಸುವ ಸಭೆಯು ಮಾರ್ಚ್ 12 ರಂದು ಬೆಳಗ್ಗೆ 11.30 ಗಂಟೆಯಿಂದ 12.30 ಗಂಟೆವರೆಗೆ ವಿರಾಜಪೇಟೆ ಉಪವಿಭಾಗ ಕಚೇರಿ ಆವರಣದಲ್ಲಿ ಕಾರ್ಯನಿರ್ವಾಹಕ ಎಂಜಿನಿಯರ್(ವಿ), ಚಾ.ವಿ.ಸ.ನಿ.ನಿ., ಮಡಿಕೇರಿರವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ಹಾಗೆಯೇ ಗೋಣಿಕೊಪ್ಪಲು ವ್ಯಾಪ್ತಿಯ ವಿದ್ಯುತ್ ಗ್ರಾಹಕರ ಕುಂದುಕೊರತೆಗಳನ್ನು ನಿವಾರಿಸಲು ಸಭೆಯು ಮಾರ್ಚ್, 12 ರಂದು ಮಧ್ಯಾಹ್ನ 2.30 ಗಂಟೆಯಿಂದ 3.30 ಗಂಟೆವರೆಗೆ ಗೋಣಿಕೊಪ್ಪಲು ಉಪವಿಭಾಗ ಕಚೇರಿ ಆವರಣದಲ್ಲಿ ಕಾರ್ಯನಿರ್ವಾಹಕ ಎಂಜಿನಿಯರ್ (ವಿ), ಚಾ.ವಿ.ಸ.ನಿ.ನಿ., ಮಡಿಕೇರಿರವರ ಅಧ್ಯಕ್ಷತೆಯಲ್ಲಿ ನಡೆಯಲಿದೆ. ವಿರಾಜಪೇಟೆ ಮತ್ತು ಗೋಣಿಕೊಪ್ಪಲು ವ್ಯಾಪ್ತಿಯ ಸಾರ್ವಜನಿಕರು/ವಿದ್ಯುತ್ ಗ್ರಾಹಕರ ವಿದ್ಯುಚ್ಛಕ್ತಿಗೆ ಸಂಬಂಧಿಸಿದ ಸಮಸ್ಯೆ ಅಥವಾ ದೂರುಗಳು ಇದ್ದಲ್ಲಿ ಈ ಸಭೆಯಲ್ಲಿ ಚರ್ಚಿಸಿ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರು ಈ ಸಭೆಗೆ ಹಾಜರಾಗುವಂತೆ ಚಾವಿಸನಿನಿ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಎಂಜಿನಿಯರ್ ಅವರು ಕೋರಿದ್ದಾರೆ.

ನೇಣು ಬಿಗಿದುಕೊಂಡು ಕಾರ್ಮಿಕ ಆತ್ಮಹತ್ಯೆ

ನಾಪೋಕ್ಲು, ಮಾ.10– ಕಾರ್ಮಿಕನೊಬ್ಬ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಇಲ್ಲಿಗೆ ಸಮೀಪದ ಬಲ್ಲಮಾವಟಿ ಗ್ರಾಮದಲ್ಲಿ ಜರುಗಿದೆ.

ಕೊಡಗಿನ ಮಾಲ್ದಾರೆ ನಿವಾಸಿ ರಮೇಶ್ (28) ಎಂಬವರೇ ಆತ್ಮಹತ್ಯೆ ಮಾಡಿಕೊಂಡವನಾಗಿದ್ದು, ಈತ ಬಲ್ಲಮಾವಟಿ ಗ್ರಾಮದ ಅಪ್ಪಚೆಟ್ಟೋಳಂಡ ವಾಸು ಎಂಬವರ ಕಾಫಿ ತೋಟದಲ್ಲಿ ಕಾರ್ಮಿಕನಾಗಿದ್ದ. ಭಾನುವಾರ ಸಂಜೆ ಊರಿಗೆ ತೆರಳಲು ಬಸ್ಸ್ ಸೌಕರ್ಯ ಇಲ್ಲದಿದ್ದರಿಂದ ಗ್ರಾಮದ ನೇತಾಜಿ ವಿದ್ಯಾ ಸಂಸ್ಥೆಯ ಕಾವಲುಗಾರ ಕುಮಾರ ಎಂಬವರಲ್ಲಿ ಉಳಿದುಕೊಳ್ಳಲು ಆಶ್ರಯ ಕೇಳಿ ಅಲ್ಲೇ ಉಳಿದುಕೊಂಡಿದ್ದ ರಮೇಶ್ ಶವ ಸೋಮವಾರ ಬೆಳಿಗ್ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಸ್ಥಿತಿಯಲ್ಲಿ ಕಂಡು ಬಂದಿದೆ. ಅಣ್ಣ ಲೋಕೇಶ್ ಎಂಬವರು ನೀಡಿದ ದೂರಿನನ್ವಯ ನಾಪೋಕ್ಲು ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಕೊಡಗಿನ ಪತ್ರಕರ್ತ ಪ್ರಶಾಂತ್ ಟಿ.ಆರ್ ಅವರ 'ಹೊನ್ನಮ್ಮನ ಕನಸು' ಕಾದಂಬರಿಗೆ ಪ್ರಶಸ್ತಿ

ಮಡಿಕೇರಿ, ಮಾ.10– ಕರುನಾಡ ಕನ್ನಡ ಕಲಾಸಿರಿ ಬಳಗ ಹಾಗೂ ಎಜಿಎಸ್ ಚಾರಿಟಬಲ್ ಟ್ರಸ್ಟ್ ಕೊಡಮಾಡುವ ವಾರ್ಷಿಕ ಪ್ರಶಸ್ತಿ ಪ್ರಕಟವಾಗಿದೆ.



ಕಲೆ, ಸಾಹಿತ್ಯ, ಶಿಕ್ಷಣ, ಆರೋಗ್ಯ, ಸಮಾಜ ಸೇವೆ ಹೀಗೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಈ ಬಾರಿ ಕೊಡಗಿನ ಪತ್ರಕರ್ತ ಪ್ರಶಾಂತ್ ಟಿ.ಆರ್ ವಿರಚಿತ 'ಹೊನ್ನಮ್ಮನ ಕನಸು' ಕಾದಂಬರಿಗೆ ಅತ್ಯುತ್ತಮ ಕಾದಂಬರಿ ಪ್ರಶಸ್ತಿ ಲಭಿಸಿದೆ. ಹಳ್ಳಿಯ ವೃದ್ಧ ಮಹಿಳೆಯೊಬ್ಬಳ ಮಾನಸಿಕ ತೊಳಲಾಟದ ಜೊತೆಗೆ ಸಾಮಾಜಿಕ ಕಳಕಳಿಯೂ ಈ ಕಾದಂಬರಿಯ ಕಥಾ ವಸ್ತುವಾಗಿದೆ.

ಈ ಕಾದಂಬರಿಯನ್ನು ಮೆಚ್ಚಿದ ಖ್ಯಾತ ನಿರ್ದೇಶಕ ಯೋಗರಾಜ್ ಭಟ್ ಬೆನ್ನುಡಿ ಬರೆದಿದ್ದಾರೆ. ಪ್ರಶಾಂತ್ ಅವರು ವಿಶ್ವವಾಣಿ ಪತ್ರಿಕೆಯಲ್ಲಿ ಸಿನಿಮಾ ವಿಭಾಗ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಲ್ಲದೆ ಕೆಲವು ಸಿನಿಮಾಗಳಲ್ಲಿಯೂ ನಟಿಸುವ ಮೂಲಕ ನಟನಾಗಿಯೂ ಗುರುತಿಸಿಕೊಂಡಿದ್ದಾರೆ. ಏಪ್ರಿಲ್ 13ರಂದು ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್‌ನ ಶ್ರೀಕೃಷ್ಣರಾಜ ಸಭಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

ನಟಿ ರಶ್ಮಿಕಾ ಮಂದಣ್ಣಗೆ ಸೂಕ್ತ ಭದ್ರತೆ ನೀಡಿ: ಕೇಂದ್ರ, ರಾಜ್ಯ ಗೃಹ ಸಚಿವರಿಗೆ ಸಿಎನ್‌ಸಿ ಪತ್ರ

ಬೆಂಗಳೂರು, ಮಾ.10– ಬಹುಭಾಷಾ ಚಿತ್ರನಟಿ ರಶ್ಮಿಕಾ ಮಂದಣ್ಣ ಅವರ ವಿರುದ್ಧ ಕಾಂಗ್ರೆಸ್ ಶಾಸಕ ರವಿಕುಮಾರ್ ಗೌಡ (ಗಣಿಗ) ಮತ್ತು ಕನ್ನಡ ಹೋರಾಟಗಾರ ಟಿ.ಎ.ನಾರಾಯಣ ಗೌಡ ಟೀಕಿಸಿದ ಬೆನ್ನಲ್ಲೇ ನಟಿಗೆ ಸೂಕ್ತ ರಕ್ಷಣೆ ನೀಡುವಂತೆ ಕೊಡವ ನ್ಯಾಷನಲ್ ಕೌನ್ಸಿಲ್ (ಸಿಎನ್‌ಸಿ) ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಕರ್ನಾಟಕದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಒತ್ತಾಯಿಸಿದೆ.



ರಶ್ಮಿಕಾ ಮಂದಣ್ಣ



ಎನ್.ಯು.ನಾಚಪ್ಪ

ಈ ಸಂಬಂಧ ಅಮಿತ್ ಶಾ ಹಾಗೂ ಪರಮೇಶ್ವರ್ ಅವರಿಗೆ ಪತ್ರ ಬರೆದಿರುವ ಸಿಎನ್‌ಸಿ ಅಧ್ಯಕ್ಷ ಎನ್.ಯು. ನಾಚಪ್ಪ, ರಶ್ಮಿಕಾ ಅವರನ್ನು ಶಾಸಕರೊಬ್ಬರು ಬೆದರಿಸುತ್ತಿದ್ದಾರೆ ಎಂದು ಆರೋಪಿಸಿದ್ದು, ಇದನ್ನು ಕೊಡವರು ಗೂಂಡಾಗಿರಿ ಎಂದು ಪರಿಗಣಿಸುತ್ತಾರೆ ಎಂದು ಹೇಳಿದ್ದಾರೆ.

ಕೊಡವ ಲ್ಯಾಂಡ್‌ನ ಸ್ಥಳೀಯ ಕೊಡವ ಬುಡಕಟ್ಟು ಜನಾಂಗಕ್ಕೆ ಸೇರಿದ ರಶ್ಮಿಕಾ ತಮ್ಮ ಕಠಿಣ ಪರಿಶ್ರಮ ಮತ್ತು ಪ್ರತಿಭೆಯ ಮೂಲಕ ಭಾರತೀಯ ಚಿತ್ರರಂಗದಲ್ಲಿ ಅಪಾರ ಯಶಸ್ಸನ್ನು ಸಾಧಿಸಿದ್ದಾರೆ. ಅವರು ಅಮಿತಾಬ್ ಬಚ್ಚನ್ ಮತ್ತು ಸಲ್ಮಾನ್ ಖಾನ್ ಅವರಂತಹ ಪ್ರಮುಖ ನಟರೊಂದಿಗೆ ನಟಿಸಿದ್ದಾರೆ. ರಶ್ಮಿಕಾ ಅವರು ಸ್ವಂತ ಆಯ್ಕೆ ಮಾಡುವ ಸ್ವಾತಂತ್ರ್ಯ ಹೊಂದಿದ್ದು, ಅದನ್ನು ಗೌರವಿಸಬೇಕು ಎಂದಿದ್ದಾರೆ. ಯಾರದ್ದೋ ಸೂಚನೆಯಂತೆ ನಡೆದುಕೊಳ್ಳಬೇಕೆಂದು ಒತ್ತಾಯಿಸಬಾರದು. ಕೇವಲ ರಶ್ಮಿಕಾ ಅವರ ಸಮುದಾಯದ ಕಾರಣದಿಂದ ಟಾರ್ಗೆಟ್ ಮಾಡಲಾಗುತ್ತಿದೆ ಎಂಬ ಅರ್ಥ ಬರುತ್ತದೆ ಎಂದು ಟೀಕಿಸಿದ್ದಾರೆ.

ಮಲೆತಿರಿಕೆ ಬೆಟ್ಟಕ್ಕೆ ಬೆಂಕಿ: ಅಪಾರ ಪ್ರಮಾಣದ ಅರಣ್ಯ ನಾಶ




ಅಗ್ನಿಶಾಮಕದಳ ಸಿಬ್ಬಂದಿ ಬೆಂಕಿ ನಂದಿಸುತ್ತಿರುವುದು.

ವಿರಾಜಪೇಟೆ, ಮಾ.10–ವಿರಾಜಪೇಟೆ ಪಟ್ಟಣದ ಮಲೆತಿರಿಕೆ ಬೆಟ್ಟದ ತಪ್ಪಲಿನ ಕುರುಚಲು ಕಾಡಿಗೆ ಸೋಮವಾರ ಮಧ್ಯಾಹ್ನ ಬೆಂಕಿ ತಗುಲಿದ್ದು, ಅಪಾರ ಪ್ರಮಾಣದ ಅರಣ್ಯ ನಾಶವಾಗಿದೆ. ಬೆಂಕಿ ನಂದಿಸುವಲ್ಲಿ ಅಗ್ನಿಶಾಮಕದಳ ಹಾಗೂ ಸ್ಥಳೀಯರು ಹರಸಾಹಸ ಪಡುವಂತಾಯಿತು.

ಮಲೆತಿರಿಕೆ ಬೆಟ್ಟದ ರಸ್ತೆ ಬದಿಯಲ್ಲಿ ಮಧ್ಯಾಹ್ನ 2 ಗಂಟೆ ಸುಮಾರಿಗೆ ಬೆಂಕಿ ಕಾಣಿಸಿಕೊಂಡಿದ್ದು, ಅದನ್ನು ಗಮನಿಸಿದ ಸ್ಥಳೀಯ ನಿವಾಸಿಗಳು ಪುರಸಭೆಗೆ ಮತ್ತು ಪೊಲೀಸ್ ಇಲಾಖೆಗೆ ದೂರವಾಣಿ ಮೂಲಕ ಸಂಪರ್ಕಿಸಿದಾಗ ಅವರು ಗೋಣಿಕೊಪ್ಪಲುವಿನಲ್ಲಿರುವ ಅಗ್ನಿ ಶಾಮಕದಳಕ್ಕೆ ಮಾಹಿತಿ ನೀಡಿದ್ದಾರೆ. ಈ ವೇಳೆ ಅಗ್ನಿಶಾಮಕ ದಳ ವಾಹನ ಕೂಡಲೇ ವಿರಾಜಪೇಟೆ ಮಲೆತಿರಿಕೆ ಬೆಟ್ಟಕ್ಕೆ ಬಂದು ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು. ಈ ಸಂದರ್ಭ ದಂತ ವೈದ್ಯಕೀಯ ಕಾಲೇಜಿನ ವಾಹನದಲ್ಲಿ ಮತ್ತು ಪುರಸಭೆಯಿಂದ ಟ್ಯಾಂಕರ್ ಮೂಲಕ ನೀರು ತಂದು ಬೆಂಕಿ ನಂದಿಸಲು ಸಾಹಸಪಡುತ್ತಿರುವುದು ಕಂಡು ಬಂತು. ಪುರಸಭೆ ಅಧ್ಯಕ್ಷೆ ಎಂ.ಕೆ.ದೇಚಮ್ಮ ಮುಖ್ಯಾಧಿಕಾರಿ ಪಿ.ಕೆ.ನಾಚಪ್ಪ ನಗರ ಪೊಲೀಸ್ ಠಾಣಾಧಿಕಾರಿ ವಾಣಿಶ್ರೀ, ಅರಣ್ಯ ಇಲಾಖೆ, ಕಂದಾಯ ಇಲಾಖೆ, ಪೊಲೀಸ್, ಪುರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಶಿವು ಮಾದಪ್ಪ ನಿಧನ



ಮಡಿಕೇರಿ, ಮಾ.10– ಕೊಡಗು ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷರೂ ಆದ ಜಿಪಂ ಮಾಜಿ ಸದಸ್ಯ ಕುಟ್ಟ ಗ್ರಾಮ ನಿವಾಸಿ ಮುಕ್ಕಾಟಿರ ಶಿವು ಮಾದಪ್ಪ (49) ಅವರು ಭಾನುವಾರ ರಾತ್ರಿ ಹೃದಯಾಘಾತದಿಂದ ನಿಧನರಾದರು.

ಶಿವು ಮಾದಪ್ಪ ಅವರು ತಾಯಿ, ಪತ್ನಿ ಹಾಗೂ ಮೂವರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಸೋಮವಾರ ಶಿವು ಮಾದಪ್ಪ ಅವರ ಅಂತ್ಯಕ್ರಿಯೆ ಕುಟ್ಟ ಗ್ರಾಮದ ಮುಕ್ಕಾಟಿರ ಕುಟುಂಬಸ್ಥರ ರುದ್ರಭೂಮಿಯಲ್ಲಿ ಕೊಡವ ಸಾಂಪ್ರದಾಯಿಕ ವಿಧಿ ವಿಧಾನದಂತೆ ನೆರವೇರಿತು.

ಸೋಮವಾರ ಶಿವು ಮಾದಪ್ಪ ಅವರ ನಿವಾಸಕ್ಕೆ ಭೇಟಿ ನೀಡಿದ ವಿರಾಜಪೇಟೆ ಕ್ಷೇತ್ರದ ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ, ಹೈಕೋರ್ಟ್‌ನ ನಿವೃತ್ತ ನ್ಯಾಯಾಧೀಶರಾದ ಅಜ್ಜಿಕುಟ್ಟೀರ ಬೋಪಣ್ಣ, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮಜ ಉತ್ತಪ್ಪ ಮಾಜಿ ಎಂಎಲ್‌ಸಿ ವೀಣಾ ಅಚ್ಚಯ್ಯ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಮೃತರ ಅಂತಿಮ ದರ್ಶನ ಪಡೆದರು. ಮುಕ್ಕಾಟಿರ ಶಿವು ಮಾದಪ್ಪ ಅವರ ಅಕಾಲಿಕ ನಿಧನಕ್ಕೆ ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಭೋಸರಾಜು, ಶಾಸಕ ಡಾ.ಮಂತರ್ ಗೌಡ ಸಹಿತ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಸಾಹಿತಿಗಳು, ಕವಿಗಳಿಗೆ ಪ್ರೊ.ಮಲೆಯೂರು ಗುರುಸ್ವಾಮಿ ಸ್ಫೂರ್ತಿ

ಸಂಸ್ಮರಣಾ ಕಾರ್ಯಕ್ರಮದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕತ ಸಾಹಿತಿ ಡಾ.ಸಿ.ನಾಗಣ್ಣ ಅಭಿಪ್ರಾಯ



ಕಾರ್ಯಕ್ರಮವನ್ನು ಜೆಎಸ್‌ಎಸ್ ಮಹಾವಿದ್ಯಾಪೀಠದ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ ಉದ್ಘಾಟಿಸಿದರು.

"ಸಾಹಿತಿ ಪ್ರೊ.ಮಲೆಯೂರು ಗುರುಸ್ವಾಮಿ ರಚನೆಯ ಸಾವಿರ ಪುಟದ ಸಾಹಿತ್ಯ ಸುವರ್ಣಾವತಿ, ಮಲೆಮಹದೇಶ್ವರರ ಕುರಿತ ಮಹಾಯಾತ್ರಿಕ, ನಾಟಕಕಾರ ಸಂಸ, ನಂಜನಗೂಡು ಸಂಗೀತ ವಿದುಷಿ ನಾಗರತ್ನಮ್ಮ ಕುರಿತು ಕಪಿಲೆ ಹರಿದಳು ಕಡಲಿಗೆ, ಹೊನ್ನುಹೊಳೆ ಸೇರಿದಂತೆ ನಾನಾ ಕೃತಿಗಳು ಜಿಲ್ಲೆಯ ಸಾಹಿತ್ಯ ಶ್ರೀಮಂತಿಕೆ ಇಮ್ಮಡಿಗೊಳಿಸಿವೆ. ಅವರ ಅಕಾಲಿಕ ನಿಧನ ಸಾಹಿತ್ಯ ಸಾಂಸ್ಕೃತಿಕ, ಸಮಾಜಕ್ಕೆ ದೊಡ್ಡ ನಷ್ಟ.

- ಡಾ.ಸಿ.ನಾಗಣ್ಣ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ.

ಚಾಮರಾಜನಗರ, ಮಾ.10– ಜಿಲ್ಲೆಯ ಹಿರಿಯರಿಂದ ಹಿಡಿದು ಕಿರಿಯ ಸಾಹಿತಿಗಳನ್ನು ಪರಿಚಯಿಸುವ ಜೊತೆಗೆ ಅವರ ಸಾಹಿತ್ಯ ಆಸಕ್ತಿ ಮತ್ತು ಸಾಧನೆಯನ್ನು ಮನಮಟ್ಟುವಂತೆ ಮಲೆಯೂರು ಗುರುಸ್ವಾಮಿಯವರು ಸಂಶೋಧಾನಾತ್ಮಕವಾಗಿ ರಚಿಸಿರುವ ಸಾಹಿತ್ಯ ಸುವರ್ಣಾವತಿ ಜಿಲ್ಲೆಯ ಸಾಹಿತ್ಯದ ಶಿರೋಮಣಿ ಇದ್ದ ಹಾಗೆ ಎಂದು ನಿವೃತ್ತ ಪ್ರಾಧ್ಯಾಪಕರು, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ಡಾ.ಸಿ.ನಾಗಣ್ಣ ತಿಳಿಸಿದರು.

ನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಮೈಸೂರು ಮಲೆಯೂರು ಗುರುಸ್ವಾಮಿ ಪ್ರತಿಷ್ಠಾನ, ಚಾಮರಾಜನಗರ ಜೆಎಸ್‌ಎಸ್ ಮಹಿಳಾ ಕಾಲೇಜು, ರಂಗತರಂಗ ಟ್ರಸ್ಟ್ ಸಹಯೋಗದಲ್ಲಿ ಸೋಮವಾರ ಮಧ್ಯಾಹ್ನ ನಡೆದ ಪ್ರೊ.ಮಲೆಯೂರು ಗುರುಸ್ವಾಮಿ ಅವರ 2ನೇ ಸಂಸ್ಮರಣಾ ಕಾರ್ಯಕ್ರಮದಲ್ಲಿ ನುಡಿನಮನ ನೆರವೇರಿಸಿ ಅವರು ಮಾತನಾಡಿದರು. ಮಲೆಯೂರು ಗುರುಸ್ವಾಮಿ ಅವರು ನಮ್ಮನ್ನು ಭೌತಿಕವಾಗಿ ಅಗಲಿದ್ದರೂ, ಜಿಲ್ಲೆಯ ಸಾಹಿತ್ಯ ಲೋಕವನ್ನು ತಮ್ಮ ಸಾಹಿತ್ಯ ಸುವರ್ಣಾವತಿ ಮೂಲಕ ಶ್ರೀಮಂತಗೊಳಿಸಿ ಸಾಹಿತಿಗಳು, ಕವಿಗಳಿಗೆ ಸ್ಫೂರ್ತಿಯಾಗಿದ್ದಾರೆ ಎಂದರು.

ಮಲೆಯೂರು ಗುರುಸ್ವಾಮಿ ಅವರು ಭಾರತದ ಇತಿಹಾಸ ಬಲ್ಲವರಾಗಿದ್ದರು. ಜಗತ್ತಿನಲ್ಲಿ ನಡೆಯುವ ಆಗು–ಹೋಗುಗಳ ಅರಿತವರಾಗಿದ್ದರು. ಅಲಕ್ಷಿತ ಸಮುದಾಯಗಳ ಬದುಕು ಕುರಿತು ವಿಶಿಷ್ಟ ಬೆಳಕು ಚೆಲ್ಲಿದ ಅವರು ಕೇವಲ ವ್ಯಕ್ತಿಯಾಗಿರಲಿಲ್ಲ, ಶಕ್ತಿಯಾಗಿದ್ದರು ಎಂದರು.

ದೇಶ ಸೇರಿದಂತೆ ರಾಜ್ಯದ ಕಟ್ಟಡ, ಸ್ಥಳ, ಊರುಕೇರಿ ಬಗ್ಗೆ ಸಾಕಷ್ಟು ಜ್ಞಾನವಿತ್ತು. ಅವರ ಜ್ಞಾನ ಅಸದೃಶ್ಯ. ಅವರು ಸಾಮಾನ್ಯರಲ್ಲಿ ಸಾಮಾನ್ಯ ವ್ಯಕ್ತಿಯಾಗಿ ಬೆರೆತು ಇತರರಿಗೆ ಮಾರ್ಗದರ್ಶಕರಾಗಿ ಅವರ ಬೆಳವಣಿಗೆಗೆ ಕಾರಣರಾಗಿದ್ದರು ಎಂದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜೆಎಸ್‌ಎಸ್ ಮಹಾವಿದ್ಯಾಪೀಠದ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ, ಸಾಹಿತಿ ಪ್ರೊ.ಮಲೆಯೂರು ಗುರುಸ್ವಾಮಿ ಅವರು ಸಾರ್ಥಕ ಬದುಕನ್ನು ಸಾಧಿಸಿದವರು ಎಂದರು.

ಬದುಕು ಎಷ್ಟು ಸೂಕ್ಷ್ಮ ಮತ್ತು ವೈರುಧ್ಯ ಎಂಬುದನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು. ನಮ್ಮ ಸಾವಿನ ನಂತರವೂ ಜನ ನಮ್ಮನ್ನು ನೆನಪು ಮಾಡಿಕೊಳ್ಳುತ್ತಾರೆ ಎಂದರೆ ಅದು ನಮ್ಮ ಗುಣದಿಂದ ಮಾತ್ರ ಅಂತಹ ಗುಣವನ್ನು ಹೊಂದಿದ್ದವರು ಪ್ರೊ.ಮಲೆಯೂರು ಗುರುಸ್ವಾಮಿ ಅವರು ಎಂದರು.

ಗುರುಸ್ವಾಮಿ ಅವರು ವರ್ತಮಾನದಲ್ಲಿ ಹೇಗೆ ನಮ್ಮ ಬದುಕನ್ನು ರೂಪಿಸಿಕೊಳ್ಳಬೇಕು ಎಂದು ಅರಿವು ಮೂಡಿಸಿದರು. ಇಲ್ಲಿ ಏನಿದೆ, ಏನಿಲ್ಲ ಹೇಳಿ, ಏನಿದೆ ನೋಡಿ ಎಂದು ಇಡೀ ಚಾಮರಾಜನಗರ ಜಿಲ್ಲೆ ನೋಟವನ್ನು ತಮ್ಮ ಸಾಹಿತ್ಯ ಸುವರ್ಣಾವತಿ ಕೃತಿಯ ಮೂಲಕ ತೋರಿಸಿಕೊಟ್ಟವರು ಎಂದರು. ಅವರ ಮಾರ್ಗದರ್ಶನ ದಲ್ಲಿ ಪ್ರತಿಯೊಬ್ಬರೂ ಸಾಗಬೇಕು. ಅವರನ್ನು ನಾವು ಕಳೆದುಕೊಂಡು 2 ವರ್ಷಗಳು ಕಳೆದಿರುವುದು ನಮ್ಮ ದೌರ್ಭಾಗ್ಯವೇ ಸರಿ ಎಂದರು. ಸೋಮಶೇಖರ್ ಬಿಸಲ್ವಾಡಿ ಮಾತನಾಡಿ, ಗುರುಸ್ವಾಮಿ ಅವರು ನಿವೃತ್ತರಾದ ಬಳಿಕವೂ ಅಪಾರ ಶಿಷ್ಯ ಬಳಗ ಹೊಂದಿದ್ದರು. ದೊಡ್ಡ ವ್ಯಕ್ತಿತ್ವವುಳ್ಳ ಅವರು ಸೂರ್ಯನಂತೆ ಪ್ರಕಾಶಮಾನವಾಗಿ ಹೊಳೆಯುತ್ತಿದ್ದರು ಎಂದರು. ಪ್ರಾಂಶುಪಾಲ ಎನ್. ಮಹದೇವಸ್ವಾಮಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಸಾರ್ವಜನಿಕ ಸಂಪರ್ಕಾಧಿಕಾರಿ ಆರ್.ಎಂ.ಸ್ವಾಮಿ, ಜಿಲ್ಲಾ ಲೇಖಕರ ಸಂಘದ ಅಧ್ಯಕ್ಷ ರೇಚಂಬಳ್ಳಿ ದುಂಡು ಮಾದಯ್ಯ, ಮಗು ಅಭಿಮಾನಿಗಳು, ಅಧ್ಯಾಪಕರು, ಉಪನ್ಯಾಸಕರು, ವಿದ್ಯಾರ್ಥಿನಿಯರು ಇದ್ದರು.

ಹನೂರು ಬಳಿ ಖಾಸಗಿ ಬಸ್ ಪಲ್ಟಿ

ಓರ್ವ ಸಾವು, 40ಕ್ಕೂ ಹೆಚ್ಚು ಮಂದಿಗೆ ಗಾಯ



ಗಾಯಾಳುಗಳಿಗೆ ಮಾಜಿ ಶಾಸಕ ನರೇಂದ್ರ ಸಾಂತ್ವನ ಹೇಳಿದರು.

ಹನೂರು, ಮಾ.10– ಚಾಲಕನ ನಿಯಂತ್ರಣ ತಪ್ಪಿ ಖಾಸಗಿ ಬಸ್ ಪಲ್ಟಿಯಾದ ಪರಿಣಾಮ ಓರ್ವ ಸಾವನ್ನಪ್ಪಿ, ನಲವತ್ತಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಘಟನೆ ತಾಲೂಕಿನ ತೆಳ್ಳನೂರು ಬಂಡಳ್ಳಿ ಮಾರ್ಗ ಮಧ್ಯವಿರುವ ಅರಣ್ಯದ ತಿರುವಿನಲ್ಲಿ ಭಾನುವಾರ ರಾತ್ರಿ ನಡೆದಿದೆ.

ತಾಲೂಕಿನ ದೊಡ್ಡಿಂದುವಾಡಿ ಗ್ರಾಮದ ನಿವಾಸಿ ನವೀನ್ (38) ಸಾವನ್ನಪ್ಪಿದ್ದು ಘಟನೆಯಲ್ಲಿ ಗಾಯಗೊಂಡವರನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.



ನವೀನ್

ವಿವರ: ತಾಲೂಕಿನ ಶಾಗ್ಯ ಗ್ರಾಮದ ಯುವಕನಿಗೆ ಕನಕಪುರ ತಾಲೂಕಿನ ಹನಿಯೂರು ಗ್ರಾಮದ ಯುವತಿಯೊಂದಿಗೆ ನಿಶ್ಚಿತಾರ್ಥ ನಿಶ್ಚಯವಾಗಿತ್ತು. ಭಾನುವಾರ ಎಲ್ಲರೂ ಖಾಸಗಿ ಬಸ್‌ನಲ್ಲಿ ಯುವತಿ ಗ್ರಾಮಕ್ಕೆ ತೆರಳಿ ನಿಶ್ಚಿತಾರ್ಥ ಮುಗಿಸಿಕೊಂಡು ವಾಪಸ್ಸಾಗುವ ವೇಳೆ ತೆಳ್ಳನೂರು ಬಂಡಳ್ಳಿ ಮಾರ್ಗ ಮಧ್ಯ ಅರಣ್ಯದ ತೀವ್ರ ತಿರುವಿನಲ್ಲಿ ಚಾಲಕನ ನಿಯಂತ್ರಣ ಕಳೆದುಕೊಂಡ ಬಸ್ ಪಲ್ಟಿಯಾಗಿದೆ. ಪರಿಣಾಮ ತೀವ್ರ ಗಾಯಗೊಂಡ ನವೀನ್ ಸ್ಥಳದಲ್ಲೇ ಸಾವನ್ನಪ್ಪಿದರೇ, 40ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದರು. ಈ ವೇಳೆ ಬಂಡಳ್ಳಿ ಗ್ರಾಮಸ್ಥರು ಗಾಯಾಳುಗಳನ್ನು ಬಂಡಳ್ಳಿ ಗ್ರಾಮದ ಖಾಸಗಿ ಕ್ಲಿನಿಕ್‌ಗೆ ಕರೆದೊಯ್ದು ಪ್ರಥಮ ಚಿಕಿತ್ಸೆ ಕೊಡಿಸಿ ಕಾಮಗೆರೆಯ ಹೋಲಿ ಕ್ರಾಸ್, ಕೊಳ್ಳೇಗಾಲ ಉಪವಿಭಾಗ ಆಸ್ಪತ್ರೆಗೆ ದಾಖಲಿಸಿದ್ದರು. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಹನೂರು ಠಾಣೆ ಎಸ್‌ಐ ಮಂಜುನಾಥ್ ಪ್ರಸಾದ್ ಹಾಗೂ ಸಿಬ್ಬಂದಿ ಪರಿಶೀಲನೆ ನಡೆಸಿ, ಶವವನ್ನು ಹನೂರು ಸಾರ್ವಜನಿಕ ಆಸ್ಪತ್ರೆ ಶವಾಗಾರಕ್ಕೆ ರವಾನಿಸಿ ಪ್ರಕರಣ ದಾಖಲಿಸಿಕೊಂಡಿದ್ದರು.

ಮಾಜಿ ಶಾಸಕರಿಂದ ಗಾಯಾಳುಗಳಿಗೆ ಸಾಂತ್ವನ: ವಿಷಯ ತಿಳಿದು ಭಾನುವಾರ ರಾತ್ರಿ ಮಾಜಿ ಶಾಸಕ ಆರ್.ನರೇಂದ್ರ ಕೊಳ್ಳೇಗಾಲ ಉಪವಿಭಾಗ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳಿಗೆ ಸಾಂತ್ವನ ಹೇಳಿ ಧೈರ್ಯ ತುಂಬಿದರು. ಅಲ್ಲದೇ ಕರ್ತವ್ಯದಲ್ಲಿದ್ದ ವೈದ್ಯಾಧಿಕಾರಿಗಳಿಗೆ ಗಾಯಾಳುಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಬೇಕು. ಹೆಚ್ಚಿನ ಚಿಕಿತ್ಸೆ ಅವಶ್ಯಕತೆ ಇದ್ದರೆ ಚಾಮರಾಜನಗರ ಅಥವಾ ಮೈಸೂರು ಆಸ್ಪತ್ರೆಗೆ ಕಳುಹಿಸಿಕೊಡುವಂತೆ ಸೂಚನೆ ನೀಡಿದರು.

ಇನ್ನು ಹನೂರು ಪಟ್ಟಣದ ಪ್ರಾಥಮಿಕ ಆರೋಗ್ಯ ಕೇಂದ್ರದ ಶವಾಗಾರಕ್ಕೆ ಭೇಟಿ ನೀಡಿದ ಮಾಜಿ ಶಾಸಕರು ಮೃತ ನವೀನ್ ಅಂತಿಮ ದರ್ಶನ ಪಡೆದು ತಾಲೂಕು ವೈದ್ಯಾಧಿಕಾರಿ ಡಾ.ಪ್ರಕಾಶ್ ಅವರಿಗೆ ದೂರವಾಣಿ ಕರೆ ಮಾಡಿ ಆದಷ್ಟು ಬೇಗ ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಶವ ಒಪ್ಪಿಸುವಂತೆ ತಿಳಿಸಿದರು.

ಈ ವೇಳೆ ಪಪಂ ಸದಸ್ಯರಾದ ಗಿರೀಶ್, ಹರೀಶ್, ಸುದೇಶ್, ಸಂಪತ್ ಕುಮಾರ್, ಕಾಂಗ್ರೆಸ್ ಎಸ್‌ಟಿ ಘಟಕದ ಜಿಲ್ಲಾಧ್ಯಕ್ಷ ಕೌದಳ್ಳಿ ನಾಗರಾಜು, ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯ ಅರುಣ್ ಕುಮಾರ್, ಹನೂರು ಯುವ ಕಾಂಗ್ರೆಸ್ ಅಧ್ಯಕ್ಷ ಮಾದೇಶ್, ಕಾಂಗ್ರೆಸ್ ಮುಖಂಡರಾದ ನಾಗೇಂದ್ರ, ಪಾಳ್ಯ ಕೃಷ್ಣ, ನಟರಾಜು, ಕುಮಾರ್, ರಾಜು, ಪ್ರಸನ್ನ ಕುಮಾರ್, ಚೇತನ್ ದೊರೆರಾಜ್ ಸೇರಿದಂತೆ ಇನ್ನಿತರರಿದ್ದರು.

ಎಸ್ಪಿ, ಡಿವೈಎಸ್ಪಿ ಭೇಟಿ: ಅಪಘಾತದ ವಿಷಯ ತಿಳಿದು ಸೋಮವಾರ ಘಟನಾ ಸ್ಥಳಕ್ಕೆ ಭೇಟಿ ನೀಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಟಿ.ಕವಿತಾ, ಡಿವೈಎಸ್ಪಿ ಧರ್ಮೇಂದ್ರ, ಹನೂರು ಠಾಣೆ ಪೊಲೀಸರು ಪರಿಶೀಲನೆ ನಡೆಸಿದರು.

ಪ್ರತ್ಯೇಕ ಪ್ರಕರಣ: ಬಾಲ್ಯವಿವಾಹ ತಡೆದ ಅಧಿಕಾರಿಗಳು



ಬಿಸಲವಾಡಿಯಲ್ಲಿ ಅಪ್ರಾಪ್ತೆಗೆ ವಿವಾಹ ಮಾಡಲು ನಡೆಸುತ್ತಿದ್ದ ನಿಶ್ಚಿತಾರ್ಥವನ್ನು ಅಧಿಕಾರಿಗಳು ತಡೆದರು.

ಚಾಮರಾಜನಗರ, ಮಾ.10– ಪ್ರತ್ಯೇಕ ಪ್ರಕರಣಗಳಲ್ಲಿ ತಾಲೂಕಿನ ಬಿಸಲವಾಡಿ ಗ್ರಾಮ ಹಾಗೂ ನಗರದ ಎ.ಪಿ.ಮೊಹಲ್ಲಾದಲ್ಲಿ ನಡೆಯಬೇಕಿದ್ದ ಬಾಲ್ಯವಿವಾಹ ತಡೆಯುವಲ್ಲಿ ಅಧಿಕಾರಿಗಳು ಯಶಸ್ವಿಯಾಗಿದ್ದಾರೆ.

ತಾಲೂಕಿನ ಬಿಸಲವಾಡಿಯಲ್ಲಿ ಅಪ್ರಾಪ್ತೆಗೆ ಬಾಲ್ಯವಿವಾಹ ಮಾಡಲು ನಿಶ್ಚಿತಾರ್ಥ ನಡೆಸಲಾಗುತ್ತಿತ್ತು. ಈ ಸಂಬಂಧ ಮಕ್ಕಳ ಸಹಾಯವಾಣಿ ಸಂಖ್ಯೆಗೆ (1098) ದೂರು ಬಂದ ಹಿನ್ನೆಲೆಯಲ್ಲಿ ಗ್ರಾಪಂ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ, ಕಂದಾಯ ಅಧಿಕಾರಿ, ಶಾಲೆ ಮುಖ್ಯ ಶಿಕ್ಷಕರು, ಪೊಲೀಸರ ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿತು.

ಈ ವೇಳೆ ಬಿಸಲವಾಡಿ ಗ್ರಾಮದ ಅಪ್ರಾಪ್ತೆಯೊಂದಿಗೆ ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ಅಂಬಳೆ ಗ್ರಾಮದ ಯುವಕನ ಜೊತೆ ವಿವಾಹ ಮಾಡಲು ನಿರ್ಧರಿಸಲಾಗಿತ್ತು. ಅಧಿಕಾರಿಗಳು ದಾಳಿ ನಡೆಸಿದ ವೇಳೆ ನಿಶ್ಚಿತಾರ್ಥ ಶಾಸ್ತ್ರ ನಡೆಸುತ್ತಿರುವುದು ಕಂಡು ಬಂದಿದ್ದು ಅಧಿಕಾರಿಗಳು ನಿಶ್ಚಿತಾರ್ಥ ತಡೆ ಹಿಡಿದರು. ಅಲ್ಲದೇ ಬಾಲ್ಯವಿವಾಹ ಹಾಗೂ ಪೋಕ್ಸೊ ಪ್ರಕರಣ ಕುರಿತು ಕುಟುಂಬದವರಿಗೆ ಅರಿವು ಮೂಡಿಸಲಾಯಿತು. ಬಳಿಕ ಈ ವೇಳೆ ಎರಡೂ ಕುಟುಂಬದವರು ಇದಕ್ಕೆ ಒಪ್ಪಿ, ಈಗ ಮದುವೆ ಮಾಡುವುದಿಲ್ಲ. ಬಾಲಕಿಗೆ 18 ವರ್ಷ ತುಂಬಿದ ನಂತರವೇ ಮದುವೆ ಮಾಡುವುದಾಗಿ ತಿಳಿಸಿದರು. ಚಾಮರಾಜನಗರದ ಎ.ಪಿ.ಮೊಹಲ್ಲಾದಲ್ಲಿ ಅಪ್ರಾಪ್ತೆಗೆ ಬಾಲ್ಯವಿವಾಹ ಮಾಡುತ್ತಿದ್ದಾರೆ ಎಂದು ಮಕ್ಕಳ ಸಹಾಯವಾಣಿಗೆ ದೂರು ಬಂದ ಹಿನ್ನೆಲೆಯಲ್ಲಿ ಕುಟುಂಬದವರನ್ನು ಪಟ್ಟಣ ಪೊಲೀಸ್ ಠಾಣೆಗೆ ಕರೆಯಿಸಿ ವಿಚಾರಿಸಿದಾಗ ಬಾಲಕಿಗೆ ಮದುವೆ ತಯಾರಿ ಮಾಡಿಲ್ಲ. ಮಾರ್ಚ್ ತಿಂಗಳಲ್ಲಿ ಉಪವಾಸ ಇರುತ್ತೇವೆ. ಆ ಸಮಯದಲ್ಲಿ ಜನರಿಗೆ ಊಟ ಕೊಡುತ್ತೇವೆ ಎಂದರು. ಈ ವೇಳೆ ಅಧಿಕಾರಿಗಳು ಬಾಲ್ಯವಿವಾಹದ ಕುರಿತು ಅರಿವು ಮೂಡಿಸಿದರು. ಅಲ್ಲದೇ ಬಾಲಕಿ ವಿಚಾರಣೆ ಮಾಡಿದಾಗ ನಿಶ್ಚಿತಾರ್ಥ ಕಾರ್ಯ ಎಂದು ಯಾರೋ ಸುಳ್ಳು ಮಾಹಿತಿ ನೀಡಿದ್ದು 18 ವರ್ಷ ತುಂಬುವ ತನಕ ಕಾಯುತ್ತೇನೆ. ಆ ನಂತರವೇ ಮದುವೆ ಆಗುತ್ತೇನೆ ಎಂದು ತಿಳಿಸಿದ್ದಾಳೆ.

ವಿಜೃಂಭಣೆಯ ಶ್ರೀಲಕ್ಷ್ಮಿ ನಾರಾಯಣಸ್ವಾಮಿ ರಥೋತ್ಸವ



ಚಾಮರಾಜನಗರ, ಮಾ.10– ತಾಲೂಕಿನ ಬೆಂಡರವಾಡಿಯಲ್ಲಿ ಸೋಮವಾರ ಸಾವಿರಾರು ಭಕ್ತರ ಜಯಘೋಷದ ನಡುವೆ ಶ್ರೀಲಕ್ಷ್ಮಿ ನಾರಾಯಣಸ್ವಾಮಿ ರಥೋತ್ಸವ ವಿಜೃಂಭಣೆಯಿಂದ ನಡೆಯಿತು.

ರಥೋತ್ಸವ ಅಂಗವಾಗಿ ಮುಂಜಾನೆಯಿಂದಲೇ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನಡೆದವು. ನಂತರ ನಡೆದ ರಥೋತ್ಸವದ ವೇಳೆ ರಥಕ್ಕೆ ಸಾವಿರಾರು ಭಕ್ತರು ಇಷ್ಟಾರ್ಥ ಸಿದ್ಧಿಗಾಗಿ ಬಾಳೆಹಣ್ಣು, ವೀಳ್ಯದೆಲೆ ಎಸೆದು ನಮಿಸಿ, ತೇರು ಎಳೆದು ಸಂಭ್ರಮಿಸಿದರು.

ರಥೋತ್ಸವದಲ್ಲಿ ವೀರಮಕ್ಕಳ ಕುಣಿತ, ನಂದಿ ಧ್ವಜ, ಬ್ಯಾಂಡ್, ಕೊಂಬು ಕಹಳೆ, ಸತ್ತಿಗೆ, ಸೂರಪಾನಿ, ಮಂಗಳವಾದ್ಯ ಸೇರಿದಂತೆ ಹಲವು ಜಾನಪದ ಕಲಾತಂಡಗಳು ಪಾಲ್ಗೊಂಡಿದ್ದವು. ಬೆಳಗ್ಗೆ 10 ಗಂಟೆಗೆ ದೇವಾಲಯದಿಂದ ಹೊರಟ ರಥ ಪ್ರಮುಖ ಬೀದಿಗಳಲ್ಲಿ ಸಾಗಿ ಮಧ್ಯಾಹ್ನ 12.30ಕ್ಕೆ ಸ್ವಸ್ಥಾನ ಸೇರಿತು. ಈ ವೇಳೆ ಅಲ್ಲಲ್ಲಿ ಮಜ್ಜಿಗೆ, ಪಾನಕ, ಕೋಸಂಬರಿ ವಿತರಿಸಲಾಯಿತು.

ಉರುಳು ಸೇವೆಯೊಂದಿಗೆ ಭಾನುವಾರ ಮುಂಜಾನೆ ಶ್ರೀಲಕ್ಷ್ಮಿ ದೇವಿ ಜಾತ್ರೆ ಆರಂಭವಾಗಿ ರಾತ್ರಿಯಿಡೀ ಅದ್ದೂರಿ ಉತ್ಸವ ಜರುಗಿತು. ಸೋಮವಾರ ನಸುಕಿನಲ್ಲಿ ದೇವಸ್ಥಾನ ಮುಂಭಾಗ ಕೊಂಡೋತ್ಸವ ನಡೆಯಿತು. ಈ ವೇಳೆ ಪಟಾಕಿಗಳನ್ನು ಸಿಡಿಸಿ, ಬಾಣ ಬಿರುಸುಗಳ ಬೆಳಕಿನ ಚಿತ್ತಾರ ಹರಿಸಲಾಯಿತು. ಬಳಿಕ ರಥೋತ್ಸವ ನಡೆಯುವುದರೊಂದಿಗೆ 2 ದಿನಗಳ ಜಾತ್ರೆಗೆ ತೆರೆ ಬಿತ್ತು ಜಾತ್ರಾ ಮಹೋತ್ಸವದಲ್ಲಿ ಬಿ. ಮಲ್ಲಯ್ಯನಪುರ, ಮೇಗಲಹುಂಡಿ, ಕೆರೆಹಳ್ಳಿ, ಪಾಳ್ಯ, ಹೆಗ್ಗವಾಡಿ, ಭುಜಗನಪುರ ಹಾಗೂ ಸುತ್ತಮುತ್ತಲ ಗ್ರಾಮಗಳ ಗ್ರಾಮಸ್ಥರು ಭಾಗವಹಿಸಿದ್ದರು.

ಹೊನ್ನೂರು ಸಿದ್ದಯ್ಯ ನಿಧನ



ಯಳಂದೂರು, ಮಾ.10– ತಾಲೂಕಿನ ಹೊನ್ನೂರು– ಬೀಚಹಳ್ಳಿ ಗ್ರಾಮದ ನಿವಾಸಿ ಸಿದ್ದಯ್ಯ (85) ಅನಾರೋಗ್ಯದ ಹಿನ್ನೆಲೆಯಲ್ಲಿ ಸೋಮವಾರ ರಾತ್ರಿ ನಿಧನರಾದರು.

ಮೃತರು ಪತ್ನಿ ಹಾಗೂ ಪತ್ರಕರ್ತ ಹೊನ್ನೂರು ಪುಟ್ಟಸ್ವಾಮಿ ಸೇರಿದಂತೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರನ್ನು ಅಗಲಿದ್ದಾರೆ. ಮಂಗಳವಾರ ಸ್ವಗ್ರಾಮದಲ್ಲಿ ಮಧ್ಯಾಹ್ನ ಅಂತ್ಯಕ್ರಿಯೆ ಜರುಗಲಿದೆ ಎಂದು ಕುಟುಂಬ ವರ್ಗದವರು ಮಾಹಿತಿ ತಿಳಿಸಿದ್ದಾರೆ.

ವಿಧಾನಮಂಡಲ ಕಲಾಪ

ಸರ್ಕಾರಿ ವೈದ್ಯರಿಗೆ ಇನ್ಮುಂದೆ ದಿನಕ್ಕೆ 4 ಬಾರಿ ಬಯೋಮೆಟ್ರಿಕ್ ಹಾಜರಿ ಕಡ್ಡಾಯ

ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್



ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್



ಬೆಂಗಳೂರು, ಮಾ.10– ಇನ್ನು ಮುಂದೆ ಸರ್ಕಾರಿ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುವ ವೈದ್ಯರು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆವರೆಗೆ ಕಡ್ಡಾಯವಾಗಿ ಕಾರ್ಯನಿರ್ವಹಿಸಲಿದ್ದು, ಕಡ್ಡಾಯವಾಗಿ ನಾಲ್ಕು ಬಾರಿ ಬಯೋ ಮೆಟ್ರಿಕ್‌ಗೆ ತಮ್ಮ ಹಸ್ತಮುದ್ರೆ ಒತ್ತಬೇಕು. ಯಾವುದೇ ಕಾರಣಕ್ಕೂ ಬೇರೆ ಸ್ಥಳಗಳಲ್ಲಿ ಪ್ರಾಕ್ಟೀಸ್ ಮಾಡುವಂತಿಲ್ಲ ಎಂದು ವೈದ್ಯಕೀಯ ಶಿಕ್ಷಣ, ಕೌಶಲಾಭಿವೃದ್ಧಿ ಮತ್ತು ಜೀವನೋಪಾಯ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ವಿಧಾನಪರಿಷತ್‌ನಲ್ಲಿ ಸೋಮವಾರ (ಮಾ.10) ಕಾಂಗ್ರೆಸ್ ಸದಸ್ಯೆ ಬಲ್ಕಿಶ್ ಬಾನು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸರ್ಕಾರಿ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುವ ವೈದ್ಯರು ತಮ್ಮ ಕರ್ತವ್ಯದ ಸಂದರ್ಭದಲ್ಲೇ ಬೇರೆ ಕಡೆ ಕರ್ತವ್ಯ ನಿರ್ವಹಿಸುತ್ತಾರೆ ಎಂಬ ಆರೋಪ ಕೇಳಿ ಬಂದಿತ್ತು. ಇದನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಲಾಗಿದೆ. ಬೆಳಗ್ಗೆ 9 ಗಂಟೆಗೆ ಕರ್ತವ್ಯಕ್ಕೆ ಹಾಜರಾದರೆ ಸಂಜೆ 4 ಗಂಟೆವರೆಗೂ ಸರ್ಕಾರಿ ಆಸ್ಪತ್ರೆಗಳಲ್ಲೇ ಕರ್ತವ್ಯ ನಿರ್ವಹಿಸಬೇಕೆಂದು ಸೂಚಿಸಲಾಗಿದೆ ಎಂದರು.

ದುರ್ಬಳಕೆ ತಡೆಗಟ್ಟಲು ಕ್ರಮ: ಈ ಮೊದಲು 2 ಗಂಟೆಗಳ ನಂತರ 1 ಗಂಟೆ ಕಾರ್ಯ ನಿರ್ವಹಿಸಲು ಅವಕಾಶ ನೀಡಲಾಗಿತ್ತು. ಆದರೆ ವೈದ್ಯರು 1 ಗಂಟೆ ಮುಂಚಿತವಾಗಿ ಹೋಗುವುದು ಇಲ್ಲವೇ 1 ಗಂಟೆ ತಡವಾಗಿ ಬರುತ್ತಿದ್ದಾರೆಂಬ ಆರೋಪ ಕೇಳಿಬರುತ್ತಿದೆ. ಈ ವ್ಯವಸ್ಥೆಯನ್ನು ದುರ್ಬಳಕೆ ಮಾಡುತ್ತಿದ್ದು, ಇದನ್ನು ತಡೆಗಟ್ಟಲು ಈ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಡಾ.ಶರಣ್ ಪ್ರಕಾಶ್ ಪಾಟೀಲ್ ಸಮರ್ಥನೆ ಮಾಡಿಕೊಂಡರು.

ಈಗಾಗಲೇ ಎಲ್ಲಾ ಸರ್ಕಾರಿ ಆಸ್ಪತ್ರೆಗಳ ಮುಖ್ಯಸ್ಥರಿಗೆ ಅಧಿಸೂಚನೆ ಮೂಲಕ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಸೂಚಿಸಲಾಗಿದೆ. ಒಂದು ವೇಳೆ ಯಾರಾದರೂ ಉಲ್ಲಂಘನೆ ಮಾಡಿರುವುದು ಕಂಡುಬಂದರೆ ಶಿಸ್ತುಕ್ರಮ ಜರುಗಿಸುವುದಾಗಿ ಸಚಿವರು ಎಚ್ಚರಿಸಿದರು.

ಇನ್ನು ಮುಂದೆ ವೈದ್ಯರು ಕಡ್ಡಾಯವಾಗಿ ಕರ್ತವ್ಯಕ್ಕೆ ಹಾಜರಾದ ವೇಳೆ ನಾಲ್ಕು ಬಾರಿ ಬಯೋಮೆಟ್ರಿಕ್‌ಗೆ ತಮ್ಮ ಹಸ್ತಮುದ್ರೆ ಒತ್ತಬೇಕು. ಬೆಳಗ್ಗೆ 9 ಗಂಟೆ, ಮಧ್ಯಾಹ್ನ 2, 3 ಮತ್ತು 4 ಗಂಟೆಗೆ ಕಡ್ಡಾಯವಾಗಿ ಹಾಕಲೇಬೇಕು. ಇದರ ಆಧಾರಿತವಾಗಿಯೇ ಸಂಬಳವನ್ನು ನೀಡಲಾಗುವುದು. ಈ ಕುರಿತು ಮುಖ್ಯಸ್ಥರ ಜೊತೆಯೂ ಚರ್ಚೆ ಮಾಡಲಾಗಿದೆ. ರೋಗಿಗಳಿಗೆ ಸಕಾಲಕ್ಕೆ ಸರಿಯಾಗಿ ಚಿಕಿತ್ಸೆ ನೀಡುವುದು ಸರ್ಕಾರದ ಮೊದಲ ಆದ್ಯತೆ ಎಂದು ಡಾ. ಪಾಟೀಲ್ ಹೇಳಿದರು.

ಪ್ರತಿಯೊಂದು ಆಸ್ಪತ್ರೆಯಲ್ಲಿ ರೋಗಿಗಳಿಗೆ ಒಪಿಡಿ ವ್ಯವಸ್ಥೆಯನ್ನು ಕಡ್ಡಾಯ ಮಾಡಲಾಗಿದೆ. ಅಗತ್ಯವಿರುವ ರೋಗಿಗಳಿಗೆ ಒಪಿಡಿ ನೀಡಬೇಕೆಂದು ಸೂಚನೆ ಕೊಡಲಾಗಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ದಿನದಿಂದ ದಿನಕ್ಕೆ ಉತ್ತಮವಾದ ವೈದ್ಯಕೀಯ ಸೌಲಭ್ಯ ಸಿಗುತ್ತಿದೆ. ಎಲ್ಲಿಯೂ ಕೊರತೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಮಲ್ಲಿಕಾರ್ಜುನ ಖರ್ಗೆ ಬಗ್ಗೆ ಅಭಿಮಾನದ ಹೊಳೆ ಹರಿಸಿದ ಆರ್.ಅಶೋಕ್

ಬೆಂಗಳೂರು, ಮಾ.10– ಅಂದು ನನ್ನ ಹುಟ್ಟುಹಬ್ಬ. ಈ ಹಿನ್ನೆಲೆಯಲ್ಲಿ ರಸ್ತೆ ತುಂಬಾ ಶುಭಕೋರಿ ಅಭಿಮಾನಿಗಳು ಫ್ಲೆಕ್ಸ್ ಅಳವಡಿಸಿದ್ದರು. ಆದರೆ, ರಸ್ತೆಯಲ್ಲಿ ನನ್ನ ಫ್ಲೆಕ್ಸ್ ಒಂದು ಮುರಿದು ಬಿದ್ದಿತ್ತು. ಇದೇ ಸಂದರ್ಭದಲ್ಲಿ ಆ ರಸ್ತೆಯಲ್ಲಿ ಕಾರಿನಲ್ಲಿ ಹೋಗುತ್ತಿದ್ದ ಮಲ್ಲಿಕಾರ್ಜುನ ಖರ್ಗೆ ಅವರು ರಸ್ತೆಯಲ್ಲಿ ಮುರಿದು ಬಿದ್ದಿದ್ದ ಫ್ಲೆಕ್ಸ್ ಸರಿಪಡಿಸಿ ನನಗೆ ಫೋನ್ ಮಾಡಿ ತಿಳಿಸಿ, ಹುಟ್ಟುಹಬ್ಬದ ಶುಭ ಕೋರಿದ್ದರು. ಸದನದಲ್ಲಿ ಆ ಒಂದು ಅತೀ ಸೌಜನ್ಯದ ಘಟನೆಯನ್ನು ವಿವರಿಸಿದ್ದು ವಿರೋಧ ಪಕ್ಷದ ನಾಯಕ ಆರ್.ಅಶೋಕ್.

ಸೋಮವಾರ ಗ್ರೇಟರ್ ಬೆಂಗಳೂರು ವಿಧೇಯಕ ವಿಚಾರವಾಗಿ ನಡೆದ ಚರ್ಚೆಯ ವೇಳೆ ಆರ್.ಅಶೋಕ್ ಮಾತನಾಡುವ ಸಂದರ್ಭದಲ್ಲಿ ನಮ್ಮ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಎಂದು ಉಲ್ಲೇಖ ಮಾಡಿದರು. ಈ ವೇಳೆ **'ನಮ್ಮ ಎಐಸಿಸಿ ಅಧ್ಯಕ್ಷರು ಎಂದು ಕರೆಯುತ್ತಿದ್ದೀರಿ. ಹಾಗಾದರೆ ನೀವು ಯಾವಾಗ ಕಾಂಗ್ರೆಸ್ ಸೇರ್ಪಡೆ ಆದ್ರಿ'** ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಕಾಲೆಳೆದರು.

ಈ ವೇಳೆ ಖರ್ಗೆ ಕುರಿತಾಗಿ ಮೆಚ್ಚುಗೆಯ ಮಾತನಾಡಿದ ಅಶೋಕ್, ನಾನು ಅಂದು ಸಚಿವನಾಗಿದ್ದೆ. ನನ್ನ ಹುಟ್ಟುಹಬ್ಬದ ದಿನದಂದು ಬೆಂಗಳೂರಿನ ರಸ್ತೆಯಲ್ಲಿ ಫ್ಲೆಕ್ಸ್ ಹಾಕಲಾಗಿತ್ತು. ವಿಧಾನಸಭೆ ಅಧಿವೇಶನ ಮುಗಿಸಿ ಖರ್ಗೆ ಮನೆಗೆ ತೆರಳುತ್ತಿದ್ದರು. ಕಾರಿನಲ್ಲಿ ತೆರಳುತ್ತಿದ್ದ ಸಂದರ್ಭದಲ್ಲಿ ಫ್ಲೆಕ್ಸ್ ಬಿದ್ದಿರುವುದು ಗಮನಿಸಿ, ಕಾರನ್ನು ನಿಲ್ಲಿಸಿ ಅದನ್ನು ಸರಿಪಡಿಸಿದ್ದರು ಎಂದು ಸದನದಲ್ಲಿ ಮೆಚ್ಚುಗೆ ವ್ಯಕ್ತಪಡಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಪ್ರಧಾನಿ ನರೇಂದ್ರ ಮೋದಿ ಕೂಡ ಗೌರವ ಕೊಡುತ್ತಾರೆ ಎಂದು ಹೇಳುವ ಮೂಲಕ ಖರ್ಗೆ ಕುರಿತಾಗಿ ಅಶೋಕ್ ಮೆಚ್ಚುಗೆ ವ್ಯಕ್ತಪಡಿಸಿದರು.

ಜಟಾಪಟಿ ನಡುವೆ ಗ್ರೇಟರ್ ಬೆಂಗಳೂರು ವಿಧೇಯಕ ಅಂಗೀಕಾರ

ವಿಪಕ್ಷಗಳಿಂದ ಸಭಾತ್ಯಾಗ



ಅಧಿವೇಶನದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಿಎಂ ಸಿದ್ದರಾಮಯ್ಯ

ಬೆಂಗಳೂರು, ಮಾ.10– ವಿಧಾನಸಭಾ ಅಧಿವೇಶನದಲ್ಲಿ ಇಂದು ಗ್ರೇಟರ್ ಬೆಂಗಳೂರು ವಿಧೇಯಕ ಬಗ್ಗೆ ಬಿಸಿ ಬಿಸಿ ಚರ್ಚೆ ಮಾಡಲಾಯಿತು. ವಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ವಿಧೇಯಕ ಮಂಡನೆಗೆ ವಿರೋಧ ವ್ಯಕ್ತಡಿಸಿದರು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನ ವಿಭಾಗಿಸಿ ಗ್ರೇಟರ್ ಬೆಂಗಳೂರು ಮಾಡಲು ಹೊರಟಿರುವ ಸರ್ಕಾರ, ಜಟಾಪಟಿ ನಡುವೆ ವಿಧೇಯಕಕ್ಕೆ ಅಂಗೀಕಾರ ಪಡೆದಿದೆ. ಈ ವೇಳೆ ಧಿಕ್ಕಾರ ಕೂಗುತ್ತಾ ವಿಪಕ್ಷಗಳ ಸದಸ್ಯರು ಸಭಾತ್ಯಾಗ ಮಾಡಿದರು. ಆದರೆ ಯಶವಂತಪುರ ಕ್ಷೇತ್ರದ ಬಿಜೆಪಿ ಶಾಸಕ ಸೋಮಶೇಖರ್ ಮಾತ್ರ ಸಭಾತ್ಯಾಗ ಮಾಡಲಿಲ್ಲ.

ಪಾಲಿಕೆ ವಿಭಾಗಿಸಬೇಕು. ಎರಡು ಭಾಗ ಮಾಡಬೇಕು. ಮೂರು ಭಾಗ ಮಾಡಬೇಕು. ವಾರ್ಡ್‌ಗಳನ್ನು ಹೆಚ್ಚಿಸಬೇಕು ಎಂಬ ಕಾಲಹರಣದ ನಡುವೆ ಕಳೆದ ಐದು ವರ್ಷಗಳಿಂದ ಬಿಬಿಎಂಪಿಗೆ ಚುನಾವಣೆಯೇ ನಡೆದಿಲ್ಲ. ಇದರ ನಡುವೆ ಬೆಂಗಳೂರನ್ನು ಹಲವು ಭಾಗ ಮಾಡಿ ಗ್ರೇಟರ್ ಬೆಂಗಳೂರು ಮಾಡಲು ಸಿದ್ದರಾಮಯ್ಯ ಸರ್ಕಾರ ಮುಂದಾಗಿತ್ತು. ಇದಕ್ಕೆ ಬಿಜೆಪಿ ವಿರೋಧ ವ್ಯಕ್ತಪಡಿಸಿತ್ತು. ಈ ವಿರೋಧದ ನಡುವೆ ಡಿಸಿಎಂ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿಕೆ ಶಿವಕುಮಾರ್, ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ–2024ನ್ನು ವಿಧಾನಸಭೆಯಲ್ಲಿ ಮಂಡಿಸಿದರು.

ಡಿ.ಕೆ.ಶಿವಕುಮಾರ್ ವಿಧೇಯಕ ಮಂಡಿಸುತ್ತಿದ್ದಂತೆ ಸದನದಲ್ಲಿ ಕೋಲಾಹಲ ಎದ್ದಿತು. ಬಿಜೆಪಿ ಸದಸ್ಯರು ಆಕ್ರೋಶ ಹೊರಹಾಕಿದರು. ಸತೀಶ್ ರೆಡ್ಡಿ, ಮುನಿರತ್ನ, ಮುನಿರಾಜು ಸೇರಿದಂತೆ ಬೆಂಗಳೂರಿನ ಬಿಜೆಪಿ ಶಾಸಕರು ಆಕ್ಷೇಪ ವ್ಯಕ್ತಪಡಿಸಿದರು. ವಿಪಕ್ಷ ನಾಯಕ ಅಶೋಕ್ ಅಂತೂ ಬೆಂಗಳೂರಿನ ಪಾಲಿಗೆ ಮರಣ ಶಾಸನ ಎಂದಿದ್ದಾರೆ. ಬಿಜೆಪಿ ನಾಯಕರು ಒಂದೆಡೆ ವಿರೋಧ ಮಾಡಿದರೆ, ಬಿಜೆಪಿ ಶಾಸಕರೇ ಆಗಿರುವ ಎಸ್.ಟಿ.ಸೋಮಶೇಖರ್ ಸರ್ಕಾರದ ಕ್ರಮವನ್ನು ಸ್ವಾಗತಿಸಿದರು. ಡಿ.ಕೆ.ಶಿವಕುಮಾರ್ ಅವರನ್ನು ಹಾಡಿ ಹೊಗಳಿದರು. ಎಲೆಕ್ಟ್ರಾನಿಕ್ ಸಿಟಿ ಬಿಬಿಎಂಪಿಗಿಂತ ಹೆಚ್ಚಾಗಿ ಬೆಳೆದಿದೆ. ಅದನ್ನು ಪಾಲಿಕೆಗೆ ಸೇರಿಸಿ ಗ್ರೇಟರ್ ಬೆಂಗಳೂರು ಮಾಡಿದರೆ ತಪ್ಪೇನು ಎಂದು ತಮ್ಮ ಪಕ್ಷದ ನಾಯಕರನ್ನೇ ಪ್ರಶ್ನಿಸಿದರು.

ಬೆಂಗಳೂರು ಅರಮನೆ ಭೂಕಬಳಿಕೆ ಮತ್ತು ನಿಯಂತ್ರಣ ಬಿಲ್ ಅಂಗೀಕಾರ: ಬೆಂಗಳೂರು ಅರಮನೆ ಭೂಕಬಳಿಕೆ ಮತ್ತು ನಿಯಂತ್ರಣ ಬಿಲ್ ಕೂಡ ಅಂಗೀಕಾರವಾಗಿದೆ. ಪರಿಷತ್‌ನಲ್ಲಿ ಕಾನೂನು ಸಚಿವ ಹೆಚ್.ಕೆ.ಪಾಟೀಲ್ ವಿಧೇಯಕ ಮಂಡಿಸಿದ್ದರು. ವಿಧಾನಸಭೆಯಲ್ಲಿ ಅಂಗೀಕೃತ ರೂಪದಲ್ಲಿದ್ದ ವಿಧೇಯಕ ಮಂಡಿಸಲಾಗಿತ್ತು. ಈ ವೇಳೆ ರಾಜಮನೆತನದ ಜೊತೆ ಮಾತುಕತೆ ನಡೆಸುವಂತೆ ಬಿಜೆಪಿಯಿಂದ ಆಗ್ರಹಿಸಲಾಗಿದೆ. ಯಾವುದೇ ಕಾರಣಕ್ಕೂ ಬಿಲ್ ತರಬಾರದೆಂದು ಬಿಜೆಪಿ, ಜೆಡಿಎಸ್ ಸದಸ್ಯರ ಸಭಾತ್ಯಾಗದ ನಂತರ ವಿಧೇಯಕ ಅಂಗೀಕಾರಿಸಲಾಗಿದೆ.

> **"ಅಧಿಕಾರ ಮತ್ತು ಆಡಳಿತದ ವಿಕೇಂದ್ರೀಕರಣ ಬೇಕು. ಕೆಲವು ವಿರೋಧ ಪಕ್ಷದ ಸದಸ್ಯರು ಹೇಳುತ್ತಿರುವಂತೆ ನಾವು ಬೆಂಗಳೂರನ್ನು ನಾಶ ಮಾಡುತ್ತಿಲ್ಲ. ಬದಲಿಗೆ ನಾವು ಅದನ್ನು ಬಲಪಡಿಸುತ್ತಿದ್ದೇವೆ. ಬೆಂಗಳೂರನ್ನು ಬಲಿಷ್ಠಗೊಳಿಸುತ್ತೇವೆ. ಬೆಂಗಳೂರಿಗೆ ಹೊಸ ದಿಕ್ಕನ್ನು ನೀಡಲು ಈ ಮಸೂದೆಯನ್ನು ತರಲಾಗಿದೆ.–ಡಿ.ಕೆ.ಶಿವಕುಮಾರ್,**
> **ಉಪ ಮುಖ್ಯಮಂತ್ರಿ ಹಾಗೂ ಬೆಂಗಳೂರು ಅಭಿವೃದ್ಧಿ ಸಚಿವ**

ಗ್ರೇಟರ್ ಬೆಂಗಳೂರು ವಿಧೇಯಕ ಬೆಂಗಳೂರಿನ ಪಾಲಿಗೆ ಮರಣ ಶಾಸನ

ಬೆಂಗಳೂರು, ಮಾ. 10– ಗ್ರೇಟರ್ ಬೆಂಗಳೂರು ವಿಧೇಯಕ ಬೆಂಗಳೂರಿನ ಪಾಲಿಗೆ ಮರಣ ಶಾಸನ ಎಂದು ವಿರೋಧ ಪಕ್ಷದ ನಾಯಕ ಅಶೋಕ್ ಹೇಳಿದ್ದಾರೆ. ವಿಧಾನಸಭೆಯಲ್ಲಿ ಮಾತನಾಡಿದ ಅವರು, 74ನೇ ತಿದ್ದುಪಡಿ ಬಗ್ಗೆ ನೀವು ಅಪಚಾರ ಮಾಡುತ್ತಿದ್ದೀರಿ. ಮುಖ್ಯಮಂತ್ರಿಯನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡುವ ಮೂಲಕ ಸ್ಥಳೀಯ ನಾಯಕತ್ವದ ಮೇಲೆ ಹೇರಿಕೆ ಮಾಡುತ್ತಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಯಾವುದೇ ಕಾರಣಕ್ಕೂ ಬಿಬಿಎಂಪಿ ವಿಭಜನೆ ಮಾಡಬಾರದು. ಬೆಂಗಳೂರು ಒಟ್ಟಾಗಿರಲಿ ಎಂದು ಕೆಂಪೇಗೌಡರು 4 ಗೋಪುರ ನಿರ್ಮಿಸಿದ್ದರು. ಕೆಂಪೇಗೌಡರ ಪರಿಕಲ್ಪನೆಯನ್ನು ಒಡೆಯುವ ಕೆಲಸ ಮಾಡುತ್ತಿದ್ದಾರೆ. ಸಿಎಂಗೆ ಪರಮಾಧಿಕಾರ ನೀಡಿ ಪಾಲಿಕೆ ಅಧಿಕಾರ ತೆಗೆದಿದ್ದಾರೆ. ಬೆಂಗಳೂರಿಗೆ ಈ ವಿಧೇಯಕ ಮರಣ ಶಾಸನ ತಂದಂತಾಗುತ್ತದೆ. ಬೆಂಗಳೂರಿಗೆ ಕಾಂಗ್ರೆಸ್ ಅಪಮಾನ ಮಾಡುತ್ತಿದೆ ಎಂದು ಆರ್. ಅಶೋಕ್ ಒತ್ತಾಯಿಸಿದ್ದಾರೆ.

ಶಾಸಕ ಡಾ.ಅಶ್ವತ್ಥ್ ನಾರಾಯಣ ಮಾತನಾಡಿ, ಬೆಂಗಳೂರು ಒಡೆಯುವ ಕೆಲಸ ಆಗುವುದು ಬೇಡ. ಅಧಿಕಾರ ವಿಕೇಂದ್ರೀಕರಣ ಮಾಡುವ ಕೆಲಸ ಮಾಡಿ. ಬೆಂಗಳೂರು ವಿಭಜನೆ ಕೈ ಬಿಡಿ. ವಾರ್ಡ್ ಸಮಿತಿ ನೇಮಕಾತಿ ಪ್ರಸ್ತಾವನೆ ಕೈಬಿಡಿ. ಕಾರ್ಯಕಾರಿ ಸಮಿತಿ ಅಧ್ಯಕ್ಷರಾಗಿ ಬೆಂಗಳೂರು ಅಭಿವೃದ್ಧಿ ಸಚಿವರು ಇರುವುದು ಬೇಡ ನಾಮನಿರ್ದೇಶಿತ ವಿಧಾನ ಪರಿಷತ್ ಮತ್ತು ರಾಜ್ಯಸಭಾ ಸದಸ್ಯರಿಗೆ ಮತದಾನದ ಹಕ್ಕು ಕೈಬಿಡುವಂತೆ ಆಗ್ರಹಿಸಿದರು. ಅಶ್ವಥ್ ನಾರಾಯಣ ಸಲಹೆಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ನಗರಾಭಿವೃದ್ಧಿ ಇಲಾಖೆ ಸಚಿವ ಭೈರತಿ ಸುರೇಶ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.



ಅಶೋಕ್

ರೈತರ ಐಪಿ ಸೆಟ್‌ಗಳಿಗೆ ಹೆಚ್ಚುವರಿ 2 ತಾಸು ವಿದ್ಯುತ್ ಪೂರೈಕೆ ಬಗ್ಗೆ ಪರಿಶೀಲನೆ

ಪರಿಷತ್‌ನಲ್ಲಿ ದಿನೇಶ್ ಗೂಳಿಗೌಡರಿಗೆ ಸಚಿವ ಕೆ.ಜೆ.ಜಾರ್ಜ್ ಭರವಸೆ



ಗೂಳಿಗೌಡ



ಕೆ.ಜೆ.ಜಾರ್ಜ್



ಬೆಂಗಳೂರು, ಮಾ.10– ರೈತರ ಐಪಿ ಸೆಟ್‌ಗಳಿಗೆ ಎರಡು ತಾಸು ಹೆಚ್ಚುವರಿ 3 ಫೇಸ್ ವಿದ್ಯುತ್ ಒದಗಿಸುವ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಭರವಸೆ ನೀಡಿದರು.

ವಿಧಾನಪರಿಷತ್ ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯ ದಿನೇಶ ಗೂಳಿಗೌಡ ಅವರು ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಅವರು ಉತ್ತರ ನೀಡಿದರು. ಸದ್ಯ ದಿನಕ್ಕೆ 7 ತಾಸು ವಿದ್ಯುತ್ ನೀಡಲು ಅಗತ್ಯವಿರುವಷ್ಟು ವಿದ್ಯುತ್ ನಮ್ಮ ರಾಜ್ಯದಲ್ಲಿ ಉತ್ಪಾದನೆಯಾಗುತ್ತದೆ. ಆದರೆ, ಹೆಚ್ಚುವರಿ ವಿದ್ಯುತ್ ನೀಡಲು ಕೆಲವು ಸಮಸ್ಯೆಗಳಿವೆ. ಕೆಲವೆಡೆ ಸಬ್‌ಸ್ಟೇಷನ್‌ಗಳಿಗೆ ಅಷ್ಟು ಸಾಮರ್ಥ್ಯವಿಲ್ಲ. ಈ ಬಗ್ಗೆ ಅಧಿಕಾರಿಗಳ ಜತೆ ಚರ್ಚಿಸಿ ತಿಳಿಸುವುದಾಗಿ ಸಚಿವರು ಭರವಸೆ ನೀಡಿದರು.

ರೈತರ ಬೇಡಿಕೆಯ ಬಗ್ಗೆ ಪರಿಷತ್‌ನಲ್ಲಿ ಸಮರ್ಥವಾಗಿ ವಿಷಯ ಮಂಡಿಸಿದ ದಿನೇಶ್ ಗೂಳಿಗೌಡ, ರೈತರಿಗೆ 2 ತಾಸು ಹೆಚ್ಚುವರಿ ವಿದ್ಯುತ್ ಏಕೆ ಪೂರೈಸಬೇಕು ಎಂಬುದನ್ನು ಸಚಿವರಿಗೆ ಮನವರಿಕೆ ಮಾಡಿಕೊಟ್ಟರು. ಈ ವರ್ಷ ದಾಖಲೆ ಪ್ರಮಾಣದಲ್ಲಿ ತಾಪಮಾನ ಏರಿಕೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಹೇಳಿದೆ. ಆಗ ಬೆಳೆ ರಕ್ಷಣೆಗೆ ಹೆಚ್ಚುವರಿಯಾಗಿ ನೀರು ಪೂರೈಸಬೇಕು. ಅದಕ್ಕೆ ನಿರಂತರ ವಿದ್ಯುತ್ ಪೂರೈಕೆ ಬೇಕಾಗಿದೆ ಎಂದು ವಿವರಿಸಿದರು.

ಶೀಘ್ರದಲ್ಲಿ ರಾಜ್ಯದಲ್ಲಿ ನಿರಂತರ ವಿದ್ಯುತ್ ನೀಡಲು ಯೋಜನೆ ರೂಪಿಸುತ್ತಿರುವ ಬಗ್ಗೆ ಇಂಧನ ಸಚಿವ ಕೆ.ಜೆ.ಜಾರ್ಜ್ ಅವರು ಸದನದಲ್ಲಿ ಸುಳಿವು ನೀಡಿದರು. ದಿನೇಶ್ ಗೂಳಿಗೌಡ ಅವರ ಪ್ರಶ್ನೆಗೆ ಉತ್ತರಿಸುವ ವೇಳೆ ಅವರು, ರಾಜ್ಯದಲ್ಲಿ ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸುವ ಪ್ರಕ್ರಿಯೆ ಜಾರಿಯಲ್ಲಿದೆ. ಇನ್ನು ಒಂದು ವರ್ಷದಲ್ಲಿ ರಾಜ್ಯದಲ್ಲಿ ಅಕ್ರಮ ಸಕ್ರಮ ಯೋಜನೆಯಡಿ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾರ್ಯ ಮುಗಿಯಲಿದೆ. ಸದ್ಯ ಹಗಲಿಡೀ ವಿದ್ಯುತ್ ಪೂರೈಕೆಗೆ ಕೆಲವು ಸಮಸ್ಯೆಗಳಿವೆ. ನಂತರ ಹಗಲಿಡೀ ವಿದ್ಯುತ್ ಪೂರೈಕೆ, ಸ್ಮಾರ್ಟ್ ಮೀಟರ್ ಅಳವಡಿಕೆ ಬಗ್ಗೆ ಜನಪ್ರತಿನಿಧಿಗಳ ಜತೆ ಚರ್ಚೆ ಮಾಡಲಾಗುವುದು ಎಂದರು. ರಾಜ್ಯದ ವಿದ್ಯುತ್ ಕಂಪನಿಗಳಿಗೆ ಗೃಹ ಜ್ಯೋತಿ ಯೋಜನೆಯನ್ನು ಸಮರ್ಪಕವಾಗಿ ನಿಭಾಯಿಸಲು ಮುಂಗಡವಾಗಿ ಹಣ ಪಾವತಿ ಮಾಡಿದ ಸಚಿವರಿಗೆ, ಮುಖ್ಯಮಂತ್ರಿಗಳಿಗೆ ಶಾಸಕರಾದ ದಿನೇಶ್ ಅವರು ಅಭಿನಂದನೆ ಸಲ್ಲಿಸಿದರು.

ಇ–ಕಾಮರ್ಸ್ ಕಂಪೆನಿಗಳು ಎಪಿಎಂಸಿ ನಿಯಂತ್ರಣಕ್ಕೆ

ತಿದ್ದುಪಡಿ ಮಸೂದೆ ವಿಧಾನಸಭೆಯಲ್ಲಿ ಅಂಗೀಕಾರ



ಸಚಿವ ಶಿವಾನಂದ ಪಾಟೀಲ್

ಬೆಂಗಳೂರು, ಮಾ.10– ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ತಿದ್ದುಪಡಿ ವಿಧೇಯಕ ಸೋಮವಾರ ವಿಧಾನಸಭೆಯಲ್ಲಿ ಅಂಗೀಕಾರಗೊಂಡಿದೆ.

ಮಸೂದೆ ಮಂಡಿಸಿ ಸದನಕ್ಕೆ ವಿವರ ನೀಡಿದ ರಾಜ್ಯ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್, ಈ ಹಿಂದೆ ಸರ್ಕಾರ ಎಪಿಎಂಸಿ ಯಾರ್ಡ್‌ಗಳನ್ನು ಮಾತ್ರ ನಿಯಂತ್ರಿಸುತ್ತಿತ್ತು ಆದರೆ ಈ ಮಸೂದೆ ಕಾನೂನು ಆಗಿ ಜಾರಿಗೆ ಬಂದರೆ ಅಮೆಜಾನ್, ಬಿಗ್ ಬ್ಯಾಸ್ಕೆಟ್, ಡಿ.ಮಾರ್ಟ್ ಸೇರಿದಂತೆ ಎಲ್ಲ ಇ–ಪ್ಲಾಟ್‌ಫಾರ್ಮ್ ವೇದಿಕೆಗಳು ಇನ್ನು ಮುಂದೆ ಎಪಿಎಂಸಿ ನಿಯಂತ್ರಣಕ್ಕೆ ಬರಲಿವೆ. ಸೆಸ್ ಪಾವತಿಸದೆ ವ್ಯಾಪಾರ ಮಾಡುವುದನ್ನು ನಿಯಂತ್ರಿಸಲು ಈ ಕಾನೂನು ತರುತ್ತಿದ್ದೇವೆ ಎಂದು ಪಾಟೀಲ್ ಸದನಕ್ಕೆ ತಿಳಿಸಿದರು

ತಿದ್ದುಪಡಿ ಮಸೂದೆ ಪರಿಣಾಮವಾಗಿ ಉಗ್ರಾಣಗಳಲ್ಲಿ (ವೇರ್ ಹೌಸ್) ನಡೆಯುವ ಕೃಷಿ ಉತ್ಪನ್ನಗಳ ಮಾರಾಟದ ಮೇಲೂ ಸೆಸ್ ಪಾವತಿ ಕಡ್ಡಾಯವಾಗಲಿದೆ. ಇದರೊಂದಿಗೆ ಇ–ಪ್ಲಾಟ್‌ಫಾರ್ಮ್‌ಗಳಲ್ಲಿ ಕೃಷಿ ಉತ್ಪನ್ನಗಳ ಮಾರಾಟಕ್ಕೆ ಪರವಾನಗಿ ನೀಡುವ, ಸೆಸ್ ವಿಧಿಸಿ, ವಸೂಲಿ ಮಾಡುವ ಮತ್ತು ಪರವಾನಗಿ ರದ್ದುಪಡಿಸುವ ಅಥವಾ ಅಮಾನತುಪಡಿಸುವ ಅಧಿಕಾರ ಎಪಿಎಂಸಿ ಅಧಿಕಾರಿಗಳಿಗೆ ಲಭಿಸಲಿದೆ. ಈ ಪ್ರಕ್ರಿಯೆಗಳಿಗೆ ಸಂಬಂಧಿಸಿದ ಮೇಲ್ಮನವಿಗಳನ್ನು ವಿಚಾರಣೆ ನಡೆಸಿ, ಆದೇಶ ಹೊರಡಿಸುವ ಅಧಿಕಾರ ಕೃಷಿ ಮಾರುಕಟ್ಟೆ ನಿರ್ದೇಶಕರಿಗೆ ದೊರೆಯಲಿದೆ ಎಂದು ವಿವರಿಸಿದರು.


ಇ– ಪಾವತಿ ವಿಧಾನದ ಮೂಲಕ ರೈತರು ಹಣ ಪಾವತಿಸಲು ಅವಕಾಶ ಮಾಡಿಕೊಡುತ್ತದೆ. ಹಣ್ಣುಗಳು, ತರಕಾರಿಗಳು ಮತ್ತು ಹೂವುಗಳ ಮಾರಾಟದ ಬೆಲೆಯ ಶೇಖಡ ಐದು ಮತ್ತು ಇತರ ಎಲ್ಲಾ ಅಧಿಸೂಚಿತ ಉತ್ಪನ್ನಗಳಿಗೆ ಶೇ.2ರ ಮಿತಿ ಇರಲಿದೆ. ಉಗ್ರಾಣಗಳಲ್ಲಿ ಮಾರಾಟಗಾರರ ಸರಕುಗಳ ಸುರಕ್ಷಿತ ಶೇಖರಣೆಯನ್ನು ಖಚಿತಪಡಿಸಿಕೊಳ್ಳಬೇಕು ಮತ್ತು ಬೆಂಕಿ, ಕಳ್ಳತನ, ಪ್ರವಾಹ, ಮಳೆ ಅಥವಾ ಇತರ ನೈಸರ್ಗಿಕ ವಿಪತ್ತುಗಳ ವಿರುದ್ಧ ಸಾಕಷ್ಟು ವಿಮಾ ರಕ್ಷಣೆಯನ್ನು ಒದಗಿಸಬೇಕು ಎಂದು ಅವರು ತಿಳಿಸಿದರು.

ಅಲ್ಲದೇ ಉಗ್ರಾಣಗಳಲ್ಲಿ ಅಗ್ನಿಶಾಮಕ ಸೌಲಭ್ಯಗಳು, ಎಲೆಕ್ಟ್ರಾನಿಕ್ ತೂಕ ವ್ಯವಸ್ಥೆಗಳು, ಇ–ವ್ಯಾಪಾರ ಸೌಲಭ್ಯಗಳು, ಗುಣಮಟ್ಟದ ಪ್ರಮಾಣೀಕರಣ, ಮಾರುಕಟ್ಟೆಗಳಲ್ಲಿ ಸರಕುಗಳ ಬೆಲೆ ಪ್ರದರ್ಶನ ಸೇರಿದಂತೆ ಕೃಷಿ ಮಾರುಕಟ್ಟೆ ನಿರ್ದೇಶಕರು ಸೂಚಿಸಿದಂತೆ ಇತರ ಸೌಲಭ್ಯಗಳನ್ನು ವ್ಯವಸ್ಥೆಗೊಳಿಸಬೇಕು. ಅಂತಹವರಿಗೆ ಸಾಲ ಸೌಲಭ್ಯ ಇರಲಿದೆ. ಅಧಿಸೂಚಿತ ಕೃಷಿ ಉತ್ಪನ್ನಗಳ ವ್ಯಾಪಾರಕ್ಕಾಗಿ ಇ–ಕಾಮರ್ಸ್ ಪ್ಲಾಟ್‌ಫಾರ್ಮ್‌ಗಳನ್ನು ಸ್ಥಾಪಿಸಲು ಮತ್ತು ಕಾರ್ಯನಿರ್ವಹಿಸಲು ಸರ್ಕಾರವು ನಿಯಮಾವಳಿಗಳನ್ನು ರೂಪಿಸಿದೆ. ಅಂತಹ ವೇದಿಕೆಗಳು ಅಗತ್ಯ ಪರವಾನಗಿ ಪಡೆದ ನಂತರ ಮಾತ್ರ ಕಾರ್ಯನಿರ್ವಹಿಸುತ್ತವೆ ಎಂದು ಆ ನಿಯಮಾವಳಿಗಳಲ್ಲಿ ಹೇಳಲಾಗಿದೆ.

ಅಧಿವೇಶನ ಮುಗಿದ ಬಳಿಕ ಬಿಪಿಎಲ್ ಕಾರ್ಡ್ ಪರಿಷ್ಕರಣೆ

ವಿಧಾನಪರಿಷತ್‌ನಲ್ಲಿ ಆಹಾರ ಸಚಿವ ಮುನಿಯಪ್ಪ ಮಾಹಿತಿ






ಬೆಂಗಳೂರು, ಮಾ.10– ವಿಧಾನ ಮಂಡಲದ ಅಧಿವೇಶನ ಮುಗಿದ ಬಳಿಕ ಬಿಪಿಎಲ್ ಕಾರ್ಡ್ ಪರಿಷ್ಕರಣೆ ಮಾಡುವುದಾಗಿ ಆಹಾರ ಸಚಿವ ಮುನಿಯಪ್ಪ ತಿಳಿಸಿದರು. ಅಲ್ಲದೆ ವಿಪಕ್ಷಗಳು ನಮಗೆ ಸಹಕಾರ ಕೊಡುವಂತೆ ಮನವಿ ಮಾಡಿದರು. ಬಿಪಿಎಲ್ ಕಾರ್ಡ್‌ಗೆ ಅರ್ಜಿ ಹಾಕಿದರೂ ಜನರಿಗೆ ಇನ್ನೂ ಕಾರ್ಡ್ ಸಿಗುತ್ತಿಲ್ಲ. ಆದಷ್ಟು ಬೇಗ ಬಿಪಿಎಲ್ ಕಾರ್ಡ್ ಕೊಡಬೇಕು. ಬಿಪಿಎಲ್ ಕಾರ್ಡ್ ಸಿಗದಿರುವುದರಿಂದ ವೃದ್ಧರು ಕಷ್ಟಪಡುತ್ತಿದ್ದಾರೆ. ತುರ್ತು ವೈದ್ಯಕೀಯ ಚಿಕಿತ್ಸೆಗೂ ಕಾರ್ಡ್ ಇಲ್ಲದೇ ತೊಂದರೆ ಆಗುತ್ತಿದೆ. ರೇಷನ್ ಕಾರ್ಡ್ ಅರ್ಜಿ ಹಾಕುವಾಗಲೂ ಸರ್ವರ್ ಸಮಸ್ಯೆ ಇದೆ. ಇದನ್ನು ಸರಿ ಮಾಡಬೇಕು ಎಂದು ಇಂದು ನಡೆದ ವಿಧಾನಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಸಿ.ಟಿ.ರವಿ ಆಗ್ರಹಿಸಿದರು. ಎಪಿಎಲ್ ಕಾರ್ಡ್ ಕೊಡುವುದು ಈಗ ನಿಲ್ಲಿಸಿದ್ದೇವೆ. 91 ಸಾವಿರ ಬಿಪಿಎಲ್ ಕಾರ್ಡ್ ಕೊಡುವುದು ಬಾಕಿ ಇದೆ. ಆದಷ್ಟು ಬೇಗ ಇದನ್ನು ಪರಿಶೀಲನೆ ಮಾಡಿ ಕ್ರಮ ತೆಗೆದುಕೊಳ್ಳುತ್ತೇವೆ. ಹಿಂದಿನ ಬಿಜೆಪಿ ಸರ್ಕಾರ 3 ವರ್ಷಗಳಿಂದ ಹೊಸ ಕಾರ್ಡ್ ಕೊಟ್ಟಿರಲಿಲ್ಲ. ನಾನು ಬಂದ ಮೇಲೆ ಹೊಸ ಕಾರ್ಡ್ ಕೊಡುತ್ತಿದ್ದೇವೆ. 2 ತಿಂಗಳಲ್ಲಿ ಬಾಕಿ ಇರುವ ಬಿಪಿಎಲ್ ಕಾರ್ಡ್ ಅರ್ಜಿ ವಿಲೇವಾರಿ ಮಾಡುತ್ತೇವೆ ಎಂದರು. 20 ಲಕ್ಷಕ್ಕೂ ಹೆಚ್ಚು ಬಿಪಿಎಲ್ ಕಾರ್ಡ್‌ನವರು ಎಪಿಎಲ್‌ಗೆ ಅರ್ಹತೆ ಪಡೆದಿದ್ದಾರೆ. ಇದರ ಪರಿಷ್ಕರಣೆಯನ್ನು ಗ್ರಾಮ ಪಂಚಾಯತಿ ಮಟ್ಟದಿಂದ ಮಾಡಲು ನಿರ್ಧಾರ ಮಾಡಿದ್ದೇವೆ. ವಿಧಾನಮಂಡಲದ ಅಧಿವೇಶನ ಮುಗಿದ ಕೂಡಲೇ ಗ್ರಾಮ ಮಟ್ಟದಿಂದ ಬಿಪಿಎಲ್ ಕಾರ್ಡ್ ಪರಿಶೀಲನೆ ಶುರು ಮಾಡುತ್ತೇವೆ. ಡಿಸಿಗಳಿಗೆ ಜವಾಬ್ದಾರಿ ಕೊಡಲಾಗುತ್ತದೆ. ಗ್ರಾಮ ಮಟ್ಟದಲ್ಲಿ ಸಮಿತಿ ಮಾಡಿ ಪ್ರತಿ ಮನೆಗಳಿಗೆ ಹೋಗಿ ಪರಿಶೀಲನೆ ಮಾಡಿ ಪರಿಷ್ಕರಣೆ ಮಾಡುತ್ತೇವೆ ಎಂದು ತಿಳಿಸಿದರು.

ಪ್ರಧಾನಿ ಮೋದಿ ಸರ್ಕಾರದಿಂದ ದೇಶದ ರೈಲ್ವೆ ವಲಯದಲ್ಲಿ ಕ್ರಾಂತಿಕಾರಕ ಅಭಿವೃದ್ಧಿ

• ಮಾಜಿ ಪ್ರಧಾನಿ ದೇವೇಗೌಡರ ಮುಕ್ತಕಂಠದ ಪ್ರಶಂಸೆ • ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ 'ಅತ್ಯಂತ ಪ್ರಾಮಾಣಿಕ ಸಚಿವ' ಶ್ಲಾಘನೆ





ಹೆಚ್.ಡಿ.ದೇವೇಗೌಡರು



ಅಶ್ವಿನಿ ವೈಷ್ಣವ್

ನವದೆಹಲಿ, ಮಾ.10– ನರೇಂದ್ರ ಮೋದಿ ಅವರ ಸರ್ಕಾರ ಕಳೆದ ಹತ್ತು ವರ್ಷಗಳಲ್ಲಿ ರೈಲ್ವೆ ವಲಯದಲ್ಲಿ ಕ್ರಾಂತಿಕಾರಕ ಅಭಿವೃದ್ಧಿ ಮಾಡಿದೆ ಎಂದು ಮಾಜಿ ಪ್ರಧಾನಿ ಹೆಚ್. ಡಿ.ದೇವೇಗೌಡರು ಶ್ಲಾಘಿಸಿದರು.

ರಾಜ್ಯಸಭೆಯಲ್ಲಿ ಸೋಮವಾರ ಭಾರತೀಯ ರೇಲ್ವೆ ತಿದ್ದುಪಡಿ ಮಸೂದೆ–2024 ಅನ್ನು ಬೆಂಬಲಿಸಿ ಮಾತನಾಡಿದ ಅವರು, ಪ್ರಧಾನಿ ಮೋದಿ ಅವರ ಆಡಳಿತಾವಧಿಯಲ್ಲಾಗಿರುವ ಅಭಿವೃದ್ಧಿಯನ್ನು ಬಣ್ಣಿಸುವುದರೊಂದಿಗೆ ರೈಲ್ವೆ ವಲಯಕ್ಕೆ ಮೈಸೂರು ಮಹಾರಾಜರ ಕೊಡುಗೆಯನ್ನೂ ಸ್ಮರಿಸಿಕೊಂಡರು.

ಮೈಸೂರು ಮಹಾರಾಜರ ಆಳ್ವಿಕೆಯಲ್ಲಿ ಮೈಸೂರು–ಹರಿಹರ ನಡುವೆ ಮೀಟರ್ ಗೇಜ್ ರೇಲು ಮಾರ್ಗ ನಿರ್ಮಿಸಿದ್ದರು. ಆಗಿನ ರೇಲು ಪ್ರಯಾಣದ ಅನುಭವ ಇನ್ನೂ ಹಸಿರಾಗಿದೆ. ಈಗಿನ ಮುಂಬೈ–ಚೆನ್ನೈ ರೈಲು ಮಾರ್ಗವನ್ನು ಪರಿಷ್ಕರಿಸಿ, ಮುಂಬೈನಿಂದ ಹರಿಹರ–ದಾವಣಗೆರೆ–ಶೃಂಗೇರಿ–ಬೇಲೂರು ಮೂಲಕ ಚೆನ್ನೈಗೆ ಸಂಪರ್ಕ ಕಲ್ಪಿಸಬೇಕು. ಇದರಿಂದ ಕರ್ನಾಟಕದ ಪ್ರಯಾಣಿಕರಿಗೆ ಬಹಳಷ್ಟು ಉಪಯೋಗವಾಗಲಿದೆ. ಈ ಯೋಜನೆ ಯನ್ನು ಆದಷ್ಟು ಬೇಗ ಕಾರ್ಯಗತಗೊಳಿಸುವಂತೆ ಮನವಿ ಮಾಡಿದರು. ಕಳೆದ 10 ವರ್ಷಗಳಲ್ಲಿ ದೇಶಾದ್ಯಂತ ನಿರೀಕ್ಷೆಗೂ ಮೀರಿ ರೈಲ್ವೆ ಜಾಲ ವಿಸ್ತರಿಸುವುದರ ಜೊತೆಗೆ ಸಾಕಷ್ಟು ಪ್ರಗತಿ ಯಾಗಿದೆ. ಈ ವಿಚಾರವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ರೇಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಅಭಿನಂದಿಸುತ್ತೇನೆ. ನಾನು ರೇಲ್ವೆ ಸಚಿವರನ್ನು ಅಭಿನಂದಿಸಿದರೆ ಕೆಲವರು ತಪ್ಪು ತಿಳಿದುಕೊಳ್ಳಬಾರದು. ನಾನು ಪ್ರಧಾನಿ ಆಗಿದ್ದಾಗ ಈ ಕ್ಷೇತ್ರದಲ್ಲಿ ಏನು ಮಾಡಿದ್ದೇನೆ, ನರೇಂದ್ರ ಮೋದಿ ಅವರು ಹತ್ತು ವರ್ಷಗಳಲ್ಲಿ ಏನೆಲ್ಲಾ ಬದಲಾವಣೆ ಮಾಡಿದ್ದಾರೆ ಎನ್ನುವುದು ನನಗೆ ತಿಳಿದಿದೆ ಎಂದರು. ರೈಲ್ವೆ ತಿದ್ದುಪಡಿ ಮಸೂದೆಯು ಅತ್ಯಂತ ಮಹತ್ವದ್ದಾಗಿದೆ. ಇದಕ್ಕೆ ನಮ್ಮ ಜೆಡಿಎಸ್ ಪಕ್ಷದ ಸಂಪೂರ್ಣ ಬೆಂಬಲ ಇದೆ ಎಂದ ದೇವೇಗೌಡರು, ಸದನದಲ್ಲಿದ್ದ ರೇಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಉದ್ದೇಶಿಸಿ ನೀವು ಅತ್ಯಂತ ಪ್ರಾಮಾಣಿಕ ಸಚಿವ ಎಂದು ಅವರ ಕಾರ್ಯವೈಖರಿಯನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

ಕಸಬಾ ಪಿಎಸಿಎಸ್ ನೂತನ ಕಚೇರಿ, ಮಳಿಗೆಗಳ ಉದ್ಘಾಟನೆ

ಸಂಘದ ಉಳಿವಿಗೆ ಸಕಾಲಕ್ಕೆ ಸಾಲ ಮರುಪಾವತಿಸಿ

ಸಂಘದ ಅಧ್ಯಕ್ಷ ದಶರಥ ಮನವಿ

ಹೆಚ್.ಡಿ.ಕೋಟೆ, ಮಾ.10– ರೈತರು ಪಡೆದ ಸಾಲವನ್ನು ಸಕಾಲಕ್ಕೆ ಮರುಪಾವತಿಸಿದಾಗ ಮಾತ್ರ ಸಹಕಾರಿ ಬ್ಯಾಂಕ್‌ಗಳ ಉಳಿವು ಸಾಧ್ಯ ಎಂದು ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ದಶರಥ ತಿಳಿಸಿದರು.

ಪಟ್ಟಣದ ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಕಚೇರಿ ಮತ್ತು ಮಳಿಗೆಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾನು ಕಳೆದ 10 ವರ್ಷದಿಂದ ಅಧ್ಯಕ್ಷನಾಗಿ ಕಾರ್ಯ ನಿರ್ವಹಿಸುತ್ತಿದ್ದು, ನಾನು ಮೊದಲು ಅಧ್ಯಕ್ಷನಾದ ವೇಳೆ ರೈತರಿಗೆ 60 ಲಕ್ಷ ರೂ. ಸಾಲ ನೀಡಲಾಗಿತ್ತು. ಪ್ರಸ್ತುತ 3.50 ಕೋಟಿ ರೂ. ಸಾಲ ನೀಡಲಾಗಿದೆ. ರೈತರಿಗೆ ಸರ್ಕಾರ 3 ಲಕ್ಷದವರೆಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡುತ್ತಿದೆ. ರೈತರು ಇದರ ಪ್ರಯೋಜನ ಪಡೆದು ನಿಗದಿತ ಸಮಯಕ್ಕೆ ಸಾಲ ಮರುಪಾವತಿ ಮಾಡಬೇಕು ಎಂದರು.

ಪಟ್ಟಣದಲ್ಲಿ ಸಣ್ಣ ಜಾಗದಿಂದ ಆರಂಭವಾದ ಸಹಕಾರ ಸಂಘ ಹಲವು ಮುಖಂಡರ ಸಹಕಾರದಿಂದ ಇಂದು ಉತ್ತಮ ಕಟ್ಟಡ ನಿರ್ಮಾಣವಾಗಿದೆ. ನಮ್ಮ ಸಹಕಾರ ಸಂಘದ ಮೂಲಕ ನೂರಾರು ರೈತರಿಗೆ ಕೋಟ್ಯಾಂತರ ರೂ. ಕೃಷಿ ಸಾಲ ನೀಡಲಾಗಿದ್ದು, ಸಂಘ ಅಭಿವೃದ್ಧಿಯತ್ತ ಸಾಗಿದೆ ಎಂದರು.

ಪಟ್ಟಣದ ಎಂಸಿಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ವೆಂಕಟಾಚಲ ಮಾತನಾಡಿ, ಸಹಕಾರ ಸಂಘಗಳು ರೈತನ ಬೆನ್ನೆಲುಬಾಗಿ ನಿಂತಿವೆ. ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಸಹಕಾರ ಸಂಘದ ಮೂಲಕ ರೈತರಿಗೆ ಸಾಲ ನೀಡಲಾಗುವುದು. ಬ್ಯಾಂಕ್‌ನ ಮೇಲ್ಪಟ್ಟ ಅಧಿಕಾರಿಗಳ ಬಳಿ ಮಾತನಾಡಿ ಹೆಚ್ಚಿನ ಸಾಲಗಳನ್ನು ನೀಡಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಎಂಸಿಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಚಂದ್ರು, ಕಸಬಾ ಕೃಷಿ ಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷ ಕುಮಾರ್, ವೈ.ಟಿ.ಮಹೇಶ್, ಹೆಚ್.ಆರ್. ಶ್ರೀನಿವಾಸರಾಜು, ಶಂಕರಲಿಂಗೇಗೌಡ, ಕೆ.ಜೆ.ರಾಮಕೃಷ್ಣೇಗೌಡ, ವಿರೇಂದ್ರಕುಮಾರ್, ಮಂಚನಾಯಕ, ಚಲುವರಾಜು, ಚೆನ್ನಾಜಮ್ಮ, ಶಫೀವುಲ್ಲಾ, ಲಕ್ಷ್ಮಮ್ಮ, ಮಹೇಶ್, ಶಿವರಾಜು, ರಂಗಸ್ವಾಮಿ, ಆನಂದ, ಈಶ್ವರೇಗೌಡ, ಸೋಮೇಗೌಡ, ಮಹದೇವೇಗೌಡ, ನಾಗರಾಜು, ನಾಗನಹಳ್ಳಿ ಪ್ರದೀಪ್, ಗೊಬ್ಬರದ ಅಂಗಡಿ ರಾಜೇಂದ್ರ, ಪುಟ್ಟಸ್ವಾಮಪ್ಪ, ಸಿದ್ದೇಗೌಡ, ಕಾರ್ಯದರ್ಶಿ ಶಂಭುಲಿಂಗೇಗೌಡ, ಸಹಾಯಕ ಪುನೀತ್ ಇದ್ದರು.



ನೂತನ ಕಚೇರಿ ಮತ್ತು ಮಳಿಗೆಗಳನ್ನು ಕಸಬಾ ಪಿಎಸಿಎಸ್ ಅಧ್ಯಕ್ಷ ದಶರಥ ಉದ್ಘಾಟಿಸಿದರು.

ದಿ.ಆರ್.ಧ್ರುವನಾರಾಯಣ್ ಅಜರಾಮರ

ನಂಜನಗೂಡು, ಮಾ.10– ಕ್ಷೇತ್ರದ ಜನರ ಕಷ್ಟಗಳಿಗೆ ಕಿವಿಯಾಗಿ ವಿಭಿನ್ನ ರಾಜಕಾರಣಿಯಾಗಿ ಗುರುತಿಸಿಕೊಂಡಿದ್ದ ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಅವರು ನಮ್ಮನ್ನು ಅಗಲಿ 2 ವರ್ಷ ಕಳೆದರೂ ಜನರ ಮನಸ್ಸಿನಲ್ಲಿ ಚಿರಸ್ಥಾಯಿಯಾಗಿ ಉಳಿದಿದ್ದಾರೆ.



ಅಧಿಕಾರ ಇದ್ದಾಗ ಮಾತ್ರ ಜನಮನ್ನಣೆಗಳಿಸಿ ಅಧಿಕಾರ ಹೋದ ನಂತರ ಮೂಲೆ ಗುಂಪಾಗುವ ರಾಜಕಾರಣಿಗಳ ಮಧ್ಯ ಮಾಜಿ ಸಂಸದ ದಿ.ಆರ್.ಧ್ರುವ ನಾರಾಯಣ್ ಅವರು ತಮ್ಮ ಸರಳ ವ್ಯಕ್ತಿತ್ವ, ಸಜ್ಜನಿಕೆಯ ಮಾತುಗಳಿಂದ ಸ್ನೇಹ ಜೀವಿಯಾಗಿ ಕ್ಷೇತ್ರದ ಮನೆ ಮಾತಾಗಿದ್ದರು. ಸದಾ ಕಾಲ ಜನರೊಂದಿಗೆ ಬೆರೆತು ಜನರ ಕಷ್ಟ ಸುಖಗಳನ್ನು ಆಲಿಸುತ್ತಿದ್ದ ಅವರ ಕಾರ್ಯ ವೈಖರಿ ಅವರನ್ನು ಉತ್ತುಂಗಕ್ಕೆ ಕೊಂಡೊಯ್ದಿತ್ತು. ಅಭಿವೃದ್ಧಿ ಕೆಲಸಗಳಿಂದಾಗಿ ದೇಶದ ನಂ.1 ಸಂಸದ ಎಂದು ಗುರ್ತಿಸಿಕೊಂಡಿದ್ದ ಅವರು ಹಳೇ ಮೈಸೂರು ಭಾಗದಲ್ಲಿ ಪಕ್ಷಾತೀತವಾಗಿ ಜನಮನ್ನಣೆ ಗಳಿಸುವ ಅಜಾತಶತ್ರು ರಾಜಕಾರಣಿಯಾಗಿದ್ದರು. ಅಲ್ಲದೆ ದಿ.ವಿ.ಶ್ರೀನಿವಾಸ್ ಪ್ರಸಾದ್ ಕಾಂಗ್ರೆಸ್ ತೊರೆದ ನಂತರ ದಲಿತ ನಾಯಕರಾಗಿ ಹೊರ ಹೊಮ್ಮಿದರು.

ಸಂಸದರಾಗಿ ಅವರು ಸುಸಜ್ಜಿತ ಕಾರ್ಮಿಕ ಆಸ್ಪತ್ರೆ ನಿರ್ಮಾಣ, ತಾಯಿ ಮತ್ತು ಮಕ್ಕಳ ಆಸ್ಪತ್ರೆ ನಿರ್ಮಾಣ, ಹುಲ್ಲಹಳ್ಳಿ ಭಾಗದ 134 ಹಳ್ಳಿಗಳಿಗೆ ಶಾಶ್ವತ ಕುಡಿಯುವ ನೀರು ಪೂರೈಕೆ ಸೇರಿದಂತೆ ನಂಜನಗೂಡು ಕ್ಷೇತ್ರದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ. ಇಂದಿಗೂ ಅವರು ಮಾಡಿದ ಅಭಿವೃದ್ಧಿ ಕಾರ್ಯಗಳು ನಮ್ಮ ಕಣ್ಣೆದುರಿಗೆ ಇದ್ದು, ಜನಪ್ರತಿನಿಧಿಗಳು ಅಭಿವೃದ್ಧಿ ಪರವಾಗಿದ್ದರೆ ಅಂತಹವರನ್ನು ಜನ ಎಂದಿಗೂ ಮರೆಯುವುದಿಲ್ಲ ಎಂಬುದಕ್ಕೆ ಧ್ರುವ ನಾರಾಯಣ್ ಸ್ಪಷ್ಟ ನಿದರ್ಶನವಾಗಿದ್ದಾರೆ.

2017ರಲ್ಲಿ ಮಾಜಿ ಸಚಿವ ಹೆಚ್.ಎಸ್.ಮಹದೇವ ಪ್ರಸಾದ್ ಅವರ ಅಕಾಲಿಕ ಮರಣ, 2018ರಲ್ಲಿ ಡಾ.ಹೆಚ್.ಸಿ.ಮಹದೇವಪ್ಪನವರು ವಿಧಾನಸಭಾ ಚುನಾವಣೆಯಲ್ಲಿ ಸೋಲು ಅನುಭವಿಸಿದ್ದರಿಂದ 2 ವರ್ಷಗಳ ಕಾಲ ಇತ್ತ ಗಮನ ಹರಿಸಿರಲಿಲ್ಲ. ಈ ವೇಳೆ ಧ್ರುವನಾರಾಯಣ್ ಅವರು ನಾವಿಕನಿಲ್ಲದ ದೋಣಿಯಂತಾಗಿದ್ದ ಕಾಂಗ್ರೆಸ್ ಪಕ್ಷದ ಸಂಘಟನೆಗೆ ಒತ್ತು ನೀಡಿ ದಣಿವರಿಯದೆ ಕೆಲಸ ಮಾಡಿದ್ದರು. ಅಲ್ಲದೇ ಮೈಸೂರು–ಚಾಮರಾಜನಗರ ಜಿಲ್ಲೆಗಳಲ್ಲಿ ನಡೆದ ರಾಹುಲ್ ಗಾಂಧಿ ಅವರ ಭಾರತ್ ಜೋಡೋ ಯಾತ್ರೆ, ಪ್ರಜಾಧ್ವನಿ ಯಾತ್ರೆ ಯಶಸ್ಸಿಗೆ ಶ್ರಮಿಸಿದ್ದರು.

2023ರ ವಿಧಾನಸಭಾ ಚುನಾವಣೆಯಲ್ಲಿ ನಂಜನಗೂಡಿನಿಂದ ಸ್ಪರ್ಧಿಸಿ ರಾಜ್ಯ ರಾಜಕಾರಣಕ್ಕೆ ಬರಬೇಕೆಂಬ ಇಚ್ಛೆ ಹೊಂದಿದ್ದ ಅವರು ಕ್ಷೇತ್ರದೆಲ್ಲೆಡೆ ಸಂಚರಿಸಿ ಪಕ್ಷ ಸಂಘಟಿಸಿ ಚುನಾವಣೆಗೆ ಸಜ್ಜಾಗಿದ್ದರು. ಆದರೆ ಅವರು ಅಕಾಲಿಕ ಮರಣಕ್ಕೆ ತುತ್ತಾದರು. ಕ್ಷೇತ್ರದ ಜನತೆಯ ಕಷ್ಟ ಸುಖಗಳಲ್ಲಿ ಭಾಗಿಯಾಗುತ್ತಿದ್ದ ಧ್ರುವನಾರಾಯಣ್ ಅವರು ನಮ್ಮನ್ನು ಅಗಲಿ 2 ವರ್ಷ ಕಳೆದರೂ ಕ್ಷೇತ್ರದ ಜನರ ಮನಸ್ಸಿನಲ್ಲಿ ಅಜರಾಮರವಾಗಿದ್ದಾರೆ. ಪ್ರಸ್ತುತ ನಿತ್ಯ ಅವರ ಹೆಸರಿನಲ್ಲಿ ಕ್ಷೇತ್ರದಲ್ಲಿ ಕಾರ್ಯಕ್ರಮ ನಡೆಸುವ ಮೂಲಕ ಜನತೆ ಅವರನ್ನು ಸದಾ ಸ್ಮರಿಸುತ್ತಾರೆ. ನಂಜನಗೂಡಿನಿಂದ ಶಾಸಕರಾಗಿ ಆಯ್ಕೆಯಾಗಿ ಕಾಡಂಚಿನ ರೈತರ ಕಷ್ಟಗಳನ್ನು ನಿವಾರಿಸಬೇಕು. ನಂಜನಗೂಡನ್ನು ಮಾದರಿ ಕ್ಷೇತ್ರವನ್ನಾಗಿ ರೂಪಿಸಬೇಕು ಎಂಬ ಬಯಕೆ ಹೊಂದಿದ್ದ ಧ್ರುವನಾರಾಯಣ್ ಅವರು ಚುನಾವಣೆ ಸೋಲಿನಿಂದ ಧೃತಿಗೆಡದಿದ್ದರೂ, ವಿಧಿಯ ಆಟದ ಮುಂದೆ ಸೋತರು. ಕ್ಷೇತ್ರದ ಕಾರ್ಯಕರ್ತರು, ಮುಖಂಡರು ಮತ್ತು ಜನಸಾಮಾನ್ಯರು ಶಾಸಕ ದರ್ಶನ್ ಅವರಲ್ಲಿ ದಿ.ಆರ್.ಧ್ರುವನಾರಾಯಣ್ ಅವರನ್ನು ಕಾಣುತ್ತಿದ್ದು, ದರ್ಶನ್ ಅವರು ತಮ್ಮ ತಂದೆಯ ಕನಸನ್ನು ಸಾಕಾರಗೊಳಿಸುವತ್ತ ಮುನ್ನುಗ್ಗುತ್ತಿದ್ದಾರೆ.

ಬನ್ನೂರು ಪಿಎಸಿಎಸ್ ನಿರ್ದೇಶಕರಿಗೆ ಸನ್ಮಾನ



ಬನ್ನೂರು ಪಿಎಸಿಎಸ್ ನೂತನ ನಿರ್ದೇಶಕ ಹೇಮಂತ್ ಕುಮಾರ್ ರೆಡ್ಡಿ ಅವರನ್ನು ಕಾಂಗ್ರೆಸ್ ಮುಖಂಡರು ಸನ್ಮಾನಿಸಿದರು.

ತಿ.ನರಸೀಪುರ, ಮಾ.10– ತಾಲೂಕಿನ ಬನ್ನೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಸ್ಪರ್ಧಿಸಿ ಭರ್ಜರಿ ಜಯ ಗಳಿಸಿದ ಹೇಮಂತ್ ಕುಮಾರ್ ರೆಡ್ಡಿ ಅವರನ್ನು ಕಾಂಗ್ರೆಸ್ ಮುಖಂಡರು ಸನ್ಮಾನಿಸಿದರು.

ಪುರಸಭೆ ಸದಸ್ಯ ಶಿವಣ್ಣ ಮಾತನಾಡಿ, ಹೇಮಂತ್ ಕುಮಾರ್ ರೆಡ್ಡಿ ಅವರು ಹೆಚ್ಚಿನ ಮತ ಪಡೆದು ಜಯಗಳಿಸಿದ್ದಾರೆ. ಇದು ಅವರಿಗೆ ರಾಜಕೀಯದ ಮೊದಲ ಮೆಟ್ಟಿಲಾಗಿದ್ದು, ಮುಂದೆ ಅವರ ರಾಜಕೀಯ ಜೀವನ ಯಶಸ್ವಿಯಾಗಲಿ ಎಂದರು.

ಸಂಘದ ನಿರ್ದೇಶಕ ಹೇಮಂತ್ ಕುಮಾರ್ ರೆಡ್ಡಿ ಮಾತನಾಡಿ, ಎಲ್ಲಾ ಸಮುದಾಯದವರ ಒಡನಾಟ ಇಟ್ಟುಕೊಂಡಿರುವ ನನಗೆ ಜನರು ಸಹಕಾರ ಸಂಘದ ಚುನಾವಣೆಯಲ್ಲಿ ಸ್ಪರ್ಧಿಸುವಂತೆ ಒತ್ತಾಯಿಸಿದ್ದರಿಂದ ಸ್ಪರ್ಧಿಸಿ ನಿರ್ದೇಶಕನಾಗಿ ಆಯ್ಕೆಯಾಗಿದ್ದೇನೆ. ಹೀಗಾಗಿ ನನ್ನನ್ನು ಬೆಂಬಲಿಸಿದ ಜನತೆಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಪುರಸಭೆ ಮಾಜಿ ಉಪಾಧ್ಯಕ್ಷ ಬಿ.ಎಸ್.ರಾಮಲಿಂಗು ಮಾತನಾಡಿದರು. ಮಾಜಿ ಶಾಸಕಿ ಸುನೀತಾ ವೀರಪ್ಪಗೌಡ, ಪುರಸಭೆ ಮಾಜಿ ಅಧ್ಯಕ್ಷ ಮುನಾವರ್ ಪಾಷ, ಸದಸ್ಯರಾದ ಮೂರ್ತಿ, ಲೋಕೇಶ್, ನಾಮನಿರ್ದೇಶಕ ಮಹೇಶ್, ಪೈಲ್ವಾನ್ ರಮೇಶ್, ಹೊಸಕೇರಿ ಕುಮಾರ, ಮಾಕನಹಳ್ಳಿ ವೆಂಕಟೇಶ್, ಕುರುಬ ಕೃಷ್ಣ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಜರಿದ್ದರು.

ವಿದ್ಯಾರ್ಥಿಗಳು ವಿಜ್ಞಾನದ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಿ

ಹುಣಸೂರು, ಮಾ.10– ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಿ, ಮೂಲ ವಿಜ್ಞಾನದಲ್ಲಿ ಹೆಚ್ಚು ಆಸಕ್ತಿ ಬೆಳೆಸಿಕೊಳ್ಳುವಂತೆ ಪ್ರೇರೇಪಿಸಬೇಕು ಎಂದು ಡಾ.ಚಿರಂಜೀವಿ ತಿಳಿಸಿದರು.



ಹನಗೋಡು ಸರ್ಕಾರಿ ಪ್ರೌಢಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ ಮತ್ತು ನೂತನ ವಿಜ್ಞಾನ ಪ್ರಯೋಗಾಲಯ ಉದ್ಘಾಟನಾ ಕಾರ್ಯಕ್ರಮ ನಡೆಯಿತು.

ತಾಲೂಕಿನ ಹನಗೋಡು ಸರ್ಕಾರಿ ಪ್ರೌಢಶಾಲೆಯಲ್ಲಿ ವಿಜ್ಞಾನ ದಿನಾಚರಣೆ ಪ್ರಯುಕ್ತ ವಿಜ್ಞಾನ ವಸ್ತು ಪ್ರದರ್ಶನ ಮತ್ತು ನೂತನ ವಿಜ್ಞಾನ ಪ್ರಯೋಗಾಲಯ ಉದ್ಘಾಟಿಸಿ ಮಾತನಾಡಿ ಮಕ್ಕಳಿಗೆ ವಿಜ್ಞಾನದ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳುವಂತೆ ತಿಳಿಸಿದರು.

ಉಪ ಪ್ರಾಂಶುಪಾಲ ಸಂತೋಷ್ ಕುಮಾರ್ ಮಾತನಾಡಿ, ಪ್ರೌಢಶಾಲಾ ಹಂತದಲ್ಲಿ ವಿಜ್ಞಾನ ಪ್ರಯೋಗಾಲಯ ಅವಶ್ಯಕವಾಗಿ ಬೇಕಾಗಿದ್ದು, ಇದನ್ನು ಮನಗಂಡು ಪ್ರತ್ಯೇಕ ಪ್ರಯೋಗಾಲಯ ನಿರ್ಮಿಸಿ ಆ ಮೂಲಕ ಮಕ್ಕಳಲ್ಲಿ ವಿಜ್ಞಾನದ ಬಗ್ಗೆ ಆಸಕ್ತಿ ಮೂಡಿಸಲಾಗುತ್ತಿದೆ. ಅಲ್ಲದೇ ವಿಜ್ಞಾನ ರಸಪ್ರಶ್ನೆ ಕಾರ್ಯಕ್ರಮ, ವಿಜ್ಞಾನ ವಸ್ತು ಪ್ರದರ್ಶನ ಮತ್ತು ವಿಜ್ಞಾನ ವಿಚಾರ ಗೋಷ್ಠಿಗಳನ್ನು ನಡೆಸಿ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಮೂಡಿಸುವಲ್ಲಿ ವಿಜ್ಞಾನ ನೋಡಲ್ ಶಿಕ್ಷಕಿ ಜಯಂತಿ ಹಾಗೂ ಇತರರು ಶ್ರಮಿಸುತ್ತಿದ್ದಾರೆ ಎಂದರು.

ಡಾ.ಭೂಮಿಕಾ ಮತ್ತು ಡಾ.ಶಿಫಾ ಹೆಣ್ಣು ಮಕ್ಕಳಿಗೆ ಆಪ್ತ ಸಮಾಲೋಚನೆ ಹಾಗೂ ಉಪನ್ಯಾಸ ಕಾರ್ಯಕ್ರಮ ನಡೆಸಿಕೊಟ್ಟರು. ಇದೇ ವೇಳೆ ಅತ್ಯುತ್ತಮ ಮಾಡೆಲ್‌ಗೆ ಬಹುಮಾನ ವಿತರಿಸಲಾಯಿತು. ಈ ವೇಳೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೈಸೂರು ಜಿಲ್ಲಾ ನಿರ್ದೇಶಕ ಮುರಳೀಧರ್, ತಾಲೂಕು ಯೋಜನಾಧಿಕಾರಿ ನಾರಾಯಣಶೆಟ್ಟಿ, ಪತ್ರಕರ್ತ ದಾ.ರಾ.ಮಹೇಶ್, ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣೇಗೌಡ, ಸದಸ್ಯರಾದ ಹರೀಶ್, ಪೋಷಕರಾದ ರೂಪ, ಸುನಂದ, ರವಿ, ಜಗದೀಶ್, ಕೃಷ್ಣ, ಶಿಕ್ಷಕರಾದ ಛಾಯಾಮಣಿ, ಪ್ರಸನ್ನ ಕುಮಾರ್, ವೀರಣ್ಣ, ಸತೀಶ್ ಕುಮಾರ್, ಭಾನುಮತಿ, ಯತೀಶ್, ವರ್ಷ, ನಿಹಾರಿಕ, ಸೌಮ್ಯ ಇತರರಿದ್ದರು.

ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ

ಸರಗೂರು, ಮಾ.10– ಗರ್ಭಿಣಿಯರನ್ನು ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು ಪರೀಕ್ಷೆ ಮಾಡುವುದರಿಂದ ತಾಯಿ ಮತ್ತು ಶಿಶು ಮರಣ ತಪ್ಪಿಸಬಹುದಾಗಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಟಿ.ರವಿಕುಮಾರ್ ತಿಳಿಸಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ನಡೆದ ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಮಾತನಾಡಿದ ಅವರು, ಪ್ರತಿ ತಿಂಗಳು 9 ಮತ್ತು 24ರಂದು ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ, ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಗರ್ಭಿಣಿಯರನ್ನು ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ಕರೆ ತಂದು ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರಿಂದ ಪರೀಕ್ಷಿಸಿ, ಉಚಿತವಾಗಿ ರಕ್ತದೊತ್ತಡ, ತೂಕ ಪರೀಕ್ಷೆ ಮಾಡಿಸುವುದು, ಈ ವೇಳೆ ಗರ್ಭಿಣಿಯರಲ್ಲಿ ತೊಂದರೆ ಕಂಡು ಬಂದಲ್ಲಿ ಸೂಕ್ತ ಸಲಹೆ, ಚಿಕಿತ್ಸೆ ಕೊಡಿಸುವುದು. ಅಲ್ಲದೇ ಪೌಷ್ಟಿಕ ಆಹಾರ ಸೇವನೆ, ಸುರಕ್ಷಿತ ಹೆರಿಗೆ, ಸುರಕ್ಷಿತ ತಾಯ್ತನ, ಸುರಕ್ಷಿತ ಶಿಶು ಆರೈಕೆ ಬಗ್ಗೆ ಅರಿವು ಮೂಡಿಸುವುದು. ತಾಯಿ ಮತ್ತು ಶಿಶು ಮರಣ ತಪ್ಪಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದರು. ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿ ಡಾ.ಪಾರ್ಥಸಾರಥಿ, ಸಿಬ್ಬಂದಿ ವರ್ಗದವರಾದ ರವಿರಾಜ್, ಪುಷ್ಪ, ಶಾಂತಿ, ಮಹಾದೇವ, ಮಾನಸ, ಶ್ವೇತಾ, ಆಶಾ ಕಾರ್ಯಕರ್ತೆಯರು ಇದ್ದರು.



ಕಾರ್ಯಕ್ರಮದಲ್ಲಿ ತಾಲೂಕು ಆರೋಗ್ಯಾಧಿಕಾರಿ ಟಿ.ರವಿಕುಮಾರ್ ಮಾತನಾಡಿದರು.

ವಿದ್ಯಾರ್ಥಿಗಳೇ ಶಾಲೆಯ ಆಸ್ತಿ: ನೋಡೆಲ್ ಅಧಿಕಾರಿ ರಾಜಯ್ಯ

ಕಂಪಲಾಪುರ, ಮಾ.10– ಶಾಲೆಗಳಲ್ಲಿ ಓದುವ ವಿದ್ಯಾರ್ಥಿಗಳೇ ಆ ಶಾಲೆಯ ಆಸ್ತಿ ಎಂದು ಮೈಸೂರು ಡಿಡಿಪಿಐ ಕಚೇರಿ ವಿಷಯ ಪರಿವೀಕ್ಷಕ ರಾಜಯ್ಯ ತಿಳಿಸಿದರು.

ಇಲ್ಲಿನ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಶಾರದಾ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಪಠ್ಯಕ್ಕೆ ಸಂಬಂಧಿಸಿದ ಯಾವುದೇ ವಿಷಯಗಳು ಅರ್ಥವಾಗದಿದ್ದರೆ ಶಿಕ್ಷಕರ ಬಳಿ ಕೇಳಿ ಪರಿಹಾರ ಕಂಡುಕೊಳ್ಳಿ. ಅಂಜಿಕೆ ಬೇಡ. ವಿದ್ಯಾರ್ಥಿಗೆ ಜೀವನದ ಪ್ರಮುಖ ಘಟ್ಟ ಎಸ್‌ಎಸ್‌ಎಲ್‌ಸಿ ಹಂತದಲ್ಲಿ ಕಷ್ಟಪಟ್ಟು ಓದಿ ಪ್ರಾಮಾಣಿಕವಾಗಿ ಪರೀಕ್ಷೆ ಬರೆಯಿರಿ. ಯಾರ ಮೇಲೂ ಅವಲಂಬಿತರಾಗಬೇಡಿ ಎಂದರು.

ಇದೇ ವೇಳೆ ಕಳೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಕನ್ನಡ ವಿಷಯದಲ್ಲಿ ಅತೀ ಹೆಚ್ಚು ಅಂಕ ಪಡೆದ ಸುಶ್ಮಿತಾ(124), ಮಹಾಲಕ್ಷ್ಮಿ(123), ಶ್ರಾವಣಿ.ಎಸ್ (120), ಹೇಮಂತ್(119)ಗೆ ಕನ್ನಡ ಶಿಕ್ಷಕ ಸಂಜೀವ್ ಕುಮಾರ್ ನಗದು ಪುರಸ್ಕಾರ ನೀಡಿದರು. ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಉತ್ತಮ ನಡತೆ ಹೊಂದಿರುವ ಹೆಚ್ಚು ಹಾಜರಾತಿ, ಕ್ರೀಡೆ, ತೋಟಗಾರಿಕೆಯಲ್ಲಿ ಉತ್ತಮವಾಗಿ ತೊಡಗಿಸಿಕೊಂಡ ವಿದ್ಯಾರ್ಥಿಗಳಿಗೆ ಬಹುಮಾನ ನೀಡಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಮಹದೇವಯ್ಯ, ಶಿಕ್ಷಕಿ ಗೀತಾ, ಶಾರದಮ್ಮ, ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣ, ಸದಸ್ಯ ಮಂಜು, ಪತ್ರಕರ್ತ ಸದಾಶಿವ ಸೇರಿದಂತೆ ಶಿಕ್ಷಕ–ಶಿಕ್ಷಕಿಯರು, ವಿದ್ಯಾರ್ಥಿಗಳು ಹಾಜರಿದ್ದರು.



ಕಂಪಲಾಪುರ ಸರ್ಕಾರಿ ಪ್ರೌಢಶಾಲೆಯಲ್ಲಿ ಶಾರದಾ ಪೂಜೆ ನಡೆಯಿತು.

ಬೆಟ್ಟದಯ್ಯ, ಕಾಂತಮ್ಮ ಸಂಘದ ವಾರ್ಷಿಕೋತ್ಸವ

ಹುಣಸೂರು, ಮಾ.10– ತಾಲೂಕಿನ ಬೋಳನಹಳ್ಳಿ ವಲಯದ ಕಂತೇಗೌಡನಕೊಪ್ಪಲು ಗ್ರಾಮದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ರಚಿಸಲಾದ ಬೆಟ್ಟದಯ್ಯ ಸ್ವಸಹಾಯ ಸಂಘ, ಕಾಂತಮ್ಮ ಸ್ವಸಹಾಯ ಸಂಘದ 13ನೇ ವಾರ್ಷಿಕೋತ್ಸವ ನಡೆಯಿತು.

ವಲಯದ ಮೇಲ್ವಿಚಾರಕ ಕಿರಣ್ ಕುಮಾರ್ ಮಾತನಾಡಿ, ಡಾ.ಡಿ.ವೀರೇಂದ್ರ ಹೆಗಡೆಯವರು ಬಡವರು ಹಾಗೂ ರೈತರ ಕಲ್ಯಾಣಕ್ಕೋಸ್ಕರ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಬಗ್ಗೆ ಹಾಗೂ ಧರ್ಮಸ್ಥಳದಿಂದ ಪ್ರತಿವರ್ಷ ಮಾಡುವ ದಾನ ಧರ್ಮಗಳ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಊರಿನ ಯಜಮಾನರಾದ ಲಕ್ಷ್ಮಣಗೌಡ, ಶಿವಲಿಂಗೇಗೌಡ, ಜಯರಾಮೇಗೌಡ, ಗ್ರಾಪಂ ಮಾಜಿ ಅಧ್ಯಕ್ಷೆ ಪದ್ಮಮ್ಮ, ತಮ್ಮಣ್ಣಗೌಡರು, ಸೇವಾ ಪ್ರತಿನಿಧಿಗಳಾದ ಮಂಜುಳಾ, ರೇಣುಕಾ, ಯಶೋದ, ಎರಡು ಸಂಘದ ಸದಸ್ಯರು ಭಾಗವಹಿಸಿದ್ದರು.

ಇಂದು ವಿದ್ಯುತ್ ವ್ಯತ್ಯಯ

ಹುಣಸೂರು, ಮಾ.10– ಹನಗೋಡು ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ಕಾರ್ಯ ಹಮ್ಮಿಕೊಂಡಿರುವುದರಿಂದ ಮಾ.11ರಂದು ಬೆಳಗ್ಗೆ 10ರಿಂದ ಸಂಜೆ 6 ರವರೆಗೆ ನೇರಳಕುಪ್ಪೆ, ಕರ್ಣಕುಪ್ಪೆ, ಕಣಗಾಲು, ಕಡೆಮನುಗನಹಳ್ಳಿ, ಕರ್ಣಕುಪ್ಪೆ ಗೇಟ್, ಕೂಡ್ಲೂರು, ಹೊನ್ನೇನಹಳ್ಳಿ, ತಟ್ಟೆಕೆರೆ, ಬೀರನಹಳ್ಳಿ ಕಾವಲ್ ಗೌಡಿಕೆರೆ, ಕಾಮಗೌಡನ ಹಳ್ಳಿ, ಹೆಗ್ಗಂದೂರು, ವಡ್ಡಂಬಾಳು, ದಾಸನಪುರ, ಹಿಂಡಗುಡ್ಲು, ಚಿಕ್ಕಹೆಜ್ಜೂರು, ದೊಡ್ಡಹೆಜ್ಜೂರು, ಕಾಳಬೂಚನಹಳ್ಳಿ, ಕಚುವಿನಹಳ್ಳಿ, ಕಿರಂಗೂರು, ಹರಳಹಳ್ಳಿ, ಮಾದಹಳ್ಳಿ, ಹೆಬ್ಬಾಳ, ಕಿಕ್ಕೇರಿಕಟ್ಟೆ, ಕೊಳವಿಗೆ ಹಾಗೂ ಹನಗೋಡು ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಬೆಟ್ಟದಪುರದಲ್ಲಿ ರಾಗಿ ಖರೀದಿ ಕೇಂದ್ರ ಉದ್ಘಾಟನೆ




ರಾಗಿ ಖರೀದಿ ಕೇಂದ್ರಕ್ಕೆ ಚಾಲನೆ ನೀಡಲಾಯಿತು.

ಬೆಟ್ಟದಪುರ, ಮಾ.10– ರೈತರು ಗುಣಮಟ್ಟದ ರಾಗಿ ಮಾರಾಟ ಮಾಡುವ ಮೂಲಕ ರಾಗಿ ಖರೀದಿ ಕೇಂದ್ರವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ತಿಳಿಸಿದರು.

ಬೆಟ್ಟದಪುರದ ಎಪಿಎಂಸಿ ಆವರಣದಲ್ಲಿ ಸೋಮವಾರ ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೆಲ ರೈತರು ಸರ್ಕಾರದ ಯೋಜನೆ ಸದುಪಯೋಗಪಡಿಸಿಕೊಳ್ಳದೇ, ಬೇರೆಯವರು ಹಣ ಮಾಡಿಕೊಳ್ಳಲು ಅವಕಾಶ ಮಾಡಿ ಕೊಡುತ್ತಿರುವುದು ಬೇಸರದ ಸಂಗತಿ ಎಂದರು.

ಈ ವೇಳೆ ಬೆಟ್ಟದಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಹಮತ್ ಜಾನ್ ಬಾಬು, ಕೆಪಿಸಿಸಿ ಸದಸ್ಯ ಅನಿಲ್ ಕುಮಾರ್, ಎಪಿಎಂಸಿ ಜಿಲ್ಲಾ ವ್ಯವಸ್ಥಾಪಕ ಸೋಮಯ್ಯ, ಆಹಾರ ಇಲಾಖೆ ಶಿರಸ್ತೇದಾರ್ ಸಣ್ಣಸ್ವಾಮಿ, ನಿರೀಕ್ಷಕ ಮಂಜುನಾಥ್, ಬೆಟ್ಟದಪುರ ಗ್ರಾಪಂ ಅಧ್ಯಕ್ಷ ರಾಜಶೇಖರ್, ಪಿಡಿಓಗಳಾದ ಮಂಜುನಾಥ್, ಧನಂಜಯ್, ಮುಖಂಡರಾದ ಪುಟ್ಟರಾಜು, ಕೃಷ್ಣೇಗೌಡ, ಹೆಚ್.ಟಿ.ಗೋವಿಂದೇಗೌಡ, ಯೋಗೇಶಗೌಡ, ಮಹದೇವ್, ಲೋಕೇಶ್, ಮುಖ್ಯ ಶಿಕ್ಷಕ ಕೆ.ಸಿ.ಸತೀಶ್, ಖರೀದಿ ಕೇಂದ್ರದ ಅಧಿಕಾರಿಗಳಾದ ಲೋಕನಾಥ್, ಮಂಜುನಾಥ್, ರೈತ ಮುಖಂಡರಾದ ಸ್ವಾಮಿಗೌಡ, ಮಹದೇವ್, ದಶರಥ, ಆನಂದ್, ರವಿ, ಭೀಮಣ್ಣ, ಪುಟ್ಟರಾಜು ಚಿಕ್ಕೇಗೌಡ, ವಿಜಯ್ ಅರಸ್, ಗ್ರಾಮದ ಮಹೇಶ್, ಎಪಿಎಂಸಿ ಮಾಜಿ ಅಧ್ಯಕ್ಷ ಜಯಚಂದ್ರ, ಜಯರಾಮೇಗೌಡ, ನೀಲೇಗೌಡ, ಗೋವಿಂದರಾಜ್ ಸೇರಿದಂತೆ ಹಲವರಿದ್ದರು.

ಪಿಎಲ್‌ಡಿ ಬ್ಯಾಂಕ್ ನಿರ್ದೇಶಕರಿಗೆ ಸನ್ಮಾನ



ತಿ.ನರಸೀಪುರ ಪಿಎಲ್‌ಡಿ ಬ್ಯಾಂಕ್ ನಿರ್ದೇಶಕರ ಚುನಾವಣೆಯಲ್ಲಿ ಸಾಲಗಾರರಲ್ಲದ ಕ್ಷೇತ್ರದಿಂದ ಜಯಗಳಿಸಿದ ಎನ್.ಅನಿಲ್ ಕುಮಾರ್ ಅವರನ್ನು ಪುರಸಭಾ ಸದಸ್ಯರು ಸನ್ಮಾನಿಸಿದರು. ಸದಸ್ಯರಾದ ಬಾದಾಮಿ ಮಂಜು, ಎಸ್.ಕೆ.ಕಿರಣ್, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಹದೇವಣ್ಣ, ನಿರ್ದೇಶಕ ಎನ್.ಮಹದೇವಸ್ವಾಮಿ, ಲಿಂಗಪ್ಪಾಜಿ, ಮಹೇಶ್, ಮೃಗಾಲಯ ಪ್ರಾಧಿಕಾರದ ಮಾಜಿ ನಿರ್ದೇಶಕ ಅಮ್ಜದ್ ಖಾನ್, ಮೂಗೂರು ಹರೀಶ್ ಸೇರಿದಂತೆ ಇನ್ನಿತರರಿದ್ದರು.

ನೆರಗ್ಯಾತನಹಳ್ಳಿ ಪಿಎಸಿಎಸ್ ಚುನಾವಣೆ

ಭರ್ಜರಿ ಗೆಲುವು ಸಾಧಿಸಿದ ಕುಮಾರಸ್ವಾಮಿ ತಂಡ



ನೆರಗ್ಯಾತನಹಳ್ಳಿ ಪಿಎಸಿಎಸ್ ಚುನಾವಣೆಯಲ್ಲಿ ತಾಪಂ ಮಾಜಿ ಅಧ್ಯಕ್ಷ ಎಂ.ಕುಮಾರಸ್ವಾಮಿ ಬಣ ಭರ್ಜರಿ ಜಯ ಸಾಧಿಸಿತು.

ತಿ.ನರಸೀಪುರ, ಮಾ.10– ನೆರಗ್ಯಾತನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಚುನಾವಣೆಯಲ್ಲಿ ತಾಪಂ ಮಾಜಿ ಅಧ್ಯಕ್ಷ ಎಂ.ಕುಮಾರಸ್ವಾಮಿ ನೇತೃತ್ವದ ತಂಡ ಮೇಲುಗೈ ಸಾಧಿಸಿ 8 ಸ್ಥಾನಗಳಲ್ಲಿ ಗೆಲುವು ಸಾಧಿಸಿದರೆ, ಡೈರಿ ಗುರುಮೂರ್ತಿ ನೇತೃತ್ವದ ತಂಡ 2 ಸ್ಥಾನಗಳಲ್ಲಿ ಜಯ ಗಳಿಸಿದೆ.

ಕೃಷಿ ಪತ್ತಿನ ಸಹಕಾರ ಸಂಘದ ಒಟ್ಟು 12 ನಿರ್ದೇಶಕರ ಆಯ್ಕೆಗಾಗಿ ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ತಾಪಂ ಮಾಜಿ ಅಧ್ಯಕ್ಷ ಕುಮಾರಸ್ವಾಮಿ ಹಾಗೂ ಡೈರಿ ಗುರುಮೂರ್ತಿ ತಂಡದ ನಡುವೆ ಸ್ಪರ್ಧೆ ಏರ್ಪಟ್ಟು ಕುಮಾರಸ್ವಾಮಿ ನೇತೃತ್ವದ ತಂಡ 8 ಸ್ಥಾನಗಳಲ್ಲಿ ಗೆದ್ದು ಬೀಗಿದರೆ, ಡೈರಿ ಗುರುಮೂರ್ತಿ ತಂಡ ಕೇವಲ 2 ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು. ಓರ್ವ ಅಭ್ಯರ್ಥಿ ಅವಿರೋಧವಾಗಿ ಆಯ್ಕೆಯಾದರೆ, ಮತ್ತೊಬ್ಬರು ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆಲುವು ಸಾಧಿಸಿದರು.

ಸಾಲಗಾರರ ಕ್ಷೇತ್ರದಿಂದ ಸ್ಪರ್ಧಿಸಿದ್ದ ಎಂ.ಕುಮಾರಸ್ವಾಮಿ(319), ನಾಗೇಶ(246), ಕೆ.ವಿ.ರುದ್ರಸ್ವಾಮಿ(220), ಕೆಂಪಮಣಿ(241), ಮುದ್ದಯ್ಯ(164), ಬಸವರಾಜಪ್ಪ(282), ಶಿವಮ್ಮ(208) ಹಾಗೂ ಮಹದೇವಮ್ಮ 157 ಮತ ಪಡೆದು ಗೆಲುವು ಸಾಧಿಸಿದರೆ, ಜೆ.ಎನ್.ಗುರುಮೂರ್ತಿ ಬಣದಿಂದ ಜೆ.ಎನ್.ಗುರುಮೂರ್ತಿ (251) ಹಾಗೂ ಪ್ರೇಮ(257) ಗೆಲುವು ಸಾಧಿಸಿದರು. ಎಂ.ಪುಟ್ಟಸ್ವಾಮಿ 291 ಮತ ಪಡೆದು ಸ್ವತಂತ್ರ ಅಭ್ಯರ್ಥಿಯಾಗಿ ಗೆಲುವು ಸಾಧಿಸಿದರೆ, ಸಾಲಗಾರರಲ್ಲದ ಕ್ಷೇತ್ರದಿಂದ ನೆರಗ್ಯಾತನಹಳ್ಳಿ ಗುರುಸ್ವಾಮಿ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾಧಿಕಾರಿ ಜಿ.ಪ್ರೇಮ ಚುನಾವಣಾ ಪ್ರಕ್ರಿಯೆ ನಡೆಸಿಕೊಟ್ಟರು.

ನಿರ್ದೇಶಕರಾಗಿ ಗೆಲುವು ಸಾಧಿಸಿದ ತಾಪಂ ಮಾಜಿ ಅಧ್ಯಕ್ಷ ಎಂ.ಕುಮಾರಸ್ವಾಮಿ ಮಾತನಾಡಿ, ಸಹಕಾರಿ ಬಂಧುಗಳು ನಮ್ಮ ತಂಡಕ್ಕೆ ಅಭೂತಪೂರ್ವ ಜಯ ತಂದು ಕೊಟ್ಟಿರುವುದಕ್ಕೆ, ನಮ್ಮ ತಂಡದ ಮೇಲೆ ಅವರಿಗಿರುವ ನಂಬಿಕೆ ತೋರಿಸುತ್ತದೆ. ಸಹಕಾರಿ ಬಂಧುಗಳು ನೀಡಿದ ಜಯ ಪ್ರಾಮಾಣಿಕತೆ ಹಾಗೂ ಒಳ್ಳೆತನಕ್ಕೆ ಸಿಕ್ಕ ಜಯವಾಗಿದ್ದು, 5 ವರ್ಷಗಳ ಅವಧಿಯಲ್ಲಿ ರೈತರಿಗೆ ದೊರಕಬಹುದಾದ ಎಲ್ಲ ಸವಲತ್ತುಗಳನ್ನು ದೊರಕಿಸಿಕೊಡಲು ನಮ್ಮ ತಂಡ ಪ್ರಾಮಾಣಿಕ ಪ್ರಯತ್ನ ಮಾಡಲಿದೆ. ಜಯ ತಂದುಕೊಟ್ಟ ಮತದಾರರ ನಂಬಿಕೆಗೆ ವಿರುದ್ಧವಾಗಿ ನಡೆದುಕೊಳ್ಳದೇ ಸಂಘದ ಅಭಿವೃದ್ಧಿಗೆ ಶ್ರಮಿಸಲಾಗುತ್ತದೆ. ಅಲ್ಲದೇ ರೈತ ಬಂಧುಗಳಿಗೆ ಶಕ್ತಿ ಮೀರಿ ಸಹಾಯ ಮಾಡುವುದಾಗಿ ಭರವಸೆ ನೀಡಿದರು.

ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲು ಇ–ಸಂಪನ್ಮೂಲ ನೆರವು

ವಿದ್ಯಾರ್ಥಿಗಳಿಗೆ ಪ್ರಾಂಶುಪಾಲ ಡಾ.ಬಿ.ಕೆ.ಕೆಂಪೇಗೌಡ ಸಲಹೆ



ಕಾಲೇಜಿನ ಪ್ರಾಂಶುಪಾಲ ಡಾ.ಬಿ.ಕೆ.ಕೆಂಪೇಗೌಡ ಮಾತನಾಡಿದರು.

ನಂಜನಗೂಡು, ಮಾ.10– ಇಂದಿನ ವಿದ್ಯುನ್ಮಾನ ಯುಗದಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲು ಸಾಕಷ್ಟು ಇ–ಸಂಪನ್ಮೂಲಗಳು ನೆರವಾಗಲಿದೆ. ವಿದ್ಯಾರ್ಥಿಗಳು ಸರಿಯಾಗಿ ಇಂಟರ್ನೆಟ್ ಸದ್ಬಳಕೆ ಮಾಡಿಕೊಂಡು ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಿ ಸಾಧನೆಗೆ ಮುಂದಾಗಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಬಿ.ಕೆ.ಕೆಂಪೇಗೌಡ ಸಲಹೆ ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ಇ–ಸಂಪನ್ಮೂಲಗಳ ಮಹತ್ವ ಎಂಬ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂಟರ್ನೆಟ್‌ನಿಂದಾಗಿ ಬೆರಳ ತುದಿಯಲ್ಲಿ ಮಾಹಿತಿಗಳ ಕಣಜ ಲಭ್ಯವಿದೆ. ವಿದ್ಯಾರ್ಥಿಗಳು ಮೊಬೈಲ್ ಅನ್ನು ದುರ್ಬಳಕೆ ಮಾಡಿಕೊಳ್ಳದೆ, ಜ್ಞಾನ ಸಂಪಾದನೆಗೆ ಬಳಸಬೇಕು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ನೆರವಾಗುವಂತಹ ಅನೇಕ ಮಾಹಿತಿಗಳು ಮತ್ತು ವಿಷಯ ತಜ್ಞರ ಉಪನ್ಯಾಸಗಳು ಯೂಟ್ಯೂಬ್‌ನಲ್ಲಿ ಲಭ್ಯವಿವೆ. ಅವುಗಳನ್ನು ಸರಿಯಾಗಿ ಸದ್ಬಳಕೆ ಮಾಡಿಕೊಂಡು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಮೂಲಕ ಉನ್ನತ ಹುದ್ದೆ ಅಲಂಕರಿಸಿ ನಿಮ್ಮ ತಂದೆ ತಾಯಿಗಳಿಗೆ ಕೀರ್ತಿ ತನ್ನಿ. ಮುಖ್ಯವಾಗಿ ಸಮಯ ಪಾಲನೆ, ಶಿಸ್ತು ಮೈಗೂಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ.ಜಯಕುಮಾರ್ ಪ್ರಾತ್ಯಕ್ಷಿಕೆ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ಸಿಗುವ ಇ–ಸಂಪನ್ಮೂಲಗಳ ಬಗ್ಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಗ್ರಂಥಪಾಲಕರಾದ ಡಾ.ಹೆಚ್.ಆರ್.ರೇಖಾ, ಡಾ.ಬಸವಣ್ಣಗೌಡ, ಎನ್.ಎಸ್.ಹರೀಶ್, ಡಾ.ಮಹೇಶ್, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ವೈದ್ಯ ಸಾಹಿತಿಗಳಲ್ಲಿ ಡಾ.ಯೋಗಣ್ಣ ಅಗ್ರಪಂಕ್ತಿಯಲ್ಲಿದ್ದಾರೆ

● ಹಿರಿಯ ಪತ್ರಕರ್ತ ವಿಶ್ವೇಶ್ವರ ಭಟ್ ಅಭಿಮತ ● ಡಾ.ಯೋಗಣ್ಣನವರ ಎರಡು ಕೃತಿ ಬಿಡುಗಡೆ

ಮೈಸೂರು, ಮಾ.10(ಎಸ್‌ಬಿಡಿ)– ನಾಡಿನ ವೈದ್ಯ ಸಾಹಿತಿಗಳಲ್ಲಿ ಡಾ.ಎಸ್.ಪಿ.ಯೋಗಣ್ಣನವರು ಅಗ್ರಪಂಕ್ತಿಯಲ್ಲಿದ್ದಾರೆ ಎಂದು ಹಿರಿಯ ಪತ್ರಕರ್ತ ವಿಶ್ವೇಶ್ವರ ಭಟ್ ಬಣ್ಣಿಸಿದರು.

ಮೈಸೂರಿನ ಸುಯೋಗ್ ಆಸ್ಪತ್ರೆಯ ಸಭಾಂಗಣದಲ್ಲಿ ಶನಿವಾರ ನಡೆದ ಸಮಾರಂಭದಲ್ಲಿ ಆಸ್ಪತ್ರೆಯ ಮುಖ್ಯಸ್ಥರೂ ಆದ ವೈದ್ಯ ಸಾಹಿತಿ ಡಾ.ಎಸ್.ಪಿ. ಯೋಗಣ್ಣ ರಚಿಸಿರುವ 'ಸ್ವಾಸ್ಥ್ಯ ಸಂಪದ' ಹಾಗೂ 'ಲೈಂಗಿಕ ಸುಖದ ಸುತ್ತಮುತ್ತ' ಕೃತಿಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಕನ್ನಡ ವೈದ್ಯಕೀಯ ಸಾಹಿತ್ಯಕ್ಕೆ ಡಾ.ಯೋಗಣ್ಣನವರು ಮಹತ್ತರ ಕೊಡುಗೆ ನೀಡಿದ್ದಾರೆ ಎಂದರು.

ಜನಪ್ರಿಯ ಪತ್ರಿಕೆಗಳಲ್ಲಿ ಪ್ರಕಟಗೊಂಡಿರುವ ಆರೋಗ್ಯಕ್ಕೆ ಸಂಬಂಧಿಸಿದ ಡಾ.ಎಸ್.ಪಿ.ಯೋಗಣ್ಣನವರ ಲೇಖನಗಳು ಓದುಗರಿಗೆ ಇಷ್ಟವಾಗಿವೆ. ಇವರ ಬರಹಕ್ಕೆ ಹೊಸ ಓದುಗರನ್ನು ಸೆಳೆಯುವಂತಹ ಸಾಮರ್ಥ್ಯ ಇದೆ. ಕರ್ನಾಟಕದ ವೈದ್ಯ ಸಾಹಿತಿಗಳಲ್ಲಿ ಡಾಎಸ್.ಪಿ.ಯೋಗಣ್ಣನವರು ಅಗ್ರಗಣ್ಯರು. ಇವರ ವೈದ್ಯಕೀಯ ಕೃತಿಗಳು ಸರಳ ಭಾಷೆಯಲ್ಲಿರುವುದರಿಂದ ಎಲ್ಲರನ್ನೂ ಆಕರ್ಷಿಸುತ್ತವೆ. ಕ್ಲಿಷ್ಟ ವೈದ್ಯಕೀಯ ವಿಚಾರಗಳನ್ನು ಜನಸಾಮಾನ್ಯರೂ ಸುಲಭವಾಗಿ ಅರ್ಥಮಾಡಿಕೊಳ್ಳಬಹುದು. ಯೋಗಣ್ಣ ಅವರ ಬರಹ ಶೈಲಿಯು ಅವರ ವಿಶಿಷ್ಟ ಸಾಹಿತ್ಯ ಪ್ರತಿಭೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.



ಮೈಸೂರಿನ ಸುಯೋಗ್ ಆಸ್ಪತ್ರೆಯ ಮುಖ್ಯಸ್ಥರೂ ಆದ ವೈದ್ಯ ಸಾಹಿತಿ ಡಾ.ಎಸ್.ಪಿ.ಯೋಗಣ್ಣ ರಚಿಸಿರುವ 'ಸ್ವಾಸ್ಥ್ಯ ಸಂಪದ' ಹಾಗೂ 'ಲೈಂಗಿಕ ಸುಖದ ಸುತ್ತಮುತ್ತ' ಕೃತಿಗಳನ್ನು ಹಿರಿಯ ಪತ್ರಕರ್ತ ವಿಶ್ವೇಶ್ವರ ಭಟ್ ಬಿಡುಗಡೆ ಮಾಡಿದರು.

ಡಾ.ಯೋಗಣ್ಣನವರು 30 ಸಾವಿರ ವೈದ್ಯ ತಾಂತ್ರಿಕ ಪದಗಳಿಗೆ ಕನ್ನಡ ಪದಗಳನ್ನು ರಚಿಸಿದ್ದಾರೆ. ಈ 'ವೈದ್ಯಕೀಯ ಪದಕೋಶ'ವನ್ನು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯ ಪ್ರಕಟಿಸುತ್ತಿದ್ದು, ಶೀಘ್ರದಲ್ಲಿ ಬಿಡುಗಡೆಯಾಗಲಿದೆ. ಆ ಪುಸ್ತಕ ವೈದ್ಯಕೀಯ ಸಾಹಿತ್ಯ ಲೋಕಕ್ಕೆ ಮಹತ್ವ ಕೊಡುಗೆಯಾಗಲಿದೆ. ಯೋಗಣ್ಣ ಸಂಪಾದಕತ್ವದ 'ಸುಯೋಗ ವಾಣಿ' ಕನ್ನಡ ಆರೋಗ್ಯ ಮಾಸಿಕವೂ ಉತ್ತಮ ವಿನ್ಯಾಸ ಮತ್ತು ಗುಣಮಟ್ಟದ ಲೇಖನಗಳನ್ನು ಒಳಗೊಂಡಿದ್ದು, ಮುಂದಿನ ದಿನಗಳಲ್ಲಿ ಮತ್ತಷ್ಟು ಜನಪ್ರಿಯವಾಗಲಿವೆ ಎಂದು ಆಶಿಸಿದರು.

ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿದ್ದ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ಡಾ.ನಿಶ್ಚಲಾನಂದನಾಥ ಸ್ವಾಮೀಜಿ ಮಾತನಾಡಿ, ಆರೋಗ್ಯದ ಅರಿವು ಜನಸಾಮಾನ್ಯರಿಗೆ ಅತ್ಯವಶ್ಯಕವಾಗಿದ್ದು, ಡಾ.ಎಸ್.ಪಿ.ಯೋಗಣ್ಣನವರ ಈ ಎರಡೂ ಕೃತಿಗಳು ಹೆಚ್ಚು ಉಪಯುಕ್ತಕಾರಿ. ಯುವ ಸಮುದಾಯದಲ್ಲಿ ತಾಳ್ಮೆ ಮತ್ತು ಕಾರ್ಯತತ್ಪರತೆ ಕ್ಷೀಣಿಸುತ್ತಿರುವ ಪ್ರಸ್ತುತ ಸಂದರ್ಭದಲ್ಲಿ ಈ ಕೃತಿಗಳು ಅರಿವು ಮೂಡಿಸಲು ಸಹಕಾರಿಯಾಗುತ್ತವೆ ಎಂದರು.

ಕೃತಿಗಳನ್ನು ಕುರಿತು ಮಾತನಾಡಿದ ಸಾಹಿತಿ ಪ್ರೊ.ಚಂದ್ರಶೇಖರ್, ಇಂದಿನ ಹದಿಹರೆಯದವರಿಗೆ ಲೈಂಗಿಕ ಶಿಕ್ಷಣ ಅತ್ಯವಶ್ಯಕವಿದ್ದು, ಡಾ.ಯೋಗಣ್ಣ ಅವರ ಲೈಂಗಿಕ ಸುಖದ ಸುತ್ತಮುತ್ತ ಕೃತಿ ಪಠ್ಯ ಪುಸ್ತಕವಾಗಲು ಯೋಗ್ಯವಾಗಿದೆ ಎಂದು ಅಭಿಪ್ರಾಯಿಸಿದರು. ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಎಂ.ಎನ್. ಮೋಹನ್ ಕುಮಾರ್, ವಿಶ್ರಾಂತ ಕುಲಪತಿ ಡಾ.ಎನ್.ಎಸ್.ರಾಮೇಗೌಡ, ಸುಯೋಗ್ ಆಸ್ಪತ್ರೆ ಟ್ರಸ್ಟಿ ಶ್ರೀಮತಿ ಸುಧಾ ಯೋಗಣ್ಣ, ವ್ಯವಸ್ಥಾಪಕ ನಿರ್ದೇಶಕ ಸುಯೋಗ್ ಯೋಗಣ್ಣ, ವೈದ್ಯಕೀಯ ನಿರ್ದೇಶಕ ಡಾ.ರಾಜೇಂದ್ರಪ್ರಸಾದ್, ನಿರ್ದೇಶಕಿ ಡಾ.ಸೀಮಾ ಯೋಗಣ್ಣ ಮತ್ತಿತರರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಚಿತ್ರಮಂದಿರ / ಚಿತ್ರ	
ಪದ್ಮ ಚಿತ್ರಮಂದಿರ	**(ದೂ: 2521923)**
ರಾಕ್ಷಸ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ರಾಕ್ಷಸ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಬಡಾಸ್ ರವಿಕುಮಾರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ರಾಕ್ಷಸ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಛಾವಾ (ಹಿಂ)	4 ಪ್ರದರ್ಶನಗಳು
ರಾಜಕಮಲ್	
ಶಬ್ದಂ(ತ)	4 ಪ್ರದರ್ಶನಗಳು
ಸಂಗಂ	
ಕಪಾತಿ (ಕ)+ ಸೂರಿ ಲವ್ಸ್ ಸಂಧ್ಯಾ(ಕ)	2+2 ಪ್ರದರ್ಶನಗಳು
ಲಿಡೋ	
ಡಾಕೂ ಮಹಾರಾಜ್(ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ರಾಕ್ಷಸ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಮಾಜಿ ಸಚಿವ ಬಿ.ಸುಬ್ಬಯ್ಯ ಶೆಟ್ಟಿ ಇನ್ನಿಲ್ಲ

ಮಂಗಳೂರು, ಮಾ.10– ರಾಜ್ಯದಲ್ಲಿ ಭೂಸುಧಾರಣಾ ಕಾಯ್ದೆ ಜಾರಿಗೆ ತರುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಮಾಜಿ ಸಚಿವ ಬಿ.ಸುಬ್ಬಯ್ಯ ಶೆಟ್ಟಿ(91 ವರ್ಷ) ಬೆಂಗಳೂರಿನಲ್ಲಿ ನಿಧನರಾಗಿದ್ದಾರೆ.



ಸುರತ್ಕಲ್ ವಿಧಾನಸಭಾ ಕ್ಷೇತ್ರದಲ್ಲಿ 1972ರ ಹಾಗೂ 1978ರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಶಾಸಕರಾಗಿ ಆಯ್ಕೆಯಾಗಿದ್ದರು. ದೇವರಾಜ ಅರಸು ನೇತೃತ್ವದ ಸರ್ಕಾರದಲ್ಲಿ ಭೂ ಸುಧಾರಣಾ ಸಚಿವರಾಗಿದ್ದ ಇವರು, ರೈತರಿಗೆ ಕೃಷಿ ಭೂಮಿಯ ಮಾಲೀಕತ್ವವನ್ನು ನೀಡುವ ಕ್ರಾಂತಿಕಾರಿ ಪರಿಕಲ್ಪನೆಯನ್ನು ಜಾರಿಗೊಳಿಸಲು ಆರಂಭದಲ್ಲಿ ಸ್ವಂತ ಭೂಮಿಯನ್ನು ಬಿಟ್ಟುಕೊಟ್ಟ ಭೂ ಮಾಲೀಕರಲ್ಲಿ ಇವರೂ ಒಬ್ಬರು. ಬಳಿಕ ರಾಜ್ಯ ಸರ್ಕಾರದಲ್ಲಿ ಮಾಹಿತಿ, ಇಂಧನ ಹಾಗೂ ಶಿಕ್ಷಣ ಸಚಿವರಾಗಿಯೂ ಸೇವೆ ಸಲ್ಲಿಸಿದ್ದರು. ಬಳಿಕ ಜನತಾ ಪಕ್ಷವನ್ನು ಸೇರಿ ರಾಜಕೀಯದಿಂದ ನಿವೃತ್ತರಾಗಿದ್ದರು ಎಂದು ಅವರ ಸಮಕಾಲೀನ ಮುಖಂಡರು ನೆನಪಿಸಿಕೊಳ್ಳುತ್ತಾರೆ. ಅವರ ಪತ್ನಿ ಶಾಲಿನಿ ಶೆಟ್ಟಿ ಇತ್ತೀಚೆಗೆ ನಿಧನರಾಗಿದ್ದರು. ಮೃತರಿಗೆ ಇಬ್ಬರು ಪುತ್ರಿಯರು ಇದ್ದಾರೆ.

ಟಿಬೆಟಿಯನ್ನರ 66ನೇ ರಾಷ್ಟ್ರೀಯ ಬಂಡಾಯ ದಿನ

ಚೀನಾದ ದೌರ್ಜನ್ಯ ಖಂಡಿಸಿ ಟಿಬೆಟಿಯನ್ನರ ಪ್ರತಿಭಟನೆ

ಮೈಸೂರು,ಮಾ.10(ಎಂಟಿವೈ)– ಟಿಬೆಟಿಯನ್ನರ 66ನೇ ರಾಷ್ಟ್ರೀಯ ಬಂಡಾಯ ದಿನದ ಅಂಗವಾಗಿ ಮೈಸೂರಲ್ಲಿ ವಿವಿಧ ಟಿಬೆಟ್ ಕ್ಯಾಂಪ್‌ಗಳ ನಿವಾಸಿಗಳು ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಮೈಸೂರು ಅರಮನೆಯ ಕೋಟೆ ಆಂಜನೇಯ ಸ್ವಾಮಿ ದೇವಾಲಯದ ಮುಂಭಾಗದಿಂದ 66ನೇ ರಾಷ್ಟ್ರೀಯ ಬಂಡಾಯ ದಿನ ಹಾಗೂ ಟಿಬೆಟಿಯನ್ನರ ಮೇಲೆ ಚೀನಾ ನಡೆಸುತ್ತಿರುವ ದಬ್ಬಾಳಿಕೆ ಖಂಡಿಸಿ ಮೆರವಣಿಗೆ ಆರಂಭಿಸಿದ ಟಿಬೆಟಿಯನ್ನರು ದೊಡ್ಡಗಡಿಯಾರ ವೃತ್ತ, ಮಹಾತ್ಮಗಾಂಧಿ ವೃತ್ತ, ಚಿಕ್ಕಗಡಿಯಾರ ವೃತ್ತ, ಡಿ.ದೇವರಾಜ ಅರಸ್ ರಸ್ತೆ, ಜೆಎಲ್‌ಬಿ ರಸ್ತೆ, ವಿನೋಬಾ ರಸ್ತೆ ಮೂಲಕ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿಯ ಓವೆಲ್ ಮೈದಾನ ತಲುಪಿದರು. ಮೆರವಣಿಗೆಯಲ್ಲಿ ಬೈಲಕುಪ್ಪೆ, ಕೊಳ್ಳೇಗಾಲ, ಹುಣಸೂರಿನ ಮಿಡಲ್ ವೇ ಟಿಬೆಟ್‌ನ ಯುವ ಕಾಂಗ್ರೆಸ್, ಪ್ರಾಂತೀಯ ಟಿಬೆಟ್‌ನ ಮಹಿಳಾ ಸಂಘಟನೆಯ ಕಾರ್ಯಕರ್ತರು ಚೀನಿಯರು ನಡೆಸುತ್ತಿರುವ ದೌರ್ಜನ್ಯವನ್ನು ಖಂಡಿಸಿದರು.

1959ರಲ್ಲಿ ಚೀನೀಯರ ಕುತಂತ್ರಕ್ಕೆ ಬಲಿಯಾದ ಸಾವಿರಾರು ಟಿಬೆಟಿಯನ್ನರ ತ್ಯಾಗ–ಬಲಿದಾನವನ್ನು ಸ್ಮರಿಸಿ, ಗೌರವ ಸೂಚಿಸಲು ಮಾ.10 ರಂದು ಟಿಬೆಟಿಯನ್ನರ ಬಂಡಾಯ ದಿನವಾಗಿ ಆಚರಿಸಲಾಗುತ್ತಿದೆ. ಟಿಬೆಟ್‌ನೊಳಗಿನ ಟಿಬೆಟಿಯನ್ನರು ಚೀನಾದ ಆಳ್ವಿಕೆಯಲ್ಲಿ ಊಹಿಸಲಾಗದ ನೋವುಗಳನ್ನು ಎದುರಿಸುತ್ತಿದ್ದಾರೆ. ಚೀನೀಯರ ನೇರ ದಬ್ಬಾಳಿಕೆ, ಚಿತ್ರಹಿಂಸೆ, ಮಾನಸಿಕ ಕಿರುಕುಳಗಳಿಂದಾಗಿ 1.2 ಮಿಲಿಯನ್ ಟಿಬೆಟಿಯನ್ನರು ಪ್ರಾಣತ್ಯಾಗ ಮಾಡಿದ್ದಾರೆ. ಚೀನಾ ಟಿಬೆಟಿಯನ್ ಭಾಷೆ, ಸಂಸ್ಕೃತಿ, ಧರ್ಮ ಮತ್ತು ಗುರುತನ್ನು ವ್ಯವಸ್ಥಿತವಾಗಿ ನಾಶಪಡಿಸುತ್ತಿದೆ. ಮಕ್ಕಳು ಟಿಬೆಟಿಯನ್ ಭಾಷೆಯನ್ನು ಕಲಿಯುವುದನ್ನು ನಿಷೇಧಿಸಲಾಗಿದೆ ಎಂದು ಆರೋಪಿಸಿದರು



ಟಿಬೆಟ್‌ನಲ್ಲಿ ಚೀನಾ ನಡೆಸುತ್ತಿರುವ ದೌರ್ಜನ್ಯ ಖಂಡಿಸಿ ಮೈಸೂರಲ್ಲಿ ಟಿಬೆಟಿಯನ್ನರು ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದರು.

ದಲೈಲಾಮಾ ಅವರು ಟಿಬೆಟ್ ಸಮಸ್ಯೆಗೆ ತೋರಿದ ಅತ್ಯಂತ ಸಮಂಜಸವಾದ ಮಧ್ಯ– ಮಾರ್ಗ ಪರಿಹಾರವನ್ನು ಚೀನಾ ಸರ್ಕಾರ ಒಪ್ಪಿಕೊಳ್ಳಬೇಕು. ಕೇಂದ್ರೀಯ ಟಿಬೆಟ್‌ನ ಆಡಳಿತದೊಂದಿಗೆ ಮಾತುಕತೆಗೆ ಮುಂದಾಗಬೇಕು. ಪಂಚೆನ್ ಲಾಮಾ ಹಾಗೂ ಇತರೆ ರಾಜಕೀಯ ಕೈದಿಗಳನ್ನು ಬಿಡುಗಡೆಗೊಳಿಸಬೇಕು. ಟಿಬೆಟಿಯನ್ನರ ಧಾರ್ಮಿಕ, ರಾಜಕೀಯ, ಸಾಮಾಜಿಕ, ಸಾಂಸ್ಕೃತಿಕ ಹಾಗೂ ಭಾಷಾ ಭಾವನೆಗಳನ್ನು ಗೌರವಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಟಿಬೆಟ್‌ನ ಸಂಘಟನೆಗಳು ಮುಖಂಡರಾದ ತ್ಸೆರಿಂಗ್ ಲಾಕ್ಯಾಬ್, ಮೈಮಾ ಗ್ಯಾಲ್ಪೊಮ್, ಚುಂಗ್ ತ್ಸೆರಿಂಗ್, ನೈಮಾ ಸಿಚೋ, ತ್ಸೆರಿಂಗ್ ಚೋಡಾನ್, ಸೋನಂ ಡೋಲ್ಕರ್, ಜಂಪಾ ಚೋಡುಪ್, ತಂಪಾ ದರ್ಗಯಾಲ್ ಇನ್ನಿತರರು ಪಾಲ್ಗೊಂಡಿದ್ದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ವಿದ್ದಾಮುಯರ್ಚಿ (ತ): ಬೆ.6.55ಕ್ಕೆ, ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.24ಕ್ಕೆ.
ಸ್ಕ್ರೀನ್ 2	ಅಧಿಪತ್ರ (ಕ): ಬೆ.10.10ಕ್ಕೆ, ನೋಡಿದವರು ಏನಂತಾರೆ (ಕ): ಮ.1.15ಕ್ಕೆ, ರುದ್ರ ಗರುಡ ಪುರಾಣ (ಕ): ಸಂ.4.10ಕ್ಕೆ, ಬಡಾಸ್ ರವಿಕುಮಾರ್ (ಹಿಂ): ರಾ.7.10ಕ್ಕೆ, ನರೇ ಅನೀಂಟೆ ಮೂನನ್‌ಮಕ್ಕಲ್ (ಮ): ರಾ.10.10ಕ್ಕೆ.
ಸ್ಕ್ರೀನ್ 3	ಮಿ.ರಾಣಿ (ಕ): ಬೆ.10.30ಕ್ಕೆ, ಲವಯಪಾ (ಹಿಂ): ಮ.1.15ಕ್ಕೆ, ರಾ.7.05ಕ್ಕೆ, ರಾ.10ಕ್ಕೆ, ಭಗೀರಥ (ಕ): ಸಂ.4.10ಕ್ಕೆ.
ಸ್ಕ್ರೀನ್ 4	ಅನ್‌ಲಾಕ್ ರಾಘವ (ಕ): ಬೆ.10.25ಕ್ಕೆ, ಸ್ಕೈಫೋರ್ಸ್ (ಹಿಂ): ಮ.1.20ಕ್ಕೆ, ಥಂಡೇಲ್ (ತೆ): ಸಂ.4.15ಕ್ಕೆ, ರಾ.7.20ಕ್ಕೆ, ರಾ.10.25ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ರಾಯಲ್ (ಕ): ಬೆ.10.40ಕ್ಕೆ, ರುದ್ರ ಗರುಡ ಪುರಾಣ (ಕ): ಮ.1.30ಕ್ಕೆ, ಸಂ.6.45ಕ್ಕೆ, ಮ್ಯಾಕ್ಸ್ (ಕ): ಸಂ.4.15ಕ್ಕೆ, ಕುಜಂತೈಗಲ್ ಮುನ್ನೇತ್ರ ಕಳಗಂ (ತ): ರಾ.9.30ಕ್ಕೆ.
ಸ್ಕ್ರೀನ್ 2	ಫಾರೆಸ್ಟ್ (ಕ): ಮ.1.05ಕ್ಕೆ, ಮ.3.50ಕ್ಕೆ, ರಾಯಲ್ (ಕ): ಸಂ.6.35ಕ್ಕೆ, ಸ್ಕೈ ಫೋರ್ಸ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.11ಕ್ಕೆ, ರಾ.7.05ಕ್ಕೆ, ರಾಯಲ್ (ಕ): ಮ.1.25ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ಸಂ.4.15ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಛೂ ಮಂತರ್ (ಕ): ಮ.1.30ಕ್ಕೆ, ಸಂ.6.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರಲ್ಲಿ ಮೊದಲ ಹಂತದ ಭೂಗತ ವಿದ್ಯುತ್ ಕೇಬಲ್ ಅಳವಡಿಕೆ ಕಾರ್ಯ ಪೂರ್ಣ

ಮೈಸೂರು, ಮಾ.10(ಆರ್‌ಕೆ)– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಸೆಸ್ಕ್) ವತಿಯಿಂದ ಮೈಸೂರು ನಗರದಲ್ಲಿ ಮೂರು ವರ್ಷದ ಹಿಂದೆ ಕೈಗೆತ್ತಿಕೊಳ್ಳಲಾಗಿದ್ದ ಮೊದಲ ಹಂತದ ಅಂಡರ್‌ಗ್ರೌಂಡ್ (ಭೂಗತ) ವಿದ್ಯುತ್ ಕೇಬಲ್ ಅಳವಡಿಕೆ ಕಾರ್ಯ ಪೂರ್ಣಗೊಂಡಿದ್ದು, ಇದೀಗ ಎರಡನೇ ಹಂತದ ಯೋಜನೆಗೆ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

ವಿದ್ಯುತ್ ಕಂಬ ಮತ್ತು ತಂತಿಯಿಂದ ಸಂಭವಿಸಬಹುದಾದ ಅಪಾಯವನ್ನು ತಪ್ಪಿಸಿ ಗ್ರಾಹಕರಿಗೆ ನಿರಂತರ ಗುಣಮಟ್ಟದ ವಿದ್ಯುತ್ ಸರಬರಾಜು ಮಾಡಬೇಕೆಂಬ ಉದ್ದೇಶ ಹಾಗೂ ನಗರದ ಸೌಂದರ್ಯವನ್ನು ಹೆಚ್ಚಿಸುವ ಸಲುವಾಗಿ ನಿಗಮವು ಭೂಗತ ವಿದ್ಯುತ್ ಕೇಬಲ್ ಅಳವಡಿಸಲು 2018ರಲ್ಲಿ ಕ್ರಿಯಾ ಯೋಜನೆ ತಯಾರಿಸಿ 2021ರಲ್ಲಿ ಯೋಜನೆಗೆ ಚಾಲನೆ ನೀಡಿತ್ತು. ಸುಮಾರು 300 ಕೋಟಿ ರೂ. ವೆಚ್ಚದಲ್ಲಿ ಮೈಸೂರು ನಗರ ವ್ಯಾಪ್ತಿಯ ಶೇ.30ರಷ್ಟು ಭಾಗದಲ್ಲಿ ಯುಜಿ ವಿದ್ಯುತ್ ಕೇಬಲ್ ಅಳವಡಿಸಲಾಗಿದೆ ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಪ್ರಭಾರ ವ್ಯವಸ್ಥಾಪಕ ನಿರ್ದೇಶಕ ಮುನಿಗೋಪಾಲರಾಜು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

> **ಈ ಯೋಜನೆಯ 2ನೇ ಹಂತದ 600 ಕೋಟಿ ರೂ. ಅಂದಾಜು ವೆಚ್ಚದ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ನಡೆಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ನಗರದಾದ್ಯಂತ ಯಾವುದೇ ಒಂದು ವಿದ್ಯುತ್ ಕಂಬವಾಗಲೀ, ತಂತಿಯಾಗಲೀ ಕಾಣಬಾರದು. ಅದೇ ರೀತಿ ಹೊಸ ಬಡಾವಣೆಗಳಲ್ಲಿ ಯುಜಿ ಕೇಬಲ್ ಅಳವಡಿಸಿಕೊಳ್ಳುವಂತೆ ಕಡ್ಡಾಯಗೊಳಿಸಲಾಗಿದೆ. ಇದರಿಂದ ನಗರದ ಸೌಂದರ್ಯ ಹೆಚ್ಚಾಗುವುದಲ್ಲದೆ, ವಿದ್ಯುತ್ ಅವಘಡಗಳನ್ನು ತಪ್ಪಿಸಿದಂತಾಗುತ್ತದೆ.**
> **–ಮುನಿಗೋಪಾಲರಾಜು, ಸೆಸ್ಕಾಂ ಪ್ರಭಾರ ಎಂಡಿ**

ಮೊದಲ ಹಂತದಲ್ಲಿ 400 ಸ್ಕ್ವೇರ್ ಎಂಎಂಹೆಚ್‌ಟಿ ಸಾಮರ್ಥ್ಯದ ಯುಜಿ ಕೇಬಲ್ ಅನ್ನು 144.69 ಕಿ.ಮೀ. ಹಾಗೂ 240 ಸ್ಕ್ವೇರ್ ಎಂಎಂ ಹೆಚ್‌ಟಿ ಕೇಬಲ್ ಅನ್ನು 301.05 ಕಿ.ಮೀ, 240 ಸ್ಕ್ವೇರ್ ಎಂಎಂ ಎಲ್‌ಟಿ ಕೇಬಲ್ ಅನ್ನು 204.24 ಕಿ.ಮೀ.ಗೆ ಅಳವಡಿಸಲಾಗಿದೆ. ಈ ಸಂಪರ್ಕದಲ್ಲಿ 39 ಫೀಡರ್‌ಗಳನ್ನು ಅಳವಡಿಸಿ ವಿದ್ಯುತ್ ಪೂರೈಸಲು ಅನುವು ಮಾಡಿಕೊಡಲಾಗಿದೆ ಎಂದು ತಿಳಿಸಿದರು.

ರಂಗಭೂಮಿ, ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರದ ಸಮಾರೋಪ



ರಂಗಭೂಮಿ ಮತ್ತು ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರದ ಸಮಾರೋಪದಲ್ಲಿ 'ಜಲಗಾರ' ನಾಟಕ ಪ್ರದರ್ಶಿಸಿದ ಶಿಬಿರಾರ್ಥಿಗಳನ್ನು ಗಣ್ಯರೊಂದಿಗೆ ಚಿತ್ರದಲ್ಲಿ ಕಾಣಬಹುದು.

ಮೈಸೂರು, ಮಾ.10(ಎಸ್‌ಪಿಎನ್)– ಕುವೆಂಪು ರಚಿತ ನಾಟಕ 'ಜಲಗಾರ' ರಚಿತವಾಗಿ ಇನ್ನೆರಡು ವರ್ಷ ಕಳೆದರೆ ನೂರು ವರ್ಷ ಪೂರೈಸುತ್ತದೆ. ಆದರೂ ಈ ಪುಸ್ತಕ ಇಂದಿಗೂ 'ಐಕಾನಿಕ್' ಬಿಂಬಿತವಾಗಿದೆ ಎಂದು ತಲಕಾಡು ಸರ್ಕಾರಿ ಪದವಿ ಕಾಲೇಜು ಪ್ರಾಂಶುಪಾಲ ಡಾ.ಎನ್. ವಸಂತರಾಜ್ ಅಭಿಪ್ರಾಯಪಟ್ಟರು.

ಮೈಸೂರು ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಗೌತಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸೇವಾ ಟ್ರಸ್ಟ್ ಹಾಗೂ ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ನಡೆದ ಕಾಲೇಜು ವಿದ್ಯಾರ್ಥಿಗಳಿಗೆ ಒಂದು ತಿಂಗಳ ರಂಗಭೂಮಿ ಮತ್ತು ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರದ ಸಮಾರೋಪದಲ್ಲಿ ಭಾಗವಹಿಸಿ ಮಾತನಾಡಿದರು.

ಪ್ರಸ್ತುತ ದಿನಮಾನಗಳಲ್ಲಿ ಧರ್ಮದ ಹೆಸರಿನಲ್ಲಿ ನಡೆಯುತ್ತಿರುವ ಅನಾಚಾರಗಳಿಗೆ ಜಲಗಾರ ನಾಟಕ ಪ್ರತಿಸ್ಪರ್ಧಿಯಾಗಬಲ್ಲದು. ಬಸವಣ್ಣನವರ 'ಕಾಯಕವೇ ಕೈಲಾಸ' ಸೂಕ್ತಿಯನ್ನು ಜಲಗಾರ ನಾಟಕದಲ್ಲಿ ಕುವೆಂಪು ಅವರು ಅಳವಡಿಸಿದ್ದಾರೆ. ಕುವೆಂಪು 1928ರಲ್ಲೇ ಜಲಗಾರ ನಾಟಕದ ಮೂಲಕ ಶೋಷಿತರ ಬದುಕು ಹಸನಾಗಬೇಕು ಎಂದು ಬಯಸಿದ್ದರು. ಸಾಮಾಜಿಕ ಪರಿವರ್ತನೆಗೆ ನಾಂದಿ ಆಗಿದ್ದ ಜಲಗಾರ ನಾಟಕ ಇಂದಿಗೂ ಪ್ರಸ್ತುತ. ಕುವೆಂಪು ಶತಮಾನದ ಸಾಮಾಜಿಕ ನಾಯಕ ಎಂದರೆ ತಪ್ಪಾಗಲಾರದು ಎಂದು ಬಣ್ಣಿಸಿದರು.

ಇದಕ್ಕೂ ಮುನ್ನ ರಾಷ್ಟ್ರಕವಿ ಕುವೆಂಪು ರಚಿತ, ಕೃಷ್ಣಮೂರ್ತಿ ತಲಕಾಡು ನಿರ್ದೇಶನದ, ಗೌತಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸೇವಾ ಟ್ರಸ್ಟ್ ಶಿಬಿರಾರ್ಥಿಗಳು ಅಭಿನಯಿಸಿರುವ, ಗಾಯಕಿ ಸಿಂಚನ ಚಿಕ್ಕೊಳಲೇ ಮತ್ತು ದೇವಾನಂದ ವರಪ್ರಸಾದ್ ಸಾಂಗತ್ಯ, ನೃತ್ಯ ಸಂಯೋಜನೆಯ, ರಂಗಾಯಣ ಮಾಜಿ ನಿರ್ದೇಶಕ ಹೆಚ್.ಜನಾರ್ಧನ್ ಸಂಗೀತ ನಿರ್ದೇಶನದ ಜಲಗಾರ ನಾಟಕವನ್ನು ಪ್ರದರ್ಶನಗೊಂಡು ಪ್ರೇಕ್ಷಕರ ಮನಗೆದ್ದಿತು. ನೈಪಥ್ಯದಲ್ಲಿ ಸಿದ್ದು ಬದನವಾಳು, ಡಾ.ಶ್ರೀಧರ್‌ಮೂರ್ತಿ, ಡಿ.ಎನ್.ಇಂದ್ರ ಕುಮಾರ್, ಶ್ರೀಕಂಠಸ್ವಾಮಿ, ವಸ್ತ್ರವಿನ್ಯಾಸ ಕವಿತಾ ಮೋಹನ್, ಬೆಳಕಿನ ವಿನ್ಯಾಸ ರಾಘವೇಂದ್ರ ನೆರವೇರಿಸಿದ್ದರು.

ವಿದ್ಯಾರ್ಥಿಗಳಿಗೆ ಬದುಕುವ ಕಲೆಯ ಕಲಿಸಬೇಕಿದೆ

ಚಂದಹಳ್ಳಿ ಸರ್ಕಾರಿ ಶಾಲೆ ವಾರ್ಷಿಕೋತ್ಸವದಲ್ಲಿ ಬಿಇಓ ಶಿವಮೂರ್ತಿ ಕಿವಿಮಾತು



ಚಂದಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ತಿ.ನರಸೀಪುರದ ಬಿಇಓ ಶಿವಮೂರ್ತಿ ಉದ್ಘಾಟಿಸಿದರು.

ಮೈಸೂರು,ಮಾ.10(ಎಂಟಿವೈ)– ಸರ್ಕಾರಿ ಶಾಲೆಗಳಲ್ಲಿ ಖಾಸಗಿ ಶಾಲೆಗಳಂತೆ ಗುಣಮಟ್ಟದ ಶಿಕ್ಷಣ ನೀಡುವುದರೊಂದಿಗೆ ವಿದ್ಯಾರ್ಥಿಗಳಿಗೆ ಬದುಕುವ ಕಲೆಯನ್ನು ಕಲಿಸಲು ಆದ್ಯತೆ ನೀಡಲಾಗುತ್ತಿದೆ ಎಂದು ತಿ.ನರಸೀಪುರದ ಬಿಇಓ ಶಿವಮೂರ್ತಿ ತಿಳಿಸಿದ್ದಾರೆ.

ತಿ.ನರಸೀಪುರ ತಾಲೂಕಿನ ಸಿ.ಬಿ. ಹುಂಡಿ ಕ್ಲಸ್ಟರ್ ವ್ಯಾಪ್ತಿಯ ಚಂದಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಆಯಾ ಗ್ರಾಮಗಳ ಗ್ರಾಮಸ್ಥರು ತಮ್ಮೂರಿನ ಸರ್ಕಾರಿ ಶಾಲೆಯ ಶಾಲಾ ವಾರ್ಷಿಕೋತ್ಸವ ಆಯೋಜಿಸುವ ಮೂಲಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಬೇಕು. ಸರ್ಕಾರಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ. ಇದರಿಂದ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಖಾಸಗಿ ಶಾಲಾ ವಿದ್ಯಾರ್ಥಿಗಳಿಗೆ ಪೈಪೋಟಿ ನೀಡುವಂತೆ ಹೆಚ್ಚಿನ ಅಂಕ ಪಡೆಯುತ್ತಿದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ಮಕ್ಕಳಿಗೆ ಬದುಕುವ ಕಲೆಯನ್ನು ಕಲಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಬಿಆರ್‌ಸಿ ನಾಗೇಶ್, ದೈಹಿಕ ಶಿಕ್ಷಣ ಪರಿವೀಕ್ಷಕ ಮರಿಸ್ವಾಮಿ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಿವಶಂಕರ್ ಮೂರ್ತಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸುಬ್ಬಣ್ಣ, ಗ್ರಾಮೀಣ ಶಿಕ್ಷಕರ ಸಂಘದ ಕಾರ್ಯದರ್ಶಿ ಸೋಮಶೇಖರ್, ಗಾಯಕ ರವಿಕುಮಾರ್, ಸಾಹಿತಿ ಇರಸವಾಡಿ ಮಹೇಶ್, ಮುಖ್ಯ ಶಿಕ್ಷಕ ಎಂ. ಕೊಂಗಯ್ಯ, ಸಿಆರ್‌ಪಿ ಚೆಲುವರಾಜು, ಶಿಕ್ಷಕರಾದ ಸೂರ್ಯ ಕುಮಾರ್, ಜಯರಾಮ್, ಜ್ಯೋತಿ ಎಸ್, ಶಾಂಭವಿ, ಗೀತಾ ಎಸ್‌ಡಿಎಂಸಿ ಅಧ್ಯಕ್ಷೆ ಮಾದಲಾಂಬಿಕಾ, ಉಪಾಧ್ಯಕ್ಷ ನಂಜಯ್ಯ, ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಮೌಲ್ಯಯುತ ಜೀವನ ಶೈಲಿಯಿಂದ ಶರಣರು ಇಂದಿಗೂ ಪ್ರಸ್ತುತ

ಅಂಕಣಕಾರ ಜಿ.ಎಲ್.ತ್ರಿಪುರಾಂತಕ ಅಭಿಮತ

ಮೈಸೂರು,ಮಾ.10(ಪಿಎಂ)– ತಮ್ಮ ಮೌಲ್ಯಯುತ ಜೀವನ ಶೈಲಿಯಿಂದಾಗಿ 12ನೇ ಶತಮಾನದ ಶರಣರು ಇಂದಿನ 21ನೇ ಶತಮಾನದಲ್ಲೂ ಪ್ರಸ್ತುತವಾಗಿದ್ದಾರೆ ಎಂದು ಸುತ್ತೂರು ಶ್ರೀ ಕ್ಷೇತ್ರದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಂಯೋಜನಾಧಿಕಾರಿ ಹಾಗೂ ಅಂಕಣಕಾರ ಜಿ.ಎಲ್.ತ್ರಿಪುರಾಂತಕ ಹೇಳಿದರು.

ಮೈಸೂರಿನ ವಾಣಿವಿಲಾಸ ರಸ್ತೆಯಲ್ಲಿರುವ ಜೆಎಸ್‌ಎಸ್ ವಿದ್ಯಾರ್ಥಿನಿಲಯದ (ಪ್ರಧಾನ ಭವನ) ಸಭಾಂಗಣದಲ್ಲಿ ಶರಣ ಸಾಹಿತ್ಯ ಪರಿಷತ್ತು ನಗರ ಘಟಕದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ವಚನ ವಾಚನ ವ್ಯಾಖ್ಯಾನ ಮತ್ತು ಉಪನ್ಯಾಸ ದತ್ತಿ ಕಾರ್ಯಕ್ರಮದಲ್ಲಿ 'ವಚನ ಸಾಹಿತ್ಯ ಮತ್ತು ಜೀವನ ಮೌಲ್ಯಗಳು' ವಿಷಯ ಕುರಿತು ಅವರು ಮಾತನಾಡಿದರು.

ಶರಣರ ಬದುಕು ಅತ್ಯಂತ ಮೌಲ್ಯಗಳಿಂದ ಕೂಡಿತ್ತು. ಅವರು 12ನೇ ಶತಮಾನದಲ್ಲಿ ರಚಿಸಿದ ವಚನ ಸಾಹಿತ್ಯ ಇಂದಿನ 21ನೇ ಶತಮಾನದಲ್ಲೂ ಪ್ರಸ್ತುತವಾಗುತ್ತಿವೆ. ಶರಣರು ಎಂದಿಗೂ ಕಾಯಕ ಮರೆಯಲಿಲ್ಲ. ಕಾಯಕ ನಿಷ್ಠೆ ಎಂಬುದು ಅವರಲ್ಲಿನ ಪ್ರಧಾನ ಲಕ್ಷಣವಾಗಿತ್ತು. ಯಾವುದೇ ವೃತ್ತಿ ಬಗ್ಗೆಯೂ ಅವರಿಗೆ ಕೀಳರಿಮೆ ಇರಲಿಲ್ಲ. ನುಡಿದಂತೆ ನಡೆದ ಅವರ ಬದುಕು–ಬರಹ ನಮ್ಮ ಇಂದಿನ ಸಮಾಜಕ್ಕೆ ಅಗತ್ಯವಾಗಿದೆ. ವಚನ ಚಳುವಳಿಯ ನೇತೃತ್ವ ವಹಿಸಿದ್ದ ಬಸವಣ್ಣನವರನ್ನು ರಾಜ್ಯ ಸರ್ಕಾರ ಸಾಂಸ್ಕೃತಿಕ ರಾಯಭಾರಿ ಎಂದು ಗುರುತಿಸಿ ಗೌರವಿಸಿದೆ ಎಂದರು.



ಮೈಸೂರಿನ ವಾಣಿವಿಲಾಸ ರಸ್ತೆಯಲ್ಲಿರುವ ಜೆಎಸ್‌ಎಸ್ ವಿದ್ಯಾರ್ಥಿನಿಲಯದ ಸಭಾಂಗಣದಲ್ಲಿ ಸೋಮವಾರ ವಚನ ಸಾಹಿತ್ಯ ಕುರಿತು ಅಂಕಣಕಾರ ಜಿ.ಎಲ್.ತ್ರಿಪುರಾಂತಕ ಮಾತನಾಡಿದರು.

ನಮ್ಮ ಪರಂಪರೆಯಲ್ಲಿ ಬೆಳಗ್ಗೆ ಎದ್ದ ಕೂಡಲೇ ಮಾತೃ–ಪಿತೃ ಹಾಗೂ ಗುರುಗಳನ್ನು ನೆನೆಯುತ್ತೇವೆ. ಅಂತೆಯೇ ನಾವಿಂದು ರೈತರು ಹಾಗೂ ಯೋಧರನ್ನು ನೆನೆಯಬೇಕು. ರೈತರು ಇಲ್ಲವಾದರೆ ಇಡೀ ವಿಶ್ವವೇ ಶೂನ್ಯವಾಗಲಿದೆ. ಆದರೆ ರೈತ ಸಮುದಾಯ ಇಂದು ಸಂಕಷ್ಟದಲ್ಲಿದೆ ಎಂದು ವಿಷಾದಿಸಿದರು.

ಪ್ರಸ್ತುತ ಮೌಲ್ಯ ಆಧಾರಿತ ಶಿಕ್ಷಣ ನಮ್ಮಲ್ಲಿ ನೀಡಲಾಗುತ್ತದೆ ಎಂದು ಶಾಲಾ–ಕಾಲೇಜುಗಳಲ್ಲಿ ಬೋರ್ಡ್ ಹಾಕಿಕೊಳ್ಳುವ ಪರಿಪಾಠ ಶುರುವಾಗಿದೆ. ಆದರೆ ಶಿಕ್ಷಣದ ಮೂಲಭೂತ ಲಕ್ಷಣವೇ ಮೌಲ್ಯವಾಗಿದೆ. ನಮ್ಮಲ್ಲಿರುವ ಸದ್ಗುಣ ಹಾಗೂ ಮೌಲ್ಯಯುತ ನಡತೆಯೇ ನೈಜವಾಗಿ ಗಳಿಸುವ ಪದವಿ. ದುರಂತವೆಂದರೆ ಇಂದು ವಿದ್ಯಾವಂತರೇ ಹೆಚ್ಚಾಗಿ ವಂಚನೆಯಲ್ಲಿ ತೊಡಗುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಹುಡುಗನು ಗುಣವಂತನಾಗಿದ್ದಾನೆಯೇ ಎಂದು ನೋಡಿ ಹೆಣ್ಣು ಕೊಡುತ್ತಿದ್ದರು. ಆದರೆ ಇಂದು ಹುಡುಗನು ಧನವಂತನೇ ಎಂದು ನೋಡಿ ಹೆಣ್ಣು ಧಾರೆ ಎರೆಯುವ ಪರಿಪಾಠ ಹೆಚ್ಚಾಗುತ್ತಿದೆ. ಮೌಲ್ಯ ಎಂಬ ಪದದ ಅರ್ಥವೇ ಕುಸಿಯುವಂತಾಗಿದೆ. ಬಹುತೇಕರ ಆದ್ಯತೆ ಇಂದು ಹಣವೇ ಆಗುತ್ತಿದೆ. ಆದರೆ ಹಣ ಹೆಚ್ಚಾದಷ್ಟು ಗುಣ ಮತ್ತು ನೆಮ್ಮದಿ ಇಲ್ಲವಾಗಲಿದೆ. ಹಾಗಾಗಿಯೇ ಸ್ವಾಸ್ಥ್ಯ ಸಮಾಜಕ್ಕೆ ಮೌಲ್ಯಯುತ ಬದುಕು ಅಗತ್ಯವೆಂದು ಶರಣರು ಸಂದೇಶ ನೀಡಿದ್ದಾರೆ ಎಂದು ತಿಳಿಸಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ–2 ಎಸ್.ಶಿವಕುಮಾರ ಸ್ವಾಮಿ, ಶರಣ ಸಾಹಿತ್ಯ ಪರಿಷತ್ತು ನಗರಾಧ್ಯಕ್ಷ ಮ.ಗು.ಸದಾನಂದಯ್ಯ ಮತ್ತಿತರರು ಹಾಜರಿದ್ದರು.

ಕ್ಯಾತಮಾರನಹಳ್ಳಿ ಹುಲಿಯಮ್ಮ ಜಾತ್ರೋತ್ಸವ

ಸಾಂಪ್ರದಾಯಿಕ ಪೂಜೆ–ಪುನಸ್ಕಾರದೊಂದಿಗೆ ಮೆರವಣಿಗೆ; ವಿವಿಧ ವೇಷಧಾರಿಗಳ ಕುಣಿತ



ಕ್ಯಾತಮಾರನಹಳ್ಳಿ ಜಾತ್ರೆ ಮೆರವಣಿಗೆಯಲ್ಲಿ ಅಘೋರಿಗಳ ವೇಷಭೂಷಣದಲ್ಲಿ ನೃತ್ಯ ಪ್ರದರ್ಶನ ನೀಡುತ್ತಿರುವುದು.

ಮೈಸೂರು, ಮಾ.10(ಎಂಕೆ)– ಗ್ರಾಮೀಣ ಸೊಗಡಿನ ಪ್ರತೀಕವಾಗಿರುವ ಕ್ಯಾತಮಾರನಹಳ್ಳಿ ಹುಲಿಯಮ್ಮ ಜಾತ್ರಾ ಮಹೋತ್ಸವದಲ್ಲಿ ಮುಗಿಲು ಮುಟ್ಟಿದ ಸಂಭ್ರಮಾಚರಣೆ. ಹಾಡು, ನೃತ್ಯ, ಹಾಸ್ಯ, ವೇಷಭೂಷಣದ ನಾನಾ ಅವತಾರಗಳ ಪ್ರದರ್ಶನದ ಜೊತೆಗೆ ದೇವಿಯ ದರ್ಶನಕ್ಕೆ ಬಂದ ಭಕ್ತ ಸಾಗರವೇ ಹರಿದು ಬಂದಿತು...!

ಎರಡು ವರ್ಷಗಳಿಗೊಮ್ಮೆ ನಡೆಯುವ 10 ದಿನಗಳ ಕ್ಯಾತಮಾರನಹಳ್ಳಿ ಹುಲಿಯಮ್ಮ ಜಾತ್ರಾ ಮಹೋತ್ಸವದ ಸಡಗರ–ಸಂಭ್ರಮ ದಿನೇ ದಿನೇ ಇಮ್ಮಡಿಗೊಳ್ಳುತ್ತಿದ್ದು, 8ನೇ ದಿನವಾದ ಸೋಮವಾರ ಮಿನಿ ದಸರಾ ಮೆರವಣಿಗೆಯೇ ನಡೆಯಿತು. ಸಾಂಸ್ಕೃತಿಕ ಕಲಾತಂಡಗಳು, ಗಾಂಧಿ ತಾತ, ಕಳ್ಳ–ಪೊಲೀಸ್, ಗಂಡ–ಹೆಂಡತಿ, ಅಘೋರಿಗಳು ಹೀಗೆ ನಾನಾ ರೀತಿಯ ವೇಷಗಳನ್ನು ಧರಿದ ಹತ್ತಾರು ತಂಡಗಳು, ವಾದ್ಯಮೇಳ, ಅಬ್ಬರ ರಿದಂ ಹಾಡುಗಳು ಹಾಗೂ ಪಂಚಿಂಗ್ ಡೈಲಾಗ್‌ಗಳಿಗೆ ಸುತ್ತುವರಿದಿದ್ದ ಅಪಾರ ಸಂಖ್ಯೆಯ ಭಕ್ತ ಸಮೂಹದ ಹುಚ್ಚೆದ್ದು ಕುಣಿಯುವಂತೆ ಮಾಡಿತು.

ಬೆಳಗ್ಗೆ 10 ಗಂಟೆಗೆ ಗ್ರಾಮದ ಗಂಡಸರೆಲ್ಲರೂ(ಯುವಕರಾದಿಯಾಗಿ) ವಾದ್ಯಮೇಳದಲ್ಲಿ ಕುಣಿಯುತ್ತಾ, ಹುಲಿಯಮ್ಮ ದೇವಿಯ ಸಂಬಂಧವಿರುವ ಕುರಬಾರಹಳ್ಳಿ ದೇವಾಲಯಕ್ಕೆ ಹೋಗಿ ಪೂಜೆ ಸಲ್ಲಿಸಿದರು. ನಂತರ ಮಧ್ಯಾಹ್ನ 3 ಗಂಟೆಗೆ ಕ್ಯಾತಮಾರನಹಳ್ಳಿಗೆ ಸುಮಾರು 1 ಕಿ.ಮೀ. ದೂರದಲ್ಲಿರುವ ಕುಲದ ತೋಟಕ್ಕೆ(ಮಹದೇಶ್ವರ ಮುಖ್ಯ ರಸ್ತೆ) ತೆರಳಿ ಪೂಜೆ ಸಲ್ಲಿಸಿ ನಾನಾ ಬಗೆಯ ವೇಷಗಳನ್ನು ಧರಿಸಿದ್ದ ತಂಡಗಳಿಂದ ಹುಲಿಯಮ್ಮ ದೇವಸ್ಥಾನದವರೆಗೆ ಅದ್ದೂರಿ ಮೆರವಣಿಗೆ ನಡೆಯಿತು.

ಮೆರವಣಿಗೆಯ ಆರಂಭದಲ್ಲಿ ಪುಸ್ತಕ ಹಿಡಿದುಕೊಂಡು ಓದುತ್ತಾ ನಾಲ್ಕೈದು ಮಕ್ಕಳು ಸಾಗಿದರೆ, ಅವರ ಹಿಂದೆ ಮಹಾತ್ಮ ಗಾಂಧಿ ವೇಷಧಾರಿಯೊಬ್ಬರು ಗಮನ ಸೆಳೆದರು. ಬುಡಕಟ್ಟು ಜನಾಂಗದವರೊಂದಿಗೆ ವೇಷಧಾರಿಗಳ ಜೊತೆಗೆ ಪುಟಾಣಿ ಮಕ್ಕಳು ರಾಮ, ಸೀತೆ, ಹನುಮಂತನ ವೇಷದಲ್ಲಿ ಕಂಗೊಳಿಸುತ್ತಿದ್ದರು. ಹಾಗೆಯೇ ಚಾಮುಂಡೇಶ್ವರಿ, ಭದ್ರಕಾಳಿ, ಮಹಿಷಾಸುರ ವೇಷದಲ್ಲಿ ವೀರಾವೇಶ ತೋರಿದ ಮೂವರು ವೇಷಧಾರಿಗಳು, ಭಯಾನಕ ಯುದ್ಧದ ಸನ್ನಿವೇಶವನ್ನೇ ಸೃಷ್ಟಿಸಿದರು.

ನಂತರ ಮಹರ್ಷಿ ವಾಲ್ಮೀಕಿ, ಆದಿ ಶಂಕರಾಚಾರ್ಯ, ಶಿವ, ಪಾರ್ವತಿ, ಅಘೋರಿಗಳ ವೇಷ ಸೇರಿದಂತೆ ವಿವಿಧ ಬಗೆಯ ವೇಷತೊಟ್ಟು ನೆರೆದಿದ್ದ ಜನಸ್ತೋಮದ ಗಮನ ಸೆಳೆದರು. ಮೆರವಣಿಗೆಯುದ್ದಕ್ಕೂ ಅಲ್ಲಲ್ಲಿ ನೃತ್ಯ ಪ್ರದರ್ಶನ ನೀಡುತ್ತಾ ರಂಜಿಸಿದರು. ಮನೆ ಎದುರು, ರಸ್ತೆ ಬದಿ, ಕಟ್ಟಡಗಳ ಮೇಲೆಲ್ಲಾ ನಿಂತಿದ್ದ ಅಪಾರ ಸಂಖ್ಯೆಯ ಭಕ್ತಾದಿಗಳು ನಿಂತಲ್ಲೆ ಗುನುಗುತ್ತಾ, ಹೆಜ್ಜೆ ಹಾಕಿ ಸಂಭ್ರಮಿಸಿದರು.

ಕ್ಯಾತಮಾರನಹಳ್ಳಿಯ ಗ್ರಾಮಸ್ಥರು, ಸಂಬಂಧಿಕರು ಸೇರಿದಂತೆ ಅಕ್ಕ–ಪಕ್ಕ ಬಡಾವಣೆಗಳ ನಿವಾಸಿಗಳು ಆಗಮಿಸಿ, ಮೆರವಣಿಗೆ ವೀಕ್ಷಿಸಿದ ಬಳಿಕ ಸರತಿ ಸಾಲಿನಲ್ಲಿ ಹುಲಿಯಮ್ಮ ದೇವಿಯ ದರ್ಶನ ಪಡೆದು ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥನೆ ಸಲ್ಲಿಸಿದರು. ಜಾತ್ರೆಗೆ ಆಗಮಿಸಿದ ನೆಂಟರಿಷ್ಟರಿಗೆ ಮಾಂಸದೂಟ ಬಡಿಸುವ ಮೂಲಕ ಮನೆ ಮನೆಗಳಲ್ಲಿ ಸಂಭ್ರಮ ಆವರಿಸಿತ್ತು.

ಇಂದು ಕುಸ್ತಿ ಪಂದ್ಯಾವಳಿ: ನಾಳೆ(ಮಾ.11) ಮಂಗಳವಾರ ಬೆಳಗ್ಗೆ 10ರಿಂದ 2 ಗಂಟೆ ತನಕ ಹುಲಿವೇಷದಲ್ಲಿ ಕೆಲವರು ತಮ್ಮ ಹರಕೆ ತೀರಿಸುವ ಕಾರ್ಯನಡೆಯಲಿದೆ. ಮಧ್ಯಾಹ್ನ 2 ಗಂಟೆಯಿಂದ 5 ಗಂಟೆ ತನಕ 20 ಜೋಡಿಗಳ ನಡುವೆ ಕುಸ್ತಿ ಪಂದ್ಯಾವಳಿ ನಡೆಯುತ್ತದೆ. ಸಾಯಂಕಾಲ 6 ರಿಂದ 10.30ರ ತನಕ ತಂಬಿಟ್ಟು ಆರತಿ ಪೂಜಾ ಕೈಂಕರ್ಯ ನೆರವೇರಲಿದೆ.

ಹುಲಿಯಮ್ಮ ದೇವಿ ದರ್ಶನ ಪಡೆದ ಭಗೀರಥ ಚಿತ್ರ ತಂಡ...

ಸೋಮವಾರ ಸಂಜೆ ಕ್ಯಾತ ಮಾರನಹಳ್ಳಿ ಹುಲಿಯಮ್ಮ ದೇವಸ್ಥಾನಕ್ಕೆ ಭೇಟಿ ನೀಡಿದ ಭಗೀರಥ ಚಿತ್ರ ತಂಡ ಹುಲಿಯಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಚಿತ್ರದ ಯಶಸ್ಸಿಗೆ ಪಾರ್ಥನೆ ಸಲ್ಲಿಸಿದರು. ಕಾವೇರಿ ಕ್ರಿಯಾ ಸಮಿತಿ ಅಧ್ಯಕ್ಷ ಹಾಗೂ ಚಿತ್ರದ ನಾಯಕ ನಟ ಡೇರಿಂಗ್ ಸ್ಟಾರ್ ಎಸ್.ಜಯ ಪ್ರಕಾಶ್ (ಜೆಪಿ), ನಟಿ ಚಂದನ ರಾಘವೇಂದ್ರ, ಕ್ಯಾತಮಾರನಹಳ್ಳಿ ಮುಖಂಡ ನಾರಾಯಣ ಲೋಲಪ್ಪ ಮತ್ತಿತರರಿದ್ದರು.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ; ಭಾರತ ಸಂವಿಧಾನ ಪುಸ್ತಕ ವಿತರಣೆ



ಅಂತಾರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಭಾರತ ಸಂವಿಧಾನ ಪುಸ್ತಕಗಳನ್ನು ವಿತರಣೆ ಮಾಡಲಾಯಿತು.

ಮೈಸೂರು, ಮಾ.10(ಎಂಕೆ)– ಮೈಸೂರಿನ ಬೋಗಾದಿ 1ನೇ ಹಂತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ತಾಲೂಕು ಸಮಾಜ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯದ ಸಹಕಾರದೊಂದಿಗೆ ಮಹಾಬೆಳಕು ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಭಾರತೀಯ ಸಂವಿಧಾನ ಪುಸ್ತಕ ವಿತರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿದ ರಾಜ್ಯ ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಡಾ.ಪುಷ್ಪಾ ಅಮರನಾಥ್ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ನೀಡಿದ ಭಾರತ ಸಂವಿಧಾನದಿಂದ ದೇಶದ ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗಿದೆ. ಮೀಸಲಾತಿ ಮೂಲಕ ಮಹಿಳೆಯರಿಗೆ ಅವಕಾಶ ನೀಡಿದ್ದರಿಂದಲೇ ನಾನು ಹಾಗೂ ನನ್ನಂತೆ ಹಲವು ಮಹಿಳೆಯರು ರಾಜಕೀಯ ಪ್ರವೇಶ ಮಾಡಲು ಸಾಧ್ಯವಾಗಿದೆ. ಮಹಿಳೆಯ ಸಬಲೀಕರಣಕ್ಕೆ ಭಾರತ ಸಂವಿಧಾನ ಬೆನ್ನುಲುಬಾಗಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಬಹುತೇಕ ಮಹಿಳೆಯರಸಬಲೀಕರಣ, ಸ್ವಾವಲಂಬಿ ಜೀವನಕ್ಕಾಗಿಯೇ ಆಗಿವೆ. ಶಕ್ತಿ, ಗೃಹಲಕ್ಷ್ಮಿ, ಅನ್ನಭಾಗ್ಯ, ಗೃಹ ಜ್ಯೋತಿ ಯೋಜನೆಗಳಿಂದ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗುತ್ತಿದ್ದಾರೆ. ನಿರುದ್ಯೋಗಿ ಯುವಕ–ಯುವತಿಯರಿಗಾಗಿ ಯುವನಿಧಿ ಯೋಜನೆ ಪೂರಕವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ ಗ್ಯಾರಂಟಿ ಯೋಜನೆಗಳಿಂದ ಏನಾದರೂ ಅನಾಕೂಲತೆಗಳು ಉಂಟಾಗಿದ್ದರೆ, ತಿಳಿಸುವಂತೆ ವಿದ್ಯಾರ್ಥಿನಿಯರಿಗೆ ತಿಳಿಸಿದರು. ಮಾಜಿ ಮೇಯರ್ ಪುಷ್ಪವಲ್ಲಿ, ನಿಲಯ ಪಾಲಕರಾದ ಹೆಚ್.ಸಿ.ಪವಿತ್ರ, ಮಹಾಬೆಳಕು ಸಂಸ್ಥಾಪಕ ಅಧ್ಯಕ್ಷೆ ಕಾತ್ಯಾಯಿನಿ ಯಶೋಮಿತ್ರೆ ಮತ್ತಿತರರಿದ್ದರು.

ನೆಕ್ಸಸ್ ಸೆಂಟರ್ ಸಿಟಿ ಮಾಲ್‌ನಿಂದ

ಅರ್ಥಪೂರ್ಣ ಮಹಿಳಾ ದಿನಾಚರಣೆ ; ವಿವಿಧ ಕ್ಷೇತ್ರದ ಮಹಿಳಾ ಸಾಧಕರಿಗೆ ಸನ್ಮಾನ

ಮೈಸೂರು,ಮಾ.10(ಪಿಎಂ)– ಮೈಸೂರಿನ ನೆಕ್ಸಸ್ ಸೆಂಟರ್ ಸಿಟಿ ಮಾಲ್ ವತಿಯಿಂದ ಶನಿವಾರ ಅರ್ಥಪೂರ್ಣವಾಗಿ ಮಹಿಳಾ ದಿನವನ್ನು ಆಚರಿಸಲಾಯಿತು.

ಮಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞ ವೈದ್ಯೆ ಡಾ.ರೇಖಾ ಅರುಣ್, ಭರತನಾಟ್ಯ ಮತ್ತು ಯೋಗ ಕ್ಷೇತ್ರದ ಸ್ವರ್ಣಲತಾ ಶಾಸ್ತ್ರಿ ಹಾಗೂ ಮೌಂಟ್ ಎವರೆಸ್ಟ್ ಏರಿ ಸಾಧನೆ ಮೆರೆದ ಮೈಸೂರಿನ ಜೆಎಸ್‌ಎಸ್ ದಂತ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಧ್ಯಾಪಕಿ ಡಾ.ಉಷಾ ಹೆಗ್ಡೆ ಅವರನ್ನು ಸನ್ಮಾನಿಸಲಾಯಿತು.

ಡಾ.ರೇಖಾ ಅರುಣ್ ಅವರು 15 ಸಾವಿರಕ್ಕೂ ಹೆಚ್ಚು ಹೆರಿಗೆಗಳನ್ನು ಮಾಡಿಸಿದ್ದು, ಈ ಪೈಕಿ 10 ಸಾವಿರ ಸಾಮಾನ್ಯ ಹೆರಿಗೆಗಳು ಎಂಬುದು ವಿಶೇಷ. ಮತ್ತೊಬ್ಬ ಸನ್ಮಾನಿತರಾದ ಸ್ವರ್ಣಲತಾ ಶಾಸ್ತ್ರಿ ಅವರು ಬಹುಮುಖ ಪ್ರತಿಭೆಯಾಗಿದ್ದು, ಇವರು ಪಂಜಾಬ್ ವಿವಿಯಿಂದ ಆಯುರ್ವೇದ ಮತ್ತು ಪೌಷ್ಟಿಕಾಂಶ ಪ್ರಮಾಣೀಕರಣ ಪದವಿ ಪಡೆದಿದ್ದಾರೆ. ಇದರ ಜೊತೆಗೆ ಮೈಸೂರಿನ ಜೆಎಸ್‌ಎಸ್ ಮಹಿಳಾ ಪಾಲಿಟೆಕ್ನಿಕ್‌ನಿಂದ ಫ್ಯಾಷನ್ ವಿನ್ಯಾಸ ಮತ್ತು ತಂತ್ರಜ್ಞಾನದಲ್ಲಿ ಡಿಪ್ಲೊಮಾ ಪದವಿ ಪಡೆದಿದ್ದಾರೆ.



ಮೈಸೂರಿನ ನೆಕ್ಸಸ್ ಸೆಂಟರ್ ಸಿಟಿ ಮಾಲ್‌ನಲ್ಲಿ ಹಮ್ಮಿಕೊಂಡಿದ್ದ ಮಹಿಳಾ ದಿನಾಚರಣೆಯಲ್ಲಿ ಮಹಿಳಾ ಸಾಧಕರಾದ ಡಾ.ಉಷಾ ಹೆಗ್ಡೆ, ಸ್ವರ್ಣಲತಾ ಶಾಸ್ತ್ರಿ ಹಾಗೂ ಡಾ.ರೇಖಾ ಅರುಣ್ ಅವರನ್ನು ಸನ್ಮಾನಿಸಲಾಯಿತು.

ಇನ್ನು 52 ವರ್ಷದ ಡಾ.ಉಷಾ ಹೆಗ್ಡೆ ಅವರು ಈವರೆಗೆ ಮೌಂಟ್ ಎವರೆಸ್ಟ್ ಏರಿದ 6,664 ಮಂದಿಯಲ್ಲಿ ಒಬ್ಬರಾಗಿದ್ದಾರೆ. ಅಲ್ಲದೆ, ನೈಕಾ ಅವರಿಂದ ಉಚಿತ ಮೇಕ್ ಓವರ್, ಹೆಲ್ತ್ ಮತ್ತು ಗ್ಲೋ ಸ್ಕಿನ್ ಕುರಿತು ಗೋಷ್ಠಿ ಸಹ ನಡೆಯಿತು. ಜೊತೆಗೆ ಭಾರತೀಯ ಸಮರ ಕಲೆಯಾದ ಕೇರಳದ ಕಳರಿಪಯಟ್ಟು ಪ್ರದರ್ಶನ, ನೆರೆದವರಿಗೆ ರೋಮಾಂಚನ ಅನುಭವ ನೀಡಿತು. ಇದಲ್ಲದೆ, ಪೂಜಾ ಪ್ರಕಾಶ್ ಅವರು ಸಿಪ್ ಅಂಡ್ ಪೇಂಟ್ ಕಾರ್ಯಾಗಾರ ನಡೆಸಿಕೊಟ್ಟರು.

ಎಂ.ಕೆ.ರವಿಗೆ ಪಿಎಚ್.ಡಿ ಪದವಿ



ಮೈಸೂರು, ಮಾ. 10– ಡಾ. ತ್ರಿವೇಣಿ ಅವರ ಮಾರ್ಗದರ್ಶನದಲ್ಲಿ ಎಂ.ಕೆ.ರವಿ ಅವರು ಇತಿಹಾಸ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮಂಗಳೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

9ನೇ ವರ್ಷದ ಸವಿನೆನಪು



ಶ್ರೀಮತಿ ವಿಜಯಲಕ್ಷ್ಮಿ (ಜಯ)

-ಕುಟುಂಬವರ್ಗದವರು

ಸಾರ್ವಜನಿಕ ಪ್ರಕಟಣೆ

ನನ್ನ ಕಕ್ಷಿದಾರರಾದ ಶ್ರೀ. ಡಿ. ರಂಗನಾಥ ರಾವ್. ರವರು ಕೆಳಗೆ ಅನುಸೂಚಿಯಲ್ಲಿ ನಮೂದಿಸಿರುವ ಸ್ವತ್ತನ್ನು ಶ್ರೀ. ಎಂ. ಶ್ರೀನಿವಾಸ ಮತ್ತು ಇತರರಿಂದ ಖರೀದಿ ಮಾಡಲು ಬಯಸಿದ್ದು, ಸದರಿ ಸ್ವತ್ತಿನ ಮೇಲೆ ಯಾ–ರಿಗಾದರು ಯಾವುದೇ ರೀತಿಯ ಕಾನೂನು ಬದ್ಧ ಹಕ್ಕು, ಹಿತಾಸಕ್ತಿ, ಅಥವಾ ಭಾದ್ಯತೆಗಳಿದ್ದರೆ ಈ ಪತ್ರಿಕಾ ಪ್ರಕಟಣೆಯಾದ 7 ದಿನಗಳ ಒಳಗಾಗಿ ಸಂಬಂಧ ಪಟ್ಟ ದಾಖಲಾತಿಗಳೊಂದಿಗೆ ಕೆಳಕಂಡ ವಕೀಲರನ್ನು ಸಂಪರ್ಕಿಸಿ ತಕರಾರು ಸಲ್ಲಿಸತಕ್ಕದ್ದು ಇಲ್ಲವಾದಲ್ಲಿ ಯಾರಿಗೂ ಯಾವುದೇ ತಕರಾರು ಇಲ್ಲವೆಂದು ಪರಿಗಣಿಸಲಾಗುವುದು ಹಾಗು ಕ್ರಯಪತ್ರವನ್ನು ನೋಂದಣಿ ಮಾಡಲಾಗುವುದು.

ಅನುಸೂಚಿ ಸ್ವತ್ತು : ನಂಜನಗೂಡು ತಾಲ್ಲೂಕು, ಚಿಕ್ಕಯ್ಯನಛತ್ರ ಹೋಬಳಿ, ಏಚಗಳ್ಳಿ ಗ್ರಾಮಕ್ಕೆ ಸೇರಿದ ಖುಷ್ಕಿ ಜಮೀನಿನ ಸರ್ವೆ ನಂ. 192/1 ರಲ್ಲಿರುವ ವಿಸ್ತೀರ್ಣ 2 ಎಕರೆ 23 ಗುಂಟೆ ಜಮೀನಿನ ಪೈಕಿ 2 ಎಕರೆ 13 ಗುಂಟೆ ಜಮೀನಿಗೆ ಚಕ್ಕುಬಂದಿ. ಪೂರ್ವಕ್ಕೆ : ಸರ್ವೆ ನಂ. 440, 439 ರ ಜಮೀನು, ಪಶ್ಚಿಮಕ್ಕೆ : ಬ್ಲಾಕ್ 1, ರಸ್ತೆ, ಉತ್ತರಕ್ಕೆ : ರಸ್ತೆ, ಬ್ಲಾಕ್ 1 ಹಾಗು ದಕ್ಷಿಣಕ್ಕೆ : ಸರ್ವೆ ನಂ. 193 ರ ಜಮೀನು

ಸಹಿ/– ಪದ್ಮಾವತಿ. ಆರ್., ಬಿಎಸ್‌ಸ್ಸಿ., ಎಲ್‌ಎಲ್‌ಬಿ. ವಕೀಲರು, ನಂ. 1134, ಬಲ್ಲಾಳ್ ವೃತ್ತ, ಎಸ್.ಬಿ.ಐ. ಬಿಲ್ಡಿಂಗ್, ಚಾಮರಾಜಪುರಂ, ಮೈಸೂರು 570005. ಮೊ: 9448178051

ಮೈಸೂರು, ದಿನಾಂಕ: 10.03.2025